ಮೈಸೂರು ಮಿತ್ರ

ಮೈಸೂರು-ಮಂಡ್ಯ-ಚಾಮರಾಜನಗರ-ಕೊಡಗು-ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜುಲೈ 17 ಬುಧವಾರ 2024

ಸಂಪುಟ: 45 | ಸಂಚಿಕೆ: 92 | ಪುಟಗಳು: 12

ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ-ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com

₹4



ಬಿಚ್ಚು ನುಡಿ

ವಿಕ್ರಂ ಮುತ್ತಣ್ಣ

ಮುಡಾ ಪ್ರತಿಭಟನೆ ಬರೀ ಬೂಟಾಟಿಕೆ

■ ಪುಟ-4

ಮೈಸೂರು, ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಜಿಲ್ಲೆಯಲ್ಲಿ

ಎನಿವೇರ್ ರಿಜಿಸ್ಟ್ರೇಷನ್

[ಆಯಾಯ ಜಿಲ್ಲಾ ವ್ಯಾಪ್ತಿ ಎಲ್ಲಿಯಾದರೂ ನೋಂದಣಿ]

ಆಗಸ್ಟ್ ತಿಂಗಳಲ್ಲಿ ಚಾಲನೆ; ವರ್ಷಾಂತ್ಯಕ್ಕೆ ರಾಜ್ಯದೆಲ್ಲೆಡೆ

ಯೋಜನೆ ವಿಸ್ತರಣೆ: ಕಂದಾಯ ಸಚಿವ ಕೃಷ್ಣ ಭೈರೇಗೌಡ ಆದೇಶ

- ಬೆಂಗಳೂರಿನಲ್ಲಿ ಪ್ರಾಯೋಗಿಕ ಯೋಜನೆ ಯಶಸ್ವಿ
- ಆಸ್ತಿ ನೋಂದಣಿಗೆ ಗಂಟೆಗಟ್ಟಲೆ ಕಾಯಬೇಕಿಲ್ಲ
- ಸಬ್ ರಿಜಿಸ್ಟ್ರಾರ್ ಕಚೇರಿ ಮೇಲಿನ ಒತ್ತಡ ತಪ್ಪಲಿದೆ



ಬೆಂಗಳೂರಿನ ವಿಧಾನಸೌಧದ ತಮ್ಮ ಕಚೇರಿಯಲ್ಲಿ ಮಂಗಳವಾರ ಕಂದಾಯ ಸಚಿವ ಕೃಷ್ಣಭೈರೇಗೌಡ ಎಲ್ಲಿಯಾದರೂ ನೋಂದಣಿ (ಎನಿವೇರ್ ರಿಜಿಸ್ಟ್ರೇಷನ್) ನೂತನ ವ್ಯವಸ್ಥೆ ಜಾರಿ ಬಗ್ಗೆ ಅಧಿಕಾರಿಗಳ ಸಭೆ ನಡೆಸಿದರು.

ಬೆಂಗಳೂರು, ಜು.16(ಬಿಎಲ್‌ಯು)- ಈ ತನಕ ಆಸ್ತಿ ನೋಂದಣಿಗೆ ಆಯಾ ವ್ಯಾಪ್ತಿಯ ಸಬ್ ರಿಜಿಸ್ಟ್ರಾರ್ ಕಚೇರಿಗೆ ಹೋಗಬೇಕಿತ್ತು. ಆದರೆ ಇನ್ನು ಮುಂದೆ ಮೈಸೂರು ಜಿಲ್ಲೆಯಲ್ಲಿ ಯಾವುದೇ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಆಸ್ತಿ ನೋಂದಣಿ ಮಾಡಿಸಬಹುದು. ಹಾಗೆಯೇ ಮಂಡ್ಯ, ಚಾಮರಾಜನಗರ, ಕೊಡಗು, ಹಾಸನ ಜಿಲ್ಲೆಗಳಲ್ಲೂ ಬೇಕಾದಲ್ಲಿ ಆಸ್ತಿ ನೋಂದಣಿ ಮಾಡಿಸಬಹುದು.

ರಾಜಧಾನಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಈಗಾಗಲೇ ಜಾರಿಯಲ್ಲಿರುವ (ಎಲ್ಲಿಯಾದರೂ ನೋಂದಣಿ) ಎನಿವೇರ್ ರಿಜಿಸ್ಟ್ರೇಷನ್ ಹೊಸ ವ್ಯವಸ್ಥೆಯನ್ನು ರಾಜ್ಯ ಸರ್ಕಾರ ಮೈಸೂರು ಮಾತ್ರವಲ್ಲದೆ ಮಂಡ್ಯ, ಚಾಮರಾಜನಗರ, ಕೊಡಗು ಹಾಗೂ ಹಾಸನ ಜಿಲ್ಲೆಯಲ್ಲೂ ಜಾರಿಗೊಳಿಸುತ್ತಿದೆ.

ಬೆಂಗಳೂರಿನ ವಿಧಾನಸೌಧದ ತಮ್ಮ ಕಚೇರಿಯಲ್ಲಿ ಕಂದಾಯ ಇಲಾಖೆಯ ಕಾರ್ಯದರ್ಶಿ ಮಟ್ಟದ ಅಧಿಕಾರಿಗಳ ಸಭೆಯಲ್ಲಿ ಸಮಾಲೋಚನೆ ನಡೆಸಿದ ಕಂದಾಯ ಸಚಿವ ಕೃಷ್ಣ ಭೈರೇಗೌಡ, ಬೆಂಗಳೂರಿಗಷ್ಟೆ ಸೀಮಿತವಾಗಿದ್ದ ಎನಿವೇರ್ ರಿಜಿಸ್ಟ್ರೇಷನ್ ವ್ಯವಸ್ಥೆಯನ್ನು ಆಗಸ್ಟ್ ತಿಂಗಳಿನಿಂದ ಮೈಸೂರು ಸೇರಿದಂತೆ ರಾಜ್ಯಾದ್ಯಂತ ವಿಸ್ತರಣೆಗೆ ಆದೇಶ ನೀಡಿದರು.

ನೋಂದಣಿ ಇಲಾಖೆಯನ್ನು ಮತ್ತಷ್ಟು ಜನಸ್ನೇಹಿಗೊಳಿಸುವ ಉದ್ದೇಶದಿಂದ ಬೆಂಗಳೂರಿನಲ್ಲಿ ಪ್ರಾಯೋಗಿಕವಾಗಿ ಆರಂಭಿಸಿದ್ದ ಈ ಹೊಸ ನೋಂದಣಿ ವ್ಯವಸ್ಥೆಯನ್ನು ರಾಜ್ಯಾದ್ಯಂತ ವಿಸ್ತರಣೆ ಮಾಡಿ, ಇದರಿಂದ ಜನರಿಗೆ ■ 9ನೇ ಪುಟಕ್ಕೆ

ಎನಿವೇರ್ ರಿಜಿಸ್ಟ್ರೇಷನ್ ಎಂದರೇನು?

ಈ ತನಕ ಆಸ್ತಿ ನೋಂದಣಿಗೆ ಆಯಾಯ ವ್ಯಾಪ್ತಿಯ ಸಬ್ ರಿಜಿಸ್ಟ್ರಾರ್ ಕಚೇರಿ ನಿಗದಿಯಾಗಿತ್ತು. ಅಂದರೆ, ಈಗ ಮೈಸೂರಿನಲ್ಲಿ ಉತ್ತರ, ದಕ್ಷಿಣ, ಪೂರ್ವ, ಪಶ್ಚಿಮ ಹಾಗೂ ಮುಡಾ ಕಚೇರಿಯಲ್ಲಿ ಸಬ್ ರಿಜಿಸ್ಟ್ರಾರ್ ಕಚೇರಿಗಳಿವೆ. ಜೊತೆಗೆ ಮೈಸೂರು ಜಿಲ್ಲೆಯ ಆಯಾ ತಾಲೂಕು ಕೇಂದ್ರಗಳಲ್ಲೂ ಸಬ್ ರಿಜಿಸ್ಟ್ರಾರ್ ಕಚೇರಿಗಳಿವೆ. ಇದುವರೆಗೆ ಆಸ್ತಿಯ ವಿಳಾಸ ಆಧರಿತವಾಗಿ ಆಯಾ ತಾಲೂಕು ಹಾಗೂ ನಗರ ವ್ಯಾಪ್ತಿಯ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲೇ ನೋಂದಣಿ ಮಾಡಿಸಬೇಕಿತ್ತು.

ಆದರೆ ಇನ್ನು ಮುಂದೆ ಆಸ್ತಿ ಎಲ್ಲೇ ಇದ್ದರೂ ಮೈಸೂರು ನಗರ ಮತ್ತು ಜಿಲ್ಲೆಯ ಯಾವುದೇ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಆಸ್ತಿ ನೋಂದಣಿ ಮಾಡಿಸಬಹುದು. ಹಾಗೆಯೇ ಇತರ ಜಿಲ್ಲೆಯಲ್ಲೂ ಅವಕಾಶವಿದೆ. ಇದರಿಂದ ಆಯಾ ಸಬ್ ರಿಜಿಸ್ಟ್ರಾರ್ ಕಚೇರಿಗೇ ಹೋಗಿ ಆಸ್ತಿ ನೋಂದಣಿ ಮಾಡಿಸಬೇಕು ಎಂಬ ನಿಯಮವಿಲ್ಲ. ಎನಿವೇರ್ ರಿಜಿಸ್ಟ್ರೇಷನ್ ಹೆಸರಿನ ನೂತನ ವ್ಯವಸ್ಥೆ ಜನರಿಗೆ ಅನುಕೂಲಕಾರಿಯಾಗಿ ರಾಜ್ಯ ಸರ್ಕಾರ ಜಾರಿಗೊಳಿಸಿದೆ. ಈ ವ್ಯವಸ್ಥೆಯನ್ನು ಬೆಂಗಳೂರು ನಗರ ಜಿಲ್ಲೆಯಲ್ಲಿ ಪ್ರಾಯೋಗಿಕವಾಗಿ ಜಾರಿಗೊಳಿಸಲಾಯಿತು. ಬೆಂಗಳೂರು ನಗರ ಜಿಲ್ಲೆಯ ಬಸವನಗುಡಿ, ಗಾಂಧಿನಗರ, ಜಯನಗರ, ■ 9ನೇ ಪುಟಕ್ಕೆ

7ನೇ ವೇತನ ಆಯೋಗದ ಶಿಫಾರಸ್ಸಿನನ್ವಯ ಜು.1ರಿಂದಲೇ ಅನ್ವಯವಾಗುವಂತೆ ಸರ್ಕಾರಿ ನೌಕರರ ವೇತನ

ಶೇ.27.5ರಷ್ಟು ಹೆಚ್ಚಳ

- ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಘೋಷಣೆ
- ಹೆಚ್ಚಳವಾದ ವೇತನ ಆಗಸ್ಟ್ ತಿಂಗಳಿಂದ ದೊರೆಯಲಿದೆ



ಪರಿಷ್ಕರಣೆ ವಿವರ

- ಕನಿಷ್ಠ ಮೂಲ ವೇತನ 17ರಿಂದ 27 ಸಾವಿರಕ್ಕೆ
- ಗರಿಷ್ಠ ವೇತನ 1,50,600 ರಿಂದ 2,41,200 ರೂ.ಗೆ ಹೆಚ್ಚಳ
- ಪಿಂಚಣಿ ಕನಿಷ್ಟ 8500 ರಿಂದ 13,500ಕ್ಕೆ ಹೆಚ್ಚಳ
- ಗರಿಷ್ಠ 75,300 ರಿಂದ 1,20,600 ರೂ.ಗೆ ಪರಿಷ್ಕರಣೆ

ಬೆಂಗಳೂರು, ಜು. 16(ಕೆಎಂಶಿ)- ಸರ್ಕಾರಿ ನೌಕರರಿಗೆ ಜುಲೈ 1ರಿಂದ ಪೂರ್ವಾನ್ವಯವಾಗುವಂತೆ 7ನೇ ವೇತನ ಆಯೋಗದ ಶಿಫಾರಸುಗಳನ್ನು ಜಾರಿಗೊಳಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನ ಸಭೆಯಲ್ಲಿಂದು ಪ್ರಕಟಿಸಿದರು.

ನಿನ್ನೆ ರಾತ್ರಿ ಸಂಪುಟ ಸಭೆಯಲ್ಲಿ ತೆಗೆದುಕೊಂಡ ತೀರ್ಮಾನವನ್ನು ಸಭಾಧ್ಯಕ್ಷರ ಅನುಮತಿ ಪಡೆದು, ಸ್ವಯಂ ಹೇಳಿಕೆ ನೀಡಿದ ಮುಖ್ಯಮಂತ್ರಿ ಅವರು, ಹೆಚ್ಚಳವಾದ ವೇತನ ಆಗಸ್ಟ್‌ನಿಂದ ದೊರೆಯಲಿದೆ ಎಂದರು. ನಿವೃತ್ತ ಮುಖ್ಯ ಕಾರ್ಯದರ್ಶಿ ಸುಧಾಕರ್ ನೇತೃತ್ವದ ವೇತನ ಆಯೋಗ ಶೇಕಡ 31ರಷ್ಟು ತುಟ್ಟಿಭತ್ಯೆಯನ್ನು ಮೂಲವೇತನದಲ್ಲಿ ವಿಲೀನಗೊಳಿಸಿ ಜೊತೆಗೆ ಶೇ.27.50ರಷ್ಟು ಫಿಟ್‌ಮೆಂಟ್ ನೀಡುವಂತೆ ಶಿಫಾರಸು ಮಾಡಿತ್ತು. ಆಯೋಗದ ಶಿಫಾರಸ್ಸಿನಂತೆ ನೌಕರರ ವೇತನ, ಭತ್ಯೆ, ಪಿಂಚಣಿಯನ್ನು 2022ರ ಜುಲೈ 1ರಿಂದ ಅನ್ವಯವಾಗುವಂತೆ ಪರಿಷ್ಕರಿಸಿ, ಆಗಸ್ಟ್ 2024ರಿಂದ ಅನುಷ್ಠಾನಗೊಳಿಸಲು ಸಂಪುಟ ತೀರ್ಮಾನಿಸಿದೆ. ಇದರಿಂದ ನೌಕರರ ಮೂಲವೇತನ ಮತ್ತು ಪಿಂಚಣಿಯಲ್ಲಿ ಶೇ.58.50ರಷ್ಟು ಹೆಚ್ಚಳವಾಗಲಿದೆ. ಮನೆ ಬಾಡಿಗೆ ಭತ್ಯೆಯಲ್ಲಿ ಶೇ.32ರಷ್ಟು ಹೆಚ್ಚಳವಾಗಲಿದೆ.

ಈ ನಿರ್ಧಾರದಿಂದ ಸರ್ಕಾರಿ ನೌಕರರಲ್ಲದೆ, ಪಿಂಚಣಿ ಪಡೆಯುವವರು, ಸರ್ಕಾರಿ ಶಿಕ್ಷಣ ಸಂಸ್ಥೆಗಳು, ವಿಶ್ವವಿದ್ಯಾಲಯಗಳ ಸಿಬ್ಬಂದಿಗೂ ಇದರ ಲಾಭ ದೊರೆಯಲಿದೆ. ನೌಕರರ ಕನಿಷ್ಟ ಮೂಲವೇತನ 17,000 ರೂ.ನಿಂದ 27,000ಕ್ಕೆ, ಗರಿಷ್ಟ ವೇತನವು 1,50,600 ರೂ.ನಿಂದ 2,41,200 ರೂ.ಗಳಿಗೆ ಪರಿಷ್ಕರಣೆಯಾಗಿದೆ. ಪಿಂಚಣಿಯು ಕನಿಷ್ಟ 8,500 ರೂ.ನಿಂದ ■ 9ನೇ ಪುಟಕ್ಕೆ

ಕೇರಳದಲ್ಲಿ ನದಿ ಮಧ್ಯೆ ಬಂಡೆ ಮೇಲೆ ಸಿಲುಕಿದ್ದ ಮೈಸೂರಿನ ನಾಲ್ವರ ರಕ್ಷಣೆ!



ಕೇರಳ ಪಾಲಕ್ಕಾಡ್ ಬಳಿ ಚಿತ್ತೂರು ನದಿಯ ಬಂಡೆಯಲ್ಲಿ ಸಿಲುಕಿದ್ದ ಮೈಸೂರಿನ ನಾಲ್ವರ ಹರಸಾಹಸಪಟ್ಟು ರಕ್ಷಿಸಲಾಗಿದೆ.

ಪಾಲಕ್ಕಾಡ್: ಪಾಲಕ್ಕಾಡ್ ಜಿಲ್ಲೆಯ ಚಿತ್ತೂರು ನದಿಯ ಮಧ್ಯದ ಬಂಡೆಯೊಂದರಲ್ಲಿ ಸಿಲುಕಿದ್ದ ವೃದ್ಧ ಮಹಿಳೆ ಸೇರಿದಂತೆ ಮೈಸೂರಿನ ನಾಲ್ವರನ್ನು ಅಗ್ನಿಶಾಮಕ ದಳದ ಸಿಬ್ಬಂದಿ ದಿಟ್ಟ ಕಾರ್ಯಾಚರಣೆಯಲ್ಲಿ ಮಂಗಳವಾರ ರಕ್ಷಿಸಿದ್ದಾರೆ.

ಚಿತ್ತೂರು ನದಿಯ ಜಲಾನಯನ ಪ್ರದೇಶಗಳಲ್ಲಿ ಭಾರಿ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಮೂಲತಾರಾ ನಿಯಂತ್ರಕ ಪ್ರದೇಶದಿಂದ ನೀರು ಬಿಡುಗಡೆ ಮಾಡಿದ್ದರಿಂದ ನದಿಯಲ್ಲಿ ನೀರಿನ ಮಟ್ಟ ದಿಢೀರ್ ಏರಿಕೆಯಾಗಿದೆ. ನಂತರ ಅಗ್ನಿಶಾಮಕ ದಳದ ಸಿಬ್ಬಂದಿ ಕೆಚ್ಚೆದೆಯ ಕಾರ್ಯಾಚರಣೆ ನಡೆಸಿ, ಎಚ್ಚರಿಕೆಯಿಂದ ಬಂಡೆಯನ್ನು ತಲುಪಿದ್ದು, ಹಗ್ಗದ ಮೂಲಕ ಅದನ್ನು ನದಿ ದಡಕ್ಕೆ ಸಂಪರ್ಕಿಸಿದ್ದಾರೆ. ಲೈಫ್ ಜಾಕೆಟ್‌ಗಳನ್ನು ಒದಗಿಸಲಾದ ನಾಲ್ವರು ವ್ಯಕ್ತಿಗಳನ್ನು ಅಗ್ನಿಶಾಮಕ ದಳದ ಸಿಬ್ಬಂದಿ ಸುರಕ್ಷಿತವಾಗಿ ಹಗ್ಗಕ್ಕೆ ಜೋಡಿಸಲಾದ ಗಾಳಿ ತುಂಬಿದ ರಕ್ಷಣಾ ಟ್ಯೂಬ್‌ಗಳ ಮೇಲೆ ದಡಕ್ಕೆ ತರಲಾಗಿದೆ. ಕೇರಳದ ವಿದ್ಯುತ್ ಸಚಿವ ಕೃಷ್ಣನ್‌ಕುಟ್ಟಿ ■ 9ನೇ ಪುಟಕ್ಕೆ

ಅ.24ರಿಂದ ಹಾಸನಾಂಬೆ ದರ್ಶನ: ನ.3ರವರೆಗೆ ಉತ್ಸವ



ಹಾಸನ: ಪ್ರಸಿದ್ಧ ಶ್ರೀ ಹಾಸನಾಂಬ ದೇವಾಲಯದ ಬಾಗಿಲು ಅ. 24ರಂದು ತೆರೆದು ನವೆಂಬರ್ 3ರಂದು ಮುಚ್ಚಲಿದ್ದು, ಜಾತ್ರಾ ಮಹೋತ್ಸವದ ಸಿದ್ಧತೆಗೆ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಸತ್ಯಭಾಮ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಹಾಸನಾಂಬ ಜಾತ್ರಾ ಮಹೋತ್ಸವ ಪೂರ್ವ ಸಿದ್ಧತಾ ಸಭೆಯಲ್ಲಿ ಅವರು ಮಾತನಾಡಿದರು.

ಸಾರ್ವಜನಿಕರಿಗೆ ದೇವಿ ದರ್ಶನಕ್ಕೆ 9 ದಿನಗಳು ಮಾತ್ರ ಅವಕಾಶವಿರುತ್ತದೆ. ಭಕ್ತಾದಿಗಳಿಗೆ ದೇವಿ ದರ್ಶನ ಪಡೆಯಲು ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಎಲ್ಲಾ ಸಿದ್ಧತೆ ಮಾಡಿಕೊಳ್ಳುವುದರ ಜತೆಗೆ ಕಳೆದ ಬಾರಿ ಕಂಡು ಬಂದಿರುವ ಸಣ್ಣಪುಟ್ಟ ಲೋಪದೋಷಗಳನ್ನು ಗಮನಿಸಿ ಸರಿಪಡಿಸಲು ಸೂಚಿಸಿದರು. ಕುಡಿಯುವ ನೀರು, ವಿದ್ಯುತ್ ದೀಪಾಲಂಕಾರ, ಹೂವಿನ ಅಲಂಕಾರ, ಲಡ್ಡು ಪ್ರಸಾದ, ದೊನ್ನೆ ■ 9ನೇ ಪುಟಕ್ಕೆ

ಭಾರಿ ಮಳೆಗೆ ಕೊಡಗಿನಲ್ಲಿ ಭೂ ಕುಸಿತ

ಶಾಲಾ ಕಟ್ಟಡಕ್ಕೆ ಅಪ್ಪಳಿಸಿದ ಬಂಡೆಗಳು



ಮಡಿಕೇರಿ ತಾಲೂಕಿನ ಕೊಯನಾಡು ಸರ್ಕಾರಿ ಶಾಲೆಯ ಹಿಂಭಾಗದಲ್ಲಿ ಭೂ ಕುಸಿತದಿಂದ ಮಣ್ಣಿನ ರಾಶಿ ಕಟ್ಟಡಕ್ಕೆ ಅಪ್ಪಳಿಸಿರುವುದು



ಭಾರಿ ಮಳೆಯಿಂದ ಕರ್ತೋಜಿ ಬಳಿ ಮಡಿಕೇರಿ-ಮಂಗಳೂರು ರಾಷ್ಟ್ರೀಯ ಹೆದ್ದಾರಿ ಶಿಥಿಲಗೊಂಡಿರುವುದು.

ಮಡಿಕೇರಿ, ಜು.16-ಎಡೆಬಿಡದೆ ಸುರಿಯುತ್ತಿರುವ ಭಾರಿ ಮಳೆಗೆ ಮಡಿಕೇರಿ ತಾಲೂಕಿನ ಕೊಯನಾಡು ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಹಿಂಭಾಗದಲ್ಲಿ ಭಾರಿ ಭೂ ಕುಸಿತವಾಗಿದೆ.

ಸೋಮವಾರ ರಾತ್ರಿ ಸುರಿದ ಮಳೆಗೆ ಶಾಲೆಯ ಹಿಂಭಾಗದ 40 ಅಡಿ ಎತ್ತರದ ಬರೆ ಕುಸಿದು ಮಣ್ಣಿನ ರಾಶಿ ಸಹಿತ ಬಂಡೆಗಳು ಕಟ್ಟಡಕ್ಕೆ ಅಪ್ಪಳಿಸಿ ಅಪಾರ ಹಾನಿ ಸಂಭವಿಸಿದೆ. ಕಟ್ಟಡದ ಹಿಂಭಾಗ ರಬ್ಬರ್ ಎಸ್ಟೇಟ್ ಕೂಡ ಇದ್ದು, ಕಟ್ಟಡದ ಮೇಲೆ ರಬ್ಬರ್ ಮರಗಳು ಕೂಡ ಬಿದ್ದಿವೆ. ಭೂ ಕುಸಿತದಿಂದ ಶಾಲಾ ಕಟ್ಟಡದ ಕೊಠಡಿ ಗೋಡೆಗಳು ಕುಸಿದಿವೆ. ಕಿಟಕಿ, ಬಾಗಿಲು, ಪೀಠೋಪಕರಣಗಳು, ಬಿಸಿ ಊಟದ ಸಲಕರಣೆ, ಶಾಲಾ ದಾಖಲಾತಿ ಪುಸ್ತಕಗಳು ಮಣ್ಣಿನಡಿ ಸಿಲುಕಿವೆ.

ಮಡಿಕೇರಿ ಅಗ್ನಿಶಾಮಕ ದಳದ ಸಿಬ್ಬಂದಿ ಘಟನಾ ಸ್ಥಳಕ್ಕೆ ಧಾವಿಸಿ, ಮರ ತೆರವುಗೊಳಿಸಿದರು. ಸ್ಥಳೀಯ ಗ್ರಾಮಸ್ಥರು, ಕಂದಾಯ ಇಲಾಖೆ, ಗ್ರಾಮ ಪಂಚಾಯಿತಿ ಮತ್ತು ಶಾಲೆಯ ಸಿಬ್ಬಂದಿ ಮಣ್ಣಿನಲ್ಲಿ ಸಿಲುಕಿದ್ದ ವಸ್ತುಗಳನ್ನು ಹೊರ ತೆಗೆದು ಕ್ಷೇತ್ರ ಶಿಕ್ಷಣಾಧಿಕಾರಿ ಸಮ್ಮುಖದಲ್ಲಿ ಬೇರೆ ಕೊಠಡಿಗೆ ಸ್ಥಳಾಂತರಿಸಿದರು.

ಮತ್ತೆ ಭೂ ಕುಸಿತದ ಆತಂಕ: ಇದೀಗ ಭೂ ಕುಸಿತ ಸಂಭವಿಸಿದ ಸ್ಥಳದಲ್ಲೇ ಮತ್ತಷ್ಟು ಮಣ್ಣು ಕುಸಿಯುವ ಆತಂಕ ಉಂಟಾಗಿದೆ. ಈ ಪ್ರದೇಶದಲ್ಲಿ ಬಿರುಕುಗಳು ಮೂಡಿದ್ದು, ಜಲ ಉಕ್ಕಿ ಹರಿಯುತ್ತಿದೆ. ಈ ಸರ್ಕಾರಿ ಶಾಲೆಯಲ್ಲಿ ಒಟ್ಟು 80 ವಿದ್ಯಾರ್ಥಿಗಳು ವಿವಿಧ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿದ್ದು, ಮಕ್ಕಳ ಶೈಕ್ಷಣಿಕ ದೃಷ್ಟಿಯಿಂದ ಎಲ್ಲಾ ವಿದ್ಯಾರ್ಥಿಗಳನ್ನು ಸಂಪಾಜೆ ಸರ್ಕಾರಿ ಶಾಲೆಗೆ ತಾತ್ಕಾಲಿಕವಾಗಿ ದಾಖಲಿಸಲು ಶಿಕ್ಷಣ ಇಲಾಖೆ ಮುಂದಾಗಿದೆ. ಘಟನಾ ಸ್ಥಳಕ್ಕೆ ಮಡಿಕೇರಿ ತಹಸೀಲ್ದಾರ್ ಪ್ರವೀಣ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ರಂಗಧಾಮಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ದೊಡ್ಡೇಗೌಡ, ನೋಡಲ್ ಅಧಿಕಾರಿ ಹೇಮಂತ್ ಕುಮಾರ್, ಪಿಡಿಓ, ಗ್ರಾಪಂ ಜನಪ್ರತಿನಿಧಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಮಡಿಕೇರಿ-ಮಂಗಳೂರು ಹೆದ್ದಾರಿ ಶಿಥಿಲ

ಮಡಿಕೇರಿ ತಾಲೂಕಿನ ಮದೆನಾಡು ಭಾಗದಲ್ಲಿ ಭಾರಿ ಮಳೆಯಾಗುತ್ತಿದ್ದು, ಕರ್ತೋಜಿ ಬಳಿಯ ಮಡಿಕೇರಿ-ಮಂಗಳೂರು ರಾಷ್ಟ್ರೀಯ ಹೆದ್ದಾರಿ ಶಿಥಿಲಗೊಂಡಿದೆ. 2018ರಲ್ಲಿ ಘಟಿಸಿದ ಪ್ರಕೃತಿ ವಿಕೋಪದಲ್ಲಿ ಇದೇ ಸ್ಥಳದಲ್ಲಿ ಭಾರಿ ಭೂ ಕುಸಿತವಾಗಿ ಹೆದ್ದಾರಿ ಕೊಚ್ಚಿ ಹೋಗಿತ್ತು. ಬಳಿಕ ಮರು ನಿರ್ಮಾಣ ಮಾಡಲಾಯಿತಾದರೂ ಒಂದು ಬದಿಯಲ್ಲಿ ದೊಡ್ಡ ಬೆಟ್ಟವಿದ್ದು, ತಳಭಾಗದ ಹೆದ್ದಾರಿ ಒತ್ತಡ ತಡೆಯಲಾರದೇ ಶಿಥಿಲಗೊಂಡಿದೆ. ಪ್ರತಿ ಮಳೆಗಾಲದಲ್ಲಿ ಈ ಸ್ಥಳದಲ್ಲಿ ಇದೇ ರೀತಿ ರಸ್ತೆ ಸಮಸ್ಯೆ ಉಂಟಾಗುತ್ತಿದ್ದು, ಅಂತರ್ಜಲದ ಒತ್ತಡ ಇದಕ್ಕೆ ಕಾರಣ ಎನ್ನಲಾಗುತ್ತಿದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ದುರಸ್ತಿ ಕಾರ್ಯಕ್ಕೆ ಮುಂದಾಗಿದ್ದಾರೆ.

ಜು.21ರಂದು ರಾಜೇಶ್ ಕೃಷ್ಣನ್ 'ಉಸಿರೆ ಈ ಹೃದಯ ಕೊಲ್ಲಬೇಡ'



ಮೈಸೂರು, ಜು.16–ನಗರದ ಡಾ.ರಾಜ್‌ಕುಮಾರ್ ಮ್ಯೂಸಿಕಲ್ ಗ್ರೂಪ್ ವತಿಯಿಂದ 22ನೇ ವಾರ್ಷಿಕೋತ್ಸವದ ಪ್ರಯುಕ್ತ ಅನವರತ ಅಣ್ಣಾವ್ರ ಅಭಿಮಾನಿ ಮೈಸೂರು ಜಯರಾಂ ಸಾರಥ್ಯದಲ್ಲಿ ನಾಡಿನ ಹೆಸರಾಂತ ಹಿನ್ನೆಲೆ ಗಾಯಕ ರಾಜೇಶ್ ಕೃಷ್ಣನ್ ಹಿನ್ನೆಲೆ ಗಾಯನ ಮಾಡಿರುವ 'ಉಸಿರೆ ಈ ಹೃದಯ ಕೊಲ್ಲಬೇಡ' ಶೀರ್ಷಿಕೆಯಡಿಯಲ್ಲಿ ಜು.21ರಂದು ಭಾನುವಾರ ಸಂಜೆ 5.30ಕ್ಕೆ ನಾದಬ್ರಹ್ಮ ಸಭಾಂಗಣದಲ್ಲಿ ರಸಮಂಜರಿ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದ ಉದ್ಘಾಟನೆಯನ್ನು ಮಾಜಿ ಮುಡಾ ಅಧ್ಯಕ್ಷ ಹೆಚ್.ವಿ. ರಾಜೀವ್ ನೆರವೇರಿಸಲಿದ್ದು, ಅಧ್ಯಕ್ಷತೆಯನ್ನು ಮಾಜಿ ಮೇಯರ್ ಪುರುಷೋತ್ತಮ್ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಮೈಸೂರು ನಗರ ಹಾಗೂ ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ. ಪ್ರಕಾಶ್, ಮೈಸೂರಿನ ಎ.ಎಸ್.ಜಿ. ಕಣ್ಣಿನ ಆಸ್ಪತ್ರೆಯ ಖ್ಯಾತ ನೇತ್ರ ತಜ್ಞ ಡಾ.ಪವನ್ ವಿ.ಜೋಷಿ, ಖ್ಯಾತ ಉದ್ಯಮಿ ರವಿಗೌಡ, ಚಲನಚಿತ್ರ ನಿರ್ಮಾಪಕ ಎಂ.ಡಿ.ಪಾರ್ಥಸಾರಥಿ ಹಾಗೂ ಮೈಸೂರು ಮಹಾನಗರ ಪಾಲಿಕೆ ಗುತ್ತಿಗೆದಾರರ ಸಂಘದ ಅಧ್ಯಕ್ಷ ಉದಯ್‌ಕುಮಾರ್ ಆಗಮಿಸಲಿದ್ದಾರೆ.

ರಾಜೇಶ್ ಕೃಷ್ಣನ್ ಮೈಸೂರು ಜಯರಾಂ ಜೊತೆಗೂಡಿ ರಾಮಚಂದ್ರು, ಜಗದೀಶ್, ಟಿವಿಎಸ್ ಕುಮಾರ್, ಬಾಲುಪ್ರಕಾಶ್, ಗಾಯಕಿಯರಲ್ಲಿ ಸರ್ವಮಂಗಳ, ಅಶ್ವಿನಿ ಶಾಸ್ತ್ರಿ, ಶ್ರುತಿ ಮಂಡ್ಯ ಹಾಗೂ ಅನಿತ ಅವರು 40ಕ್ಕೂ ಅಧಿಕ ಗೀತೆಗಳನ್ನು 3 ಗಂಟೆಗೂ ಹೆಚ್ಚು ಸಮಯ ಪ್ರಸ್ತುತಪಡಿಸಲಿದ್ದಾರೆ. ಕಾರ್ಯಕ್ರಮಕ್ಕೆ ಉಚಿತ ಪ್ರವೇಶವಿದೆ.

ಇಂದು ಕೃಷ್ಣಧಾಮದಲ್ಲಿ ತಪ್ತ ಮುದ್ರಾಧಾರಣೆ

ಮೈಸೂರು, ಜು. 16– ಟಿ.ಕೆ.ಲೇಔಟ್‌ನಲ್ಲಿರುವ ಶ್ರೀ ಕೃಷ್ಣಧಾಮದಲ್ಲಿ ಶ್ರೀ ಕೃಷ್ಣ ಟ್ರಸ್ಟ್ ಹಾಗೂ ಶ್ರೀ ಕೃಷ್ಣ ಮಿತ್ರ ಮಂಡಳಿ ವತಿಯಿಂದ ಜಗದ್ಗುರು ಮಧ್ವಾಚಾರ್ಯ ಮೂಲ ಸಂಸ್ಥಾನ ಉಡುಪಿ ಶ್ರೀ ಪಲಿಮಾರು ಮಠದ ಸಂಸ್ಥಾನಾಧೀಶರಾದ ಪರಮಪೂಜ್ಯ ಶ್ರೀ ಶ್ರೀ ವಿದ್ಯಾಧೀಶತೀರ್ಥ ಶ್ರೀಪಾದಂಗಳವರಿಂದ ಹಾಗೂ ಶ್ರೀ ಶ್ರೀ ವಿದ್ಯಾರಾಜೇಶ್ವರತೀರ್ಥ ಶ್ರೀಪಾದಂಗಳವರಿಂದ ನಾಳೆ (ಜುಲೈ 17)ರಂದು ಬೆಳಗ್ಗೆ 11ಕ್ಕೆ ಭಕ್ತಾದಿಗಳಿಗೆ ತಪ್ತ ಮುದ್ರಾಧಾರಣೆ ಮಾಡಲಿದ್ದಾರೆ ಎಂದು ಶ್ರೀ ಕೃಷ್ಣ ಟ್ರಸ್ಟ್ ಉಪಾಧ್ಯಕ್ಷ ರವಿಶಾಸ್ತ್ರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಾ.ಸಿದ್ದಲಿಂಗ ಶಿವಾಚಾರ್ಯ ಸ್ವಾಮೀಜಿಗೆ ಇಂದು ಬಸವ ರತ್ನ ಪ್ರಶಸ್ತಿ ಪ್ರದಾನ



ಡಾ.ಸಿದ್ದಲಿಂಗ ಶಿವಾಚಾರ್ಯ ಸ್ವಾಮಿ

ಮೈಸೂರು,ಜು.16–ಮೈಸೂರು ಶರಣ ಮಂಡಲಿ ಮತ್ತು ಶ್ರೀ ನಟರಾಜ ಪ್ರತಿಷ್ಠಾನದ ವತಿಯಿಂದ ಶ್ರೀ ವಾಟಾಳು ಮಠಾಧ್ಯಕ್ಷರಾದ ಡಾ.ಸಿದ್ದಲಿಂಗ ಶಿವಾಚಾರ್ಯ ಸ್ವಾಮಿಗಳವರಿಗೆ ಬಸವ ರತ್ನ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಶಂಕರ ಮಠದ ರಸ್ತೆಯಲ್ಲಿರುವ ಶ್ರೀ ನಟರಾಜ ಸಭಾ ಭವನದಲ್ಲಿ ನಾಳೆ (ಜು.17) ಮಧ್ಯಾಹ್ನ 12 ಗಂಟೆಗೆ ಏರ್ಪಡಿಸಲಾಗಿದೆ. ಶ್ರೀ ಹೊಸಮಠದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ಕಾರ್ಯಕ್ರಮವನ್ನು ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಉದ್ಘಾಟಿಸುವರು. ನಿವೃತ್ತ ಐಎಫ್‌ಎಸ್ ಅಧಿಕಾರಿ ಆರ್.ರಾಜು ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಮೈಸೂರು ಕಲ್ಚರಲ್ ಅಸೋಸಿಯೇಷನ್ ಅಧ್ಯಕ್ಷ ಎ.ಪಿ.ಎನ್. ನಾಗೇಶ್, ಶ್ರೀ ನಟರಾಜ ಶಿಕ್ಷಣ ಸಂಸ್ಥೆ ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ ಆಗಮಿಸಲಿದ್ದಾರೆ. ಇದೇ ವೇಳೆ ಪ್ರೊ.ಎಂ.ಕೋಮಲ (ಶೈಕ್ಷಣಿಕ ಕ್ಷೇತ್ರ), ಹೆಚ್.ಜಿ.ಪವಿತ್ರ (ಸಮಾಜ ಸೇವೆ), ಜೆ.ಬಾಪೂಜಿ (ಸಮಾಜ ಸೇವೆ), ಜಯಪ್ರಕಾಶ್ (ಜೆಪಿ) (ಹೋರಾಟ) ಅವರನ್ನು ಸನ್ಮಾನಿಸಲಾಗುವುದು.

ಜು.20ರಂದು 29ನೇ ಪದಗ್ರಹಣ ಸಮಾರಂಭ

ಮೈಸೂರು, ಜು. 16–ಕೂರ್ಗ್ ಪಬ್ಲಿಕ್ ಸ್ಕೂಲ್ ಮತ್ತು ಕೂರ್ಗ್ ಪದವಿಪೂರ್ವ ಕಾಲೇಜಿನ 29ನೇ ಪದಗ್ರಹಣ ಸಮಾರಂಭವನ್ನು ಜು.20ರಂದು ಬೆಳಗ್ಗೆ 10.30 ಗಂಟೆಗೆ ಕಲಾಮಂಚ್‌ನಲ್ಲಿ ಏರ್ಪಡಿಸಲಾಗಿದೆ. ಮುಖ್ಯ ಅತಿಥಿಗಳಾಗಿ ನಿವೃತ್ತ ಪಿವಿ ಎಸ್‌ಎಂ, ವಿಎಸ್‌ಎಂ ಲೆಫ್ಟಿನೆಂಟ್ ಜನರಲ್ ಪಿ.ಸಿ.ತಿಮ್ಮಯ್ಯ ಭಾಗವಹಿಸಲಿದ್ದು, ಸ್ಕೂಲ್ ಟ್ರಸ್ಟ್ ಅಧ್ಯಕ್ಷ ಕೆ.ಧನ್ಯಾಸುಬ್ಬಯ್ಯ ಅಧ್ಯಕ್ಷತೆ ವಹಿಸಲಿದ್ದಾರೆ.

ನೂತನ ಪದಾಧಿಕಾರಿಗಳು: ಕೆ.ಧನ್ಯಾ ಸುಬ್ಬಯ್ಯ (ಅಧ್ಯಕ್ಷ), ಎಂ.ಬಿ.ನಾಚಪ್ಪ (ಕಾರ್ಯದರ್ಶಿ), ಎಂ.ಟಿ.ಮಾಚಯ್ಯ (ಖಜಾಂಚಿ), ಬಿ.ಎ.ಕಾರಿಯಪ್ಪ (ಉಪಾಧ್ಯಕ್ಷ), ಪ್ರೊ.ಎಂ.ಡಿ.ನಂಜುಂಡ, ಎಂ.ಎನ್. ಬೆಳ್ಳಿಯಪ್ಪ, ಎಂ.ಎಂ.ತಿಮ್ಮಯ್ಯ, ಶ್ರೀಮತಿ ಪ್ರಭಾ ಸುಬ್ಬಯ್ಯ ಮತ್ತು ಕೆ.ಎ.ಪೂಣಚ್ಚ (ಟ್ರಸ್ಟ್‌ನ ಗೌರವ ಸದಸ್ಯರು).

ಜು.19, ರಾಜ್ಯಾದ್ಯಂತ 'ಹೆಜ್ಜಾರು' ಬಿಡುಗಡೆ



ಮೈಸೂರು, ಜು.16(ಜಿಎ)–ವಿಭಿನ್ನ ಕಥಾಹಂದರದೊಡನೆ ವಿಶಿಷ್ಟ ರೀತಿಯಲ್ಲಿ ಸಿದ್ಧವಾಗಿರುವ 'ಹೆಜ್ಜಾರು' ಸಿನಿಮಾ ಜು.19ರಂದು ರಾಜ್ಯಾದ್ಯಂತ ತೆರೆ ಕಾಣಲಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ನಿರ್ಮಾಪಕ ಗಿರೀಶ್ ಈ ವಿಷಯ ತಿಳಿಸಿ, ಈಗಾಗಲೇ ಈ ಚಿತ್ರದ ಟೀಸರ್ ಸಾಕಷ್ಟು ಪ್ರಚಾರ ಪಡೆದಿದೆ. ಪುಟ್ಟಗೌರಿ ಮದುವೆ, ಕಿನ್ನರಿ, ಜೊತೆ ಜೊತೆಯಲ್ಲಿ, ಪುಟ್ಟಕ್ಕನ ಮಕ್ಕಳು, ಮಹಾನಾಯಕ ಅಂಬೇಡ್ಕರ್ ಮೊದಲಾದ ಧಾರಾವಾಹಿಗಳಿಗೆ ಕಥೆ, ಚಿತ್ರಕತೆ ರಚಿಸಿರುವ ಹರ್ಷಪ್ರಿಯ ಇದೇ ಮೊದಲ ಬಾರಿ ಈ ಚಿತ್ರ ನಿರ್ದೇಶಿಸಿದ್ದಾರೆ. ಇದರಲ್ಲಿ 3 ಹಾಡುಗಳಿವೆ ಎಂದರು. ನಾಯಕ ನಟ ಭಗತ್ ಆಳ್ವಾ, ಅನೀಶ್, ತಿಲಕ್ ಉಪಸ್ಥಿತರಿದ್ದರು.

ಜ್ಞಾನೋದಯ ಪಿಯು ಕಾಲೇಜಲ್ಲಿ ವಿಶ್ವ ಕೌಶಲ ದಿನ; ವಿಜ್ಞಾನ ಸಂಘ ಉದ್ಘಾಟನೆ



ಜ್ಞಾನೋದಯ ಪದವಿಪೂರ್ವ ಕಾಲೇಜಿನಲ್ಲಿ 'ವಿಶ್ವ ಕೌಶಲ ದಿನ' ಹಾಗೂ 'ವಿಜ್ಞಾನ ಸಂಘ'ದ ಉದ್ಘಾಟನಾ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮೈಸೂರು, ಜು.16–ನಗರದ ಸರಸ್ವತಿಪುರಂನಲ್ಲಿರುವ ಜ್ಞಾನೋದಯ ಪದವಿಪೂರ್ವ ಕಾಲೇಜಿನಲ್ಲಿ ಸೋಮವಾರ 'ವಿಶ್ವ ಕೌಶಲ ದಿನ' ಹಾಗೂ 'ವಿಜ್ಞಾನ ಸಂಘ'ದ ಉದ್ಘಾಟನಾ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಎನ್‌ಐಇ ಕಾಲೇಜಿನ ಸಿಆರ್‌ಇಎಸ್‌ಟಿ ಮುಖ್ಯಸ್ಥರು ಹಾಗೂ ಸಹಾಯಕ ಪ್ರಾಧ್ಯಾಪಕ ಶ್ಯಾಮಸುಂದರ್ ಸುಬ್ಬರಾವ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸುಸ್ಥಿರ ಜಗತ್ತಿನ ನಿರ್ಮಾಣದಲ್ಲಿ ವಿಜ್ಞಾನ ಮತ್ತು ತಂತ್ರಜ್ಞಾನ ಅಗತ್ಯತೆ ಬಗ್ಗೆ ಪ್ರಾತ್ಯಕ್ಷಿಕೆಗಳ ಮೂಲಕ ತಿಳಿಸಿಕೊಟ್ಟರು.

ಕಾಲೇಜಿನ ಆಡಳಿತ ಮಂಡಳಿಯ ಕಾರ್ಯದರ್ಶಿ ಎಸ್.ಕೆ.ಭಾಸ್ಕರ್ ಮಾತನಾಡಿ, ಜ್ಞಾನ ಮತ್ತು ವಿಜ್ಞಾನ ಒಂದು ನಾಣ್ಯದ ಎರಡು ಮುಖಗಳಿದ್ದಂತೆ. ವಿಜ್ಞಾನ ಸಂಘದಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡು ವಿದ್ಯಾರ್ಥಿಗಳ ಕೌಶಲವನ್ನು ಹೊರತರಲು ಸೂಕ್ತ ವೇದಿಕೆಯನ್ನು ಬಳಸಿಕೊಳ್ಳುವಂತೆ ತಿಳಿಸಿದರು.

ವಿಶ್ವಕೌಶಲ ದಿನದ ಅಂಗವಾಗಿ ಕಾಲೇಜು ವಿದ್ಯಾರ್ಥಿಗಳಿಂದ 25ಕ್ಕೂ ಹೆಚ್ಚು ವಿವಿಧ ಕೌಶಲಾಧಾರಿತ ವಿಜ್ಞಾನ ಮಾದರಿಗಳನ್ನು ತಯಾರಿಸಿ ಪ್ರದರ್ಶನಕ್ಕೆ ಇಡಲಾಗಿತ್ತು. ಅತ್ಯುತ್ತಮ ಮಾದರಿಗಳಿಗೆ ಬಹುಮಾನವನ್ನು ವಿತರಿಸಲಾಯಿತು. ಮೈಸೂರು ಸೈನ್ಸ್ ಫೌಂಡೇಷನ್‌ನ ಸದಸ್ಯರು ಹಾಗೂ ನಿವೃತ್ತ ಶಿಕ್ಷಕ ಮುರುಳೀಧರ್ 'ಒರಿಗಾಮಿ' ನೈಪುಣ್ಯತೆಯ ಕೌಶಲವನ್ನು ಪ್ರಾಯೋಗಿಕವಾಗಿ ವಿದ್ಯಾರ್ಥಿಗಳಿಗೆ ತಿಳಿಸಿಕೊಟ್ಟರು.

ಈ ಸಂದರ್ಭದಲ್ಲಿ ಹೆಚ್‌ಸಿಆರ್‌ಎಸ್‌ಎಸ್‌ನ ನಿರ್ದೇಶಕ ಡಾ.ಶೇಷಗಿರಿರಾವ್, ಐ.ಎಸ್.ಹೆಚ್.ಆರ್.ಎ.ಇ.ನ ಕಾರ್ಯದರ್ಶಿ ಶ್ರೀನಿವಾಸ್, ಕೆಪಿಟಿಸಿಎಲ್‌ನ ವೆಂಕಟೇಶ್, ಕಾಲೇಜಿನ ಪ್ರಾಂಶುಪಾಲರಾದ ಶ್ರೀಮತಿ ಪದ್ಮಾರವಿ, ಬೋಧಕ–ಬೋಧಕೇತರ ವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮೈಸೂರಲ್ಲಿ ಡ್ರಿಂಕ್ ಅಂಡ್ ಡ್ರೈವಿಂಗ್‌ನದ್ದೇ ತಲೆನೋವು

ಕಳೆದ 6 ತಿಂಗಳಲ್ಲಿ ಅಪಘಾತದಿಂದ ಸಾವನ್ನಪ್ಪಿದ 88 ಮಂದಿ ಪೈಕಿ ಕುಡಿದು ಚಾಲನೆ ಮಾಡಿದವರೇ 50 ಜನ!

ಮೈಸೂರು, ಜು. 16(ಆರ್‌ಕೆ)– ಮೈಸೂರು ನಗರದಲ್ಲಿ ರಾತ್ರಿ ವೇಳೆ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರ ಸಂಖ್ಯೆ ದಿನೇ ದಿನೆ ಹೆಚ್ಚಾಗುತ್ತಿದೆ.

2024ರ ಜನವರಿಯಿಂದ ಈವರೆಗೆ, 6 ತಿಂಗಳಲ್ಲಿ ಮೈಸೂರು ನಗರದಲ್ಲಿ ಸಂಭವಿಸಿದ ರಸ್ತೆ ಅಪಘಾತಗಳಲ್ಲಿ ಸಾವನ್ನಪ್ಪಿದ 88 ಮಂದಿ ಪೈಕಿ ಕುಡಿದು ವಾಹನ ಚಾಲನೆ ಮಾಡಿ ಮೃತಪಟ್ಟವರ ಸಂಖ್ಯೆ 50ಕ್ಕೇರಿದೆ. ಆ ಪೈಕಿ 8 ಜೋಡಿ ಹಾಗೂ 1 ಅಪಘಾತದಲ್ಲಿ ಮೂವರ ಸಾವು (ಒಂದೇ ವಾಹನದಲ್ಲಿ ಮೂವರು ಸವಾರಿ) ಸಂಭವಿಸಿದೆ.

ರಸ್ತೆ ಅಪಘಾತ ಸಾವುಗಳ ಕುರಿತಂತೆ ಇತ್ತೀಚೆಗೆ ಮೈಸೂರಿಗೆ ಭೇಟಿ ನೀಡಿದ್ದ ಸಂಚಾರ ಮತ್ತು ರಸ್ತೆ ಸುರಕ್ಷತೆ ವಿಭಾಗದ ಎಡಿಜಿಪಿ ಅಲೋಕ್‌ಕುಮಾರ್, ವಿವಿ ಪುರಂ ಸಂಚಾರ ಠಾಣೆಯಲ್ಲಿ ಪರಿಶೀಲನೆ ನಡೆಸಿದ್ದರು. ಈ ನಡುವೆ ಕಂಠಪೂರ್ತಿ ಕುಡಿದು ಕಾರು ಚಾಲನೆ ಮಾಡಿದ ವ್ಯಕ್ತಿಯೋರ್ವ ದ್ವಿಚಕ್ರ ವಾಹನದಲ್ಲಿ ಹೋಗುತ್ತಿದ್ದ ಉಲ್ಲಾಸ್(22) ಮತ್ತು ಶಿವಾನಿ(21 ಎಂಬುವರಿಗೆ ಡಿಕ್ಕಿ ಹೊಡೆದು ಅವರ ಸಾವಿಗೆ ಕಾರಣವಾಗಿದ್ದ ಪ್ರಕರಣದ ಮಾಹಿತಿಯನ್ನು ಅವರು ಅವಲೋಕನ ಮಾಡಿದ್ದರು.



ಮದ್ಯಪಾನ ಮಾಡಿ, ಕಾರು ವಾಹನ ಚಾಲನೆಯಿಂದ ಉಂಟಾದ ಅಪಘಾತದಲ್ಲಿ ಸಾವನ್ನಪ್ಪಿದ್ದ ಉಲ್ಲಾಸ್ ಮತ್ತು ಶಿವಾನಿ.



ಮೈಸೂರಲ್ಲಿ ಎಡಿಜಿಪಿ ಅಲೋಕ್‌ಕುಮಾರ್ ವಿವಿ ಪುರಂ ಸಂಚಾರ ಠಾಣೆಯಲ್ಲಿ ಪರಿಶೀಲನೆ ನಡೆಸಿದ್ದರು.

ಏಪ್ರಿಲ್ 14ರಂದು ಹುಣಸೂರು ರಸ್ತೆಯಿಂದ ಬೋಗಾದಿ ರಸ್ತೆ ಕಡೆಗೆ ಹುಂಡೈ ಟೆಸ್ಕಾನ್ ಎಸ್‌ಯುವಿ (ಕೆಎ 09–ಎಂಹೆಚ್ 1567)ಯಲ್ಲಿ ಹೋಗುತ್ತಿದ್ದ ಬೆಂಗಳೂರಿನ ಐಟಿ ಕಂಪನಿ ಉದ್ಯೋಗಿ, ಮೈಸೂರಿನ ಕುವೆಂಪುನಗರ ನಿವಾಸಿ ಆಕಾಶ್ ಎಂಬ ಯುವಕ, ರಾತ್ರಿ ಸುಮಾರು 12–15 ಗಂಟೆ ವೇಳೆಯಲ್ಲಿ ಚದುರಂಗ ರಸ್ತೆಯ ಅಖಿಲ ಭಾರತ ವಾಕ್ ಮತ್ತು ಶ್ರವಣ ಸಂಸ್ಥೆ ಬಳಿ ಮೊದಲು ಸ್ವಿಗ್ಗಿ ಫುಡ್ ಡೆಲಿವರಿ ಬಾಯ್ ಮಹದೇವಸ್ವಾಮಿಗೆ ಡಿಕ್ಕಿ ಹೊಡೆದು, ನಂತರ ಮುಂದೆ ಹೋಗುತ್ತಿದ್ದ ಉಲ್ಲಾಸ್ ಮತ್ತು ಶಿವಾನಿ ಅವರಿಗೆ ಡಿಕ್ಕಿ ಹೊಡೆದಿದ್ದ.

ಪರಿಣಾಮ ತೀವ್ರ ರಕ್ತಸ್ರಾವದಿಂದ ಇಬ್ಬರೂ ಸ್ಥಳದಲ್ಲೇ ಸಾವನ್ನಪ್ಪಿದ್ದರು. ಸ್ವಿಗ್ಗಿ ಡೆಲಿವರಿ ಬಾಯ್ ಸಹ ಗಾಯಗೊಂಡಿದ್ದು, ಚಿಕಿತ್ಸೆ ಪಡೆದು ಚೇತರಿಸಿಕೊಂಡಿದ್ದಾನೆ. ಈ ಘಟನೆಯಲ್ಲಿ ಡಿಕ್ಕಿ ಹೊಡೆದ ಎಸ್‌ಯುವಿ ಚಾಲಕ ಮದ್ಯಪಾನ ಮಾಡಿದ್ದರಿಂದ ವಿವಿ ಪುರಂ ಸಂಚಾರ ಠಾಣೆ ಪೊಲೀಸರು, ಸಾವಿಗೆ ಕಾರಣವಾಗುತ್ತದೆ ಎಂದು ತಿಳಿದಿದ್ದರೂ ಪಾನಮತ್ತನಾಗಿ ವಾಹನ ಚಾಲನೆ ಮಾಡಿದ ಸಂಬಂಧ ಪ್ರಕರಣ ದಾಖಲಿಸಿ, ನ್ಯಾಯಾಲಯಕ್ಕೆ ದೋಷಾರೋಪಣಾ ಪಟ್ಟಿ ಸಲ್ಲಿಸಿದ್ದಾರೆ. ಈ ಪ್ರಕರಣದಲ್ಲಿ ಆರೋಪಿಗೆ 10 ವರ್ಷ ಶಿಕ್ಷೆ ವಿಧಿಸಬಹುದಾಗಿದೆ ಎಂದು ಎಡಿಜಿಪಿ ಅಲೋಕ್ ಕುಮಾರ್ ಟ್ವೀಟ್ ಮಾಡಿದ್ದಾರೆ.

ರಾಜ್ಯದಲ್ಲಿ ನೋಂದಣಿ, ತೆರಿಗೆ ಶುಲ್ಕ ಹೆಚ್ಚಳ ಹಿನ್ನೆಲೆ

ಹೊರ ರಾಜ್ಯದಲ್ಲಿ ಕಾಂಟ್ರಾಕ್ಟ್ ಕ್ಯಾರಿಯೇಜ್ ಬಸ್‌ಗಳಿಗೆ ನೋಂದಣಿ

ಮೈಸೂರು, ಜು.16(ಜಿಎ)–ಮೈಸೂರಲ್ಲಿ ಹಲವಾರು ಕಾಂಟ್ರಾಕ್ಟ್ ಕ್ಯಾರಿಯೇಜ್ ಬಸ್‌ಗಳಿಗೆ ಹೊರ ರಾಜ್ಯದಲ್ಲಿ ನೋಂದಣಿ ಮಾಡಿಸುವ ಮೂಲಕ ರಾಜ್ಯ ಸರ್ಕಾರವನ್ನು ವಂಚಿಸಲಾಗುತ್ತಿದೆ ಎಂದು ಕರ್ನಾಟಕ ಟ್ಯಾಕ್ಸಿ ಡ್ರೈವರ್ಸ್ ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಕೌಶಿಕ್ ತಿಳಿಸಿದರು.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೈಸೂರಲ್ಲಿ ಕಳೆದ ಆರು ತಿಂಗಳಿನಿಂದ 50ಕ್ಕೂ ಹೆಚ್ಚು ಬಸ್‌ಗಳು ಸಂಚರಿಸುತ್ತಿದ್ದು, ರಾಜ್ಯದಲ್ಲಿ ತೆರಿಗೆ, ನೋಂದಣಿ ಶುಲ್ಕ ಹೆಚ್ಚಾಗಿರುವುದೇ ಇದಕ್ಕೆ ಕಾರಣವಾಗಿದೆ. ಹೀಗಾಗಿ ಸರ್ಕಾರ ಅಂತಹ ಬಸ್‌ಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಹಾಗೂ ನೋಂದಣಿ ಶುಲ್ಕ, ತೆರಿಗೆ ಇಳಿಕೆ ಮಾಡುವ ಮೂಲಕ ತನ್ನ ಆದಾಯ ಹೆಚ್ಚಿಸಿಕೊಳ್ಳಬೇಕೆಂದು ಮನವಿ ಮಾಡಿದರು.

ಹೊರ ರಾಜ್ಯಗಳ ನೋಂದಣಿ ಬಸ್‌ಗಳು ಮೂರು ತಿಂಗಳಿಗೆ ಸುಮಾರು 90 ಸಾವಿರ ಪಾವತಿಸುತ್ತಿವೆ. ಆದರೆ ಇಲ್ಲಿ 1.83 ಲಕ್ಷ ಕಟ್ಟಬೇಕಾಗುತ್ತದೆ. ಇದೇ ಕಾರಣದಿಂದಾಗಿ ಹೊರ ರಾಜ್ಯದಲ್ಲಿ ನೋಂದಣಿ ಮಾಡಿಸುವುದು ನಡೆದಿದೆ. ಹೀಗಾಗಿ ಇಲ್ಲಿಯೇ ಶುಲ್ಕ ಕಡಿಮೆ ಮಾಡಿದಲ್ಲಿ ಇಲ್ಲಿಯೇ ನೋಂದಣಿ ಆಗುವ ಮೂಲಕ ರಾಜ್ಯ ಸರ್ಕಾರಕ್ಕೇ ಅನುಕೂಲವಾಗಲಿದೆ ಎಂದರು.

ಸರ್ಕಾರ ಪ್ಯಾನಿಕ್ ಬಟನ್, ಜಿಪಿಎಸ್ ಮೊದಲಾದವುಗಳನ್ನು ಕೇವಲ 3ರಿಂದ 4 ಸಾವಿರ ರೂ. ವೆಚ್ಚದಲ್ಲಿ ಅಳವಡಿಸಬಹುದಾಗಿದೆ. ಆದರೆ ಸರ್ಕಾರ ಸೂಚಿಸಿರುವ ಕಂಪನಿಯಿಂದಲೇ ಮಾಡಿಸುವಂತೆ ತಿಳಿಸುವುದರಿಂದಾಗಿ ಸುಮಾರು 15 ಸಾವಿರ ಪಾವತಿಸಬೇಕು. ಆದ್ದರಿಂದ ಈ ಸೌಲಭ್ಯ ತಮಗೆ ಸೂಕ್ತವೆನಿಸಿದ ಕಡೆ ಅಳವಡಿಸಿಕೊಳ್ಳುವಂತೆ ಅನುಮತಿ ನೀಡಬೇಕು ಎಂದು ಸರ್ಕಾರಕ್ಕೆ ಮನವಿ ಮಾಡಿದರು. ಸುದ್ದಿಗೋಷ್ಠಿಯಲ್ಲಿ ಪದಾಧಿಕಾರಿಗಳಾದ ಮಂಜು, ಸ್ವಾಮಿ ಉಪಸ್ಥಿತರಿದ್ದರು.


ವೈದ್ಯರ ದಿನಾಚರಣೆ



ಲಯನ್ಸ್ ಕ್ಲಬ್ ಆಫ್ ಮೈಸೂರು ಮಿಲೇನಿಯಂ ಹಾಗೂ ಲಯನ್ಸ್ ಕ್ಲಬ್ ರಾಧಾಕೃಷ್ಣ ಮತ್ತು ಸಾವಿತ್ರಿಬಾಯಿ ಫುಲೆ ವತಿಯಿಂದ ವೈದ್ಯರ ದಿನ ಆಚರಿಸಲಾಯಿತು. ಈ ವೇಳೆ ಕೆಆರ್ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕಿ ಡಾ.ಹೆಚ್.ಪಿ.ಶೋಭಾ, ಕ್ಲಬ್‌ನ ಚಂದ್ರಶೇಖರ್, ಉಷಾ ನಂದಿನಿ, ರಮ್ಯರವಿ, ಎ.ಸಿ.ರವಿ, ಗಂಗಾಧರಪ್ಪ, ಕೃಷ್ಣೋಜಿರಾವ್, ಡಾ.ರಾಮಸ್ವಾಮಿ, ಡಾ.ಹೆಚ್.ಎನ್.ದಿನೇಶ್ ಉಪಸ್ಥಿತರಿದ್ದರು.

ಹಸಿರು ನಮ್ಮ ಉಸಿರು

ಕೆಆರ್‌ಎಸ್ ನೀರಿನ ಮಟ್ಟ




ಗರಿಷ್ಠ ಮಟ್ಟ	124.80 ಅಡಿ
ಮಂಗಳವಾರ	109.10 ಅಡಿ
ಒಳಹರಿವು	35997 ಕ್ಯೂಸೆಕ್
ಹೊರಹರಿವು	2357 ಕ್ಯೂಸೆಕ್

ಕಬಿನಿ ನೀರಿನ ಮಟ್ಟ



ಗರಿಷ್ಠ ಮಟ್ಟ	2284 ಅಡಿ
ಮಂಗಳವಾರ	2283 ಅಡಿ
ಒಳಹರಿವು	30000 ಕ್ಯೂಸೆಕ್
ಹೊರಹರಿವು	36000 ಕ್ಯೂಸೆಕ್

ಹಾರಂಗಿ ನೀರಿನ ಮಟ್ಟ



ಗರಿಷ್ಠ ಮಟ್ಟ	2859 ಅಡಿ
ಮಂಗಳವಾರ	2852.86 ಅಡಿ
ಒಳಹರಿವು	12827 ಕ್ಯೂಸೆಕ್
ಹೊರಹರಿವು	18750 ಕ್ಯೂಸೆಕ್

ಅಸೋಸಿಯೇಷನ್ ಆಫ್ ಅಲಯನ್ಸ್ ಕ್ಲಬ್ಸ್ ಸ್ಥಳೀಯ ಸಂಸ್ಥೆಗಳ ಪದಾಧಿಕಾರಿಗಳಿಗೆ ತರಬೇತಿ ಕಾರ್ಯಾಗಾರ

ಮೈಸೂರು,ಜು.16–ಅಸೋಸಿಯೇಷನ್ ಆಫ್ ಅಲಯನ್ಸ್ ಕ್ಲಬ್ಸ್ ಇಂಟರ್‌ನ್ಯಾಷನಲ್ ಸಂಸ್ಥೆಯ ಜಿಲ್ಲೆ 255ರ ಮೈಸೂರಿನ ಸ್ಥಳೀಯ ಕ್ಲಬ್‌ಗಳ 2024–25ನೇ ಸಾಲಿನ ಪದಾಧಿಕಾರಿಗಳ ತರಬೇತಿ ಕಾರ್ಯಾಗಾರ ಖಾಸಗಿ ಹೋಟೆಲ್‌ನಲ್ಲಿ ಯಶಸ್ವಿಯಾಗಿ ನಡೆಯಿತು.



ಅಸೋಸಿಯೇಷನ್ ಆಫ್ ಅಲಯನ್ಸ್ ಕ್ಲಬ್ಸ್ ಇಂಟರ್‌ನ್ಯಾಷನಲ್ ಸಂಸ್ಥೆಯ ಜಿಲ್ಲೆ 255ರ ಮೈಸೂರಿನ ಸ್ಥಳೀಯ ಕ್ಲಬ್‌ಗಳ 2024–25ನೇ ಸಾಲಿನ ಪದಾಧಿಕಾರಿಗಳ ತರಬೇತಿ ಕಾರ್ಯಾಗಾರ ಮೈಸೂರಲ್ಲಿ ಮಂಗಳವಾರ ನಡೆಯಿತು.

ಈ ತರಬೇತಿ ಶಿಬಿರದಲ್ಲಿ ಮೈಸೂರು ಜಿಲ್ಲೆಯ ವ್ಯಾಪ್ತಿಗೆ ಸೇರಿದ 35 ಕ್ಲಬ್ಬಿನ ಸುಮಾರು 100 ಮಂದಿ ಅಲಯನ್ಸ್ ಪದಾಧಿಕಾರಿಗಳು ತರಬೇತಿ ಪಡೆದರು.

ತರಬೇತಿ ಶಿಬಿರದ ಉದ್ಘಾಟಕರಾದ ಶಿಕ್ಷಣ ಇಲಾಖೆ ಉಪನಿರ್ದೇಶಕ ಡಾ. ಜವರೇಗೌಡ ಶಿಬಿರ ಉದ್ಘಾಟಿಸಿ ಮಾತನಾಡಿ, ಅಲಯನ್ಸ್ ಸಂಸ್ಥೆಗಳು ಶಾಲೆಯ ಮಕ್ಕಳು ಪರೀಕ್ಷೆ ಎದುರಿಸುವುದು ಹೇಗೆ? ಕಾರ್ಯಾಗಾರವನ್ನು ಏರ್ಪಡಿಸಬೇಕೆಂದು ಮನವಿ ಮಾಡಿದರು.

ಮೌಂಟ್ ಎವರೆಸ್ಟ್ ಶಿಖರವನ್ನೇರಿದ ಮೊದಲ ಮೈಸೂರಿನ ಹೆಮ್ಮೆಯ ಮಹಿಳೆ ಡಾ ಉಷಾ ಹೆಗ್ಡೆ ಮಾತನಾಡಿ, ಎಲ್ಲರೂ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಅದಕ್ಕಾಗಿ ನಿಯಮಿತವಾದ ವ್ಯಾಯಾಮಗಳನ್ನು ಮಾಡಬೇಕು ಎಂದರು.

ಸಂಪನ್ಮೂಲ ವ್ಯಕ್ತಿಗಳಾಗಿ ಅಲಯನ್ಸ್ ಸಂಸ್ಥೆಯ ಅಂತರರಾಷ್ಟ್ರೀಯ ನಿರ್ದೇಶಕ ಡಾ.ನಾಗರಾಜ್ ಬೈರಿ, ವೆಲ್ಲೂರಿನಿಂದ ಆಗಮಿಸಿದ್ದ ನಾಯಕತ್ವ ಬೆಳವಣಿಗೆ ಅಧ್ಯಕ್ಷ ಡಾ ಕಲ್ಲಗಡ್, ಅಂತಾರಾಷ್ಟ್ರೀಯ ಜಂಟಿ ಸಾರ್ವಜನಿಕ ಸಂಪರ್ಕಾಧಿಕಾರಿ ಬೆಳಗಾವಿಯ ಡಾ.ನವೀನ ಶೆಟ್ಟಿಗಾರ್ ತರಬೇತಿ ನೀಡಿದರು. ತರಬೇತಿ ಶಿಬಿರದ ಅಧ್ಯಕ್ಷತೆಯನ್ನು ಜಿಲ್ಲೆ 255ರ ಜಿಲ್ಲಾ ರಾಜ್ಯಪಾಲ ಅಲ್ಲೈ ಬಾಲಕೃಷ್ಣರಾಜು ವಹಿಸಿದ್ದರು.

ಜಿಲ್ಲಾ ರಾಜ್ಯಪಾಲರಾದ ಅಲ್ಲೈ ಸಿರಿಬಾಲು, ಉಪರಾಜ್ಯಪಾಲರಾದ ಅಲ್ಲೈ ವೆಂಕಟೇಶ್, ಅಲ್ಲೈ ಮಹಾಬಲೇಶ್ವರ ಬೈರಿ, ಅಲ್ಲೈ ಸಂತೋಷ್‌ಕುಮಾರ್, ಜಿಲ್ಲಾ ಸಂಪುಟ ಜಂಟಿ ಕಾರ್ಯದರ್ಶಿ ಅಲ್ಲೈ ಶ್ರೀಶೈಲ, ಸಂಪುಟದ ಖಜಾಂಚಿ ಕೃಷ್ಣಾಜಿ ರಾವ್, ಸಂಪುಟದ ಸಾರ್ವಜನಿಕ ಸಂಪರ್ಕಾಧಿಕಾರಿ ಅಲ್ಲೈ ಬೆಟ್ಟೇಗೌಡ ಮತ್ತಿತರರಿದ್ದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

17.07.2024 ಬುಧವಾರ, ಮಳೆ ನಕ್ಷತ್ರ: ಪುನರ್ವಸು 6.07.2024 ರಿಂದ 19.07.2024 ಕ್ರೋಧಿನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಆಷಾಢ ಮಾಸ, ಶುಕ್ಲ ಪಕ್ಷ, ತಿಥಿ: ಏಕಾದಶಿ, ನಕ್ಷತ್ರ: ಅನುರಾಧ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ :** ಆಲ್ಕೋಹಾಲ್‌ನಿಂದ ಉಂಟಾಗುವ ಯಕೃತ್ತಿನ ಸಮಸ್ಯೆಗಳಿಗೆ ಚಿಕಿತ್ಸಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ಲಲಿತಾದ್ರಿಪುರ ರಸ್ತೆ, ಬೆಳಗ್ಗೆ 9 ಗಂಟೆಯಿಂದ.

■ **ಕುಮಾರವ್ಯಾಸ ಗುರುಕುಲ :** ಟಿ. ವೆಂಕಟಾಚಲಯ್ಯ ಮತ್ತು ಜಿ.ಎಸ್. ರಾಜಲಕ್ಷ್ಮಮ್ಮ ಸ್ಮರಣಾರ್ಥ ಗಮಕ ಕಾವ್ಯ ವಾಚನ (ಕುಮಾರ ವ್ಯಾಸ ಭಾರತ – ಭೀಷ್ಮ ಭಕ್ತಿ) ಕುರಿತು ಗಮಕಿ ಕೃಷ್ಣಗಿರಿ ರಾಮಚಂದ್ರ ಮತ್ತು ವಿದುಷಿ ಡಾ. ಜ್ಯೋತಿಶಂಕರ್ ಅವರಿಂದ ಗಮಕ ಕಾವ್ಯ ವಾಚನ, ಸ್ಥಳ: ಶ್ರೀ ಮೈಸೂರು ವಾಸುದೇವಾಚಾರ್ಯ ಹೆರಿಟೇಜ್ ಬಿಲ್ಡಿಂಗ್, ನ್ಯೂ ಸಯ್ಯಾಜಿರಾವ್ ರಸ್ತೆ, ಫೋರ್ಟ್ ಮೊಹಲ್ಲಾ, ಬೆಳಗ್ಗೆ 10.30ಕ್ಕೆ.

■ **ಲಯನ್ಸ್‌ಕ್ಲಬ್ ಆಫ್ ಮೈಸೂರು :** ಪದಗ್ರಹಣ ಸಮಾರಂಭ, ಮುಖ್ಯ ಅತಿಥಿಗಳು : ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಪ್ರತಿಜ್ಞಾವಿಧಿ ಬೋಧನೆ : ಮಾಜಿ ರಾಜ್ಯಪಾಲ ಲಯನ್ ಕೆ. ದೇವೇಗೌಡ, ಕಿರು ಹೊತ್ತಿಗೆ ಬಿಡುಗಡೆ : ಮಾಜಿ ಜಿಲ್ಲಾ ರಾಜ್ಯಪಾಲ ಹಾಗೂ ಮಲ್ಟಿಪಲ್ ಕೌನ್ಸಿಲ್ ಛೇರ್ಮನ್ ಲಯನ್ ಡಾ. ಎನ್. ಕೃಷ್ಣೇಗೌಡ, ಸ್ಥಳ: ಲಯನ್ಸ್ ಭವನ, ತಿಲಕ್‌ನಗರ, ಬೆಳಗ್ಗೆ 11ಕ್ಕೆ.

■ **ಶ್ರೀ ಕೃಷ್ಣ ಮಿತ್ರ ಮಂಡಳಿ, ಶ್ರೀ ಕೃಷ್ಣ ಟ್ರಸ್ಟ್ :** ಉಡುಪಿ ಶ್ರೀ ಪಲಿಮಾರು ಮಠಾಧಿಪತಿ ಶ್ರೀ ಶ್ರೀ ವಿದ್ಯಾಧೀಶತೀರ್ಥ ಶ್ರೀಪಾದಂಗಳವರಿಂದ ತಪ್ತ ಮುದ್ರಾಧಾರಣೆ, ಸ್ಥಳ: ಶ್ರೀಕೃಷ್ಣಧಾಮ, ಸರಸ್ವತಿಪುರಂ, ಬೆಳಗ್ಗೆ 11ರಿಂದ.


■ **ಮೈಸೂರು ಶರಣ ಮಂಡಲಿ, ಶ್ರೀ ನಟರಾಜ ಪ್ರತಿಷ್ಠಾನ :** ಶ್ರೀ ವಾಟಾಳು ಮಠಾಧ್ಯಕ್ಷರಾದ ಡಾ. ಸಿದ್ದಲಿಂಗ ಶಿವಾಚಾರ್ಯ ಸ್ವಾಮಿಗಳವರಿಗೆ ಬಸವ ರತ್ನ ಪ್ರಶಸ್ತಿ ಪ್ರದಾನ ಸಮಾರಂಭ, ಸಾನ್ನಿಧ್ಯ: ಶ್ರೀ ಹೊಸಮಠದ ಅಧ್ಯಕ್ಷ ಶ್ರೀ ಚಿದಾನಂದ ಸ್ವಾಮೀಜಿ, ಉದ್ಘಾಟನೆ: ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಅಧ್ಯಕ್ಷತೆ: ನಿವೃತ್ತ ಐಎಫ್‌ಎಸ್ ಅಧಿಕಾರಿ ಆರ್.ರಾಜು, ಮುಖ್ಯ ಅತಿಥಿಗಳು: ವಿಧಾನಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ, ಮೈಸೂರು ಕಲ್ಚರಲ್ ಅಸೋಸಿಯೇಷನ್ ಅಧ್ಯಕ್ಷ ಎ.ಪಿ.ಎನ್. ನಾಗೇಶ್, ಪ್ರಧಾನ ಭಾಷಣ: ಶ್ರೀ ನಟರಾಜ ಶಿಕ್ಷಣ ಸಂಸ್ಥೆ ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ, ಸ್ಥಳ: ಶ್ರೀ ನಟರಾಜ ಸಭಾ ಭವನ, ಶಂಕರ ಮಠದ ರಸ್ತೆ, ಮಧ್ಯಾಹ್ನ 12ಕ್ಕೆ.

■ **ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘ :** ನೂತನ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್ ಅವರಿಗೆ ಅಭಿನಂದನಾ ಸಮಾರಂಭ, ಮುಖ್ಯ ಅತಿಥಿಗಳು: ಶಾಸಕ ಟಿ.ಎಸ್. ಶ್ರೀವತ್ಸ, ಸ್ಥಳ: ಶ್ರೀರಾಮಮಂದಿರ, ಕೃಷ್ಣಮೂರ್ತಿಪುರಂ, ಸಂಜೆ 5ಕ್ಕೆ.

■ **ಹಜರತ್ ಸೈಯದ್ ಶಾ ಮೊಹಮ್ಮದ್ ಉಮೇರೆ–ಇ–ಮೆಜಾರ್ ಖಾದ್ರಿ :** ಜಿಕ್ರೆ ಶಾದತ್ ಇಮಾಮ್–ಒ–ಹುಸೇನ್ ಮತ್ತು ಹೌಮೆ ಅಶೂರ ದುವಾ ಕಾರ್ಯಕ್ರಮ, ಸ್ಥಳ: ಹಜರತ್ ಸೈಯದ್ ಷಾ ಮೊಹಮ್ಮದ್ ಉಮೇರೆ–ಇ–ಮೆಜಾರ್ ದರ್ಗಾ, ಟಿಪ್ಪು ಸರ್ಕಲ್ ಹತ್ತಿರ, ಸಂಜೆ 5.30 ರಿಂದ.

■ **ನಮ್ಮ ಮೈಸೂರು ಫೌಂಡೇಷನ್ :** ಯುವರಾಜ, ಮಹಾರಾಜ ಕಾಲೇಜು ಮತ್ತು ಮಾನಸಗಂಗೋತ್ರಿ ಆವರಣದಲ್ಲಿ ಸ್ವಚ್ಛತಾ ಅಭಿಯಾನ, ಚಾಲನೆ : ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್, ಸ್ಥಳ: ಮಾನಸಗಂಗೋತ್ರಿ ಆವರಣ, ಬೆಳಗ್ಗೆ 7ಕ್ಕೆ

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ಬದುಕು ಬದಲಿಸಿದ ಶೋಧ–ಬಾನುಲಿ ಸರಣಿ, ಪ್ರಸ್ತುತಿ–ಎನ್.ಎನ್.ಸುರೇಂದ್ರನಾಥ್ ಸಾತ್ವಿಕ್, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ: ಟಿ.ಎನ್.ಅಶ್ವಿನಿ, ವ್ಯಾಖ್ಯಾನ: ಡಾ.ಮ.ರಾಮಕೃಷ್ಣ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು–ಹೆಚ್.ಎಸ್.ವೆಂಕಟೇಶಮೂರ್ತಿ ಅವರ ರಚನೆಗಳು, 9.00 ವೃತ್ತಿ ಮಾರ್ಗದರ್ಶನ, ಇವರೊಂದಿಗೆ ಭಾಗವಹಿಸುತ್ತಾರೆ: ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಪಂಡಿತ್ ಬ್ರಿಜ್ ನಾರಾಯಣ–ಸರೋದ್, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ

ಮಧ್ಯಾಹ್ನ: 12.30 ದೇವರನಾಮ, 12.45 ಜನಪದ ಸಂಗೀತ, 1.20 ಭಾವಗೀತೆಗಳು: ಶರದಿ ಪಾಟೀಲ್, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಎಂ.ಆರ್.ಶಶಿಕಾಂತ್–ವೀಣಾ ವಾದನ, 4.00 ಮಹಿಳಾರಂಗ: 'ಹೀಗಿದೆ ನೋಡಿ ನಮ್ ಜೋಡಿ', ಭಾಗವಹಿಸುವವರು: ಒಡನಾಡಿ ಸಂಸ್ಥೆಯ ಸ್ಟ್ಯಾನ್ಲೀ ಮತ್ತು ಸಮಾಜಕಾರ್ಯ ಪ್ರಾಧ್ಯಾಪಕರಾದ ಕುಮುದಿನಿ ಅಚ್ಚಿ ದಂಪತಿಯೊಂದಿಗೆ ಮಾತುಕತೆ. ಪ್ರಸ್ತುತಿ: ಅಬ್ದುಲ್ ರಶೀದ್, 4.45 ಹಿಂದಿ ಪಾಠ–ಎಸ್.ಈಶ್ವರಭಟ್, 6.50 ಕೃಷಿರಂಗ: ಕೃಷಿ ದೀವಿಗೆ–ಸಂಶೋಧನಾ ಸಂಸ್ಥೆಯೊಂದಿಗೆ ಕೃಷಿ ಕಲಿಕೆ ಕುರಿತ ಬಾನುಲಿ ಸರಣಿ. ಸುಧಾರಿತ ಭತ್ತದ ತಳಿಗಳು ಹಾಗೂ ಬೇಸಾಯ. ಈ ಕುರಿತು ಮಂಡ್ಯದ ವಿ.ಸಿ. ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಸಹಾಯಕ ಪ್ರಾಧ್ಯಾಪಕರಾದ ಡಾ.ಸಿ.ಎ.ದೀಪಕ್ ಅವರೊಂದಿಗೆ ಸಂದರ್ಶನ. ಸಂದರ್ಶಕರು: ಎನ್. ಕೇಶವಮೂರ್ತಿ, 8.00 ಕ್ಷಿತಿಜ ಲಿಟರರಿ ಗುರು–ಸಾಹಿತ್ಯ ಸಾಧಕರೊಂದಿಗೆ ಸಂವಾದ, 9.30 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಸಿ.ಆರ್.ವ್ಯಾಸ್–ಗಾಯನ, 10.00 ಹಳ್ಳಿಹಾಡು, 10.30 ಸವಿನೆನಪು

ವಾಲ್ಮೀಕಿ ಹಗರಣ: ವಿಧಾನಸಭೆಯಲ್ಲಿ ಮತ್ತೆ ಕೋಲಾಹಲ

ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಬಿಜೆಪಿ ಆಗ್ರಹ

ಬೆಂಗಳೂರು, ಜು.16– ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ 187 ಕೋಟಿ ರೂಪಾಯಿ ಹಗರಣಕ್ಕೆ ಸಂಬಂಧಿಸಿದಂತೆ ಎರಡನೇ ದಿನವಾದ ಮಂಗಳವಾರವೂ ವಿಧಾನಸಭೆಯಲ್ಲಿ ಗದ್ದಲ ಮುಂದುವರಿದಿದ್ದು, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ರಾಜೀನಾಮೆಗೆ ಬಿಜೆಪಿ ಆಗ್ರಹಿಸಿದೆ.

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ನಡೆದ ಲೂಟಿಗೆ ಕಾಂಗ್ರೆಸ್ ಸರ್ಕಾರವೇ ನೇರ ಹೊಣೆ ಎಂದ ಪ್ರತಿಪಕ್ಷ ನಾಯಕ ಆರ್.ಅಶೋಕ್, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನೈತಿಕ ಹೊಣೆ ಹೊತ್ತು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಮತ್ತು ಪ್ರಕರಣವನ್ನು ಸಿಬಿಐಗೆ ವಹಿಸಬೇಕು ಎಂದು ಆಗ್ರಹಿಸಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧೀಕ್ಷಕ ಚಂದ್ರಶೇಖರ್ ಅವರ ಸಾವಿಗೆ ಸರ್ಕಾರವೇ ಹೊಣೆ ಎಂದು ಆರೋಪಿಸಿದ ಆರ್ ಅಶೋಕ್, ಒಂದು ವೇಳೆ ಈ ಆತ್ಮಹತ್ಯೆ ನಡೆಯದಿದ್ದರೆ ಹಗರಣವೇ ಹೊರ ಬರುತ್ತಿರಲಿಲ್ಲ. ಇದರ ಬಗ್ಗೆ ತನಿಖೆ ನಡೆಸಲು ರಾಜ್ಯ ಸರ್ಕಾರ ರಚಿಸಿರುವ ವಿಶೇಷ ತನಿಖಾ ತಂಡ(ಎಸ್ಐಟಿ) ಎಷ್ಟು ನ್ಯಾಯಯುತವಾಗಿದೆ ಎಂದು ಪ್ರಶ್ನಿಸಿದರು. ಎಸ್ಟಿ(ಪರಿಶಿಷ್ಟ ಪಂಗಡ) ಸಮುದಾಯದ ಕಲ್ಯಾಣಕ್ಕೆ ನೀಡಬೇಕಿದ್ದ 187 ಕೋಟಿ ರೂ.ಗಳನ್ನು ಲೂಟಿ ಮಾಡಿ ತೆಲಂಗಾಣಕ್ಕೆ ಕೊಂಡೊಯ್ದಿರುವುದರಿಂದ ಅವರಿಗೆ ಸಲ್ಲಬೇಕಾದ ಸವಲತ್ತುಗಳು ಸಿಕ್ಕಿಲ್ಲ. ಆ ಹಣವನ್ನು ಎಸ್ಟಿ ಸಮುದಾಯದ ಫಲಾನುಭವಿಗಳಿಗೆ ಸಿಎಂ ನೀಡಬೇಕು. 224 ಕ್ಷೇತ್ರದ ಮತದಾರರಿಗೆ ತಲುಪಬೇಕಾದ ಹಣ ದುರ್ಬಳಕೆಯಾಗಿದೆ. ದಲಿತರ ಬದುಕಿಗೆ ಸರ್ಕಾರ ಕೊಳ್ಳಿ ಇಟ್ಟಿದೆ. ಶೋಷಿತ ಸಮುದಾಯದ ಹಣ ಲೂಟಿಯಾಗಿದೆ ಎಂದು ಪ್ರತಿಪಕ್ಷ ನಾಯಕ ವಾಗ್ದಾಳಿ ನಡೆಸಿದರು.



ಮುಖ್ಯಮಂತ್ರಿ ಅವರಿಗೆ ಹಾಗೂ ಸಚಿವರಿಗೆ ವಿನಂತಿ ಮಾಡುತ್ತೇನೆ. ಎಸ್ಟಿ ಜನಾಂಗದವರ ಮನೆಯಲ್ಲಿ ಒಂದು ದಿನ ವಾಸ್ತವ್ಯ ಮಾಡಿ, ಅವರ ಕಷ್ಟ, ಗೋಳು ನಿಮಗೆ ಗೊತ್ತಾಗುತ್ತದೆ. ಆತ್ಮಹತ್ಯೆ ಮಾಡಿಕೊಂಡ ಚಂದ್ರಶೇಖರ್ ಅವರ ಕುಟುಂಬ ಬೀದಿಗೆ ಬಂದಿದೆ. ಸಚಿವರಾದ ಮಧು ಬಂಗಾರಪ್ಪ ಹಾಗೂ ಪರಮೇಶ್ವರ್ ಅವರು ಸಾಂತ್ವನ ಹೇಳಿದ್ದಾರೆ. ಮತ್ತ್ಯಾರೂ ಬಂದಿಲ್ಲ ಎಂದು ಚಂದ್ರಶೇಖರ್ ಕುಟುಂಬದವರು ಹೇಳಿದ್ದಾರೆ. ಜೀವ ಒತ್ತೆಯಿಟ್ಟಾದರೂ ನ್ಯಾಯ ಪಡೆಯುವುದಾಗಿ ಚಂದ್ರಶೇಖರ್ ಅವರ ಪತ್ನಿ ಹೇಳಿದ್ದಾರೆ. ಅನ್ಯಾಯವಾಗಿ ಅಮಾಯಕರ ಸಾವಾಗಿದೆ ಎಂದರು.

ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿ ಅಕ್ರಮ ನಡೆದಿರುವುದನ್ನು ಸಿಎಂ ಅವರೇ ಒಪ್ಪಿಕೊಂಡಿದ್ದಾರೆ. ಸರ್ಕಾರ ಜವಾಬ್ದಾರಿಯಿಂದ ನುಣುಚಿಕೊಳ್ಳಲು ಸಾಧ್ಯವಿಲ್ಲ ಎಂದು ಅಶೋಕ್ ಹೇಳಿದರು. ಹಗರಣದ ಬಗ್ಗೆ ತಮಗೆ ತಿಳಿದಿಲ್ಲ ಎಂದು ಸಿಎಂ ಹೇಳಿದ್ದಾರೆ. ಹಗರಣ ಬೆಳಕಿಗೆ ಬಂದು 40 ದಿನಗಳು ಕಳೆದರೂ ಎಸ್ಐಟಿ ಮಾಜಿ ಸಚಿವ ನಾಗೇಂದ್ರ ಹಾಗೂ ನಿಗಮದ ಅಧ್ಯಕ್ಷರಾಗಿರುವ ಆಡಳಿತಾರೂಢ ಕಾಂಗ್ರೆಸ್ ಶಾಸಕ ಬಸನಗೌಡ ದದ್ದಲ್ ಅವರಿಗೆ ಏಕೆ ನೋಟಿಸ್ ನೀಡಿಲ್ಲ ಎಂದು ಅಶೋಕ್ ಪ್ರಶ್ನಿಸಿದರು. ಮುಖ್ಯಮಂತ್ರಿಗಳು ಹಣಕಾಸು ಖಾತೆಯನ್ನು ಹೊಂದಿದ್ದಾರೆ. ಹೀಗಾಗಿ ಹಣ ಮಂಜೂರಾಗುವುದು, ಹಣ ಖರ್ಚಾಗುವುದು ಎಲ್ಲದರ ಮಾಹಿತಿ ಇರುತ್ತದೆ. ಮಾಹಿತಿ ಇಲ್ಲದಿದ್ದರೆ ಕೇಳಬೇಕಲ್ಲವೇ? ಆ ಇಲಾಖೆಯ ಕಾರ್ಯದರ್ಶಿ, ಮುಖ್ಯ ಕಾರ್ಯದರ್ಶಿಯೂ ಮಾತನಾಡಲಿಲ್ಲ ಎಂದು ಟೀಕಿಸಿದರು. ಮಾಜಿ ಸಂಸದ ಪ್ರಜ್ವಲ್ ರೇವಣ್ಣ, ಅವರ ತಂದೆ ಮತ್ತು ಶಾಸಕ ಎಚ್.ಡಿ. ರೇವಣ್ಣ, ತಾಯಿ ಭವಾನಿ ರೇವಣ್ಣ ಮತ್ತು ಬಿಜೆಪಿ ಶಾಸಕರ ವಿರುದ್ಧದ ಲೈಂಗಿಕ ದೌರ್ಜನ್ಯದ ಆರೋಪದ ಬಗ್ಗೆ ಎಸ್ಐಟಿ ತೋರಿಸುತ್ತಿರುವ "ತ್ವರಿತತೆ" ವಾಲ್ಮೀಕಿ ಹಗರಣದಲ್ಲಿ ಏಕೆ ತೋರಿಸುತ್ತಿಲ್ಲ ಎಂದು ಆರ್ ಅಶೋಕ್ ಪ್ರಶ್ನಿಸಿದರು. ನಂತರ ಮಾತನಾಡಿದ ಬಿಜೆಪಿಯ ಹಿರಿಯ ಶಾಸಕ ಸುರೇಶ್ ಕುಮಾರ್ ಅವರು ವಿಧಾನಸಭೆಯಲ್ಲಿ ಎರಡು ವಿಷಯಗಳಿವೆ: ಒಂದು ಎಸ್ಐಟಿ – ವಿಶೇಷ ತನಿಖಾ ತಂಡ, ಇನ್ನೊಂದು ಎಸ್ಎಸ್ಐಟಿ – ಸಿದ್ದರಾಮಯ್ಯ ಶಿವಕುಮಾರ್ ತನಿಖಾ ತಂಡ ಎಂದರು. ಇದಕ್ಕೆ ಶಿವಕುಮಾರ್ ಮತ್ತು ಕಾಂಗ್ರೆಸ್ ಶಾಸಕರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಚರ್ಚೆಯ ವೇಳೆ ಬಿಜೆಪಿ ರಾಜ್ಯಾಧ್ಯಕ್ಷ ಹಾಗೂ ಶಿಕಾರಿಪುರ ಶಾಸಕ ಬಿ.ವೈ.ವಿಜಯೇಂದ್ರ ಮಾತನಾಡಿ, 187 ಕೋಟಿ ರೂ.ಗಳ ಹಗರಣದ ಬಗ್ಗೆ ಹಣಕಾಸು ಇಲಾಖೆಗೆ ಯಾವುದೇ ಮಾಹಿತಿ ಇಲ್ಲ ಎಂಬುದು ಒಪ್ಪಿಕೊಳ್ಳಲು ಸಾಧ್ಯವಿಲ್ಲ.

ಶೋಷಿತ ದೀನದಲಿತರಿಗಾಗಿ ಶ್ರಮಿಸುವುದಾಗಿ ಹೇಳಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ದಲಿತರ ಹಣವನ್ನೇ ಲೂಟಿ ಮಾಡುತ್ತಿದೆ ಎಂದು ಆರೋಪಿಸಿದರು. ವಿಜಯೇಂದ್ರ ಹೇಳಿಕೆಗೆ ಸಚಿವರು ಸೇರಿದಂತೆ ಆಡಳಿತಾರೂಢ ಕಾಂಗ್ರೆಸ್ ಶಾಸಕರು ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಮೂರು ಏಜೆನ್ಸಿಗಳು ಸಿಬಿಐ, ಇಡಿ ಮತ್ತು ಈಗ ನಮ್ಮ ವಿಶೇಷ ತನಿಖಾ ತಂಡ(ಎಸ್ಐಟಿ) ತನಿಖೆ ನಡೆಸುತ್ತಿರುವಾಗ ವಿಧಾನಸಭೆಯಲ್ಲಿ ಪ್ರಕರಣದ ಕುರಿತು ನಿಲುವಳಿ ಸೂಚನೆ ಮಂಡಿಸಬಾರದಿತ್ತು. ಪ್ರಕರಣದಲ್ಲಿ ಯಾವುದೇ ಸಚಿವರು ಮತ್ತು ಅಧಿಕಾರಿಗಳು ಭಾಗಿಯಾಗಿದ್ದಾರೆ ಎಂದು ನಾವು ನಿರ್ದಿಷ್ಟವಾಗಿ ಹೇಳಲು ಸಾಧ್ಯವಿಲ್ಲ ಎಂದು ಗೃಹ ಸಚಿವ ಜಿ ಪರಮೇಶ್ವರ ಅವರು ಹೇಳಿದರು.

ಶಾಲೆಗಳಲ್ಲಿನ 60 ವರ್ಷ ಪೂರೈಸಿದ ಅಡುಗೆಯವರಿಗೆ 40 ಸಾವಿರ ಇಡಿಗಂಟು

ಮೈಸೂರು, ಜು.16(ಎಸ್‌ಪಿಎನ್)– ಶಾಲಾ ಶಿಕ್ಷಣ ಇಲಾಖೆಯ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ (60 ವರ್ಷ ಪೂರೈಸಿದ) ಅಡುಗೆಯವರಿಗೆ ಒಮ್ಮೆ ಇಡುಗಂಟು ನೀಡುವ ಬೇಡಿಕೆಗೆ ಆರ್ಥಿಕ ಇಲಾಖೆ ಮಂಗಳವಾರ ಸಹಮತಿಸಿದೆ.

ಪ್ರಧಾನಮಂತ್ರಿ ಪೋಷಣ್ ಶಕ್ತಿ (ಮಧ್ಯಾಹ್ನ ಬಿಸಿಯೂಟ ಯೋಜನೆ) ನಿರ್ಮಾಣ್ ಯೋಜನೆಯಡಿ ಸರ್ಕಾರಿ ಶಾಲೆಗಳಲ್ಲಿ ಕೆಲಸ ಮಾಡುತ್ತಿರುವ ಅಡುಗೆಯವರು ನೇಮಕಗೊಂಡು 60 ವರ್ಷ ಪೂರೈಸಿ, ಕರ್ತವ್ಯದಿಂದ ಬಿಡುಗಡೆಗೊಳ್ಳುವವರಿಗೆ ಒಮ್ಮೆ ಇಡುಗಂಟು ಸೌಲಭ್ಯವನ್ನು ನೀಡಲು ಆರ್ಥಿಕ ಇಲಾಖೆ ಷರತ್ತು ವಿಧಿಸಿ, ಅನುಮೋದನೆ ನೀಡಿದೆ.

ಷರತ್ತುಗಳು: 15 ವರ್ಷ ಅಥವಾ ಅದಕ್ಕೂ ಹೆಚ್ಚಿನ ಅವಧಿಗೆ ಸೇವೆ ಸಲ್ಲಿಸಿ 60 ವರ್ಷ ಪೂರ್ಣಗೊಂಡ ನಂತರ ಕರ್ತವ್ಯದಿಂದ ಬಿಡುಗಡೆಗೊಳ್ಳುವ ಅಡುಗೆ ಸಿಬ್ಬಂದಿಗೆ 40 ಸಾವಿರ ಇಡಿಗಂಟು ನೀಡುವುದು. 5 ವರ್ಷಕ್ಕೂ ಮೇಲ್ಪಟ್ಟು ಅಥವಾ 15 ವರ್ಷಕ್ಕಿಂತ ಕಡಿಮೆ ಸೇವೆ ಸಲ್ಲಿಸಿ 60 ವರ್ಷ ಪೂರ್ಣಗೊಂಡ ನಂತರ ಕರ್ತವ್ಯದಿಂದ ಬಿಡುಗಡೆಗೊಳ್ಳುವ ಅಡುಗೆ ಸಿಬ್ಬಂದಿಗೆ 30 ಸಾವಿರಗಳ ಇಡಿಗಂಟು ವಿತರಿಸುವುದು. ಅಂತೆಯೇ ಕನಿಷ್ಠ 5 ವರ್ಷ ಸೇವೆಯನ್ನು ಪೂರ್ಣಗೊಳಿಸದ ಅಡುಗೆ ಸಿಬ್ಬಂದಿಗೆ ಒಂದು ಬಾರಿಯ ಇಡಿಗಂಟು ಸೌಲಭ್ಯ ಇರುವುದಿಲ್ಲ.

> "60 ವರ್ಷ ಪೂರೈಸಿ, ಕರ್ತವ್ಯದಿಂದ ಬಿಡುಗಡೆಗೊಳ್ಳುವ ಮುಖ್ಯ ಅಡುಗೆಯವರು, ಸಹಾಯಕ ಅಡುಗೆಯ ವರಿಗೆ ಒಮ್ಮೆ ಇಡುಗಂಟು ನೀಡಬೇಕು. ಹಾಲಿ ಸಿಬ್ಬಂದಿಗೆ ಇಎಸ್ಐ, ಪಿಎಫ್ ಸೌಲಭ್ಯ ಮತ್ತು ಉದ್ಯೋಗ ಖಾತರಿಪಡಿಸಬೇಕೆಂಬ ಬೇಡಿಕೆ ಸೇರಿದಂತೆ ಇತರೆ ಬೇಡಿಕೆಗಳನ್ನು ಮುಂದಿಟ್ಟು ಪ್ರಸ್ತುತ ಬೆಂಗಳೂರಿನಲ್ಲಿ ಅಹೋರಾತ್ರಿ ಧರಣಿ ನಡೆಸಿ ಸರ್ಕಾರಕ್ಕೆ ಮನವಿ ಮಾಡಲಾಗಿತ್ತು.
> – ಪಿ.ಎಸ್.ಸಂಧ್ಯಾ, ಕಾರ್ಯದರ್ಶಿ

ಈ ಸಂಬಂಧ ವೆಚ್ಚವನ್ನು ಎಂಡಿಎಂ ಯೋಜನೆಯಲ್ಲಿ ಹಂಚಿಕೆಯಾಗಿರುವ ಅನುದಾನದಲ್ಲಿ ಭರಿಸಬೇಕು ಎಂದು ಆರ್ಥಿಕ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಅವರ ಅನುಮೋದನೆ ಮೇರೆಗೆ ಅಧೀನ ಕಾರ್ಯದರ್ಶಿ ಪ್ರಜೀತ್ ಕೆ.ಎಂ.ನಂಬಿಯಾರ್ ಸುತ್ತೋಲೆಯಲ್ಲಿ ಹೊರಡಿಸಿದ್ದಾರೆ.

ಲೂಟಿಕೋರರ ಪಿತಾಮಹ ನೀನು!

ವಿಧಾನಸಭೆಯಲ್ಲಿ ಅಶ್ವತ್ಥ್‌ನಾರಾಯಣ–ಡಿ.ಕೆ.ಶಿವಕುಮಾರ್ ವಾಕ್ಸಮರ

ಬೆಂಗಳೂರು, ಜು.16– ಬಿಜೆಪಿ ಮಾಜಿ ಸಚಿವ ಅಶ್ವತ್ಥ್‌ನಾರಾಯಣ ಲೂಟಿಕೋರರ ಪಿತಾಮಹ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ತೀವ್ರ ವಾಗ್ದಾಳಿ ನಡೆಸಿದ್ದಾರೆ.



ವಿಧಾನಸಭೆಯ ಪ್ರಶ್ನೋತ್ತರ ಕಲಾಪದ ನಂತರ ವಿರೋಧ ಪಕ್ಷದ ನಾಯಕ ಆರ್.ಅಶೋಕ್, ವಾಲ್ಮೀಕಿ ನಿಗಮದ ಹಗರಣದ ಚರ್ಚೆ ಮೇಲಿನ ಪ್ರಸ್ತಾಪ ಮುಂದುವರೆಸಲು ಮುಂದಾದರು. ಈ ವೇಳೆ ಮಾಜಿ ಸಚಿವ ಅಶ್ವತ್ಥ್‌ನಾರಾಯಣ ಅವರು, ವಾಲ್ಮೀಕಿ ನಿಗಮದ ಹಗರಣದಲ್ಲಿ ಹಗಲು ದರೋಡೆ ಮಾಡಿರುವ ಮುಖ್ಯಮಂತ್ರಿಗಳು ಗೈರಾಗಿದ್ದಾರೆ. ಅವರು ಸದನಕ್ಕೆ ಹಾಜರಾಗಬೇಕು ಎಂದು ಪಟ್ಟು ಹಿಡಿದರು. ಈ ವೇಳೆ ಮಾತನಾಡಿದ ಶಿವಕುಮಾರ್, ಸಿದ್ದರಾಮಯ್ಯ ಅವರು ಈ ಹಿಂದೆ ವಿರೋಧ ಪಕ್ಷದ ನಾಯಕರಾಗಿದ್ದಾಗ ವಿಷಯದ ಚರ್ಚೆಗೆ ಪ್ರಸ್ತಾಪ ಮಾಡಿದಾಗಲೆಲ್ಲಾ ಬಿಜೆಪಿಯ ಮುಖ್ಯಮಂತ್ರಿಗಳು ಸದನದಲ್ಲಿ ಹಾಜರಿರುತ್ತಿದ್ದರೇ, ಅವರು ಗೈರಾಗಿರಲಿಲ್ಲವೇ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಅಶ್ವತ್ಥ್‌ನಾರಾಯಣ ಅವರು ಮಾಡಬಾರದನ್ನು ಮಾಡಿರುವುದಕ್ಕೇ ಜನ ನಮ್ಮನ್ನು ಇಲ್ಲಿ ಕೂರಿಸಿ, ನಿಮ್ಮನ್ನು ಅಲ್ಲಿ ಕೂರಿಸಿ ತೀರ್ಪು ಕೊಟ್ಟಿದ್ದಾರೆ ಎಂದು ಹರಿಹಾಯ್ದರು.

ನನ್ನ ಹೆಸರು ಹೇಳಿ ಆಪಾದನೆ ಮಾಡಲಾಗಿದೆ, ಸಾಕ್ಷಿ ನೀಡಬೇಕು ಎಂದು ಅಶ್ವತ್ಥ್ ನಾರಾಯಣ ಹೇಳಿದಾಗ ಮಾಡಬಾರದ್ದು ಮಾಡಿರುವ ನಿಮ್ಮದನ್ನು ತೆಗೆಯುತ್ತೇವೆ, ಮಾತನಾಡುತ್ತೇವೆ ತಡೆಯಿರಿ ಎಂದು ಡಿಕೆಶಿ ಗುಡುಗಿದರು.

ನನ್ನ ವಿರುದ್ಧ ಮಾಡಿದ ಆಪಾದನೆ ಹಿಟ್ ಅಂಡ್ ರನ್ ಎಂದು ಅಶ್ವತ್ಥ್‌ನಾರಾಯಣ ಗದ್ದಲ ಎಬ್ಬಿಸಿದಾಗ ರಾಮನಗರದ ಕಸ ಗುಡಿಸುತ್ತೇನೆ ಎಂದು ಹೇಳಿದ ನಿಮಗೆ ವಿಧಾನಸಭೆ ಚುನಾವಣೆಯಲ್ಲಿ ಒಂದೇ ಒಂದು ಸೀಟು ಗೆಲ್ಲಲು ಆಗಲಿಲ್ಲ ಎಂದು ಡಿಸಿಎಂ ಕುಟುಕಿದರು.

ಮುಂದುವರೆದು ಮಾತನಾಡಿದ ಡಿಕೆ ಶಿವಕುಮಾರ್, ಇಷ್ಟು ಹೊತ್ತಿನ ತನಕ ಮುಖ್ಯಮಂತ್ರಿಗಳು ಕುಳಿತಿರಲಿಲ್ಲವೇ, ಸದನದಲ್ಲಿ ನಾವೆಲ್ಲಾ ಕುಳಿತಿಲ್ಲವೇ, ಮುಖ್ಯಮಂತ್ರಿಗಳ ಮೇಲೆ ಆರೋಪವಿದೆ ಎಂದು ಹೇಗೆ ಹೇಳುತ್ತಾರೆ ಇವರು ಎಂದು ಬಿಜೆಪಿ ಶಾಸಕರ ಮೇಲೆ ಡಿಸಿಎಂ ಮುಗಿಬಿದ್ದರು. ಯಾರ ಹೆಸರನ್ನು ಬೇಕಾದರೂ ನಾವು ಬಳಸಿಕೊಳ್ಳಬಹುದೇ ಎಂದು ಬಿಜೆಪಿ ಶಾಸಕ ಸುನೀಲ್ ಕುಮಾರ್ ಹೇಳಿದಾಗ ಇವರು (ಅಶ್ವತ್ಥ್‌ನಾರಾಯಣ) ಮುಖ್ಯಮಂತ್ರಿಗಳ ಹೆಸರನ್ನು ಹೇಗೆ ಬಳಸಿಕೊಂಡರು ಎಂದು ಕಟುವಾಗಿ ಮರುಪ್ರಶ್ನಿಸಿದರು. ಶಿವಕುಮಾರ್ ಅವರ ಹೇಳಿಕೆಯನ್ನು ವಿರೋಧಿಸಿ ಬಿಜೆಪಿ ಶಾಸಕರು ಗದ್ದಲ ಮಾಡಿದಾಗ ಕಲಾಪವನ್ನು ಮುಂದೂಡಲಾಯಿತು. ಎಸ್ಐಟಿ ಎಂದರೆ ಸಿದ್ದರಾಮಯ್ಯ ಮತ್ತು ಶಿವಕುಮಾರ್ ಇನ್ವೆಸ್ಟಿಗೇಷನ್ ಟೀಮ್ ಎಂದು ಶಾಸಕ ಸುರೇಶ್ ಕುಮಾರ್ ಹೇಳಿದ್ದಾರೆ. ಇದನ್ನು ಸಹ ಕಡತದಿಂದ ತೆಗೆದುಹಾಕಬೇಕು ಎಂದು ಡಿಸಿಎಂ ಅವರು ಸ್ಪೀಕರ್‌ಗೆ ಮನವಿ ಮಾಡಿದರು. ಇದೇ ವೇಳೆ ಬಿಜೆಪಿ ಸದಸ್ಯರು ಆಕ್ಷೇಪ ವ್ಯಕ್ತಪಡಿಸಿದಾಗ ನಾನು ಸ್ಪೀಕರ್ ಅವರ ಬಳಿ ಮನವಿ ಮಾಡುತ್ತಿದ್ದೇನೆ. ನನಗೂ ಈ ಸದನದ ಕಾನೂನು ಗೊತ್ತಿದೆ ಎಂದಾಗ, ನೀವು ಸಿಬಿಐ ಬಗ್ಗೆ ಹೇಳಿದ್ದೀರಲ್ಲ ಎಂದು ವಿಪಕ್ಷ ನಾಯಕ ಅಶೋಕ್ ಹೇಳಿದರು. ಮೊದಲು ಹೇಳಿದವರು ನೀವು ಮತ್ತು ದೇವೇಗೌಡರು ಎಂದು ಶಿವಕುಮಾರ್ ತಿರುಗೇಟು ಕೊಟ್ಟರು.

ಡ್ರಗ್ಸ್ ಪೆಡ್ಲರ್‌ಗಳ ಬಂಧನ; ಲಕ್ಷಾಂತರ ಮೌಲ್ಯದ ಎಂಡಿಎಂಎ ವಶಕ್ಕೆ

ಮೈಸೂರು, ಜು.16(ಎಸ್‌ಬಿಡಿ)– ಮೈಸೂರಿನ ಸಿಸಿಬಿ ಪೊಲೀಸರು ಮೂವರು ಡ್ರಗ್ಸ್ ಪೆಡ್ಲರ್‌ಗಳನ್ನು ಬಂಧಿಸಿ, ಲಕ್ಷಾಂತರ ರೂ. ಮೌಲ್ಯದ ಎಂಡಿಎಂಎ ವಶಪಡಿಸಿಕೊಂಡಿದ್ದಾರೆ.

ನಗರದ ಪುಲಿಕೇಶಿ ರಸ್ತೆ, 6ನೇ ಕ್ರಾಸ್‌ನಲ್ಲಿ ಜು.12ರಂದು ನಂಬರ್ ಪ್ಲೇಟ್ ಇಲ್ಲದ ಸ್ಕೂಟರ್‌ನಲ್ಲಿ ಮೂವರು ಅನುಮಾನಾಸ್ಪದವಾಗಿ ಕುಳಿತಿರುವ ಬಗ್ಗೆ ಮಾಹಿತಿ ದೊರೆತ ಹಿನ್ನೆಲೆಯಲ್ಲಿ ಸಿಸಿಬಿ ಪೊಲೀಸರು ದಾಳಿ ನಡೆಸಿದ್ದಾರೆ. ಮೂವರನ್ನೂ ವಶಕ್ಕೆ ಪಡೆದು ಪರಿಶೀಲಿಸಿದಾಗ ಅವರ ಬಳಿ ಸುಮಾರು 2 ಲಕ್ಷ ರೂ. ಮೌಲ್ಯದ 51 ಗ್ರಾಂ ಎಂಡಿಎಂಎ ಪತ್ತೆಯಾಗಿದೆ. ಬಳಿಕ ಅವರನ್ನು ಬಂಧಿಸಿ, ಹೆಚ್ಚಿನ ವಿಚಾರಣೆಗೆ ಒಳಪಡಿಸಿದಾಗ ಎಂಡಿಎಂಎ ಮಾರಾಟ ಮಾಡಲು ಯತ್ನಿಸುತ್ತಿದ್ದರು ಎಂಬುದು ಗೊತ್ತಾಗಿದೆ. ಮಾದಕ ವಸ್ತು ಜೊತೆಗೆ ಕೃತ್ಯಕ್ಕೆ ಬಳಸಿದ್ದ ಸ್ಕೂಟರ್ ಇನ್ನಿತರ ವಸ್ತುಗಳನ್ನು ವಶಪಡಿಸಿಕೊಂಡಿದ್ದು, ಈ ಸಂಬಂಧ ಮಂಡಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಗಾಂಜಾ ವಶ: ನರಸಿಂಹರಾಜ ಠಾಣೆ ಪೊಲೀಸರು ಜು.11ರಂದು ಸಂಜೆ ಗಾಂಜಾ ಮಾರಾಟಕ್ಕೆ ಯತ್ನಿಸುತ್ತಿದ್ದ ಓರ್ವನನ್ನು ಬಂಧಿಸಿ, ಆತನ ಬಳಿ ಇದ್ದ 2 ಕೆಜಿ, 656 ಗ್ರಾಂ ಗಾಂಜಾ ವಶಕ್ಕೆ ಪಡೆದಿದ್ದಾರೆ. ಶಾಂತಿನಗರದ ಇಬ್ಬರು ತನಗೆ ಗಾಂಜಾ ನೀಡಿ, ಮಾರಾಟ ಮಾಡಿಕೊಟ್ಟರೆ ಹೆಚ್ಚಿನ ಹಣ ನೀಡುವುದಾಗಿ ಹೇಳಿದ್ದರು ಎಂದು ಬಂಧಿತ, ಪೊಲೀಸರಿಗೆ ವಿಚಾರಣೆಯಲ್ಲಿ ತಿಳಿಸಿದ್ದಾನೆ. ಈ ಸಂಬಂಧ ನರಸಿಂಹರಾಜ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಉಳಿದ ಆರೋಪಿಗಳ ಪತ್ತೆಗೆ ಕ್ರಮ ವಹಿಸಿದ್ದಾರೆ.

ರಾಜ್ಯದಲ್ಲಿ 10,000 ದಾಟಿದ ಡೆಂಗ್ಯೂ ಪ್ರಕರಣ



ಬೆಂಗಳೂರು, ಜು.16– ರಾಜ್ಯದ ಹಲವು ಜಿಲ್ಲೆಗಳಲ್ಲಿ ಡೆಂಗ್ಯೂ ಪ್ರಕರಣಗಳು ಹೆಚ್ಚಾಗುತ್ತಿದ್ದು, ಈ ವರ್ಷದಲ್ಲಿ ಇಲ್ಲಿಯ ವರೆಗೂ 10,000 ಪ್ರಕರಣಗಳು ದೃಢಪಟ್ಟಿವೆ ಎಂದು ರಾಜ್ಯ ಆರೋಗ್ಯ ಇಲಾಖೆ ಮಂಗಳವಾರ ತಿಳಿಸಿದೆ.

ಕಳೆದ 24 ಗಂಟೆಗಳಲ್ಲಿ ರಾಜ್ಯದಲ್ಲಿ 487 ಡೆಂಗ್ಯೂ ಪಾಸಿಟಿವ್ ಪ್ರಕರಣ ವರದಿಯಾಗಿದೆ. ಇದರೊಂದಿಗೆ ಜನವರಿಯಿಂದ ಇಲ್ಲಿಯವರೆಗೂ ದೃಢಪಟ್ಟ ಪ್ರಕರಣಗಳ ಸಂಖ್ಯೆ 10, 449ಕ್ಕೆ ಏರಿಕೆಯಾಗಿದೆ. ಆರೋಗ್ಯ ಇಲಾಖೆ ಮಾಹಿತಿ ಪ್ರಕಾರ 10,449 ಪಾಸಿಟಿವ್ ಪ್ರಕರಣಗಳ ಪೈಕಿ 358 ಸಕ್ರಿಯ ಪ್ರಕರಣಗಳಾಗಿವೆ (ಆಸ್ಪತ್ರೆಗೆ ದಾಖಲಾದವರು) ಡೆಂಗ್ಯೂನಿಂದಾಗಿ 8 ಮಂದಿ ಸಾವನ್ನಪ್ಪಿದ್ದಾರೆ. ಬಿಬಿಎಂಪಿ ವ್ಯಾಪ್ತಿಯಲ್ಲಿ 3,770 ಪ್ರಕರಣಗಳು, ಚಿಕ್ಕಮಗಳೂರಿನಲ್ಲಿ 621, ಮೈಸೂರಿನಲ್ಲಿ 562 ಪ್ರಕರಣ ವರದಿಯಾಗಿದೆ.

ಡೆಂಗ್ಯೂ ಹರಡದಂತೆ ಸರ್ಕಾರ ಎಲ್ಲಾ ರೀತಿಯ ಕ್ರಮ ಕೈಗೊಂಡಿದೆ. ಮುಂಗಾರು ಅವಧಿ ಮುಗಿಯುವವರೆಗೂ ಮುಂದಿನ 2 ತಿಂಗಳ ಕಾಲ ಪ್ರತಿಯೊಬ್ಬರು ಮುಂಜಾಗ್ರತೆ ವಹಿಸುವಂತೆ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸೋಮವಾರ ಜನರಲ್ಲಿ ಮನವಿ ಮಾಡಿದ್ದರು.

ಸಂಸತ್ತಿನ ಬಜೆಟ್ ಅಧಿವೇಶನ: ಜು.21ಕ್ಕೆ ಸರ್ವಪಕ್ಷ ಸಭೆ, ಟಿಎಂಸಿ ಗೈರು

ನವದೆಹಲಿ, ಜು.16–ಮುಂದಿನ ಸೋಮವಾರದಿಂದ ಸಂಸತ್ತಿನ ಬಜೆಟ್ ಅಧಿವೇಶನ ಪ್ರಾರಂಭವಾಗಲಿರುವ ಹಿನ್ನೆಲೆಯಲ್ಲಿ ಜುಲೈ 21 ರಂದು ಕೇಂದ್ರ ಸರ್ಕಾರ ಸರ್ವ ಪಕ್ಷ ಸಭೆಯನ್ನು ಆಯೋಜಿಸಿದೆ ಎಂದು ಮೂಲಗಳು ತಿಳಿಸಿವೆ. ಪ್ರತಿಪಕ್ಷದ ನಾಯಕ ರಾಹುಲ್ ಗಾಂಧಿ ಅವರಿಗೆ ಇದು ಮೊದಲ ಸಭೆಯಾಗಿದೆ. ಅವರು ಸಭೆಯಲ್ಲಿ ಭಾಗವಹಿಸಿದ್ದರೆ, ಇತರ ಪಕ್ಷಗಳ ಸದನದ ನಾಯಕ'ರೊಂದಿಗೆ ಹಾಜರಾಗಲಿದ್ದಾರೆ.

ಸಂಸತ್ತಿನ ಮುಂಗಾರು ಅಧಿವೇಶನ ಜುಲೈ 22 ರಂದು ಪ್ರಾರಂಭವಾಗಲಿದ್ದು, ಆಗಸ್ಟ್ 12 ರಂದು ಮುಕ್ತಾಯಗೊಳ್ಳಲಿದೆ. ಜುಲೈ 23 ರಂದು ಬಜೆಟ್ ಮಂಡಿಸಲಾಗುವುದು. ಹುತಾತ್ಮರ ದಿನವಾದ ಜುಲೈ 21 ರಂದು ಸರ್ವ ಪಕ್ಷ ಸಭೆಯಲ್ಲಿ ಪಕ್ಷದ ಯಾವುದೇ ಪ್ರತಿನಿಧಿಗಳು ಹಾಜರಾಗುವುದಿಲ್ಲ ಎಂದು ತೃಣಮೂಲ ಕಾಂಗ್ರೆಸ್ ಮೂಲಗಳು ಹೇಳಿವೆ.

ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಪ್ರಕರಣ

ಆರು ವರ್ಷದ ಬಳಿಕ ಮೂವರು ಆರೋಪಿಗಳಿಗೆ ಜಾಮೀನು

ಬೆಂಗಳೂರು: ಪತ್ರಕರ್ತೆ ಗೌರಿ ಲಂಕೇಶ್ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮೂವರು ಆರೋಪಿಗಳಿಗೆ ಕರ್ನಾಟಕ ಹೈಕೋರ್ಟ್ ಜಾಮೀನು ಮಂಜೂರು ಮಾಡಿದೆ.



ಗೌರಿ ಲಂಕೇಶ್

ನ್ಯಾ.ವಿಶ್ವಜಿತ್ ಶೆಟ್ಟಿ ಏಕ ಸದಸ್ಯ ಪೀಠ ಆರೋಪಿಗಳಾದ ನವೀನ್ ಕುಮಾರ್, ಅಮಿತ್, ಎಚ್.ಎಲ್. ಸುರೇಶ್ ಅವರಿಗೆ ಜಾಮೀನು ನೀಡಿದೆ. ಇವರು ಸಲ್ಲಿಸಿದ್ದ ಜಾಮೀನು ಅರ್ಜಿಗಳನ್ನು ಕಲಬುರ್ಗಿ ಪೀಠದಲ್ಲಿರುವ ನ್ಯಾಯಮೂರ್ತಿ ಎಸ್.ವಿಶ್ವಜಿತ್ ಶೆಟ್ಟಿ ಅವರ ಏಕಸದಸ್ಯ ಪೀಠ ಪುರಸ್ಕರಿಸಿದೆ.

ಜಾಮೀನು ಮಂಜೂರು ವೇಳೆ ಕೋರ್ಟ್ ಹಲವು ಷರತ್ತು ವಿಧಿಸಿದ್ದು ಇವು ಪೂರ್ಣಗೊಂಡ ಬಳಿಕ ಆರೋಪಿಗಳು ಜೈಲಿನಿಂದ ಬಿಡುಗಡೆಯಾಗುವ ಸಾಧ್ಯತೆಯಿದೆ.

ಹನ್ನೊಂದನೇ ಆರೋಪಿ ಮೋಹನ್ ನಾಯಕ್‌ಗೆ ಹೈಕೋರ್ಟ್ ಜಾಮೀನು ಮಂಜೂರು ಮಾಡಿರುವುದನ್ನು ಪರಿಗಣಿಸಿ ತಮಗೂ ಜಾಮೀನು ಮಂಜೂರು ಮಾಡಬೇಕು ಎಂಬುದು ಎಲ್ಲಾ ಅರ್ಜಿದಾರರ ವಾದವಾಗಿತ್ತು. ಇದಕ್ಕೆ ತೀವ್ರವಾಗಿ ಆಕ್ಷೇಪಿಸಿದ ಪ್ರಾಸಿಕ್ಯೂಷನ್ ಮೋಹನ್ ನಾಯಕ್ ಈ ಹಿಂದೆ ಸಲ್ಲಿಸಿದ್ದ ಜಾಮೀನು ಅರ್ಜಿಯನ್ನು ಹೈಕೋರ್ಟ್‌ನ ಬೇರೊಂದು ಪೀಠವು ತಿರಸ್ಕರಿಸಿದ್ದು, ಕೊಲೆ, ಪಿತೂರಿಯಂಥ ಗಂಭೀರ ಆರೋಪಗಳಿರುವಾಗ ಜಾಮೀನು ನೀಡಲಾಗದು ಎಂದಿದೆ.

ಇಡೀ ಪ್ರಕರಣದಲ್ಲಿ ಜಾಮೀನು ಪಡೆದಿರುವ ಏಕೈಕ ಮತ್ತು ಮೊದಲ ಆರೋಪಿ ಮೋಹನ್ ನಾಯಕ್ ಆಗಿದ್ದು, ಆತನ ಜಾಮೀನು ಆದೇಶವನ್ನು ರಾಜ್ಯ ಸರ್ಕಾರವು ಸುಪ್ರೀಂಕೋರ್ಟ್‌ನಲ್ಲಿ ಪ್ರಶ್ನಿಸಿದ್ದು, ಅದು ವಿಚಾರಣೆಗೆ ಬಾಕಿಯಿದೆ.

ಒಂದನೇ ಆರೋಪಿ ಅಮೋಲ್ ಕಾಳೆಯ ಸ್ವಯಂ ಹೇಳಿಕೆ ಆಧರಿಸಿ ಅಮಿತ್‌ನನ್ನು ಬಂಧಿಸಲಾಗಿದೆ. ಕೃತ್ಯಕ್ಕೆ ಹಣಕಾಸಿನ ನೆರವು ನೀಡಿದ ಆರೋಪ ಅಮಿತ್ ಮೇಲಿದೆ. 13ನೇ ಆರೋಪಿ ಸುಜಿತ್ (ಸುಜಿತ್ ಸಮನ್ವಯಕಾರನ ಪಾತ್ರ ವಹಿಸಿದ್ದಾನೆ) ಜೊತೆ ನವೀನ್ ಕುಮಾರ್ ಪಾರ್ಕ್‌ನಲ್ಲಿ ಮಾತನಾಡಿ ಸಂಚು ರೂಪಿಸಿದ್ದಾನೆ ಎಂದು ಆರೋಪಿಸಲಾಗಿದೆ. 15ನೇ ಆರೋಪಿ ವಿಕಾಸ್ ಪಾಟೀಲ್‌ಗೆ ಗೌರಿ ಲಂಕೇಶ್ ಅವರ ಮನೆಯ ವಿಳಾಸ ಪತ್ತೆ ಮಾಡಿಕೊಡಿ ಕೊಟ್ಟಿರುವ, ಶಸ್ತ್ರಾಸ್ತ್ರಗಳನ್ನು ಬಚ್ಚಿಡಲು ನೆರವಾಗಿರುವ ಆರೋಪ ಸುರೇಶ್ ಮೇಲಿದೆ.

ಏನಿದು ಪ್ರಕರಣ?: 2017ರ ಸೆಪ್ಟೆಂಬರ್ 5ರಂದು ಗೌರಿ ಲಂಕೇಶ್ ಅವರು ಕೆಲಸ ಮುಗಿಸಿ ಮನೆಗೆ ಮರಳಿದ ವೇಳೆ ಗುಂಡು ಹಾರಿಸಿ ಕೊಲ್ಲಲಾಗಿತ್ತು. ಹತ್ಯೆಯ ಸಂಚು ರೂಪಿಸಿದ ಪ್ರಮುಖ ರೂವಾರಿ ಎಂದು ಅಮೋಲ್ ಕಾಳೆ ಮೇಲೆ ಕೊಲೆ ಆರೋಪವಿದ್ದರೆ, ಗುಂಡು ಹಾರಿಸಿದ ಆರೋಪ ಪರಶುರಾಮ್ ವಾಗ್ಮೋರೆ ಮೇಲೂ ಹಾಗೂ ಆತನನ್ನು ಕೂರಿಸಿಕೊಂಡು ಬೈಕ್ ಚಲಾಯಿಸಿ ತಪ್ಪಿಸಿಕೊಳ್ಳಲು ನೆರವಾದ ಆರೋಪವು ಗಣೇಶ್ ಮಿಸ್ಕಿನ್ ಮೇಲೆ ಇದೆ.

ನಕ್ಕರೆ ಅದೇ ಸ್ವರ್ಗ

ಪತಿ : ಆ ಕಳ್ಳನನ್ನು ನೋಡು, ಅಡುಗೆ ಮನೆಯಲ್ಲಿ ನಾನು ಮಾಡಿದ ಬಿಸಿ ಬೇಳೆ ಬಾತ್ ಅನ್ನು ಗಬಗಬನೆ ತಿಂತಾ ಇದ್ದಾನೆ.

ಪತ್ನಿ : ಸರಿ ಆಯ್ತು. ಈಗ ಯಾರನ್ನು ಕರೆಯಬೇಕು? ಪೊಲೀಸರನ್ನೋ? ಆಂಬ್ಯುಲೆನ್ಸ್ ಅನ್ನೋ?

ಮೈಸೂರು ಮಿತ್ರ

ಬುಧವಾರ, 17 ಜುಲೈ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ M.A.

ಅಮೃತವಾಹಿನಿ.........

ಅಂದಿನ ನಗುವೇ ಇಂದಿಲ್ಲ ಅಂದ ಮೇಲೆ, ಇಂದಿನ ಕಷ್ಟ ಮುಂದೆಯೂ ಇರುವುದಿಲ್ಲ– ನುಡಿಮುತ್ತು

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ನಿನ್ನದಲ್ಲ ಸರ್ವ ಆಸ್ತಿ, ಒಳ್ಳೆಯದಲ್ಲ ಗರ್ವ ಜಾಸ್ತಿ

ನಿಮ್ಮ ಪತ್ರಗಳು

ನಮೋ ಯೋಗ ಭವನ ಡೆಂಗ್ಯೂ ಉಗಮ ಸ್ಥಾನ

ಮಾನ್ಯರೆ,

ಮೈಸೂರಿನ ರಾಮಾನುಜ ರಸ್ತೆಯಲ್ಲಿ ಮೈಸೂರು ಮಹಾ ನಗರಪಾಲಿಕೆಯಿಂದ ಕಟ್ಟಿರುವ ನಮೋ ಯೋಗ ಭವನ ಅವ್ಯವಸ್ಥೆಯಿಂದ ಕೂಡಿದೆ. ನಮೋ ಯೋಗ ಭವನದ ಪಕ್ಕದಲ್ಲಿ ಮೂರು ತಿಂಗಳ ಹಿಂದೆ ಚಪ್ಪಡಿ ಕಲ್ಲಿನಿಂದ ಮುಚ್ಚಿದ್ದ ಮೋರಿ ಕುಸಿದು ದುರ್ನಾತ ಬೀರುತ್ತಿದ್ದು, ಡೆಂಗ್ಯೂ, ಚಿಕನ್‌ಗುನ್ಯಾ ರೋಗಗಳ ಉಗಮ ಸ್ಥಾನವಾಗಿದೆ.

ನಮೋ ಯೋಗ ಭವನವನ್ನು ಚರಂಡಿ ಇರುವ ಸ್ಥಳದಲ್ಲಿ ಕಟ್ಟಲಾಗಿದೆ. ಇಲ್ಲಿ ಮೂಲ ಸೌಕರ್ಯಗಳು ಯಾವುದು ಇಲ್ಲ. ಇಲ್ಲಿ ಆಗಾಗ ಡ್ರೈನೇಜ್‌ಗಳು ಬ್ಲ್ಯಾಕ್ ಆಗಿ ದುರ್ವಾಸನೆ ಬರುತ್ತಿರುತ್ತದೆ. ಬೆಳಗ್ಗೆ ಮತ್ತು ಸಂಜೆ ಯೋಗ ತರಗತಿಗಳಿಗೆ ಯಾರೂ ಬರುತ್ತಿಲ್ಲ. ಬರುವ ಕೆಲವೇ ಮಂದಿಗೆ ಯಾವುದೇ ತಿಳುವಳಿಕೆ ಇಲ್ಲ. ಯೋಗ ಅಭ್ಯಾಸಕ್ಕೆ ಅಯೋಗ್ಯವಾದ ವಾತಾವರಣದಲ್ಲಿ ಈ ಕಟ್ಟಡ ನಿರ್ಮಿಸಲಾಗಿದೆ.

ಈ ಸ್ಥಳದಲ್ಲಿ ಮಳೆ ನೀರು ನಿಲ್ಲುತ್ತದೆ. ಹರಿದು ಹೋಗುವುದಿಲ್ಲ. ಸೊಳ್ಳೆ, ನೊಣ, ಭಯಂಕರ ವೈರಸ್‌ಗಳ ಆವಾಸ ತಾಣವಾಗಿದೆ. ಇದರಿಂದ ಅಕ್ಕ ಪಕ್ಕದ ಮನೆಗಳಿಗೆ ಮಳೆ ಬಂದಾಗ ನೀರು ತುಂಬಿಕೊಳ್ಳುತ್ತಿದೆ.

ಅಕ್ಕಪಕ್ಕದ ಕಟ್ಟಡದವರು ಕಟ್ಟಡದ ಕಸ ತಂದು ಸುರಿಯುತ್ತಿದ್ದಾರೆ. ಒಡೆದ ಇಟ್ಟಿಗೆ ಚೂರು ಹಾಗೂ ಇನ್ನಿತರ ತ್ಯಾಜ್ಯ ವಸ್ತುಗಳು ಹೇರಳವಾಗಿ ಸಂಗ್ರಹವಾಗಿದೆ. ಇದನ್ನು ಕೇಳುವವರೇ ಇಲ್ಲ. ಇದರಿಂದ ಮೊಹಲ್ಲಾ ನಿವಾಸಿಗಳಿಗೆ ಅನಾರೋಗ್ಯ ಉಂಟಾಗಿದೆ. ಕಲುಷಿತ ವಾತಾವರಣ ನಿರ್ಮಾಣವಾಗಿದೆ. ಇಲ್ಲಿನ ಅನೈರ್ಮಲ್ಯ ವಾತಾವರಣದಲ್ಲಿ ವಾಸ ಮಾಡುವ ದುರ್ಗತಿ ಒದಗಿ ಬಂದಿದೆ. ನಮೋ ಯೋಗ ಭವನದಲ್ಲಿ ಸಾರ್ವಜನಿಕರಿಗೆ ಉಪಯೋಗವಾಗುವ ಯಾವುದೇ ಕಾರ್ಯಕ್ರಮಗಳು ಕಳೆದ ಒಂದು ವರ್ಷದಿಂದ ನಡೆಯುತ್ತಿಲ್ಲ.

ಇಲ್ಲಿ ಯೋಗ ಅಭ್ಯಾಸಕ್ಕೆ ಬರುವವರು ಗುಂಪುಗಾರಿಕೆ ಮಾಡುತ್ತಿದ್ದಾರೆ. ಆಗಾಗ ಪುಂಡಾಟಿಕೆ ನಡೆಸುತ್ತಾರೆ. ಅಕ್ಕ ಪಕ್ಕದ ಮನೆಗೆ ಸೇರಿದ ಹೂ ಕೀಳುವುದು. ಅಡ್ಡಾದಿಡ್ಡಿ ವೆಹಿಕಲ್ ಪಾರ್ಕ್ ಮಾಡುವುದು. ಕರ್ಕಶ ಧ್ವನಿಯಲ್ಲಿ ಆರ್ಕೆಸ್ಟ್ರಾ ಹಾಡು ಅಭ್ಯಾಸ ಮಾಡುವುದು. ಅಲ್ಲಲ್ಲೇ ನಿಂತು ಹರಟೆ ಹೊಡೆಯುವುದು, ಸಂಜೆ ತರಗತಿಯಲ್ಲಿ ಮೂರು ನಾಲ್ಕು ಮಹಿಳೆಯರು ಮಾತ್ರ ಇರುವುದು. ಇಲ್ಲಸಲ್ಲದ ವಿಷಯ ಮಾತನಾಡಲು ನಮೋ ಯೋಗಭವನ ಚಾವಡಿಕಟ್ಟೆ ಮಾಡಿಕೊಳ್ಳಲಾಗಿದೆ.

–ಗಿರಿಜಾಂಬ, ರಾಮಾನುಜ ರಸ್ತೆ, ಮೈಸೂರು.

ಸರ್ಕಾರಿ ತಮಿಳು ಹಿರಿಯ ಪ್ರಾಥಮಿಕ ಶಾಲೆ ಮುಂಭಾಗ ಅಂಗಡಿ ತೆರವಿಗೆ ಮನವಿ

ಮಾನ್ಯರೆ,

ಸ್ವಚ್ಛ ನಗರ, ನಿವೃತ್ತರ ಸ್ವರ್ಗ, ಉದ್ಯಾನ ನಗರಿ ಎಂದು ಹೇಳಿಸಿಕೊಂಡ ಮೈಸೂರಿನ ಹೃದಯ ಭಾಗದ ವಾಣಿ ವಿಲಾಸ ರಸ್ತೆ (ಎಂ.ಜಿ.ರಸ್ತೆ) ಯಲ್ಲಿ ನಾನು ಮತ್ತು ನನ್ನ ಕುಟುಂಬ ರಾತ್ರಿ ಹೊತ್ತು ನ್ಯಾಯಾಲಯದ ಗಾಂಧಿ ಪ್ರತಿಮೆಯಿಂದ ಆರ್.ಟಿ.ಓ ವೃತ್ತದವರೆಗೆ ವಾಯುವಿಹಾರ ಮಾಡುತ್ತೇನೆ. ಇತ್ತೀಚೆಗೆ ಹೀಗೆ ವಾಯುವಿಹಾರ ಮಾಡುತ್ತಿದ್ದಾಗ ಸರ್ಕಾರಿ ತಮಿಳು ಹಿರಿಯ ಪ್ರಾಥಮಿಕ ಶಾಲೆಯ ಮುಂಭಾಗ ತಲೆ ಎತ್ತಿರುವ ಪಾನಿಪುರಿ, ರೋಟಿ ಹಾಗೂ ಚುರುಮುರಿ ಅಂಗಡಿಯ ಸುತ್ತಲು ಗಲೀಜು ನೀರು ನಿಂತಿದ್ದು, ರೋಟಿ ವ್ಯಾನ್‌ರವರು ಎಂಜಲು ನೀರನ್ನು ಮುಖ್ಯ ರಸ್ತೆಗೆ ಎರಚಿದಾಗ ಅದು ನಮ್ಮಗಳ ಮೇಲೆ ಬಿದ್ದು, ಮೈಯೆಲ್ಲಾ ಹೊಲಸಾಯಿತು. ಈ ಬಗ್ಗೆ ಪ್ರಶ್ನಿಸಿದರೆ ಉಡಾಫೆ ಉತ್ತರ ಕೊಡುತ್ತಾರೆ.


ಈಗ ಮೈಸೂರಿನಲ್ಲಿ ಡೆಂಗ್ಯೂ ಜ್ವರ ಎಲ್ಲೆಡೆ ಹರಡುತ್ತಿದ್ದು, ಹಿಂದುಳಿದ ಬಡ ಮಕ್ಕಳು ಓದುವ ಶಾಲೆಯ ಮುಂಭಾಗದಲ್ಲಿ ಗಲೀಜು, ಕೊಳಕು ನೀರನ್ನು ಚೆಲ್ಲುವುದು, ಅಲ್ಲಿ ಎಂಜಲು ತಟ್ಟೆ ತೊಳೆಯುವುದರಿಂದ ರಸ್ತೆಯಲ್ಲಿ ನೀರು ನಿಂತು, ಸೊಳ್ಳೆಗಳ ತಾಣವಾಗಿ ರೋಗ ಹರಡುವುದರಲ್ಲಿ ಸಂಶಯವಿಲ್ಲ. ಈ ಅಂಗಡಿಯವರು ರಾತ್ರಿ ಮಾಡುವ ಅನಾಹುತದಿಂದ ಬೆಳಗ್ಗೆ ಮಕ್ಕಳು ಶಾಲೆಗೆ ಬಂದಾಗ ಎಂಜಲು ನೀರನ್ನು ತುಳಿದುಕೊಂಡೆ ಶಾಲೆ ಒಳಗೆ ಬರುವ ಪರಿಸ್ಥಿತಿ ಕಣ್ಣಾರೆ ಕಂಡಾಗಿದೆ.

ಆದ್ದರಿಂದ, ಮೈಸೂರು ಮಹಾ ನಗರಪಾಲಿಕೆ ಆಯುಕ್ತರು, ವಲಯ ಆಯುಕ್ತರು ಹಾಗೂ ಸಂಬಂಧಪಟ್ಟ ಪೊಲೀಸ್ ನಿರೀಕ್ಷಕರು ಸರ್ಕಾರಿ ಶಾಲೆ ಮುಂಭಾಗ ಇರುವ ಈ ಅಂಗಡಿಗಳನ್ನು ಕೂಡಲೇ ತೆಗೆಸಿ ದೂರದಲ್ಲಿರುವ ಫುಡ್‌ಜೋನ್ ಮುಂಭಾಗ ಇಡಲು ಕ್ರಮ ವಹಿಸಿ, ಮಕ್ಕಳ ಮತ್ತು ನಿವೃತ್ತರ ಆರೋಗ್ಯ ಕಾಪಾಡುವಂತೆ ಮನವಿ.

–ರಾಮಸ್ವಾಮಿ ಅಯ್ಯರ್, ಮೈಸೂರು.

ಕನ್ನಡದ ಅಪ್ಪಟ ಧ್ವನಿ ನೆನಪು ಮಾತ್ರ

ಮಾನ್ಯರೆ,



ಕನ್ನಡದ ಕುಲಕೋಟಿಗೆ ನನ್ನ ನಮಸ್ಕಾರಗಳು. ನಾನು ನಿಮ್ಮ ಅಪರ್ಣಾ. ಹೀಗೆ ಕನ್ನಡ ಕಾರ್ಯಕ್ರಮಗಳ ನಿರೂಪಣೆಯನ್ನು ಆರಂಭಿಸುತ್ತಿದ್ದ ನಾಡಿನ ಬಹುಮುಖ ಪ್ರತಿಭೆಯ ಪ್ರತೀಕವಾಗಿದ್ದ ಸಾಂಸ್ಕೃತಿಕ ಮನಸುಳ್ಳ ಹಾಗೆಯೇ ಈ ನಾಡಿನಲ್ಲಿ ಕನ್ನಡದ ನಿರೂಪಣೆಗೆ ಶ್ರೇಷ್ಠ ಘನತೆಯನ್ನು ತಂದುಕೊಟ್ಟಿದ್ದ ಅಪರ್ಣಾರವರ ನಿಧನ ನಾಡಿನ ಸಾಂಸ್ಕೃತಿಕ ಲೋಕಕ್ಕೆ ತುಂಬಲಾರದ ನಷ್ಟವಾಗಿದೆ.

ತಮ್ಮ ವಿಶಿಷ್ಟ, ವಿಭಿನ್ನ ಅಷ್ಟೇ ಸೊಗಸಾದ ಮತ್ತೆ ತಮ್ಮ ದೇಶೀಯ ನಿರೂಪಣಾ ಶೈಲಿಯಿಂದಲೇ ಕನ್ನಡಿಗರ ಮನೆ ಮಾತಾಗಿದ್ದ ಅಪರ್ಣಾ ಅವರ ನಿರೂಪಣಾ ಶೈಲಿಗೆ ಮನಸೋಲದವರು ಯಾರೂ ಇಲ್ಲ. ಸರ್ಕಾರಿ ಪ್ರಾಯೋಜಿತ ಕಾರ್ಯಕ್ರಮ ಇರಲಿ ಅಥವಾ ವಾಹಿನಿಗಳ ಕಾರ್ಯಕ್ರಮ ಇರಲಿ ಪೂರ್ವ ತಯಾರಿಯೊಂದಿಗೆ ತುಂಬಾ ಅಚ್ಚುಕಟ್ಟಾಗಿ ನಿರ್ವಹಿಸುತ್ತ ಸಾಂಸ್ಕೃತಿಕ ಮತ್ತು ಸಾಹಿತ್ಯಕ ಸ್ಪರ್ಶ ಕೊಡುತ್ತಾ ನಾಡಿನೆಲ್ಲಡೆ ತಮ್ಮದೇ ಆದ ಪ್ರತ್ಯೇಕ ಛಾಪನ್ನು ಮೂಡಿಸಿ ಕನ್ನಡಿಗರ ಮನಸುಗಳಿಗೆ ಕನ್ನಡ ಕಸ್ತೂರಿಯನ್ನು ಉಣಬಡಿಸುವಲ್ಲಿ ಯಶಸ್ವಿಯಾದರು. ಹಿರಿತೆರೆ ಮತ್ತು ಕಿರುತೆರೆಯಲ್ಲೂ ಮಿಂಚಿ ಮಿನುಗಿದ್ದ ಅಪರ್ಣಾ ಮಸಣದ ಹೂವು, ಇನ್ಸ್‌ಪೆಕ್ಟರ್ ವಿಕ್ರಮ್ ಚಿತ್ರಗಳಲ್ಲಿ ಹಾಗೆಯೇ ಮೂಡಲಮನೆ, ಮುಕ್ತ ಧಾರಾವಾಹಿಗಳಲ್ಲಿ ನಟಿಸಿ ಕನ್ನಡಿಗರ ಮನಸನ್ನು ಸೂರೆಗೊಂಡಿದ್ದರು. ಹೀಗೆ ಸಾಹಿತ್ಯ, ಸಂಸ್ಕೃತಿ, ರಂಗಭೂಮಿ, ಸಿನಿಮಾ ಹೀಗೆ ನಾನಾ ಕ್ಷೇತ್ರಗಳಲ್ಲಿ ತಮ್ಮ ಕನ್ನಡತನವನ್ನು ಮೆರೆದಿದ್ದ ಬಹುಮುಖ ಪ್ರತಿಭೆಯೊಂದು ನಮ್ಮಿಂದ ಕಳಚಿರುವುದು ಬಹಳ ದುಃಖಕರ. ಹೀಗೆ ತಮ್ಮ ಪ್ರೌಢ ಮತ್ತು ಭಾವಪೂರ್ಣ ನಿರೂಪಣೆಗೆ ಹೆಸರಾಗಿದ್ದ ಅಪರ್ಣಾರವರ ನಿಧನವು ಕನ್ನಡದ ಅಪ್ಪಟ ಧ್ವನಿಯೊಂದು ಇನ್ನು ನೆನಪು ಅಂದರೆ ಜೀರ್ಣಿಸಿಕೊಳ್ಳುವುದು ನನ್ನಂತಹ ಲಕ್ಷಾಂತರ ಕನ್ನಡದ ಮನಸುಗಳಿಗೆ ಕಷ್ಟವಾಗಬಹುದು.


–ಸಾಲುಂಡಿ ಎಸ್.ದೊರೆಸ್ವಾಮಿ, ಮೈಸೂರು



ಬಿಚ್ಚು ನುಡಿ

ವಿಕ್ರಂ ಮುತ್ತಣ್ಣ

ಮುಡಾ ಪ್ರತಿಭಟನೆ ಬರೀ ಬೂಟಾಟಿಕೆ



ಮೈಸೂರು ಜಿಲ್ಲಾಧಿಕಾರಿಯಾಗಿದ್ದ ರೋಹಿಣಿ ಸಿಂಧೂರಿ, ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಅಂದಿನ ಆಯುಕ್ತ ಡಾ.ಡಿ.ಬಿ. ನಟೇಶ್ ಅವರಿಗೆ ಜೂನ್ 5, 2021ರಂದು ಪತ್ರವೊಂದನ್ನು ಬರೆದು ಮುಡಾ ವ್ಯಾಪ್ತಿಯಲ್ಲಿ ಸರ್ಕಾರಿ ಭೂಮಿ ಒತ್ತುವರಿಯಾಗಿರುವ ಬಗ್ಗೆ ಬೆಳಕು ಚೆಲ್ಲಿದ್ದರು. ನಾವೆಲ್ಲ ಅಂದು ಕೊಂಡಂತೆ, ಅದಕ್ಕೆ ಸಂಬಂಧಿಸಿದ ಹಾಗೆ ಯಾವುದೇ ರೀತಿಯ ಪ್ರತಿಕ್ರಿಯೆ ಇಲ್ಲವೇ ಕ್ರಮವಾಗಲಿಲ್ಲ.

ಇದಾದ ನಾಲ್ಕು ದಿನಗಳ ನಂತರ, ಅಂದರೆ ಜೂನ್ 9, 2021ರಂದು ರೋಹಿಣಿ ಸಿಂಧೂರಿಯವರು 'ಮೈಸೂರು ಮಿತ್ರ'ನಿಗೆ ನೀಡಿದ ಸಂದರ್ಶನದಲ್ಲಿ ಒತ್ತುವರಿಯಾಗಿರುವ ಕೆರೆಗಳ ಜೀರ್ಣೋದ್ಧಾರಗೊಳಿಸುವ ತಮ್ಮ ಪ್ರಯತ್ನಗಳಿಗೆ ಸ್ಥಳೀಯ ಶಾಸಕರು ತಡೆಯೊಡ್ಡಿದ್ದು, ಅಲ್ಲದೇ ತನಿಖೆಯನ್ನು ಕೈಬಿಡಿ, ಕೆರೆಗಳ ಜೀರ್ಣೋದ್ಧಾರ ಯೋಜನೆಯನ್ನು ಸ್ಥಗಿತಗೊಳಿಸುವಂತೆ ಸಲಹೆ ನೀಡಿದರು ಎಂದು ಹೇಳಿದ್ದರು.

ಸಕ್ರಿಯ ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಒಬ್ಬ ಜಿಲ್ಲಾಧಿಕಾರಿ ಮಾಡಿದಂತಹ ಗಂಭೀರ ಲಿಖಿತ ಭೂಕಬಳಿಕೆಯ ಆರೋಪಗಳಿಗೆ ನಿಷ್ಠ ವಿರೋಧ ಪಕ್ಷ ಎಚ್ಚೆತ್ತು, ತಕ್ಷಣ ಕಾರ್ಯೋನ್ಮುಖವಾಗಿ ಆಡಳಿತ ಪಕ್ಷಕ್ಕೆ ಇರಿಸು–ಮುರಿಸು ಉಂಟು ಮಾಡಿ, ಸಾರ್ವಜನಿಕರ ಭೂಮಿಯನ್ನು ರಕ್ಷಿಸುವ ಕೆಲಸವಾಗಬೇಕಿತ್ತು.

ಅದಾಗ್ಯೂ, ನಮ್ಮ ರಾಜ್ಯದ ವಿರೋಧ ಪಕ್ಷಗಳು ದಿವ್ಯ ಮೌನಕ್ಕೆ ಶರಣಾಗಿದ್ದಾದರೂ ಏಕೆ? ಏಕೆಂದರೆ ಪ್ರತಿಯೊಂದು ರಾಜಕೀಯ ಪಕ್ಷ ಹಾಗೂ ಅದರ ಹಿರಿಯ ನಾಯಕರು ಮುಡಾ ಎಂಬುವ ಜೇನಿನ ಮಡಕೆಯೊಳಗೆ ತಮ್ಮ ಕೈ ಬೆರಳ ಅದ್ದಿದ್ದರು!

ಈಗ, ಭಾರತೀಯ ಜನತಾ ಪಕ್ಷವು, ನೈತಿಕತೆಯ ಆಧಾರದ ಮೇಲೆ ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜೀನಾಮೆಗೆ ಆಗ್ರಹಿಸುತ್ತಿದೆ. ಆದರೆ, ಇಲ್ಲಿ ಪ್ರಶ್ನೆಯೆಂದರೆ ಶೇಕಡಾ 50:50 ಯೋಜನೆಯಡಿಯಲ್ಲಿ ಸಿದ್ದರಾಮಯ್ಯನವರ ಪತ್ನಿಗೆ ನಗರದ ಪ್ರತಿಷ್ಠಿತ ಬಡಾವಣೆಯಲ್ಲಿ 14 ನಿವೇಶನಗಳನ್ನು ಮಂಜೂರು ಮಾಡಿದ ಸಂದರ್ಭದಲ್ಲಿ ಅಧಿಕಾರದಲ್ಲಿದ್ದವರ್ಯಾರು ಗೊತ್ತಾ? –ಬಿಜೆಪಿ ಸರ್ಕಾರ.

2021ರಲ್ಲಿ, ಸಿದ್ದರಾಮಯ್ಯನವರ ಪತ್ನಿಗೆ ನಿವೇಶನಗಳನ್ನು ಮಂಜೂರು ಮಾಡಿದ ಸಂದರ್ಭದಲ್ಲಿ, ಈಗ ಕಾಂಗ್ರೆಸ್‌ನಲ್ಲಿರುವ, ಆಗ ಭಾರತೀಯ ಜನತಾ ಪಕ್ಷದಲ್ಲಿದ್ದ ಹೆಚ್.ವಿ. ರಾಜೀವ್ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ ಅಧ್ಯಕ್ಷರಾಗಿದ್ದರು.

ನಿವೇಶನ ಹಂಚಿಕೆ ಮಾಡುವ ವೇಳೆ ಸಮಿತಿಯ ಸದಸ್ಯರ ಪೈಕಿ ಬಿಜೆಪಿ ಶಾಸಕರಾದ ಎಸ್.ಎ.ರಾಮದಾಸ್, ಎಲ್.ನಾಗೇಂದ್ರ ಮತ್ತು ಬಿ.ಹರ್ಷವರ್ಧನ್ ಸಹ ಇದ್ದರು.

ತಮ್ಮ ಕಾಲದಲ್ಲೇ ನಡೆದ ಹಗರಣವೊಂದಕ್ಕೆ ಸಂಬಂಧಪಟ್ಟಂತೆ, ಬಿಜೆಪಿ ಈಗ ಪ್ರತಿಭಟನೆ ನಡೆಸುತ್ತಿದೆ. ಆಹಾ, ಎಂತಹ ಹೈಡ್ರಾಮಾ!

ಇದಕ್ಕೂ ಮಿಗಿಲಾದ ಆಶ್ಚರ್ಯಕರ ಸಂಗತಿಯೆಂದರೆ, ಸಿದ್ದರಾಮಯ್ಯನವರ ಪುತ್ರ ಹಾಗೂ ಹಾಲಿ ವಿಧಾನಪರಿಷತ್ ಸದಸ್ಯ ಡಾ.ಯತೀಂದ್ರ, ಅವರ ತಾಯಿಯವರಿಗೆ ನಿವೇಶನಗಳನ್ನು ಮಂಜೂರು ಮಾಡಿದ ಸಮಯದಲ್ಲಿ ವರುಣ ಶಾಸಕರಾಗಿದ್ದು, ಆಗ ಅವರೂ ಮುಡಾ ಸದಸ್ಯರಾಗಿದ್ದರು. ಆಗಿನ ಬಿಜೆಪಿ ಸರ್ಕಾರವು ಇದನ್ನು ಹಿತಾಸಕ್ತಿಗಳ ಸಂಘರ್ಷ ಎಂದು ಪರಿಗಣಿಸಲಿಲ್ಲವೇಕೆ? ಎಂತಹ ಗ್ರೇಟ್ ತಮಾಷಾ!

2021ರಲ್ಲಿ 50:50 ಅನುಪಾತದ ಭೂಹಗರಣ ಪ್ರಾರಂಭವಾದಾಗ, ಮುಡಾ ಆಡಳಿತ ಮಂಡಳಿಯಲ್ಲಿ 26 ಸದಸ್ಯರಿದ್ದರು. ಅವರ ಪೈಕಿ 18 ಮಂದಿ ರಾಜಕಾರಣಿಗಳೇ ಆಗಿದ್ದರು.

ಈ 18 ಸದಸ್ಯರ ಪೈಕಿ, ಬಿಜೆಪಿ ಹಾಗೂ ಜೆಡಿಎಸ್ ತಲಾ 07 ಸದಸ್ಯರನ್ನು ಹೊಂದಿದ್ದರೆ, ಕಾಂಗ್ರೆಸ್ 4 ಸದಸ್ಯರನ್ನು ಹೊಂದಿತ್ತು. ಹಗರಣ ನಡೆದ ಸಂದರ್ಭದಲ್ಲಿ ಮುಡಾದಲ್ಲಿ ಸಾಮೂಹಿಕ ಬಹುಮತ ಹೊಂದಿದ್ದ ಪಕ್ಷಗಳೇ ಈಗ ಪ್ರತಿಭಟನೆ ನಡೆಸುತ್ತಿವೆ? ಚೆನ್ನಾಗಿದೆ... ಚೆನ್ನಾಗಿದೆ...

ಈ ಹಗರಣಕ್ಕೆ ಸಂಬಂಧಿಸಿದಂತೆ ಈಗ ಸಿಬಿಐ ತನಿಖೆಗೆ ಆಗ್ರಹಪಡಿಸುತ್ತಿರುವ ಹಾಗೂ ನೈತಿಕತೆಯ ಆಧಾರದ ಮೇಲೆ ಸಿದ್ದರಾಮಯ್ಯನವರ ರಾಜೀನಾಮೆಗೆ ಒತ್ತಾಯ ಮಾಡುತ್ತಿರುವ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು, ಅದಕ್ಕೂ ಮೊದಲು 2021ರಲ್ಲಿ; ಈ ಹಗರಣ ನಡೆದಾಗ ಮುಡಾ ಸದಸ್ಯರಾಗಿದ್ದ ತಮ್ಮ ಪಕ್ಷಗಳ ಹಿರಿಯ ಶಾಸಕರನ್ನು ಅಮಾನತುಪಡಿಸುವ ಮೂಲಕ ತಮ್ಮ ನೈತಿಕತೆಯನ್ನು ಉನ್ನತ ಸ್ತರಕ್ಕೆ ಕೊಂಡೊಯ್ಯುವವೇ...?

ನಿಜವಾಗಿ, ಬಿಜೆಪಿ ಹಾಗೂ ಜೆಡಿಎಸ್ ನಡೆಸುತ್ತಿರುವ ಪ್ರತಿಭಟನೆಗಳು ಒಂದು ನಾಟಕವೇ ಸರಿ. ಇದೊಂದು ಕಣ್ಣೊರೆಸುವ ತಂತ್ರವೂ ಆಗಿದೆ. ಏಕೆಂದರೆ, ಒಂದು ವೇಳೆ ನಿಜವಾಗಲೂ ಈ ಹಗರಣದ ಸಂಬಂಧ ಸಿಬಿಐ ತನಿಖೆಯಾದರೆ, ಪ್ರಮುಖ ಮೂರು ಪಕ್ಷಗಳಾದ ಬಿಜೆಪಿ, ಕಾಂಗ್ರೆಸ್ ಮತ್ತು ಜೆಡಿಎಸ್ ಜೈಲಿನ ಕೊಠಡಿಗಳಲ್ಲಿ ಜಾಗವನ್ನು ಹಂಚಿಕೊಳ್ಳಬೇಕಾದ ಪರಿಸ್ಥಿತಿ ಉದ್ಭವಿಸಲೂಬಹುದು.

> “ಈ ಹಗರಣಕ್ಕೆ ಸಂಬಂಧಿಸಿದಂತೆ ಈಗ ಸಿಬಿಐ ತನಿಖೆಗೆ ಆಗ್ರಹಪಡಿಸುತ್ತಿರುವ ಹಾಗೂ ನೈತಿಕತೆಯ ಆಧಾರದ ಮೇಲೆ ಸಿದ್ದರಾಮಯ್ಯನವರ ರಾಜೀನಾಮೆಗೆ ಒತ್ತಾಯ ಮಾಡುತ್ತಿರುವ ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳು, ಅದಕ್ಕೂ ಮೊದಲು 2021ರಲ್ಲಿ; ಈ ಹಗರಣ ನಡೆದಾಗ ಮುಡಾ ಸದಸ್ಯರಾಗಿದ್ದ ತಮ್ಮ ಪಕ್ಷಗಳ ಹಿರಿಯ ಶಾಸಕರನ್ನು ಅಮಾನತುಪಡಿಸುವ ಮೂಲಕ ತಮ್ಮ ನೈತಿಕತೆಯನ್ನು ಉನ್ನತ ಸ್ತರಕ್ಕೆ ಕೊಂಡೊಯ್ಯುವವೇ...?”

ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳು ಸಿಬಿಐ ತನಿಖೆಗೆ ಆಗ್ರಹಪಡಿಸುತ್ತಿರುವುದರಿಂದ ಮೈಸೂರಿಗರ ಇಲ್ಲವೇ ಸಾರ್ವಜನಿಕ ಭೂಮಿಯನ್ನು ರಕ್ಷಿಸಿದಂತಾಗುವುದಿಲ್ಲ. ಬದಲಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಸಂಕಷ್ಟ ತಂದೊಡ್ಡುವುದು ಹಾಗೂ ಕಾಂಗ್ರೆಸ್ ಸರ್ಕಾರವನ್ನು ಅಸ್ಥಿರಗೊಳಿಸುವ ಉದ್ದೇಶವಷ್ಟೇ ಎನ್ನಿಸುತ್ತದೆ.

ಭಾರತದ ದುರಂತವೆಂದರೆ, ಸಂಸತ್ ಮತ್ತು ರಾಜ್ಯ ವಿಧಾನ ಸಭೆಗಳಲ್ಲಿ ವಿರೋಧ ಪಕ್ಷಗಳ ಪುನರಾವರ್ತಿತ ವೈಫಲ್ಯಗಳು. ಇದಕ್ಕೆ ಒಂದು ಉತ್ತಮ ಉದಾಹರಣೆ ಎಂದರೆ 2014ಕ್ಕೂ ಮುನ್ನ ದೇಶದಲ್ಲಿ ನಡೆದಂತಹ ರಾಜಕೀಯ ವಿದ್ಯಮಾನಗಳು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿರೋಧ ಪಕ್ಷಗಳ ಏಕೈಕ ಕೆಲಸ ಅಥವಾ ಜವಾಬ್ದಾರಿ ಎಂದರೆ ಅದು ಆಡಳಿತಾರೂಢ ಪಕ್ಷದ ಮೇಲೆ ನಿಗಾ ಇಡುವುದು. ಹಾಗಾದರೆ 10 ವರ್ಷಗಳ ಕಾಲ ಕೇಂದ್ರದಲ್ಲಿ ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರ ಭ್ರಷ್ಟಾಚಾರದಲ್ಲಿ ತೊಡಗಿದ್ದಾಗ ಬಿಜೆಪಿ ಏನು ಮಾಡುತ್ತಿತ್ತು? ಅವರೇನು ಆಗ ಅಂಧರು ಮತ್ತು ಮೂಗರಾಗಿದ್ದರೆ?

ಏಕೆಂದರೆ, ಯುಪಿಎ ಸರ್ಕಾರದ ಆಡಳಿತಾವಧಿಯ ಪ್ರತಿಯೊಂದು ಪ್ರಮುಖ ಹಗರಣವನ್ನು ಬಯಲಿಗೆಳೆದಿದ್ದು ಮಾಧ್ಯಮಗಳು ಇಲ್ಲವೇ ಆರ್‌ಟಿಐ ಕಾರ್ಯಕರ್ತರು. ಅಂದಿನ ವಿರೋಧ ಪಕ್ಷ ಬಿಜೆಪಿ ಅಲ್ಲ.

ಬಿಜೆಪಿ ಈ ಹಗರಣಗಳ ಹೈಜಾಕ್ ಮಾಡಿ, ಅಧಿಕಾರಕ್ಕೇರಿತು. ಅವುಗಳಲ್ಲಿ ಜನ ಲೋಕಪಾಲ ಚಳುವಳಿ, 2ಜಿ ಹಗರಣ, ಕಲ್ಲಿದ್ದಲು ಹಗರಣ, ಕಾಮನ್‌ವೆಲ್ತ್ ಗೇಮ್ಸ್, ರಾಬರ್ಟ್ ವಾದ್ರಾ ಭೂಹಗರಣ ಇತ್ಯಾದಿ. ಅಷ್ಟೇ ಅಲ್ಲ, ಸೋನಿಯಾ ಗಾಂಧಿ ಕುಟುಂಬದ ನ್ಯಾಷನಲ್ ಹೆರಾಲ್ಡ್ ಹಗರಣದ ವಿರುದ್ಧವೂ ಡಾ.ಸುಬ್ರಹ್ಮಣ್ಯ ಸ್ವಾಮಿ ಹೋರಾಟ ನಡೆಸಿದ್ದರು. ಇವ್ಯಾವುದರಲ್ಲೂ ಬಿಜೆಪಿ ಪಾತ್ರವಿಲ್ಲ.

ಈಗ ಕಳೆದ ಹತ್ತು ವರ್ಷದಿಂದ ಕೇಂದ್ರದಲ್ಲಿ ಭಾರತೀಯ ಜನತಾ ಪಕ್ಷವೇ ಅಧಿಕಾರದಲ್ಲಿದೆ. ಯುಪಿಎ ಸರ್ಕಾರದ ವಿರುದ್ಧ ಅವರು ಮಾಡಿದ್ದ ಎಷ್ಟು ಹಗರಣಗಳನ್ನು ಅವರು ತನಿಖೆಗೆ ಒಳಪಡಿಸಿದ್ದಾರೆ? ಎಷ್ಟು ಮಂದಿ ಕಾಂಗ್ರೆಸ್ ನಾಯಕರು ಜೈಲು ಸೇರಿದ್ದಾರೆ? ಯಾರೂ ಇಲ್ಲ. ಬಿಜೆಪಿ, ರಾಬರ್ಟ್ ವಾದ್ರಾ ಬಗ್ಗೆ ಅಷ್ಟೆಲ್ಲಾ ಹುಯಿಲೆಬ್ಬಿಸಲಾಗಿತ್ತು. ಈಗ ವಾದ್ರಾ ಜೈಲು ಪಾಲಾಗಿದ್ದಾರೆಯೇ? ಇಲ್ಲ.

ಭಾರತದಲ್ಲಿ ವಿರೋಧ ಪಕ್ಷಗಳು ಬರೀ ಒದರುತ್ತವೆ, ಕಿರುಚುತ್ತವೆ, ಜಾಥಾಗಳನ್ನು ಸಂಘಟಿಸುತ್ತವೆ, ಧರಣಿ ನಡೆಸುತ್ತವೆ ಹಾಗೂ ಆಡಳಿತ ಪಕ್ಷದ ಭ್ರಷ್ಟಾಚಾರದ ವಿರುದ್ಧ ಬಂದ್‌ಗಳಿಗೆ ಕರೆ ನೀಡುತ್ತವೆ. ಆದರೆ, ಅವರು ಅಧಿಕಾರಕ್ಕೆ ಬಂದಾಗ, ಅದರ ಬಗ್ಗೆ ಏನೂ ಮಾಡುವುದಿಲ್ಲ. ಅದನ್ನು ತಡೆಯುವುದಾಗಲೀ ಇಲ್ಲವೇ ಅದರ ಬಗ್ಗೆ ತನಿಖೆ ನಡೆಸುವುದಕ್ಕೂ ಹೋಗುವುದಿಲ್ಲ.

ಕರ್ನಾಟಕದಲ್ಲಿ ಕಾಂಗ್ರೆಸ್ ಪಕ್ಷ ಚುನಾವಣೆಗಿಂತ ಮುನ್ನ ಆಡಳಿತಾರೂಢ ಬಿಜೆಪಿ ಸರ್ಕಾರದ ವಿರುದ್ಧ 40% ಕಮಿಷನ್ ಆರೋಪವನ್ನು ಮಾಡಿತ್ತು. ಅದರ ಬಗ್ಗೆ ದೊಡ್ಡದಾಗಿ 'ಪೇಸಿಎಂ' ಜನಾಂದೋಲನವನ್ನೇ ನಡೆಸಿತ್ತು. ಆದರೆ, ಈಗ ಅವರೇ ಅಧಿಕಾರದಲ್ಲಿದ್ದಾರೆ. ಯಾವ ಕ್ರಮ ತೆಗೆದುಕೊಂಡಿದ್ದಾರೆ? ಏನೂ ಇಲ್ಲ.

2022ರ ಸೆಪ್ಟಂಬರ್ 14ರಂದು ನಾನು 'ಮೈಸೂರು ಮಿತ್ರ'ನ 'ಬಿಚ್ಚುನುಡಿ' ಅಂಕಣದಲ್ಲಿ ಅಂದಿನ ಬಿಜೆಪಿ ಸರ್ಕಾರದ ಭ್ರಷ್ಟಾಚಾರದ ವಿರುದ್ಧ ಕಾಂಗ್ರೆಸ್ ಹೋರಾಟದ ಬಗ್ಗೆ **'40% ಕಮಿಷನ್‌ಗೆ ಪೀಡಿಸಿದರೂ 100% ಸೇಫ್'** ಲೇಖನವನ್ನು ಬರೆದಿದ್ದೆ. ಅದರ ಕೊನೆಯಲ್ಲಿ "ನಾನು 100% ಭರವಸೆಯೊಂದಿಗೆ ಹೇಳುತ್ತೇನೆ, ಈ 40% ಕಮಿಷನ್ ವಿಚಾರವು ಚುನಾವಣೆ ಮುಗಿದ ನಂತರ, 1000% ಮುಚ್ಚಿ ಹೋಗುತ್ತದೆ. ಕಾಂಗ್ರೆಸ್‌ಗೆ 100% ಬಹುಮತ ಬಂದರೂ ಕೂಡ" ಎಂದು ಬರೆದಿದ್ದೆ. ಈಗ ಅದು ನಿಜವಾಗಿದೆ ಅಲ್ವಾ...!

ಈಗ, ಬಿಜೆಪಿ ಮತ್ತು ಜೆಡಿಎಸ್ ಪಕ್ಷಗಳ ಈ ಪ್ರತಿಭಟನೆಗಳು ಬೂಟಾಟಿಕೆಯ ಧೂಮವಾಗಿದೆ ಅರ್ಥಾತ್ ಕಾಗೆ ಹಾರಿಸಿದಂತೆ. ಕಾಂಗ್ರೆಸ್ ಪಕ್ಷ ಚುನಾವಣೆಗಿಂತ ಮುಂಚಿತವಾಗಿ ಮಾಡಿದ್ದ 40% ಕಮಿಷನ್ ಆರೋಪದಂತೆ. ಹೆಚ್ಚೆಂದರೆ, ಮುಡಾ ಅಧ್ಯಕ್ಷರು ಸಂಕಷ್ಟಕ್ಕೆ ಗುರಿಯಾಗಬಹುದು. ಹಾಗೂ ಅವರು ಈ ಹಗರಣ ಮರೆಯಾಗುವ ಅಥವಾ ಮಾಸಿ ಹೋಗುವ ತನಕ ಒಂದು ಬೆಲೆಗೆ, ತಮ್ಮ ಬಾಯಿಗೆ ಬೀಗ ಹಾಕಿಕೊಳ್ಳಬಹುದು. ಅನಂತರ, ಎಂದಿನಂತೆ ಅದೇ ವ್ಯಾಪಾರ... ಅದೇ ವ್ಯವಹಾರ...


ಇಂದು ಸರ್ಕಾರದಿಂದ ನೇಮಕಗೊಂಡ ಅಧ್ಯಕ್ಷರು ಹಾಗೂ ಅಧಿಕಾರಿಗಳು ನಮ್ಮ ಭೂಮಿಯನ್ನು ರಕ್ಷಿಸುತ್ತಾರೆ ಎಂದು ನಿರೀಕ್ಷಿಸುವುದು ಕೋಳಿ ಮನೆಯನ್ನು ನರಿ ಕಾಯುತ್ತದೆ ಎಂದು ನಿರೀಕ್ಷಿಸಿದಂತೆಯೇ ಸರಿ. ನಮ್ಮ ಬೇಜವಾಬ್ದಾರಿ ಮತದಾರರ ನಿಷ್ಕ್ರಿಯತೆಗೆ ಇದುವೇ ಸರಿಯಾದ ಶಾಸ್ತಿಯಾಗಿದೆ.

Email: vikram@starofmysore.com

ನಾಳೆ ಮತ್ತೆ ತೆರೆಯಲಿದೆ ಪುರಿ ಜಗನ್ನಾಥನ 'ರತ್ನಭಂಡಾರ'

ಪುರಿ, ಜು.16– ಒಡಿಶಾದ ಪುರಿಯಲ್ಲಿರುವ ಹೆಸರಾಂತ, 12ನೇ ಶತಮಾನದ ಜಗನ್ನಾಥ ದೇಗುಲದ 'ರತ್ನ ಭಂಡಾರ'ವನ್ನು ಜುಲೈ 18 ರಂದು ಮತ್ತೆ ತೆರೆಯಲಾಗುವುದು ಎಂದು ಜಗನ್ನಾಥ ದೇವಾಲಯದ ಆಡಳಿತ ಮಂಡಳಿ (ಎಸ್‌ಜೆಟಿಎ) ತಿಳಿಸಿದೆ.

ಖಜಾನೆಯಲ್ಲಿರುವ ಆಭರಣಗಳ ಪರಿಶೀಲನೆ ಮತ್ತು ಖಜಾನೆ ವ್ಯವಸ್ಥೆಯ ದುರಸ್ತಿ ಕೈಗೊಳ್ಳುವ ಉದ್ದೇಶದಿಂದ ಜುಲೈ 14ರಂದು 'ರತ್ನ ಭಂಡಾರ'ವನ್ನು ತೆರೆಯಲಾಗಿತ್ತು. ಖಜಾನೆಯ ಒಳ ಮತ್ತು ಹೊರಗಿನ ಕಪಾಟುಗಳಲ್ಲಿ ಇರಿಸಿರುವ ಆಭರಣಗಳು ಮತ್ತು ಇತರೆ ಮೌಲ್ಯಯುತ ವಸ್ತುಗಳನ್ನು ಮರದ ಪೆಟ್ಟಿಗೆಗಳಲ್ಲಿ ಇರಿಸಿ ತಾತ್ಕಾಲಿಕವಾಗಿ ಸ್ಟ್ರಾಂಗ್ ರೂಂಗೆ ಸ್ಥಳಾಂತರಿಸಲು ನಾಲ್ಕು ದಿನಗಳ ನಂತರ ಮತ್ತೆ ತೆರೆಯಲಾಗುವುದು ಎಂದು ಎಸ್‌ಜೆಟಿಎ ಹೇಳಿದೆ.



ಪುರಿ ಜಗನ್ನಾಥ ದೇವಾಲಯದ ರತ್ನಭಂಡಾರ ದ್ವಾರ.

ಒಡಿಶಾ ಹೈಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಬಿಸ್ವನಾಥ್ ರಥ್ (ರತ್ನ ಭಂಡಾರದ ಮೇಲ್ವಿಚಾರಣೆಗಾಗಿ ರಾಜ್ಯ ಸರ್ಕಾರ ನೇಮಿಸಿದ ಮೇಲ್ವಿಚಾರಣಾ ಸಮಿತಿಯ ಅಧ್ಯಕ್ಷರು) ಮಾತನಾಡಿ, 'ಜುಲೈ 18ರಂದು ಮತ್ತೆ ರತ್ನ ಭಂಡಾರದ ಬೀಗ ತೆರೆಯುತ್ತೇವೆ.

ಬೆಳಗ್ಗೆ 9:51 ಮತ್ತು ಮಧ್ಯಾಹ್ನ 12:15ರ ನಡುವೆ ರತ್ನ ಭಂಡಾರವನ್ನು ಪ್ರವೇಶಿಸುತ್ತೇವೆ. ಒಳಗಿನ ಕೋಣೆಯಲ್ಲಿರುವ ಬೆಲೆಬಾಳುವ ವಸ್ತುಗಳನ್ನು ತಾತ್ಕಾಲಿಕ ಸ್ಟೋರ್‌ರೂಮ್‌ಗೆ ವರ್ಗಾಯಿಸಲಾಗುತ್ತದೆ. ಎಎಸ್‌ಐ ಸದಸ್ಯರು ಅವುಗಳ ಮೌಲ್ಯಮಾಪನ ಮಾಡುತ್ತಾರೆ. ಇಡೀ ಕಾರ್ಯವನ್ನು ವಿಡಿಯೊಗ್ರಾಫ್ ಮಾಡಲಾಗುವುದು ಎಂದು ತಿಳಿಸಿದ್ದಾರೆ.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy News papers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ವಾಲ್ಮೀಕಿ ನಿಗಮದ ಅಧಿಕಾರಿ ಚಂದ್ರಶೇಖರ್ ಅವರದ್ದು ಆತ್ಮಹತ್ಯೆಯಲ್ಲ; ಸರ್ಕಾರಿ ಪ್ರಾಯೋಜಿತ ಕೊಲೆ

● ವಿಧಾನಸಭೆಯಲ್ಲಿ ವಿಪಕ್ಷ ನಾಯಕ ಆರ್.ಅಶೋಕ್ ಆರೋಪ ● ಸರ್ಕಾರದ ವಿರುದ್ಧ ವಾಗ್ದಾಳಿ

ಬೆಂಗಳೂರು, ಜು.16(ಕೆಎಂಶಿ)– ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧಿಕಾರಿ ಚಂದ್ರಶೇಖರ್ ಅವರದ್ದು ಆತ್ಮಹತ್ಯೆಯಲ್ಲ, ಸರ್ಕಾರಿ ಪ್ರಾಯೋಜಿತ ಕೊಲೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಆರೋಪಿಸಿದರು.

ವಿಧಾನಸಭೆಯಲ್ಲಿಂದು ವಾಲ್ಮೀಕಿ ಅಭಿವೃದ್ಧಿ ನಿಗಮದ ಅಕ್ರಮ ಹಣ ವರ್ಗಾವಣೆ ಕುರಿತು ನಿಯಮ 69ರಡಿ ಮಾತನಾಡಿದ ಅವರು, ಪ್ರಕರಣ ಸಿಬಿಐ ತನಿಖೆಗೆ ವಹಿಸಬೇಕು, 187 ಕೋಟಿ ರೂ. ಹೊಸದಾಗಿ ಬಿಡುಗಡೆ ಮಾಡಬೇಕು, ಮುಖ್ಯಮಂತ್ರಿ ಸಿದ್ದರಾಮಯ್ಯ ನೈತಿಕ ಹೊಣೆಹೊತ್ತು ರಾಜೀನಾಮೆ ನೀಡಬೇಕು ಎಂದು ಆಗ್ರಹಪಡಿಸಿದರು.

ದಲಿತರ ಹಣ ಲೂಟಿ ಹೊಡೆದು ಬೇರೆ ರಾಜ್ಯಕ್ಕೆ ಕಳುಹಿಸಿದ ಉದಾಹರಣೆಗಳಿಲ್ಲ. ಕಟಾಕಟ್ ಅಂತಾ 187 ಕೋಟಿ ರೂ. ಹಗರಣ ಮಾಡಿರುವುದು ರಾಜ್ಯಕ್ಕೆ ಕಪ್ಪುಚುಕ್ಕೆಯಾಗಿದೆ. ಬೇಲಿನೇ ಎದ್ದು ಹೊಲ ಮೇಯ್ದಂತಾಗಿದೆ.

ನಿಗಮದ ಮೃತ ಅಧಿಕಾರಿಯೂ ದಲಿತ, ಹಣ ಲೂಟಿ ಹೊಡೆದವರೂ ದಲಿತರು, ಸರ್ಕಾರ ದಲಿತರ ಚಾಂಪಿಯನ್ ಎಂದು ಹೇಳಿಕೊಳ್ಳುತ್ತೆ, ದಲಿತರ ದುಡ್ಡು, ಯಾರದ್ದೋ ಮೋಜು–ಮಸ್ತಿಗೆ



ಸದನದಲ್ಲಿ ಆರ್.ಅಶೋಕ್

ಬಳಕೆಯಾಯಿತು, ಸರ್ಕಾರ ಕಣ್ಣು ಮುಚ್ಚಿ ಕೂತಿದೆಯಾ ಎಂದು ಟೀಕಿಸಿದರು.

ಸರ್ಕಾರದ ಹೆಡ್‌ಮಾಸ್ಟರ್ ಕೈಚೆಲ್ಲಿ ಕುಳಿತಿದ್ದಾರೆ. ಸಿದ್ದರಾಮಯ್ಯ ಮೊದಲಿನಂತೆ ಇಲ್ಲ, ಯಾರ ಮಾತು ಕೇಳುತ್ತಿದ್ದಾರೋ ಗೊತ್ತಿಲ್ಲ. ಅಮಾಯಕ ಅಧಿಕಾರಿ ಪ್ರಮಾಣಿಕರಾಗಿದ್ದರು, ಹಗರಣದಲ್ಲಿ ಸರ್ಕಾರ ಭಾಗಿಯಾಗಿದೆ.

ಸ್ವತಃ ಮುಖ್ಯಮಂತ್ರಿ ನಿರ್ವಹಿಸುವ ಹಣಕಾಸು ಇಲಾಖೆಯಡಿ ಬರುವ ನಿಗಮವಾಗಿದೆ. ಇದು ಪೂರ್ವಯೋಜಿತ ಹಗರಣ, ಶಾಂಗ್ರೀಲಾ ಹೋಟೇಲ್ ಇದಕ್ಕೆ ಹೆಡ್ ಆಫೀಸ್. ಅಲ್ಲೇ ಎಲ್ಲ ತೀರ್ಮಾನ ಹಾಗೂ ಡೀಲ್ ಆಗಿದೆ. ಚುನಾವಣೆಗೆ ಹಣ ಬೇಕಿತ್ತು, ಕಟಾಕಟ್ ಅಂತ ವರ್ಗಾವಣೆ ಆಯಿತು ಎಂದು ಅಶೋಕ್ ಹೇಳಿದರು.

ಪಿಎ ಮನೆಯಲ್ಲಿ, ಚಿನ್ನದ ಅಂಗಡಿಯಲ್ಲಿ ಹಣ ಸಿಕ್ಕಿದೆ. ಉಪ ಮುಖ್ಯಮಂತ್ರಿ ಶಿವಕುಮಾರ್ ಕ್ಲೆವರ್ ರಾಜಕಾರಣಿ, ಪೋಲೀಸರಿಗೆ ಸಂದೇಶ ಕೊಟ್ಟಿದ್ದಾರೆ ಅನ್ನಿಸುತ್ತೆ. ಮುಖ್ಯಮಂತ್ರಿ ಆ ತರಹದ ಹೇಳಿಕೆ ಕೊಟ್ಟಿಲ್ಲ ಎಂದಾಗ, ಮಧ್ಯೆ ಪ್ರವೇಶಿಸಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ನಾನು ಈಗಲೂ ಹೇಳುತ್ತೇನೆ, ನಾಗೇಂದ್ರ ಅವರನ್ನು ಕರೆಸಿ ಮಾತನಾಡಿದ್ದೇನೆ, ನನ್ನದೇನು ಪಾತ್ರ ಇಲ್ಲ ಎಂದಿದ್ದಾರೆ, ಕೆಪಿಸಿಸಿ ಅಧ್ಯಕ್ಷನಾಗಿ ಈಗಲೂ ಅದನ್ನೇ ಹೇಳುತ್ತೇನೆ ಎಂದರು.

ನಾಳೆ ಮೈಸೂರಲ್ಲಿ 'ಇಂಟಿಗ್ರೇಟ್ 24'

ಕೈಗಾರಿಕಾ ವಸ್ತುಪ್ರದರ್ಶನ, ಖರೀದಿದಾರರು–ಮಾರಾಟಗಾರರ ಸಂಪರ್ಕ, ವಿಚಾರ ಸಂಕಿರಣ

Confederation of Indian Industry

ಮೈಸೂರು, ಜು.16(ಜಿಎ)–ಭಾರತೀಯ ಕೈಗಾರಿಕೆಗಳ ಒಕ್ಕೂಟದ ವತಿಯಿಂದ ಜು.18ರಂದು ಬೆಳಗ್ಗೆ 10ಗಂಟೆಗೆ ನಗರದ ಹೋಟೆಲ್ ಸದರ್ನ್ ಸ್ಟಾರ್‌ನಲ್ಲಿ 'ಇಂಟಿಗ್ರೇಟ್ 24' ಕೈಗಾರಿಕಾ ವಸ್ತುಪ್ರದರ್ಶನ, ಖರೀದಿದಾರರು– ಮಾರಾಟಗಾರರ ಸಂಪರ್ಕ, ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದು ಮೈಸೂರು ಘಟಕದ ಉಪಾಧ್ಯಕ್ಷ ಸಂತೋಷ್ ಗುಂಡಪಿ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ವಿಶ್ವದ ಎಲ್ಲಾ ದೇಶಗಳ ಬೆಳವಣಿಗೆಗೆ ಸಣ್ಣ, ಸೂಕ್ಷ್ಮ ಹಾಗೂ ಮಧ್ಯಮ (ಎಂಎಸ್‌ಎಂಇ) ಪ್ರಮುಖ ಪಾತ್ರವಹಿಸುತ್ತದೆ. ದೇಶದ ಬೆಳವಣಿಗೆಗೆ ಪ್ರಮುಖ ಕೊಡುಗೆ ನೀಡುವ ವರ್ಗಗಳಿಗೆ ಉತ್ತೇಜನ ನೀಡುವ ನಿಟ್ಟಿನಲ್ಲಿ 'ಇಂಟಿಗ್ರೇಟ್ 24' ಕೈಗಾರಿಕಾ ವಸ್ತುಪ್ರದರ್ಶನ, ಖರೀದಿದಾರರು–ಮಾರಾಟಗಾರರ ಸಂಪರ್ಕ, ವಿಚಾರ ಸಂಕಿರಣ ಆಯೋಜಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಬೆಳವಣಿಗೆಗೆ ಅವಕಾಶ ಹಾಗೂ ಅಗತ್ಯ ಕುರಿತು ಬೆಳಕು ಚೆಲ್ಲಲಾಗುವುದು. ರಾಜ್ಯದ ಎಂಎಸ್‌ಎಂಇಗಳು ಹೇಗೆ ಹೊಂದಿಕೊಳ್ಳಬೇಕು. ಸ್ಪರ್ಧಾತ್ಮಕತೆ ಎದುರಿಸುವುದು ಹೇಗೆ, ಸುಸ್ಥಿರತೆ ಮೊದಲಾದ ವಿಷಯಗಳ ಕುರಿತು ಚರ್ಚಿಸಲಾಗುವುದು ದೇಶದ 100ಕ್ಕೂ ಹೆಚ್ಚು ಪ್ರತಿನಿಧಿಗಳು ಭಾಗವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಉದ್ಯಮಿ ಅರ್ಜುನ್ ರಂಗ, ಸಿಐಐನ ಮುಖ್ಯಸ್ಥ ಎನ್.ವೇಣು, ಜಿಲ್ಲಾಧಿಕಾರಿ ಲಕ್ಷ್ಮಿಕಾಂತ ರೆಡ್ಡಿ ಸೇರಿದಂತೆ ಮತ್ತಿತರರು ಆಗಮಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಮೈಸೂರು ಘಟಕದ ಅಧ್ಯಕ್ಷ ಈಶ್ವರ್ ರಾವ್, ಸಂಚಾಲಕ ಸ್ಯಾಂ ಚೆರಿಯನ್, ಮೈಸೂರು ವಲಯ ಮುಖ್ಯಸ್ಥ ಸಾಲೋಮನ್ ಪುಷ್ಪರಾಜ್ ಉಪಸ್ಥಿತರಿದ್ದರು.

ಅಭಿನಂದನೆ



ಚಾಮುಂಡಿಬೆಟ್ಟ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ನೂತನ ಕಾರ್ಯದರ್ಶಿಯಾಗಿ ನೇಮಕಗೊಂಡಿರುವ ಹಿರಿಯ ಕೆಎಎಸ್ ಅಧಿಕಾರಿ ಶ್ರೀಮತಿ ರೂಪ ಅವರನ್ನು ಇಂಡಿಯನ್ ಟಿವಿ ವ್ಯವಸ್ಥಾಪಕ ನಿರ್ದೇಶಕರಾದ ಎಸ್.ವೆಂಕಟೇಶ್‌ಕುಮಾರ್, ರವಿಕುಮಾರ್, ಸಿ.ಪ್ರಕಾಶ್, ಪ್ರೀತಂ, ತೇಜಸ್ ಆತ್ಮೀಯವಾಗಿ ಅಭಿನಂದಿಸಿದರು.

ಶ್ರೀ ಮನ್ಮಹಾಭಾರತ ಪ್ರವಚನ ಕಾರ್ಯಕ್ರಮ

ಮೈಸೂರು,ಜು.16–ಶ್ರೀ ಕೃಷ್ಣ ಟ್ರಸ್ಟ್ ಮತ್ತು ಶ್ರೀ ಕೃಷ್ಣ ಮಿತ್ರ ಮಂಡಳಿ ವತಿಯಿಂದ ಜು.18ರಿಂದ 21ರವರೆಗೆ ಸಂಜೆ 6.30ರಿಂದ 7.30ರವರೆಗೆ ಉಡುಪಿ ಶ್ರೀ ಪಲಿಮಾರು ಮಠದ ಸಂಸ್ಥಾನಾಧೀಶರಾದ ಶ್ರೀ ವಿದ್ಯಾದೀಶತೀರ್ಥ ಶ್ರೀಪಾದಂಗಳವರಿಂದ ಶ್ರೀ ಮನ್ಮಹಾಭಾರತ ಪ್ರವಚನ ಕಾರ್ಯಕ್ರಮವನ್ನು ಶ್ರೀಕೃಷ್ಣಧಾಮದಲ್ಲಿ ಏರ್ಪಡಿಸಲಾಗಿದೆ.

ನೋಟ್‌ಬುಕ್ ವಿತರಣೆ



ಮೈಸೂರು ನಗರ ಕನ್ನಡಪರ ಸಂಘಟನೆ ಮತ್ತು ನಾಗರಿಕ ಹಿತರಕ್ಷಣಾ ವೇದಿಕೆ ಸಂಯುಕ್ತಾಶ್ರಯದಲ್ಲಿ ಎನ್.ಆರ್.ಮೊಹಲ್ಲಾದ ಇನ್‌ಫೆಂಟ್ರಿ ಶಾಲೆ ಮಕ್ಕಳಿಗೆ ನೋಟ್ ಬುಕ್ ವಿತರಣೆ ಮಾಡಲಾಯಿತು. ಚಿತ್ರದಲ್ಲಿ ವೇದಿಕೆ ಅಧ್ಯಕ್ಷ ಮಂಜುನಾಥ್ (ಮಿಲ್ಕ್ ಮಂಜು), ಖ್ಯಾತ ಮಕ್ಕಳ ವೈದ್ಯ ಡಾ.ರಾಜೇಂದ್ರ, ಉಪಾಧ್ಯಕ್ಷ ಬಿ.ಎಸ್.ಪಿ. ಮಂಜು, ಹನುಮಂತೇಗೌಡ, ಪ್ರಧಾನ ಕಾರ್ಯದರ್ಶಿ ಮೋಹನ್‌ಕುಮಾರ್, ಯೋಗೇಶ್, ಬಾಲಕೃಷ್ಣಗೌಡ, ಕಾರ್ಯದರ್ಶಿ ಸರ್ದಾರ್ ಮಹೇಶ್, ರಂಗಪ್ಪಗೌಡ ಇತರರಿದ್ದಾರೆ.

ತಾಯಿಯ ಅಂತ್ಯಕ್ರಿಯೆಗೆ ಹೋದವರ ಮನೆಯಲ್ಲಿ ಚಿನ್ನಾಭರಣ ದೋಚಿದ ಪಾಪಿಗಳು!



ಕಬೋರ್ಡ್‌ಗಳಲ್ಲಿದ್ದ ಪದಾರ್ಥಗಳ ಚೆಲ್ಲಾಪಿಲ್ಲಿ ಮಾಡಿರುವುದು.

ಮೈಸೂರು, ಜು.16(ಆರ್‌ಕೆ)– ತಾಯಿ ಅಂತ್ಯಕ್ರಿಯೆಗಾಗಿ ಬನ್ನೂರಿಗೆ ತೆರಳಿದ್ದ ವೇಳೆ ಮನೆ ಬಾಗಿಲು ಮುರಿದು ನಗದು, ಚಿನ್ನಾಭರಣ ಕಳವು ಮಾಡಿರುವ ಘಟನೆ ಮೈಸೂರಿನ ಮೇಟಗಳ್ಳಿ ಬಳಿಯ ಬಿ.ಎಂ.ಶ್ರೀ ನಗರದಲ್ಲಿ ಶನಿವಾರ ರಾತ್ರಿ ಸಂಭವಿಸಿದೆ.

ಗುತ್ತಿಗೆದಾರ ಬಸವರಾಜು ಎಂಬುವರು ತಮ್ಮ ತಾಯಿ ತೀವ್ರ ಅನಾರೋಗ್ಯದಿಂದ ಬಳಲುತ್ತಿದ್ದಾರೆಂಬ ವಿಷಯ ತಿಳಿದು ಶನಿವಾರ ಮಧ್ಯಾಹ್ನ ಮನೆಗೆ ಬೀಗ ಹಾಕಿ ಕುಟುಂಬ ಸಮೇತ ಬನ್ನೂರಿಗೆ ಹೋಗಿದ್ದರು. ಅಂದು ರಾತ್ರಿ ತಾಯಿ ನಿಧನರಾದ್ದರಿಂದ ಭಾನುವಾರ ಸಂಜೆ ಅಂತ್ಯಕ್ರಿಯೆ ಮುಗಿಸಿಕೊಂಡು ಸೋಮವಾರ (ಜು.15) ಬೆಳಗ್ಗೆ ಮೈಸೂರಿಗೆ ಹಿಂತಿರುಗಿದಾಗ ಮನೆ ಬಾಗಿಲು ಮುರಿದಿರುವುದು ಬೆಳಕಿಗೆ ಬಂತು.

ಮನೆ ಒಳಗೆ ಹೋಗಿ ನೋಡಿದಾಗ ಕೊಠಡಿಯ ಕಬೋರ್ಡ್‌ಗಳಲ್ಲಿದ್ದ ಪದಾರ್ಥಗಳ ಚೆಲ್ಲಾಪಿಲ್ಲಿ ಮಾಡಿದ್ದ ಖದೀಮರು, 1.34 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಹಾಗೂ ಲಕ್ಷ ರೂ. ನಗದನ್ನೂ ಕಳವು ಮಾಡಿರುವುದು ತಿಳಿಯಿತು.



ಮನೆ ಬಾಗಿಲು ಮುರಿದಿರುವುದು

ವಿಷಯ ತಿಳಿಯುತ್ತಿದ್ದಂತೆಯೇ ಸ್ಥಳಕ್ಕೆ ಧಾವಿಸಿದ ಮೇಟಗಳ್ಳಿ ಠಾಣಾ ಇನ್ಸ್‌ಪೆಕ್ಟರ್ ದಿವಾಕರ ಹಾಗೂ ಸಿಬ್ಬಂದಿ ಮಹಜರು ನಡೆಸಿದರು. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಸುತ್ತಮುತ್ತಲಿನ ಸಿಸಿಟಿವಿ ಕ್ಯಾಮರಾಗಳಲ್ಲಿ ಸೆರೆಯಾಗಿರುವ ಫುಟೇಜ್‌ಗಳನ್ನು ಸಂಗ್ರಹಿಸಿ, ಸುಳಿವಿನ ಜಾಡು ಹಿಡಿದು ಆರೋಪಿಗಳ ಪತ್ತೆಗೆ ಶೋಧ ನಡೆಸುತ್ತಿದ್ದಾರೆ.

ವಾಹನ ಪಾರ್ಕಿಂಗ್‌ಗೆ ವ್ಯವಸ್ಥೆಯಿದ್ದರೆ ಮಾತ್ರ ಮನೆ ನಿರ್ಮಾಣಕ್ಕೆ ಅನುಮತಿ



ನಿಯಮ ಜಾರಿಗೆ ನಿರ್ಧಾರ: ಗೃಹ ಸಚಿವ ಡಾ.ಜಿ.ಪರಮೇಶ್ವರ್

ಬೆಂಗಳೂರು, ಜು.16 (ಕೆಎಂಶಿ)– ನಗರದ ಪಾರ್ಕಿಂಗ್ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಲು ಮನೆ ಕಟ್ಟುವಾಗ ವಾಹನಗಳಿಗೆ ಪಾರ್ಕಿಂಗ್ ವ್ಯವಸ್ಥೆ ಇದ್ದರೆ ಮಾತ್ರ ನಿರ್ಮಾಣಕ್ಕೆ ಅನುಮತಿ ನೀಡಬೇಕು ಎಂಬ ನಿಯಮ ಜಾರಿಗೆ ತರಲಾಗುವುದು ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ವಿಧಾನಸಭೆಗಿಂದು ತಿಳಿಸಿದರು.

ಎಸ್.ಆರ್.ವಿಶ್ವನಾಥ್ ಪ್ರಸ್ತಾವಕ್ಕೆ ಉತ್ತರಿಸಿ ಸಚಿವರು, ಮೂಲ ಸೌಕರ್ಯಗಳಿಗೆ ನಿಯಮ ರೂಪಿಸದಿರುವ ಹಿನ್ನೆಲೆಯಲ್ಲಿ ರಸ್ತೆ ಬದಿ ವಾಹನಗಳನ್ನು ಪಾರ್ಕಿಂಗ್ ಮಾಡುತ್ತಿದ್ದಾರೆ, ಇದನ್ನು ತಡೆಗಟ್ಟಲು ಬಿಬಿಎಂಪಿ ಮತ್ತು ಸಾರಿಗೆ ಇಲಾಖೆ ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಬೇಕು. ಮನೆಕಟ್ಟುವಾಗ ವಾಹನಗಳ ಪಾರ್ಕಿಂಗ್‌ಗೆ ಸ್ಥಳ ಇದ್ದರೆ ಮಾತ್ರ ಅನುಮತಿ ನೀಡಬೇಕೆಂಬ ನಿಯಮಗಳನ್ನು ಜಾರಿಗೆ ತರಲು ಚರ್ಚೆ ಮಾಡಿ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದರು.

ಬೆಂಗಳೂರು ನಗರದಲ್ಲಿ 1,194 ನೋಪಾರ್ಕಿಂಗ್ ರಸ್ತೆಗಳಿವೆ, ನಿಯಮ ಉಲ್ಲಂಘನೆ ಪ್ರಕರಣಗಳಲ್ಲಿ ದಂಡ ವಸೂಲಿ ಮಾಡಲಾಗಿದೆ, 2024ರ ಜೂನ್ 3ರವರೆಗೆ 5,21,326 ನಿಯಮ ಉಲ್ಲಂಘನೆ ಪ್ರಕರಣ ದಾಖಲಿಸಿ 5,97,00, 200 ರೂ. ದಂಡ ಸಂಗ್ರಹಿಸಲಾಗಿದೆ. ಟ್ರಾಫಿಕ್ ಸಮಸ್ಯೆ ನಿಯಂತ್ರಣಕ್ಕೆ ಕೆಳಹಂತದ ಸಿಬ್ಬಂದಿ ಮಾತ್ರವಲ್ಲದೇ ಸಂಚಾರ ವಿಭಾಗದ ಡಿಸಿಪಿ ಮತ್ತು ಎಸಿಪಿಗಳು ಬೆಳಗ್ಗೆ ಮತ್ತು ಸಂಜೆ ಕನಿಷ್ಠ 2 ತಾಸು ಬೀಟ್ ನಡೆಸುವಂತೆ ನಿರ್ದೇಶಿಸಲಾಗಿದೆ ಎಂದರು.

ತಾಳೂರು ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಶೈಕ್ಷಣಿಕ ಪರಿಕರಗಳ ವಿತರಣೆ



ಆಲೂರಿನ ಬಿಲಿವಿಯರ್ಸ್ ಚರ್ಚ್ ವತಿಯಿಂದ ತಾಳೂರು ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮಕ್ಕಳಿಗೆ ಅಗತ್ಯವಿರುವ ಶೈಕ್ಷಣಿಕ ಪರಿಕರಗಳ ವಿತರಣೆ ಮಾಡಲಾಯಿತು.

ಆಲೂರು, ಜು. 16– ಪ್ರಸ್ತುತ ಸರಕಾರಿ ಶಾಲೆಗಳಲ್ಲಿ ಗುಣಾತ್ಮಕ ಶಿಕ್ಷಣ ದೊರೆಯುತ್ತಿದೆ. ದೇಶದ ಭವಿಷ್ಯ ಅಡಗಿರುವುದೇ ಸರಕಾರಿ ಶಾಲೆಗಳಲ್ಲಿ. ದೇಶವನ್ನಾಳುವ ನಮ್ಮ ಜನನಾಯಕರು ಬಹುತೇಕ ಓದಿರುವುದೇ ಇಂತಹ ಸರಕಾರಿ ಶಾಲೆಗಳಲ್ಲಿ... ಆದ್ದರಿಂದ ಇಲ್ಲಿನ ಮಕ್ಕಳಿಗೆ ಅಗತ್ಯ ಕಲಿಕಾ ಪರಿಕರಗಳನ್ನು ಒದಗಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಸಮಾಜ ಸೇವಕ ಎಚ್.ಇ. ಮಂಜುನಾಥ್ ಅಭಿಪ್ರಾಯಪಟ್ಟರು.

ಆಲೂರಿನ ಬಿಲಿವಿಯರ್ಸ್ ಚರ್ಚಿನ ವತಿಯಿಂದ ತಾಳೂರು ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಮೆಟ್ರೋ ಪೊಲಿಟೀನ್ ಡಾ.ಯೋಹನಾನ್ ಸ್ಮರಣಾರ್ಥ ಹಮ್ಮಿಕೊಂಡಿದ್ದ ಶೈಕ್ಷಣಿಕ ಪರಿಕರಗಳ ವಿತರಣೆ ಕಾರ್ಯಕ್ರಮದಲ್ಲಿ ಶಾಲೆಯ ಎಲ್ಲಾ ಮಕ್ಕಳಿಗೂ ಜಾಮೆಟ್ರಿ ಬಾಕ್ಸ್‌ಗಳನ್ನು ವಿತರಣೆ ಮಾಡಿ ಮಾತನಾಡಿ, ಗ್ರಾಮೀಣ ಮಕ್ಕಳ ಕಲಿಕೆ ಪ್ರೇರಕದಾಯಕವಾಗಿರುತ್ತದೆ. ಪ್ರಕೃತಿಯೊಂದಿಗೆ ನಿಕಟ ಸಂಪರ್ಕ ಹೊಂದಿರುತ್ತಾರೆ. ಸಾಮಾಜಿಕ ವ್ಯವಹಾರಗಳ ಪರಿಜ್ಞಾನವಿರುತ್ತದೆ. ಇದೇ ನಿಜವಾದ ಜ್ಞಾನವೂ ಹೌದು. ಮಕ್ಕಳು ಇಂತಹ ಕೊಡುಗೆಗಳನ್ನು ಸದ್ಬಳಕೆ ಮಾಡಿಕೊಳ್ಳಬೇಕು. ಉತ್ತಮವಾಗಿ ಕಲಿತು ಜೀವನದಲ್ಲಿ ದೊಡ್ಡ ಸಾಧನೆ ಮಾಡಬೇಕು. ಹೆತ್ತವರಿಗೆ ಹಾಗೂ ಹೆತ್ತೂರಿಗೆ ಕೀರ್ತಿ ತರಬೇಕು ಎಂದರು.

ತಾಲೂಕು ಗ್ರಂಥಾಲಯದ ಗ್ರಂಥಪಾಲಕ ಟಿ.ಕೆ.ನಾಗರಾಜ್ ಮಾತನಾಡಿ, ತಾಳೂರು ಶಾಲೆಗೆ ಬರುವುದೇ ನಮಗೆಲ್ಲಾ ಖುಷಿ. ಇಲ್ಲಿನ ವಾತಾವರಣ ಕಣ್ಮನ ಸೆಳೆಯುತ್ತದೆ. ಮಕ್ಕಳ ಕಲಿಕೆಗೆ ಇಂತಹ ಒಳ್ಳೆಯ ವಾತಾವರಣವಿರಬೇಕು ಎಂದರು.

ಆಲೂರು ಬಿಲಿವಿಯರ್ಸ್ ಚರ್ಚಿನ ಫಾದರ್ ಡಿ.ಸಿ.ಬಸವರಾಜ್ ಮಾತನಾಡಿ, ಮೆಟ್ರೋ ಪೊಲಿಟೀನ್ ಡಾ.ಯೋಹನಾನ್ ಸ್ಮರಣಾರ್ಥ ಆಯ್ದ ಸರಕಾರಿ ಶಾಲೆಗಳಿಗೆ ಮಕ್ಕಳಿಗೆ ಅಗತ್ಯವಿರುವ ಶೈಕ್ಷಣಿಕ ಪರಿಕರಗಳನ್ನು ದೇಣಿಗೆ ನೀಡಲು ಈ ವರ್ಷದಲ್ಲಿ ತಾಳೂರು ಶಾಲೆಯನ್ನು ಆಯ್ಕೆ ಮಾಡಿಕೊಂಡಿದ್ದೇವೆ ಎಂದರು. ಎಸ್‌ಡಿಎಂಸಿ ಅಧ್ಯಕ್ಷ ಟಿ.ಕೆ.ದಿನೇಶ್, ಮುಖ್ಯ ಶಿಕ್ಷಕ ಕೊಟ್ರೇಶ್ ಎಸ್.ಉಪ್ಪಾರ್, ಅತಿಥಿ ಶಿಕ್ಷಕಿ ಎ.ಎಸ್.ರೇಖಾ ಹಾಗೂ ಮಕ್ಕಳು ಹಾಜರಿದ್ದರು.

ನೂತನ ಪದಾಧಿಕಾರಿಗಳ ಪದಗ್ರಹಣ



ಮೈಸೂರಿನ ಖಾಸಗಿ ಹೋಟೆಲ್‌ನಲ್ಲಿ ರೋಟರಿ ಮೈಸೂರು ಪಶ್ಚಿಮದ ನೂತನ ತಂಡದ ಪದಗ್ರಹಣ ಕಾರ್ಯಕ್ರಮ ನಡೆಯಿತು. ಝೋನಲ್ ಲೆಫ್ಟಿನೆಂಟ್ ಡಾ.ಚಂದ್ರ, ಅಸಿಸ್ಟೆಂಟ್ ಗವರ್ನರ್ ಪಿಹೆಚ್‌ಎಫ್ ರಾಜೀವ್, ಪದಗ್ರಹಣ ಅಧಿಕಾರಿ ಪಿಡಿಜಿ ಡಾ.ಸಮೀರ್ ಹರಿಯನಿ, ನೂತನ ಅಧ್ಯಕ್ಷ ನಾಗೇಶ್, ಕಾರ್ಯದರ್ಶಿ ದೇವರಾಜು, ಮಾಜಿ ಅಧ್ಯಕ್ಷ ಸುಧೀಂದ್ರ ಇನ್ನಿತರರು ಉಪಸ್ಥಿತರಿದ್ದರು.

ಮಹೇಶ್ ಕಾಮತ್ ವಿಹೆಚ್‌ಪಿ ಜಿಲ್ಲಾಧ್ಯಕ್ಷ

ಮೈಸೂರು, ಜು.16(ಆರ್‌ಕೆ)– ವಿಶ್ವ ಹಿಂದೂ ಪರಿಷತ್ ಮೈಸೂರು ಜಿಲ್ಲಾಧ್ಯಕ್ಷರನ್ನಾಗಿ ಕೆ.ಮಹೇಶ್ ಕಾಮತ್ ಅವರನ್ನು ನೇಮಕ ಮಾಡಲಾಗಿದೆ ಎಂದು ಪ್ರಾಂತ ಘಟಕದ ಮುಖ್ಯಸ್ಥ ವೆಂಕಟರಾಮು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಜು.19, ವಿದುಷಿ ಇಳಾ ಸಂಗೀತ ದಿಲೀಪ್ ಕರ್ನಾಟಕ ಶಾಸ್ತ್ರೀಯ ಸಂಗೀತ



ವಿದುಷಿ ಇಳಾ ಸಂಗೀತ ದಿಲೀಪ್



ವಿದುಷಿ ಸಿ.ವಿ.ಶ್ರುತಿ



ಆನೂರು ಅನಂತ ಕೃಷ್ಣ ಶರ್ಮ



ಸುನಾದ್ ಆನೂರ್

ಮೈಸೂರು, ಜು. 16– ಮೈಸೂರಿನ ಕುವೆಂಪುನಗರ, ಆದಿಚುಂಚನಗಿರಿ ರಸ್ತೆಯಲ್ಲಿರುವ ವೀಣೆ ಶೇಷಣ್ಣ ಭವನದಲ್ಲಿ ಜು.19ರಂದು ಸಂಜೆ 6ಕ್ಕೆ ಶ್ರೀಮತಿ ವರದಾ ಡೋಂಗ್ರೆ ಸ್ಮರಣಾರ್ಥ ವಿದುಷಿ ಇಳಾ ಸಂಗೀತ ದಿಲೀಪ್ ಅವರಿಂದ ಕರ್ನಾಟಕ ಶಾಸ್ತ್ರೀಯ ಗಾಯನವನ್ನು ಏರ್ಪಡಿಸಲಾಗಿದೆ. ಪಕ್ಕವಾದ್ಯದಲ್ಲಿ ವಿದುಷಿ ಸಿ.ವಿ.ಶ್ರುತಿ–ಪಿಟೀಲು ವಿದ್ವಾನ್ ಆನೂರು ಅನಂತಕೃಷ್ಣ ಶರ್ಮ–ಮೃದಂಗ, ವಿದ್ವಾನ್ ಸುನಾದ್ ಆನೂರ್–ಖಂಜಿರಾದಲ್ಲಿ ಸಹಕಾರ ನೀಡಲಿದ್ದಾರೆ.

ಹೆಲ್ಪಿಂಗ್ ಹ್ಯಾಂಡ್ಸ್ ಜೈನ್ ಯುವ ಸಂಘಟನೆಯಿಂದ ಸರ್ಕಾರಿ ಶಾಲೆ ಮಕ್ಕಳಿಗೆ ಲೇಖನ ಸಾಮಗ್ರಿ ವಿತರಣೆ



ಹೆಲ್ಪಿಂಗ್ ಹ್ಯಾಂಡ್ಸ್ ಜೈನ್ ಯುವ ಸಂಘಟನೆ ವತಿಯಿಂದ ಮೈಸೂರಿನ ವಿದ್ಯಾರಣ್ಯಪುರಂನ ಸರ್ಕಾರಿ ಶಾಲೆಯ ಮಕ್ಕಳಿಗೆ ಶಾಲಾ ಬ್ಯಾಗ್, ಪುಸ್ತಕ, ಶೂ, ಸಾಕ್ಸ್, ನೀರಿನ ಬಾಟಲಿಗಳು ಮತ್ತು ಲೇಖನ ಸಾಮಗ್ರಿಗಳನ್ನು ವಿತರಿಸಲಾಯಿತು.

ಮೈಸೂರು, ಜು. 16– ಮೈಸೂರಿನ ಹೆಲ್ಪಿಂಗ್ ಹ್ಯಾಂಡ್ಸ್ ಜೈನ್ ಯುವ ಸಂಘಟನೆಯು ಮೈಸೂರಿನ ವಿದ್ಯಾರಣ್ಯಪುರಂನ ಸರ್ಕಾರಿ ಶಾಲೆಯ ಮಕ್ಕಳಿಗೆ ಶಾಲಾ ಬ್ಯಾಗ್, ಪುಸ್ತಕ, ಶೂ, ಸಾಕ್ಸ್, ನೀರಿನ ಬಾಟಲಿಗಳು ಮತ್ತು ಲೇಖನ ಸಾಮಗ್ರಿಗಳನ್ನು ಕೊಡುಗೆಯಾಗಿ ನೀಡಿತು.

ಈ ಸಂದರ್ಭದಲ್ಲಿ ಹೆಲ್ಪಿಂಗ್ ಹ್ಯಾಂಡ್ಸ್ ಕಾರ್ಯದರ್ಶಿ ಆನಂದ್ ಪಟ್ವಾ ಮಾತನಾಡಿ, ಸಹಾಯಹಸ್ತಗಳ ಮುಖ್ಯ ಧ್ಯೇಯ ವಾಕ್ಯವೆಂದರೆ ಎಲ್ಲಾ ನಿರ್ಗತಿಕರು ಮತ್ತು ಜೀವಿಗಳಿಗೆ ಸಹಾಯಹಸ್ತ ನೀಡುವುದಾಗಿದೆ. ಪ್ರತಿ ಮಕ್ಕಳಿಗೂ ಅಧ್ಯಯನ ಮಾಡುವ ಹಕ್ಕಿದೆ. ಪ್ರತಿಯೊಬ್ಬ ಜವಾಬ್ದಾರಿಯುತ ನಾಗರಿಕನು ನಿರ್ಗತಿಕರನ್ನು ಬೆಂಬಲಿಸಬೇಕು. ರಾಷ್ಟ್ರದ ಭವಿಷ್ಯವು ಮಕ್ಕಳ ಮೇಲೆ ಅವಲಂಬಿತವಾಗಿದೆ ಎಂದರು.

ಇಸಿಒ ಮಲ್ಲಿಕಾರ್ಜುನ್ ಅವರು ಸಂಸ್ಥೆಯ ವಿವಿಧ ಚಟುವಟಿಕೆಗಳನ್ನು ವಿವರಿಸಿದರು ಮತ್ತು ಇತರ ಸರ್ಕಾರಿ ಶಾಲೆಗಳಿಗೆ ಇದೇ ರೀತಿಯ ಬೆಂಬಲವನ್ನು ನೀಡುವಂತೆ ಮನವಿ ಮಾಡಿದರು.

ಶಾಲಾ ಮುಖ್ಯೋಪಾಧ್ಯಾಯಿನಿ ಶ್ರೀಮತಿ ಸಂಧ್ಯಾರಾಣಿ ಮಾತನಾಡಿ, ಸರ್ಕಾರಿ ಶಾಲೆಗೆ ತಮ್ಮ ಉದಾತ್ತ ಬೆಂಬಲಕ್ಕಾಗಿ ಸಹಾಯಹಸ್ತಗಳಿಗೆ ಧನ್ಯವಾದ ಅರ್ಪಿಸಿದರು. ಅಲ್ಲದೆ ಇನ್ನು ಮುಂದೆಯೂ ಇದೇ ರೀತಿಯ ಬೆಂಬಲವನ್ನು ಸಹ ಕೋರಿದರು.

ಹೆಲ್ಪಿಂಗ್ ಹ್ಯಾಂಡ್ಸ್ ಅಧ್ಯಕ್ಷ ಮಹಾವೀರ್ ಖಾಬಿಯಾ, ಕಾರ್ಯದರ್ಶಿ ಆನಂದ್‌ರಾಜ್ ಪಟ್ವಾ, ಖಜಾಂಚಿ ರಾಜನ್ ಬಾಗ್ಮಾರ್, ಯೋಜನಾ ನಿರ್ದೇಶಕ ಪ್ರಕಾಶ್ ಗಾಂಧಿ, ಸದಸ್ಯರಾದ ಮನೋಹರ್ ಸಂಕಲ, ಗೌತಮ್ ಪಟ್ವಾ, ದಿನೇಶ್ ಬೋಹ್ರಾ, ಜಂಬು ಲೋಧಾ, ಮಹಿಳಾ ವಿಭಾಗದ ಸದಸ್ಯರಾದ ಸೀಮಾ ಬೋಹರಾ, ಇಂದ್ರಾಬಾಯಿ ಖಾಬಿಯಾ, ಇಸಿಒ ಮಲ್ಲಿಕಾರ್ಜುನ್ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ಸಿಆರ್‌ಪಿ ಕಾವ್ಯಶ್ರೀ, ಮುಖ್ಯೋಪಾಧ್ಯಾಯಿನಿ ಶಾಂಡ್ಯರಾಣಿ, ಶಿಕ್ಷಕ ಶ್ರೀನಿವಾಸ್, ಪಾಲಕರು, ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.

ಜು.19ರಂದು ಗುರುವಂದನಾ, ದಾಸವೈಭವ ಸಾಂಸ್ಕೃತಿಕ ಕಾರ್ಯಕ್ರಮ

ಮೈಸೂರು, ಜು.16(ಜಿಎ)–ಮೈಸೂರಿನ ಶ್ರೀಕೃಷ್ಣ ಟ್ರಸ್ಟ್, ಶ್ರೀಕೃಷ್ಣಧಾಮ ವತಿಯಿಂದ ಉಡುಪಿಯ ಶ್ರೀ ಪೇಜಾವರ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳು ಮತ್ತು ಶ್ರೀ ಪಲಿಮಾರು ಮಠದ ಶ್ರೀ ವಿದ್ಯಾಧೀಶ ತೀರ್ಥ ಶ್ರೀಪಾದಂಗಳಿಗೆ ಜು.19ರಂದು ಸಂಜೆ 5 ಗಂಟೆ ಸರಸ್ವತಿಪುರಂನ ಕೃಷ್ಣಧಾಮದಲ್ಲಿ ಬೃಹತ್ ಗುರುವಂದನಾ ಹಾಗೂ ದಾಸವೈಭವ ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳು ಮತ್ತು ಶ್ರೀ ವಿದ್ಯಾಧೀಶ ತೀರ್ಥ ಶ್ರೀಪಾದಂಗಳು ಸಾರ್ಥಕ 60 ಸಂವತ್ಸರ ಪೂರೈಸಿದ ಹಿನ್ನೆಲೆಯಲ್ಲಿ ಬೃಹತ್ ಗುರುವಂದನಾ ಸಮಾರಂಭ ಆಯೋಜಿಸಿದ್ದು, ಅದೇ ಸಂಜೆ ದಿವ್ಯಾ ಗಿರಿಧರ್ ಮತ್ತು ಅನಂತರಾಜ್ ಮಿಸ್ತ್ರಿ ತಂಡದವರಿಂದ ದಾಸವೈಭವ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ. ಜು.18ರಿಂದ 21ರವರೆಗೆ ಸಂಜೆ 6.30ರಿಂದ 7.30ರವರೆಗೆ ಕೃಷ್ಣಧಾಮದಲ್ಲಿ ಶ್ರೀ ವಿದ್ಯಾಧೀಶ ತೀರ್ಥ ಶ್ರೀಪಾದಂಗಳಿಂದ 'ಶ್ರೀಮನ್ಮಹಾಭಾರತ' ಪ್ರವಚನ ಕಾರ್ಯಕ್ರಮ ನಡೆಯಲಿದೆ ಎಂದು ಪತ್ರಿಕಾ ಪ್ರಕಟಣೆ ತಿಳಿಸಿದೆ.

ವಿಜಯ ವಿಠಲ ಶಾಲೆಯಲ್ಲಿ ಸಂವಹನ ಸಂಘ ಸ್ಥಾಪನೆ

ಮೈಸೂರು, ಜು.16(ಎಸ್‌ಬಿಡಿ)– ಮೈಸೂರಿನ ವಿಜಯ ವಿಠಲ ವಿದ್ಯಾಶಾಲೆಯಲ್ಲಿ ಮಕ್ಕಳ ಕೌಶಲಗಳನ್ನು ಗುರುತಿಸಿ, ಪ್ರೋತ್ಸಾಹಿಸುವ ಉದ್ದೇಶದಿಂದ 'ಸಂವಹನ ಸಂಘ(interact club)' ಸ್ಥಾಪಿಸಲಾಗಿದೆ.

ಶಾಲೆ ಆವರಣದಲ್ಲಿ ನಡೆದ ಸಂಘದ ಅನುಸ್ಥಾಪನಾ ಸಮಾರಂಭ'ದಲ್ಲಿ ರೋಟರಿ ಮೈಸೂರು ಅಧ್ಯಕ್ಷ ಎನ್. ಪ್ರವೀಣ್ ಮಾತನಾಡಿ, ಸ್ವಯಂ ಸೇವೆಯನ್ನು ಉತ್ತೇಜಿಸುವಲ್ಲಿ ಸಂವಹನ ಸಂಘ ಮಹತ್ವದ ಪಾತ್ರ ವಹಿಸಲಿದೆ ಎಂದು ಅಭಿಪ್ರಾಯಿಸಿದರು.

ಸೇವೆಯು ಮನೆಯಿಂದಲೇ ಆರಂಭವಾಗಬೇಕು. ಕುಟುಂಬ ಸದಸ್ಯರಿಗೆ ಮನೆ ಕೆಲಸದಲ್ಲಿ ಸಹಾಯ ಮಾಡುವ ಮೂಲಕ ಸೇವೆಯನ್ನು ಸಮಾಜಕ್ಕೆ ವಿಸ್ತರಿಸಬೇಕು. ಅವಶ್ಯವಿರುವಷ್ಟು ಮಾತ್ರ ಮೊಬೈಲ್ ಬಳಸಬೇಕು. ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಬೇಕು. ಸಮಾಜದ ಒಳಿತಿಗಾಗಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಮಕ್ಕಳಿಗೆ ಕಿವಿಮಾತು ಹೇಳಿದರು.



ಮೈಸೂರಿನ ವಿಜಯ ವಿಠಲ ವಿದ್ಯಾಶಾಲೆಯಲ್ಲಿ ನಡೆದ 'ಸಂವಹನ ಸಂಘ' ಅನುಸ್ಥಾಪನಾ ಸಮಾರಂಭವನ್ನು ಗಣ್ಯರು ಉದ್ಘಾಟಿಸಿದರು.

ರೋಟರಿ ಮೈಸೂರು ಯೂತ್ ಸರ್ವೀಸ್‌ನ ನಿರ್ದೇಶಕ ರಘು.ಎಂ.ದಾಸ್ ಮಾತನಾಡಿ, ಮಕ್ಕಳು ದೊಡ್ಡ ಕನಸುಗಳನ್ನು ಕಾಣುವುದರ ಜೊತೆಗೆ ಅದನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ದಿಟ್ಟ ಹೆಜ್ಜೆಯಿಡಬೇಕು. ಸಾಧನೆ ಜೊತೆಗೆ ಕಷ್ಟದಲ್ಲಿರುವವರ ಜೀವನ ಸುಧಾರಣೆಗೆ ಪ್ರಯತ್ನಿಸಬೇಕು. ಆತ್ಮವಿಶ್ವಾಸದಿಂದ ಸಂವಹನ ಸಂಘದ ಚಟುವಟಿಕೆಗಳಲ್ಲಿ ಭಾಗಿಯಾಗುವ ಮೂಲಕ ಉತ್ತಮ ವ್ಯಕ್ತಿತ್ವ ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ವಿಜಯ ವಿಠಲ ವಿದ್ಯಾಸಂಸ್ಥೆಗಳ ಗೌರವ ಕಾರ್ಯದರ್ಶಿ ಆರ್.ವಾಸುದೇವ್ ಭಟ್ ಮಾತನಾಡಿ, ಸಂವಹನ ಸಂಘದ ಚಟುವಟಿಕೆಗಳಿಂದ ನಾಯಕತ್ವದ ಬೆಳವಣಿಗೆ ಜೊತೆಗೆ ಸಮಾಜ ಸೇವೆಯ ಗುಣ ಬೆಳೆಯುತ್ತದೆ. ಈ ಮೂಲಕ ಮಕ್ಕಳ ಸರ್ವತೋಮುಖ ಬೆಳವಣಿಗೆಯೂ ಸಾಧ್ಯವಾಗಲಿದೆ. ಹಿಂದಿನ ವರ್ಷಗಳಲ್ಲೂ ಸಂಘದ ಮೂಲಕ ನಡೆದಿರುವ ಹಲವು ಚಟುವಟಿಕೆಗಳಿಂದ ಸಮಾಜಕ್ಕೆ ಒಳಿತಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಂಘದ ನಿರ್ಗಮಿತ ಅಧ್ಯಕ್ಷರು ಹಿಂದಿನ ವರ್ಷದ ಸಾಧನೆಗಳನ್ನು ವಿವರಿಸಿದರೆ, ನೂತನ ಅಧ್ಯಕ್ಷೆ ಕವನಾ ಮುಂದಿನ ಗುರಿಗಳನ್ನು ತಿಳಿಸಿದರು. ಈ ವೇಳೆ ವಿಜಯ ವಿಠಲ ವಿದ್ಯಾಶಾಲೆಯ ಪ್ರಾಂಶುಪಾಲರಾದ ಎಸ್.ಎ.ವೀಣಾ ಸೇರಿದಂತೆ ವಿವಿಧ ವಿಭಾಗದ ಮುಖ್ಯಸ್ಥರು, ಶಿಕ್ಷಕರು, ವಿದ್ಯಾರ್ಥಿಗಳು, ಪೋಷಕರು ಹಾಗೂ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

ಜು.20, ಜನಸ್ಪಂದನ ಕಾರ್ಯಕ್ರಮ

ಮೈಸೂರು, ಜು.16–ಸಾರ್ವಜನಿಕರ ಕುಂದು–ಕೊರತೆಗಳನ್ನು ಶೀಘ್ರವಾಗಿ ಪರಿಹರಿಸುವ ನಿಟ್ಟಿನಲ್ಲಿ ಜುಲೈ 20 ರಂದು ಬೆಳಗ್ಗೆ 10 ಗಂಟೆಗೆ ಕೆ.ಆರ್.ನಗರ ಹಾಗೂ ಸಾಲಿಗ್ರಾಮ ತಾಲೂಕುಗಳ ಜನಸ್ಪಂದನ ಕಾರ್ಯಕ್ರಮವನ್ನು ಕೆ.ಆರ್ ನಗರದ ತಹಶೀಲ್ದಾರ್ ಕಾರ್ಯಾಲಯದಲ್ಲಿ ಆಯೋಜಿಸಲಾಗಿದೆ.

ಸದರಿ ಕಾರ್ಯಕ್ರಮದಲ್ಲಿ ಮಾನ್ಯ ಜನಪ್ರತಿನಿಧಿಗಳು, ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಜಿಲ್ಲಾ ಪೋಲಿಸ್ ಅಧೀಕ್ಷಕರು ಪಾಲ್ಗೊಳ್ಳಲಿದ್ದು, ಸಂಬಂಧಪಟ್ಟ ತಾಲೂಕಿನ ಸಾರ್ವಜನಿಕರು ಅಹವಾಲುಗಳಿದ್ದಲ್ಲಿ ಸಲ್ಲಿಸಬಹುದು ಎಂದು ಅಪರ ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಕಾವೇರಿ ವಿಚಾರದಲ್ಲಿ ಹೆಚ್‌ಡಿಕೆ ಗಂಭೀರತೆ ತೋರುತ್ತಿಲ್ಲ

ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ. ಗಂಗಾಧರ್ ಆಕ್ರೋಶ


ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್ ಮಾತನಾಡಿದರು.

ಮಂಡ್ಯ, ಜು.16– ಮಂಡ್ಯ ಜಿಲ್ಲೆಯ ಜನತೆಗೆ ಕಾವೇರಿ ಪ್ರಾಧಿಕಾರದ ತೀರ್ಪು ಕುರಿತು ಸಂಸದರು ಮಧ್ಯ ಪ್ರವೇಶಿಸಬೇಕೆಂದು ಒತ್ತಾಯ ಮಾಡಿದ್ದೆವು. ಆದರೆ ಕೇಂದ್ರ ಸಚಿವರು ಮತ್ತು ಮಂಡ್ಯ ಲೋಕ ಸಭಾ ಸದಸ್ಯ ಹೆಚ್.ಡಿ.ಕುಮಾರಸ್ವಾಮಿ ಈ ಬಗ್ಗೆ ಯಾವುದೇ ರೀತಿಯ ಗಂಭೀರತೆ ತೋರದೆ ಕಾವೇರಿ ಕೊಳ್ಳದ ರೈತರಿಗೆ ನೋವುಂಟು ಮಾಡಿರುತ್ತಾರೆ ಎಂದು ಜಿಲ್ಲಾ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಸಿ.ಡಿ.ಗಂಗಾಧರ್ ಆಕ್ರೋಶ ವ್ಯಕ್ತಪಡಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜುಲೈ 14ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಕರೆದಿದ್ದಂತಹ ಸರ್ವಪಕ್ಷಗಳ ಸಭೆಗೆ ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಗೈರು ಹಾಜರಾಗುವುದರ ಮೂಲಕ ಕಾವೇರಿ ಕೊಳ್ಳದ ರೈತರ ಮತ್ತು ಮಂಡ್ಯ ಜಿಲ್ಲೆಯ ರೈತರ ಹಿತವನ್ನು ಕಡೆಗಣಿಸಿ ಅದೇ ದಿನ ಪಾಂಡವಪುರದಲ್ಲಿ ನಡೆದ ಅಭಿನಂದನಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಂಡ್ಯ ಜಿಲ್ಲೆಯ ರೈತರಿಗಾಗಿ ಕರೆದಿದ್ದ ಸಭೆಗಿಂತ ಈ ರೀತಿಯ ಸ್ವಯಂ ಅಭಿನಂದನೆಯೇ ಮುಖ್ಯ ಎಂದು ತೋರ್ಪಡಿಸಿದ್ದಾರೆ ಎಂದು ಖಂಡಿಸಿದರು.

ಮಾಜಿ ಪ್ರಧಾನಿ ಹೆಚ್.ಡಿ.ದೇವೇಗೌಡರು ಇಂತಹ ಪರಿಸ್ಥಿತಿಯಲ್ಲಿ ರಾಜ್ಯದ ಹಿತ ಮತ್ತು ಜಿಲ್ಲೆಯ ಹಿತಕ್ಕೆ ಸಭೆ ಕರೆದಾಗ ಧಾವಿಸುತ್ತಿದ್ದರು. ಅಲ್ಲದೇ ಚುನಾವಣೆಗೆ ಮುಂಚೆ ಕಾವೇರಿ ಸಮಸ್ಯೆಯನ್ನು ಬಗೆಹರಿಸುವುದಾಗಿ ವಾಗ್ದಾನ ಮಾಡಿ ಈಗ ಶತಮಾನದ ಈ ಸಮಸ್ಯೆಯನ್ನು ಬಗೆಹರಿಸುವುದು ನಿಧಾನವಾಗುತ್ತದೆ ಎಂದು ಹೇಳಿದ್ದಾರೆ. ಮುಂದಿನ ದಿನಗಳಲ್ಲಿ ಈ ರೀತಿಯ ಉಡಾಫೆ ಮತ್ತು ಉದಾಸೀನತೆಗೆ ಜನತೆ ತಕ್ಕ ಉತ್ತರವನ್ನು ನೀಡುತ್ತಾರೆ. ಜರೂರಾಗಿ ಪ್ರಧಾನ ಮಂತ್ರಿಗಳನ್ನು ಭೇಟಿ ಮಾಡಿ ಈಗಾಗಲೇ ಪ್ರಾಧಿಕಾರ ನೀಡಿರುವ ಆದೇಶವನ್ನು ಹಿಂಪಡೆಯಲು ಒತ್ತಾಯಿಸಬೇಕೆಂದು ಎಂದು ಆಗ್ರಹಿಸಿದರು.

ಮಾಜಿ ಶಾಸಕ ಕೆ.ಬಿ.ಚಂದ್ರಶೇಖರ್ ಮಾತನಾಡಿ, ಸರ್ವಪಕ್ಷಗಳ ಸಭೆಗೆ ಕುಮಾರಸ್ವಾಮಿ ಗೈರಾಗಿದ್ದಾರೆ. ಪಾಂಡವಪುರದ ಅಭಿನಂದನಾ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದಾರೆ. ಸಭೆಯಲ್ಲಿ ಎಲ್ಲರು ಕುಮಾರಸ್ವಾಮಿಗೆ ಕಾಯುತ್ತಿದ್ದರು. ಆದರೂ ಸಹ ಉಡಾಫೆಯಿಂದ ಗೈರಾಗಿದ್ದಾರೆ. ಜಿಲ್ಲೆಯ ಜನ ಆಶೀರ್ವಾದ ಮಾಡಿದರೆ ಕಾವೇರಿ ಸಮಸ್ಯೆ ಬಗೆಹರಿಸುವ ಮಾತು ಕೊಟ್ಟಿದ್ದರು. ಜಿಲ್ಲೆಯ ಜನ ಹೆಚ್ಡಿಕೆಯನ್ನ ಗೆಲ್ಲಿಸಿ ಕೊಟ್ಟಿದ್ದಾರೆ. ನೀವು ಈ ರೀತಿಯ ನಡೆದುಕೊಳ್ಳುವುದು ಸರಿಯಲ್ಲ. ದೇವೇಗೌಡರು ಆರೋಗ್ಯ ಸರಿ ಇದ್ದರೆ ಸಭೆಯಲ್ಲಿ ಭಾಗಿಯಾಗಿ ಸಲಹೆ ಕೊಡುತ್ತಿದ್ದರು. ದೇವೇಗೌಡರಂತೆ ಕುಮಾರಸ್ವಾಮಿ ನಡೆದುಕೊಳ್ಳುತ್ತಿಲ್ಲ ಎಂದು ಕಿಡಿಕಾರಿದರು. ಗೋಷ್ಠಿಯಲ್ಲಿ ಮಾಜಿ ಶಾಸಕ ಎಚ್.ಬಿ.ರಾಮು, ಮುಖಂಡ ರುದ್ರಪ್ಪ ಇನ್ನಿತರರಿದ್ದರು.

ಡೆಂಗ್ಯೂನಿಂದ ಪಾರಾಗಲು ಸ್ವಯಂ ರಕ್ಷಣೆ ಅಗತ್ಯ


ಡೆಂಗ್ಯೂ ಜಾಗೃತಿ ಕಾರ್ಯಕ್ರಮವನ್ನು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಉದ್ಘಾಟಿಸಿದರು.

ಶ್ರೀರಂಗಪಟ್ಟಣ, ಜು.16– ಡೆಂಗ್ಯೂ ಮತ್ತು ಚಿಕೂನ್‌ಗುನ್ಯಾ ಜ್ವರ ನಿಯಂತ್ರಣ ನಿಮ್ಮ ಕೈಯಲ್ಲಿದೆ. ಸ್ವಯಂ ರಕ್ಷಣಾ ವಿಧಾನಗಳನ್ನು ಅನುಸರಿಸುವುದರಿಂದ ಸೊಳ್ಳೆ ಕಡಿತದಿಂದ ಬರುವ ರೋಗಗಳಿಂದ ಪಾರಾಗಬಹುದೆಂದು ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ. ಬೆನ್ನೂರ ಹೇಳಿದರು.

ಶ್ರೀರಂಗಪಟ್ಟಣದ ಪುರಸಭೆ ಸಭಾಂಗಣದಲ್ಲಿ ತಾಲೂಕು ಆರೋಗ್ಯಾಧಿಕಾರಿಗಳ ಕಾರ್ಯಾಲಯ ಹಾಗೂ ಸಾರ್ವಜನಿಕ ಆಸ್ಪತ್ರೆ ವತಿಯಿಂದ ಆಯೋಜಿಸಿದ್ದ ಡೆಂಗ್ಯೂ ಜಾಗೃತಿ ಕಾರ್ಯಕ್ರಮ ಉದ್ದೇಶಿಸಿ ಅವರು ಮಾತನಾಡಿದರು. ಡೆಂಗ್ಯೂ ಹಾಗೂ ಚಿಕೂನ್‌ಗುನ್ಯಾ ಜ್ವರ ಈಡಿಸ್ ಎಂಬ ಸೊಳ್ಳೆಯ ಕಡಿತದಿಂದ ಬರುತ್ತವೆ. ನಿಂತ ಸ್ವಚ್ಛ ನೀರಿನಲ್ಲಿ ಹುಟ್ಟುವ ಈ ಸೊಳ್ಳೆ ಸಾಧಾರಣವಾಗಿ ಹಗಲಿನಲ್ಲಿ ಕಚ್ಚುತ್ತವೆ. ಕಡಿತ ಚಿಕ್ಕದಾದರೂ ಭೀತಿ ದೊಡ್ಡದು. ನಿರ್ದಿಷ್ಟ ಚಿಕಿತ್ಸೆ ಇಲ್ಲದ ಈ ಖಾಯಿಲೆಗೆ ಮುಂಜಾಗ್ರತೆಯೇ ಮದ್ದು ಎಂದ ಅವರು, ಸೊಳ್ಳೆಯ ಜೀವನ ಚಕ್ರ ಕುರಿತು ಮಾಹಿತಿ ನೀಡಿ ಸೊಳ್ಳೆ ಉತ್ಪತ್ತಿ ತಡೆಗಟ್ಟಿ ರೋಗ ನಿಯಂತ್ರಣ ಮಾಡಬೇಕು. ಇದ್ದಕ್ಕಿದ್ದಂತೆ ಜ್ವರ, ಕಣ್ಣಿನ ಹಿಂಭಾಗ ನೋವು, ಸ್ನಾಯು ಮತ್ತು ಕೀಲುಗಳಲ್ಲಿ ನೋವು, ಹೊಟ್ಟೆನೋವು ಮುಂತಾದವು ರೋಗ ಲಕ್ಷಣಗಳಾಗಿದ್ದು, ಇಂತಹ ಲಕ್ಷಣಗಳು ಕಂಡುಬಂದಾಗ ತಕ್ಷಣ ಸರಕಾರಿ ಆಸ್ಪತ್ರೆಯಲ್ಲಿ ರಕ್ತಪರೀಕ್ಷೆ ಮಾಡಿಸಿಕೊಳ್ಳಬೇಕು. ಸಮುದಾಯದೊಂದಿಗೆ ಸೇರಿ ಡೆಂಗ್ಯೂ ನಿಯಂತ್ರಣ ಮಾಡೋಣ ಎಂದು ಸಲಹೆ ನೀಡಿದರು.

ನಂತರ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಜಿ. ಮೋಹನ್ ಮಾತನಾಡಿ, ಸೊಳ್ಳೆ ಕಡಿತದಿಂದ ಪಾರಾಗಲು ಮೈತುಂಬ ಬಟ್ಟೆ ಧರಿಸುವುದು, ಸೊಳ್ಳೆ ಪರದೆ ಉಪಯೋಗಿಸುವುದು, ನೀರಿನ ಶೇಖರಣೆಗಳನ್ನು ಮುಚ್ಚಿಡುವುದು, ಮನೆಯ ಸುತ್ತ–ಮುತ್ತ ನೀರು ನಿಲ್ಲದಂತೆ ಎಚ್ಚರ ವಹಿಸುವುದು ಮತ್ತು ಪರಿಸರವನ್ನು ಶುಚಿಯಾಗಿಟ್ಟುಕೊಳ್ಳುವುದು, ಪ್ರತಿ ಶುಕ್ರವಾರ ಪ್ರತಿಯೊಬ್ಬರು ತಮ್ಮ ತಮ್ಮ ಮನೆಯಲ್ಲಿ ಒಣ ದಿನ ಆಚರಿಸುವ ಮೂಲಕ ರಕ್ಷಣಾ ವಿಧಾನಗಳನ್ನು ಅನುಸರಿಸಬೇಕು ಎಂದರು.

ಸದರಿ ವೇಳೆ ಪುರಸಭೆ ಸದಸ್ಯರುಗಳಾದ ಕೃಷ್ಣಪ್ಪ, ಎಸ್.ಟಿ.ರಾಜು, ಎಂ. ಶ್ರೀನಿವಾಸ್, ಗಂಜಾಂ ಶಿವು, ಪೂರ್ಣಿಮಾ, ವಸಂತ ಕುಮಾರಿ, ನಿರ್ಮಲಾ ಪಿ, ಎಸ್.ನಂದೀಶ್ ಹಾಗೂ ಪುರಸಭೆ ಮುಖ್ಯಾಧಿಕಾರಿ ರಾಜಣ್ಣ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ರಾಜ, ಪರಿಸರ ಇಂಜಿನಿಯರ್ ಸಹನ, ಆರೋಗ್ಯ ನಿರೀಕ್ಷಣಾಧಿಕಾರಿ ಚಂದನ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ಮಂಗಳ, ಪುರಸಭೆ ಅಧಿಕಾರಿಗಳು, ಸಿಬ್ಬಂದಿಗಳು ಹಾಗೂ ಪೌರ ಕಾರ್ಮಿಕರು ಸಭೆಯಲ್ಲಿ ಹಾಜರಿದ್ದರು

ಡೆಂಗ್ಯೂ ಜ್ವರದ ಬಗ್ಗೆ ಎಚ್ಚರ ವಹಿಸಿ


ಪಾಂಡವಪುರ ಪಟ್ಟಣದ ಸಮಾಜಕಲ್ಯಾಣ ಇಲಾಖೆಯ ಹಾಸ್ಟೆಲ್‌ನಲ್ಲಿ ಆರೋಗ್ಯ ಇಲಾಖೆ ವತಿಯಿಂದ ಏರ್ಪಡಿಸಿದ್ದ ವಿದ್ಯಾರ್ಥಿಗಳಿಗೆ ಡೆಂಗ್ಯು ಜ್ವರದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಟಿಎಚ್‌ಓ ಡಾ.ಸಿ.ಎ.ಅರವಿಂದ್ ಉದ್ಘಾಟಿಸಿದರು.

ಪಾಂಡವಪುರ, ಜು.16– ಡೆಂಗ್ಯೂ ಜ್ವರದ ತೀವ್ರತೆ ಹೆಚ್ಚಾಗುತ್ತಿರುವುದರಿಂದ ಸಾರ್ವಜನಿಕರು, ವಿದ್ಯಾರ್ಥಿಗಳು ಎಚ್ಚರ ವಹಿಸಬೇಕು ಎಂದು ತಾಲೂಕು ಆರೋಗ್ಯಾಧಿಕಾರಿ ಡಾ.ಸಿ.ಎ.ಅರವಿಂದ್ ಹೇಳಿದರು.

ಪಟ್ಟಣದ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ನಲ್ಲಿ ಆರೋಗ್ಯ ಇಲಾಖೆ ವತಿಯಿಂದ ಏರ್ಪಡಿಸಿದ್ದ ವಿದ್ಯಾರ್ಥಿಗಳಿಗೆ ಡೆಂಗ್ಯು ಜ್ವರದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶುದ್ಧವಾದ ನೀರಿನಲ್ಲಿ ಉತ್ಪತ್ತಿಯಾಗುವ ಈಡಿಸ್ ಸೊಳ್ಳೆಯಿಂದ ಹರಡುವ ಡೆಂಗ್ಯೂ ಜ್ವರ ದಿನೇ ದಿನೆ ಹೆಚ್ಚಾಗುತ್ತಿದ್ದು, ಸಾವು–ನೋವುಗಳು ಸಂಭವಿಸುತ್ತಿವೆ. ಡೆಂಗ್ಯೂ ಜ್ವರಕ್ಕೆ ಚಿಕಿತ್ಸೆ ಇಲ್ಲ. ಹಾಗಾಗಿ ಡೆಂಗ್ಯೂ ಜ್ವರ ಲಕ್ಷಣಗಳು ಕಂಡುಬಂದ ತಕ್ಷಣವೇ ಆಸ್ಪತ್ರೆಗೆ ತೆರಳಿ ಚಿಕಿತ್ಸೆಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಈಡಿಸ್ ಸೊಳ್ಳೆ ಹೆಚ್ಚಾಗಿ ಶುದ್ಧವಾದ ನೀರು ಸಂಗ್ರಹವಾಗಿರುವ ಸ್ಥಳಗಳಲ್ಲಿ ಉತ್ಪತ್ತಿಯಾಗುತ್ತಿವೆ. ಹಾಗಾಗಿ ಮನೆ ಹಾಗೂ ಸುತ್ತಮುತ್ತಲಿನ ಪ್ರದೇಶವನ್ನು ಸ್ವಚ್ಛವಾಗಿಟ್ಟುಕೊಳ್ಳಬೇಕು. ನೀರಿನ ಟ್ಯಾಂಕ್‌ಗಳು, ತೆಂಗಿನ ಚಿಪ್ಪು, ಹಳೆಯ ಟೈಯರ್‌ಗಳಲ್ಲಿ ಸಂಗ್ರಹವಾಗಿರುವ ಮಳೆನೀರುಗಳನ್ನು ಸ್ವಚ್ಛಗೊಳಿಸಬೇಕು. ಮನೆಗಳಲ್ಲಿ ಮಕ್ಕಳಿಗೆ ಮೈಕೈ ತುಂಬಾ ಬಟ್ಟೆ ಹಾಕಿಸಬೇಕು, ಮಲಗುವಾಗ ಸೊಳ್ಳೆ ಪರದೆ ಕಟ್ಟಿಕೊಂಡು ಮಲಗಬೇಕು ಎಂದು ಸಲಹೆ ನೀಡಿದರು.

ಕೀಟವಾಹನ ರೋಗ ತಜ್ಞೆ ಜಾನೇಟ್ ಮಾತನಾಡಿ, ಹಾಸ್ಟೆಲ್‌ಗಳಲ್ಲಿ ವಿದ್ಯಾರ್ಥಿಗಳು ಸ್ವಚ್ಛತೆ ಕಾಪಾಡಿಕೊಂಡು ರೋಗ–ರುಜಿನಗಳು ಹರಡದಂತೆ ಎಚ್ಚರವಹಿಸಬೇಕು ಎಂದು ತಿಳಿಸಿದರು.

ವಿದ್ಯಾರ್ಥಿಗಳು ಸೊಳ್ಳೆಗಳಿಂದ ಹರಡುವ ರೋಗಗಳ ಬಗ್ಗೆ ಅರಿವು ಮೂಡಿಸಿಕೊಳ್ಳಬೇಕು. ಸೊಳ್ಳೆಗಳಿಂದ ಮಲೇರಿಯಾ, ಫೈಲೇರಿಯಾ(ಆನೆಕಾಲು) ಮೆದಳು ಜ್ವರ, ಚಿಕೂನ್‌ಗುನ್ಯ, ಡೆಂಗ್ಯೂ, ಝಿಕಾ ರೋಗಗಳು ಹರಡುತ್ತವೆ. ಸೊಳ್ಳೆಗಳಲ್ಲಿ 3–4 ಸಾವಿರ ಜಾತಿ ಸೊಳ್ಳೆಗಳಿದ್ದು, ಕೆಲವು ಸೊಳ್ಳೆಗಳಿಂದ ಮಾತ್ರ ರೋಗ ಹರಡುತ್ತಿವೆ ಎಂದರು.

ಈ ಸಂದರ್ಭದಲ್ಲಿ ಆರೋಗ್ಯ ಶಿಕ್ಷಣಾಧಿಕಾರಿ ಶಿವಮ್ಮ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಪುಟ್ಟಸ್ವಾಮಿ, ಆರ್‌ಬಿಎಸ್‌ಕೆ ವೈದ್ಯಾಧಿಕಾರಿ ಡಾ.ನಮ್ರತ, ಡಾ.ಲೋಕೇಶ್, ಡಾ. ಭಾಗ್ಯಶ್ರೀ, ನರ್ಸ್‌ಗಳಾದ ಪ್ರೇಮಾ, ಕಲಾವತಿ, ನೇತ್ರಾಧಿಕಾರಿ ಪವಿತ್ರ, ಬಸವರಾಜು, ನಿಲಯ ಪಾಲಕ ಜಯರಾಮು, ನಾರಾಯಣ ಸೇರಿದಂತೆ ಹಲವರು ಹಾಜರಿದ್ದರು.

ರಾಜ್ಯ ಕಾಂಗ್ರೆಸ್ ದಲಿತ, ಸಂವಿಧಾನ ವಿರೋಧಿ ಸರ್ಕಾರವಾಗಿದೆ: ಮಹೇಶ್ ಕಿಡಿ


ಸುದ್ದಿಗೋಷ್ಠಿಯಲ್ಲಿ ಮಾಜಿ ಸಚಿವ ಎನ್.ಮಹೇಶ್ ಮಾತನಾಡಿದರು.

ಮಂಡ್ಯ, ಜು.16– ಗ್ಯಾರಂಟಿ ಹೆಸರಿನಲ್ಲಿ ಎಸ್‌ಸಿಪಿ, ಟಿಎಸ್‌ಪಿ ಹಣವನ್ನು ದುರ್ಬಳಕೆ ಮಾಡಿಕೊಂಡಿದ್ದಲ್ಲದೇ ವಾಲ್ಮೀಕಿ ನಿಗಮದಲ್ಲಿ ಶೋಷಿತ ವರ್ಗಕ್ಕೆ ಮೀಸಲಿಟ್ಟಿದ್ದ ಹಣವನ್ನು ಲೂಟಿ ಹೊಡೆದಿರುವ ರಾಜ್ಯ ಕಾಂಗ್ರೆಸ್ ಸರ್ಕಾರ, ದಲಿತ ವಿರೋಧಿ, ಸಂವಿಧಾನ ವಿರೋಧಿ ಹಾಗೂ ಹಗರಣಗಳ ಸರ್ಕಾರವಾಗಿ ಮಾರ್ಪಟ್ಟಿದ್ದು, ಅಭಿವೃದ್ಧಿ ಶೂನ್ಯವಾಗಿದೆ ಎಂದು ಮಾಜಿ ಸಚಿವ ಎನ್.ಮಹೇಶ್ ಕಿಡಿಕಾರಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿದ್ದರಾಮಯ್ಯ ಸರ್ಕಾರ ಅಧಿಕಾರಕ್ಕೆ ಬರಲು ಗ್ಯಾರಂಟಿ ತಂತ್ರವನ್ನು ಬಳಸಿದ್ದಾರೆ. ಈ ಗ್ಯಾರಂಟಿ ಯೋಜನೆಗೆ ಸಂಪನ್ಮೂಲ ಕ್ರೋಢೀಕರಣದ ಬಗ್ಗೆ ತಿಳಿಸಿಲ್ಲ. 40,000 ಕೋಟಿ ಆದಾಯವನ್ನು ಸಂಗ್ರಹಿಸುತ್ತೇವೆ ಎಂದು ತಿಳಿಸಿದ್ದರು. ಆದರೆ ಎಸ್‌ಸಿಪಿ, ಟಿಎಸ್‌ಟಿ ಅಭಿವೃದ್ಧಿ ಯೋಜನೆಯ ಅನುದಾನದಲ್ಲಿ 11,444 ಕೋಟಿ ರೂ.ಗಳನ್ನು ಬೇರೆ ಯೋಜನೆಗಳಿಗೆ ಬಳಸಿಕೊಂಡಿದೆ ಎಂದು ದೂರಿದರು.

ಎರಡು ವರ್ಷದಲ್ಲಿ ದಲಿತರ 25000 ಕೋಟಿ ರೂಪಾಯಿ ಅನುದಾನವನ್ನು ಬಳಕೆ ಮಾಡಿಕೊಳ್ಳಲಾಗಿದೆ. 7ಡಿ ಕಾಯ್ದೆ ತೆಗೆಯಲು ನಾನು ಹೋರಾಟ ಮಾಡಿದ್ದೆ. ಅದನ್ನು ತೆಗೆದು 7ಸಿ ಕಾಯ್ದೆ ಬಳಸಿ ಹಣ ಬಳಕೆ ಮಾಡಿಕೊಂಡಿದ್ದಾರೆ. ಇದನ್ನು ಸಮರ್ಥಿಸಿಕೊಳ್ಳಲು ಸಿದ್ದರಾಮಯ್ಯ ಅವರು ದಾರಿ ತಪ್ಪಿಸುತ್ತಿದ್ದಾರೆ ಎಂದು ಆರೋಪಿಸಿದರು. ವಾಲ್ಮೀಕಿ ಅಭಿವೃದ್ಧಿ ನಿಗಮದ ಹಣವನ್ನು ಕೂಡ ದುರ್ಬಳಕೆ ಮಾಡಿಕೊಳ್ಳಲಾಗಿದೆ. ಹಣವನ್ನು ಬೇರೆ ಖಾತೆಗಳಿಗೆ ವರ್ಗಾವಣೆ ಮಾಡಿ ದಲಿತರಿಗೆ ಅನ್ಯಾಯ ಮಾಡಲಾಗಿದೆ. ಹಗರಣಗಳ ಮೇಲೆ ಹಗರಣ ನಡೆಸುತ್ತಿರುವ ಈ ಸರ್ಕಾರ ಅಧಿಕಾರದಲ್ಲಿರಲು ಲಾಯಕ್ಕಿಲ್ಲ. ಈ ಕೂಡಲೇ ಸಿಎಂ ಸ್ಥಾನಕ್ಕೆ ಸಿದ್ದರಾಮಯ್ಯ ರಾಜೀನಾಮೆ ಕೊಡಬೇಕೆಂದು ಆಗ್ರಹಿಸಿದರು.

ಗೋಷ್ಠಿಯಲ್ಲಿ ಮಾಜಿ ಸಚಿವ ಹರುತಾಳು ಹಾಲಪ್ಪ ಜಿಲ್ಲಾಧ್ಯಕ್ಷ ಡಾ.ಇಂದ್ರೇಶ್, ಮುಖಂಡರಾದ ಅಶೋಕ್ ಜಯರಾಂ, ಪರಮಾನಂದ, ವಸಂತ್, ಶಂಕರ್ ಇತರರಿದ್ದರು.

ಡೆಂಗ್ಯೂ ಜ್ವರ ಪರೀಕ್ಷೆ: ಹೆಚ್ಚಿನ ದರ ಪಡೆದಲ್ಲಿ ದೂರು ಸಲ್ಲಿಸಿ

ಮಂಡ್ಯ, ಜು.16– ಜಿಲ್ಲೆಯಲ್ಲಿ ಡೆಂಗ್ಯೂ ಜ್ವರ ಪ್ರಕರಣಗಳು ದಿನೇ ದಿನೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಖಾಸಗಿ ನರ್ಸಿಂಗ್ ಹೋಂ, ಆಸ್ಪತ್ರೆ ಡಯಾಗ್ನೋಸ್ಟಿಕ್ ಸೆಂಟರ್, ಲ್ಯಾಬ್‌ಗಳಲ್ಲಿ ಡೆಂಗ್ಯೂ ಜ್ವರ ಪತ್ತೆ ಹಚ್ಚುವ ಪರೀಕ್ಷೆಗಳಾದ ಎಲಿಸಾ ಹಾಗೂ ರಾಪಿಡ್ ಟೆಸ್ಟ್‌ಗಳಿಗೆ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿರವರು ನಿಗದಿತ ದರವನ್ನು ನಿಗದಿಪಡಿಸಿರುತ್ತಾರೆ.

ಡೆಂಗ್ಯೂ ಎಲಿಸಾ ಎನ್‌ಎಸ್1 ಪರೀಕ್ಷೆಗೆ ರೂ.300, ಡೆಂಗ್ಯೂ ಎಲಿಸಾ ಐಜಿಮ್ ಪರೀಕ್ಷೆಗೆ ರೂ.300, ಸ್ಕ್ರೀನಿಂಗ್ ಟೆಸ್ಟ್ ರಾಪಿಡ್ ಕಾರ್ಡ್ ಫಾರ್ ಎನ್‌ಎಸ್1 ಐಜಿಮ್ ಮತ್ತು ಐಜಿಜಿ ಪರೀಕ್ಷೆಗೆ ರೂ. 250 ನ್ನು ನಿಗದಿಸಲಾಗಿದೆ. ನಿಗದಿತ ದರಕ್ಕಿಂತ ಹೆಚ್ಚಿನ ದರವನ್ನು ಪಡೆದಲ್ಲಿ ಜಿಲ್ಲಾ ಕುಟುಂಬ ಕಲ್ಯಾಣಾಧಿಕಾರಿಗಳ ದೂ.ಸಂ: 9449843445 ಹಾಗೂ ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ದೂ.ಸಂ: 9880151245 ಅನ್ನು ಸಂಪರ್ಕಿಸಿ ದೂರು ಸಲ್ಲಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

ಶತಾಯುಷಿ ಬೆಟ್ಟಮ್ಮ ನಿಧನ

ಕೆ.ಆರ್.ಪೇಟೆ, ಜು.16– ತಾಲೂಕಿನ ಹಳೆ ಸಾಯ್ಪನ್ನಳ್ಳಿ ನಿವಾಸಿ ಶತಾಯುಷಿ ಬೆಟ್ಟಮ್ಮ (102) ಅವರು ಸೋಮವಾರ ನಿಧನರಾದರು.



ದಿವಂಗತರು ಮಕ್ಕಳು, ಮೊಮ್ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಮೃತರ ಜಮೀನಿನಲ್ಲಿ ಮಂಗಳವಾರ ಜರುಗಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಭಾರತದ ಸ್ವಚ್ಛ ನಗರಿ ಇಂದೋರ್‌ಗೆ ಮತ್ತೊಂದು ಗರಿ

ಒಂದೇ ದಿನ 11 ಲಕ್ಷ ಸಸಿಗಳನ್ನು ನೆಟ್ಟು ವಿಶ್ವ ದಾಖಲೆ



ಇಂದೋರ್: ದೇಶದ ಅತ್ಯಂತ ಸ್ವಚ್ಛ ನಗರ ಕೀರ್ತಿಗೆ ಭಾಜನರಾಗಿರುವ ಇಂದೋರ್ ಇದೀಗ ಮತ್ತೊಂದು ದಾಖಲೆ ನಿರ್ಮಿಸಿದ್ದು, ಒಂದೇ ದಿನದಲ್ಲಿ 11ಲಕ್ಷ ಗಿಡಗಳನ್ನು ನೆಡುವ ಮೂಲಕ ಅತೀ ಹೆಚ್ಚು ಗಿಡಗಳನ್ನು ನೆಟ್ಟ ನಗರ ಎಂಬ ಕೀರ್ತಿಗೆ ಭಾಜನವಾಗಿದೆ.

ವಿಶೇಷ ಅಭಿಯಾನದಲ್ಲಿ ನಗರಾದ್ಯಂತ ಒಂದೇ ದಿನ ಬರೋಬ್ಬರಿ 11 ಲಕ್ಷ ಗಿಡಗಳನ್ನು ನೆಡಲಾಗಿದೆ ಈ ಮೂಲಕ ವಿನೂತನ ವಿಶ್ವ ದಾಖಲೆ ಸೃಷ್ಟಿಯಾಗಿದೆ. ಈ ಸಾಧನೆಯು ದೇಶದ ಸ್ವಚ್ಛ ನಗರ ಎಂಬ ಖ್ಯಾತಿಯ ಇಂದೋರ್‌ನ ಮುಕುಟಕ್ಕೆ ದೊರೆತ ಇನ್ನೊಂದು ಗರಿ ಎನಿಸಿಕೊಂಡಿದೆ.

ಅಲ್ಲದೆ ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಅವರು ಈ ದಾಖಲೆಗಾಗಿ ಗಿನ್ನೆಸ್ ಬುಕ್ ಆಫ್ ವರ್ಲ್ಡ್ ರೆಕಾರ್ಡ್ಸ್‌ನಿಂದ ಅಧಿಕೃತ ಪ್ರಮಾಣಪತ್ರವನ್ನು ಸ್ವೀಕರಿಸಿದ್ದಾರೆ. ಈ ಬಗ್ಗೆ ಟ್ವಿಟರ್‌ನಲ್ಲಿ ಮಾಹಿತಿ ನೀಡಿರುವ ಸಿಎಂ ಮೋಹನ್ ಯಾದವ್, ಇಂದೋರ್ ಈಗ ವಿಶ್ವದ ನಂಬರ್ ಒನ್ ಸ್ಥಾನದಲ್ಲಿದೆ. ಸ್ವಚ್ಛತೆ ವಿಚಾರದಲ್ಲಿ ಮಾದರಿಯಾದ ಇಲ್ಲಿನ ಜನತೆ ಇನ್ನೊಂದು ಇತಿಹಾಸವನ್ನು ಸೃಷ್ಟಿಸಿದ್ದಾರೆ. ಇದಕ್ಕೆ ಕಾರಣಕರ್ತರಾದ ಇಂದೋರ್‌ನ ನನ್ನ ಸಹೋದರ– ಸಹೋದರಿಯರಿಗೆ ಹೃತ್ಪೂರ್ವಕ ಅಭಿನಂದನೆಗಳು ಮತ್ತು ಶುಭಾಶಯಗಳು.



ಮಧ್ಯಪ್ರದೇಶದ ಆರ್ಥಿಕ ರಾಜಧಾನಿ ಮತ್ತು ನಮ್ಮ ದೇಶದ ಸ್ವಚ್ಛ ನಗರವಾದ ಇಂದೋರ್ ಒಂದೇ ದಿನದಲ್ಲಿ 11 ಲಕ್ಷಕ್ಕೂ ಹೆಚ್ಚು ಸಸಿಗಳನ್ನು ನೆಡುವ ಮೂಲಕ ವಿಶ್ವ ದಾಖಲೆಯನ್ನು ನಿರ್ಮಿಸಿದೆ ಎಂದು ಬರೆದುಕೊಂಡಿದ್ದಾರೆ.

ಅಲ್ಲಿಗೆ ಪ್ರಧಾನಿ ನರೇಂದ್ರ ಮೋದಿ ಅವರಿಂದ ಸ್ಫೂರ್ತಿಗೊಂಡು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರ ಉಪಸ್ಥಿತಿಯೊಂದಿಗೆ ಮಧ್ಯಪ್ರದೇಶವು ಈ ಗಮನಾರ್ಹ ಸಾಧನೆಯನ್ನು ಮಾಡಿದೆ. ಇದು ಪ್ರಕೃತಿ ಸಂರಕ್ಷಣೆಯ ಸಂದೇಶವನ್ನು ದೇಶದ ಜನತೆಗೆ ನೀಡಲಿದೆ ಎಂದು ಅವರು ಹೇಳಿದ್ದಾರೆ.

ಈ ಹಿಂದೆ ಅಸ್ಸಾಂನಲ್ಲಿ ಒಂದೇ ದಿನ 9,26000 ಸಸಿಗಳನ್ನು ನೆಡಲಾಗಿತ್ತು. ಇದು ಈ ವರೆಗಿನ ಗರಿಷ್ಠ ಸಾಧನೆಯಾಗಿತ್ತು. ಇದೀಗ ಇಂದೋರ್ ಸಾಧನೆಯನ್ನು ಹಿಂದಿಕ್ಕಿದೆ. ಈ ಬಗ್ಗೆ ಗಿನ್ನಿಸ್ ವಿಶ್ವ ದಾಖಲೆಯ ಸಲಹೆಗಾರ ನಿಶ್ಚಲ್ ಬರೋಟ್ ಮಾಹಿತಿ ನೀಡಿದ್ದು, ಈ ಹಿಂದೆ (2023ರಲ್ಲಿ) ಅಸ್ಸಾಂನಲ್ಲಿ ಒಂದೇ ದಿನ 9,26000 ಸಸಿಗಳನ್ನು ನಾಟಿ ಮಾಡಿದ್ದು ದಾಖಲೆಯಾಗಿತ್ತು ಇದೀಗ ಈ ದಾಖಲೆಯನ್ನು ಮಧ್ಯಪ್ರದೇಶ ಮುರಿದಿದೆ ಎಂದಿದ್ದಾರೆ. ಆವರಣದಲ್ಲಿ ತ್ರಿಶೂಲದ ಚಿತ್ರಕಲೆ ಪತ್ತೆಯಾಗಿದ್ದು, ಇದು ಶಿವನ ಆಯುಧ ಎಂದು ಪರಿಗಣಿಸಲಾಗುತ್ತದೆ. ಅಲ್ಲದೆ ವಿಷ್ಣು ಶಿಲ್ಪ ಮತ್ತು ದೇವಾಲಯದ ಅವಶೇಷಗಳು ಪತ್ತೆಯಾಗಿದ್ದು, ಕಂಬಗಳ ಮೇಲಿನ ಕಲೆ ಮತ್ತು ವಾಸ್ತುಶಿಲ್ಪವು ದೇವಾಲಯದ ಭಾಗವಾಗಿದ್ದವು ಎಂದು ಸೂಚಿಸುತ್ತದೆ. ಅಲ್ಲದೆ ವಿವಾದಿತ ಪ್ರದೇಶದ ಆವರಣದಲ್ಲಿ 13–14ನೇ ಶತಮಾನದ ನಾಣ್ಯಗಳು, 94 ಪುರಾತನ ಶಿಲ್ಪಗಳು ಪತ್ತೆಯಾಗಿವೆ ಎನ್ನಲಾಗಿದೆ.

31 ಪುರಾತನ ನಾಣ್ಯಗಳು ಪತ್ತೆ ಮಾರ್ಚ್ 22ರಂದು ಎಎಸ್‌ಐ ವೈಜ್ಞಾನಿಕ ಸಮೀಕ್ಷೆ ನಡೆಸಿತ್ತು. ಸಮೀಕ್ಷೆಯ ವೇಳೆ ಬೆಳ್ಳಿ, ತಾಮ್ರ, ಅಲ್ಯೂಮಿನಿಯಂ, ಉಕ್ಕಿನಿಂದ ತಯಾರಿಸಿದ ಒಟ್ಟು 31 ನಾಣ್ಯಗಳು ಪತ್ತೆಯಾಗಿವೆ. ಇವು ಪುರಾತನ ಕಾಲದ ನಾಣ್ಯಗಳಾಗಿವೆ ಎಂದು ವರದಿ ಹೇಳಿದೆ. ಈ ನಾಣ್ಯಗಳು ಇಂಡೋ–ಸಸ್ಸಾನಿಯನ್ (10ನೇ–11ನೇ ಶತಮಾನ), ದೆಹಲಿ ಸುಲ್ತಾನೇಟ್ (13ನೇ–14ನೇ ಶತಮಾನ), ಮಾಲ್ವಾ ಸುಲ್ತಾನೇಟ್ (15ನೇ–16ನೇ ಶತಮಾನ), ಮೊಘಲ್ (16ನೇ–18ನೇ ಶತಮಾನ), ಧಾರ್ ರಾಜ್ಯ (19ನೇ ಶತಮಾನ), ಮತ್ತು ಬ್ರಿಟಿಷ್ (19–20 ನೇ ಶತಮಾನ) ಕಾಲದ ನಾಣ್ಯಗಳು ಎಂಬುದನ್ನು ವರದಿ ತಿಳಿಸಿದೆ.

ಹಿಂದೂಗಳಿಂದ ಅರ್ಜಿ: ಮಧ್ಯಪ್ರದೇಶದ ಧಾರ್ ಜಿಲ್ಲೆಯಲ್ಲಿರುವ ಕಮಲ್ ಮೌಲಾ ಮಸೀದಿ ತಮಗೆ ಸೇರಿದ್ದು ಎಂದು ಹಿಂದೂಗಳು ಸಲ್ಲಿಸಿದ್ದ ಅರ್ಜಿಯ ಹಿನ್ನೆಲೆಯಲ್ಲಿ ಮಸೀದಿಯ ಸಂಕೀರ್ಣದ ವೈಜ್ಞಾನಿಕ ಸಮೀಕ್ಷೆಯನ್ನು ಕೈಗೊಳ್ಳುವಂತೆ ಮಾರ್ಚ್ 11ರಂದು ಹೈಕೋರ್ಟ್ ಆದೇಶಿಸಿತ್ತು. ಈ ಪ್ರಕ್ರಿಯೆ ಮುಗಿಸಲು ಕೋರ್ಟ್ 6 ವಾರಗಳ ಕಾಲಾವಕಾಶ ನೀಡಿತ್ತು. ಆದರೆ ಕಾಲಾವಕಾಶ ವಿಸ್ತರಣೆಗಳ ಬಳಿಕ ಈಗ ಎಎಸ್‌ಐ ತನ್ನ ವರದಿಯನ್ನು ಕೋರ್ಟ್‌ಗೆ ಸಲ್ಲಿಸಿದೆ. ಹಿಂದೂಗಳು ಭೋಜ ಶಾಲಾ ಸಂಕೀರ್ಣವನ್ನು ವಾಗ್ದೇವಿ ದೇಗುಲ ಎಂದು ಪರಿಗಣಿಸಿದರೆ, ಮುಸ್ಲಿಮರು ಕಮಲ್ ಮೌಲಾ ಮಸೀದಿ ಎಂದು ಕರೆಯುತ್ತಾರೆ.

ಹ್ಯಾಂಡ್ ಬ್ರೇಕ್ ಹಾಕದೇ ಇಳಿದ ಚಾಲಕ; ಕಾರು ಕಂದಕಕ್ಕೆ ಬಿದ್ದು ಬೆಂಗಳೂರಿನ ಮೂವರು ದುರ್ಮರಣ



ಬೆಂಗಳೂರು, ಜು.16– ಪ್ರವಾಸಕ್ಕೆಂದು ತೆರಳಿದ್ದ ಬೆಂಗಳೂರು ಮೂಲದ ಒಂದೇ ಕುಟುಂಬದ ಮೂವರು ಜಮ್ಮು–ಕಾಶ್ಮೀರದಲ್ಲಿ ದುರ್ಮರಣ ಹೊಂದಿದ್ದಾರೆ. ತಂದ್ರ ದಾಸ್(67), ಮೊನಾಲಿಸಾ ದಾಸ್(41) ಸೇರಿದಂತೆ ಮೂವರು ಮೃತಪಟ್ಟಿದ್ದಾರೆ.

ಬೆಳ್ಳಂದೂರಿನ ಗ್ರೀನ್ ಗ್ಲೆನ್ ಲೇಔಟ್ ನಿವಾಸಿಗಳಾಗಿದ್ದು, ಅಮರನಾಥ ಯಾತ್ರೆ ಸಮೀಪದ ಝೋಜಿಲ್ ಪಾಸ್ ಬಳಿ ಕಾರು ಪ್ರಪಾತಕ್ಕೆ ಬಿದ್ದು ಸಾವನ್ನಪ್ಪಿದ್ದಾರೆ. ದುರಂತ ಅಂದರೆ, ಚಾಲಕ ಹ್ಯಾಂಡ್ ಬ್ರೇಕ್ ಹಾಕದೇ ಇಳಿದು ಹೋಗಿದ್ದರಿಂದ ಕಾರು ಮೂವ್ ಆಗಿ ಕಂದಕಕ್ಕೆ ಉರುಳಿ ಬಿದ್ದಿದೆ.

ಮೃತಪಟ್ಟ ಕುಟುಂಬ ಜಮ್ಮು–ಕಾಶ್ಮೀರದಲ್ಲಿ ಬಾಡಿಗೆ ಕಾರಿನಲ್ಲಿ ಪ್ರಯಾಣಿಸುತ್ತಿತ್ತು. ಮಾರ್ಗಮಧ್ಯೆ ಅಮರನಾಥ ಸಮೀಪದ ಝೋಜಿಲ್ ಪಾಸ್ ಬಳಿ ಬೇರೊಂದು ಕಾರು ರಸ್ತೆಯಲ್ಲಿ ಕೆಟ್ಟು ನಿಂತಿದೆ. ಅದನ್ನು ನೋಡಲು ಕುಟುಂಬವನ್ನು ಕರೆದುಕೊಂಡು ಹೋಗುತ್ತಿದ್ದ ಚಾಲಕ ಕಾರು ನಿಲ್ಲಿಸಿದ್ದಾನೆ. ಕಾರು ಇಳಿದು ಹೋಗುವ ಮುನ್ನ ಕಾರಿನ ಹ್ಯಾಂಡ್ ಬ್ರೇಕ್ ಹಾಕುವುದನ್ನು ಮರೆತಿದ್ದಾನೆ. ಇದರಿಂದ ಕಾರು ತನ್ನಷ್ಟಕ್ಕೆ ತಾನೇ ಮೂವ್ ಆಗಿ ರಸ್ತೆ ಪಕ್ಕದಲ್ಲಿದ್ದ ಪ್ರಪಾತಕ್ಕೆ ಬಿದ್ದಿದೆ.

ಪರಿಣಾಮ ಬೆಂಗಳೂರಿನ ಬೆಳ್ಳಂದೂರಿನ ಗ್ರೀನ್ ಗ್ಲೆನ್ ಲೇಔಟ್‌ನ ಕುಟುಂಬ ದುರಂತ ಸಾವು ಕಂಡಿದ್ದಾರೆ. ಇನ್ನು CRPF, ಜಮ್ಮು–ಕಾಶ್ಮೀರ ಪೊಲೀಸರು, ಮೂವರ ಮೃತದೇಹಗಳನ್ನು ಹೊರತೆಗೆದಿದ್ದಾರೆ. ಅದೃಷ್ಟವಶಾತ್ ಘಟನೆಯಲ್ಲಿ 9 ವರ್ಷದ ಬಾಲಕಿ ಅದ್ರಿತಾ ದಾಸ್ ಬದುಕುಳಿದಿದ್ದು, ಆಕೆಯನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ.

ಟೊಮೆಟೊ ತೋಟಕ್ಕೆ ರಚಿತಾ ರಾಮ್, ಸನ್ನಿಲಿಯೋನ್ ಬ್ಯಾನರ್ ಕಟ್ಟಿದ ರೈತ!



ಚಿಕ್ಕಬಳ್ಳಾಪುರ, ಜು.16– ಟೊಮೆಟೊ ತೋಟದ ಮೇಲೆ ಯಾರ ವಕ್ರ ದೃಷ್ಟಿಯೂ ಬೀಳಬಾರದು ಅಂತ ದೃಷ್ಟಿ ದೋಷ ನಿವಾರಣೆಗೆ ಚಿಕ್ಕ ಬಳ್ಳಾಪುರದ ರೈತರೊಬ್ಬರು ವಿಭಿನ್ನ ಐಡಿಯಾ ಮಾಡಿದ್ದಾರೆ.

ಟೊಮೆಟೊ ತೋಟದಲ್ಲಿ ದೃಷ್ಟಿ ಬೊಂಬೆಗೆ ಬದಲಾಗಿ ನಟಿ ರಚಿತಾ ರಾಮ್ ಹಾಗೂ ಮಾದಕ ನಟಿ ಸನ್ನಿ ಲಿಯೋನ್ ಬ್ಯಾನರ್ ಕಟ್ಟಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆಯ ಶಿಡ್ಲಘಟ್ಟ ತಾಲೂಕಿನ ಹಂಡಿಗನಾಳ ಗ್ರಾಮದ ಯುವ ರೈತ ದೀಪಕ್ ಈ ಐಡಿಯಾ ಮಾಡಿದ್ದಾರೆ. ತಾವು 5 ಎಕರೆ ಭೂಮಿಯಲ್ಲಿ ಟೊಮೆಟೊ ಬೆಳೆದಿದ್ದಾರೆ. ಇನ್ನೇನು ಕಾಯಿ ಬಿಡುವ ಸಮಯವಿದೆ.

ಹೀಗಾಗಿ ಟೊಮೆಟೊ ಬೆಳೆ ಮೇಲೆ ಯಾರ ಕೆಟ್ಟ ಕಣ್ಣು ಬೀಳದಿರಲಿ, ಒಳ್ಳೆಯ ಫಸಲು ಬಂದು ಒಳ್ಳೆ ಲಾಭ ಸಿಗಲಿ ಅನ್ನೋ ಕಾರಣಕ್ಕೆ ದೃಷ್ಟಿ ಬೊಂಬೆ ಬದಲು ನಟಿಯರ ಭಾವಚಿತ್ರದ ಬ್ಯಾನರ್ ಅಳವಡಿಸಿದ್ದಾರೆ. ಸದ್ಯ ಚಿಕ್ಕಬಳ್ಳಾಪುರದಲ್ಲಿ ಟೊಮೆಟೊ ಪ್ರತಿ ಕ್ವಿಂಟಲ್ ಸುಮಾರು 3,500 ರೂ.ಗೆ ಮಾರಾಟವಾಗುತ್ತಿದೆ.

ಡಿಸಿಎಂ ಡಿಕೆಶಿ ಶೂ ಕಳವು

ಬೆಂಗಳೂರು: ನಗರದ ಕೆಲ ರಸ್ತೆಗಳಿಗೆ ವೈಟ್ ಟಾಪಿಂಗ್ ಮಾಡುವ ಕಾಮಗಾರಿಗೆ ಚಾಲನೆ ನೀಡುವ ವೇಳೆ ಉಪ ಮುಖ್ಯ ಮಂತ್ರಿ ಡಿ.ಕೆ.ಶಿವಕುಮಾರ್ ಶೂಗಳನ್ನೇ ಖದೀಮರು ಕದ್ದಿರುವ ಘಟನೆ ನಡೆದಿದೆ.



ರಾಜ್ಯ ಸರ್ಕಾರವು ಬೆಂಗಳೂರಿನ ಆಯ್ದ ಮುಖ್ಯ ರಸ್ತೆಗಳಿಗೆ ವೈಟ್ ಟಾಪಿಂಗ್ ಅಳವಡಿಸಲು ನಿರ್ಧರಿಸಿದೆ. ವೈಟ್ ಟಾಪಿಂಗ್‌ನಿಂದಾಗಿ, ಡಾಂಬರ್ ರಸ್ತೆಗಳನ್ನು ದೀರ್ಘ ಕಾಲ ಬಾಳಿಕೆ ಬರುವಂತ ರಸ್ತೆಗಳನ್ನಾಗಿ ಪರಿವರ್ತಿಸುವ ಯೋಜನೆ ಇದಾಗಿದೆ.

ಇದರ ಉದ್ಘಾಟನೆಯನ್ನು ರಾಜಾಜಿನಗರದ ಭಾಷ್ಯಂ ಸರ್ಕಲ್‌ನಲ್ಲಿ ಜು. 15ರ ಬೆಳಗ್ಗೆ ಚಾಲನೆ ನೀಡಲಾಯಿತು. ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್, ಮಲ್ಲೇಶ್ವರಂ ಶಾಸಕ ಹಾಗೂ ಮಾಜಿ ಉಪ ಮುಖ್ಯಮಂತ್ರಿ ಅಶ್ವತ್ಥ್ ನಾರಾಯಣ್ ಸೇರಿದಂತೆ ಅನೇಕ ಗಣ್ಯರು ಈ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಕಾಮಗಾರಿ ಆರಂಭಕ್ಕಾಗಿ ಸಾಂಕೇತಿಕವಾಗಿ ಗುದ್ದಲಿ ಪೂಜೆಯನ್ನು ಗಣ್ಯರು ನೆರವೇರಿಸಲು ಮುಂದಾದಾಗ ಔಪಚಾರಿಕವಾಗಿ ಡಿಕೆಶಿ ಹಾಗೂ ಮೊದಲಾದ ಗಣ್ಯರು ತಮ್ಮ ಪಾದರಕ್ಷೆಗಳನ್ನು ಅಲ್ಲೇ ಪಕ್ಕದಲ್ಲೇ ಬಿಟ್ಟಿದ್ದರು.

ಡಿಕೆಶಿಯವರೂ ಪೂಜೆ ನಡೆಯುವ ಅನತಿ ದೂರದಲ್ಲೇ ತಮ್ಮ ಶೂಗಳನ್ನು ಕಳಚಿ, ಪೂಜೆ ನಡೆಯುವ ಜಾಗಕ್ಕೆ ಬಂದರು. ಆದರೆ, ಇದೇ ಸಂದರ್ಭವನ್ನು ಬಳಸಿಕೊಂಡಿರುವ ಯಾರೋ ಖದೀಮರು ಡಿಕೆಶಿಯವರ ಶೂಗಳನ್ನೇ ಕದ್ದಿದ್ದಾರೆ.

ಪೂಜೆ ಮುಗಿಸಿ ಬಂದ ಡಿಕೆಶಿಯವರಿಗೆ ತಮ್ಮ ಶೂಗಳನ್ನು ಯಾರೋ ಎಗರಿಸಿದ್ದಾರೆ ಎಂಬುದು ತಿಳಿದಿದೆ. ಅಲ್ಲೇ ಅಕ್ಕಪಕ್ಕ ಹುಡುಕಾಡಿದರೂ ಶೂಗಳು ಸಿಗಲಿಲ್ಲ.

ಉಗ್ರರ ದಾಳಿ: ಪಾಕಿಸ್ತಾನದ 10 ಯೋಧರ ಸಾವು

ಪೇಶಾವರ, ಜು.16– ಖೈಬರ್ ಪಖ್ತುಂಖ್ವಾ ಪ್ರಾಂತ್ಯದಲ್ಲಿರುವ ಸೇನಾ ದಂಡು ಪ್ರದೇಶದ ಮೇಲೆ ಉಗ್ರರು ನಡೆಸಿದ ದಾಳಿಯಲ್ಲಿ ಪಾಕಿಸ್ತಾನದ ಎಂಟು ಯೋಧರು ಬಲಿಯಾಗಿದ್ದಾರೆ.

ಹತ್ತು ಉಗ್ರರ ಗುಂಪು ಈ ದಾಳಿ ನಡೆಸಿತ್ತು. ಸೇನೆ ನಡೆಸಿದ ಪ್ರತಿ ದಾಳಿಯಲ್ಲಿ ಹತ್ತು ಭಯೋತ್ಪಾದಕರೂ ಮೃತಪಟ್ಟಿದ್ದಾರೆ ಎಂದು ಸೇನಾ ಅಧಿಕಾರಿಯೊಬ್ಬರು ಮಂಗಳವಾರ ತಿಳಿಸಿದ್ದಾರೆ.

ಈ ಸಂಬಂಧ ಹೇಳಿಕೆ ಬಿಡುಗಡೆ ಮಾಡಿರುವ ಪಾಕಿಸ್ತಾನದ ಸೇನೆಯು, ಬಾನು ಸೇನಾ ದಂಡು ಪ್ರದೇಶಕ್ಕೆ ನುಗ್ಗಿ ದೊಡ್ಡ ದಾಳಿ ನಡೆಸಲು ಉಗ್ರರು ಈ ಕೃತ್ಯವೆಸಗಿದ್ದು, ಪ್ರತಿದಾಳಿಯ ಮೂಲಕ ಎಲ್ಲ ಉಗ್ರರನ್ನು ಸೇನೆ ಸದೆಬಡಿದಿದೆ. ಇದರೊಂದಿಗೆ ದೊಡ್ಡ ಅನಾಹುತವೊಂದು ತಪ್ಪಿದೆ ಎಂದು ಹೇಳಲಾಗಿದೆ.

ಅಫಿಡವಿಟ್‌ನಲ್ಲಿ ಸುಳ್ಳು ಮಾಹಿತಿ ಆರೋಪ

ಸಿಎಂ ಸಿದ್ದರಾಮಯ್ಯ ವಿರುದ್ಧ ಚುನಾವಣಾ ಆಯೋಗಕ್ಕೆ 2 ಪ್ರತ್ಯೇಕ ದೂರು



ಬೆಂಗಳೂರು, ಜು.16–ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಚುನಾವಣಾ ಆಯೋಗಕ್ಕೆ ಎರಡು ಪ್ರತ್ಯೇಕ ದೂರು ಸಲ್ಲಿಕೆಯಾಗಿದೆ. 2018–23ರ ಚುನಾವಣೆಯ ಅಫಿಡವಿಟ್‌ನಲ್ಲಿ ಸಿದ್ದರಾಮಯ್ಯ ಅವರು ಸುಳ್ಳು ಮಾಹಿತಿ ನೀಡಿದ್ದಾರೆ ಎಂದು ಆರೋಪಿಸಿ ಸಾಮಾಜಿಕ ಕಾರ್ಯಕರ್ತ ಟಿ.ಜೆ.ಅಬ್ರಹಾಂ ದೂರು ಸಲ್ಲಿಸಿದ್ದಾರೆ.

2018ರ ವಿಧಾನಸಭೆ ಚುನಾವಣೆ ವೇಳೆ ಸಿದ್ದರಾಮಯ್ಯ ಅವರು ನೀಡಿದ್ದ ಅಫಿಡವಿಟ್‌ನಲ್ಲಿ ಪತ್ನಿ ಪಾರ್ವತಿ ಹೆಸರಿನಲ್ಲಿ 3 ಎಕರೆ 16 ಗುಂಟೆ ಕೃಷಿ ಜಮೀನು ಇದ್ದು, ಇದರ ಮೌಲ್ಯ 25 ಲಕ್ಷ ರೂ. ಎಂದು ನಮೂದಿಸಿದ್ದಾರೆ. ಆದರೆ, 2005ರಲ್ಲೇ ಈ ಜಮೀನು ಪರಿವರ್ತನೆ ಮಾಡಿಸಿದ್ದ ದಾಖಲೆ ನೀಡಿ ದೂರು ಸಲ್ಲಿಸಿದ್ದಾರೆ. 2023ರ ವಿಧಾನಸಭೆ ಚುನಾವಣೆ ವೇಳೆ 14 ಮುಡಾ ಸೈಟ್‌ಗಳ ಮೌಲ್ಯ ಕೇವಲ 8 ಕೋಟಿ ಎಂದು ಅಫಿಡವಿಟ್‌ನಲ್ಲಿ ನಮೂದಿಸಿದ್ದಾರೆ.

ಇನ್ನು ಮುಡಾದ 14 ಸೈಟ್‌ಗಳ ಅಸಲಿ ಮಾರುಕಟ್ಟೆ ಮೌಲ್ಯ 34 ಕೋಟಿ ರೂಪಾಯಿಯಾಗಿದ್ದು, ಉದ್ದೇಶಪೂರ್ವಕವಾಗಿ ಸಿಎಂ ತಪ್ಪು ಮಾಹಿತಿ ನೀಡಿದ್ದಾರೆ ಎಂದು ಮುಖ್ಯ ಚುನಾವಣಾಧಿಕಾರಿಗೆ ಸಾಮಾಜಿಕ ಹೋರಾಟಗಾರ ಟಿ.ಜೆ.ಅಬ್ರಹಾಂ ಅವರು ಎರಡನೇ ದೂರು ಸಲ್ಲಿಸಿದ್ದಾರೆ. ಮುಡಾ ಹಗರಣದ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಅವರ ತಲೆಗೆ ಮತ್ತೊಂದು ದೂರು ದಾಖಲಾಗಿದೆ.

ದೇಶ - ವಿದೇಶ

ಭಾರತ ಮೂಲದ ಉಷಾ ಚಿಲುಕುರಿ ಪತಿ ಜೆಡಿ ವ್ಯಾನ್ಸ್ ಉಪಾಧ್ಯಕ್ಷ ಅಭ್ಯರ್ಥಿ

ವಾಷಿಂಗ್ಟನ್: ಕಳೆದ ಬಾರಿಯ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಉಪಾಧ್ಯಕ್ಷ ಅಭ್ಯರ್ಥಿಯಾಗಿ ಭಾರತೀಯ ಮೂಲದ ಕಮಲಾ ಹ್ಯಾರೀಸ್ ಸಾಕಷ್ಟು ಗಮನ ಸೆಳೆದಿದ್ದರು.



ಉಷಾ ಚಿಲುಕುರಿ, ಜೆಡಿ ವ್ಯಾನ್ಸ್

2024ರ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಅವರ ರಿಪಬ್ಲಿಕನ್ ಪಕ್ಷದ ಉಪಾಧ್ಯಕ್ಷ ಅಭ್ಯರ್ಥಿಯಾಗಿರುವ ಜೆಡಿ ವ್ಯಾನ್ಸ್ ಅವರ ಪತ್ನಿ ಉಷಾ ಚಿಲುಕುರಿ ವ್ಯಾನ್ಸ್ ಭಾರತೀಯ ಮೂಲದವರಾಗಿರುವುದು ವಿಶೇಷವಾಗಿದೆ.

ನಾನು ಕ್ರಿಶ್ಚಿಯನ್ ಧರ್ಮದಲ್ಲಿ ಹುಟ್ಟಿ ಬೆಳೆದವನು, ನಾನ್ಯಾವತ್ತೂ ಬ್ಯಾಪ್ಟಿಸ್ಟ್ ಆಗಿರಲಿಲ್ಲ. ಉಷಾ ಹಿಂದೂ ಧರ್ಮವನ್ನು ಅನುಸರಿಸುತ್ತಿದ್ದು, ನನ್ನ ಪ್ರತಿಯೊಂದು ಕೆಲಸಕ್ಕೂ ಬೆಂಬಲವಾಗಿ ನಿಲ್ಲುತ್ತಿರುವುದಾಗಿ ಜೆಡಿ ವ್ಯಾನ್ಸ್ ತಿಳಿಸಿದ್ದಾರೆ.

ಉಷಾ ಅವರು ಭಾರತೀಯ ವಲಸಿಗ ದಂಪತಿಯ ಪುತ್ರಿಯಾಗಿದ್ದು, ಭಾರತೀಯ ಸಂಸ್ಕೃತಿ ಹಾಗೂ ಮೌಲ್ಯಗಳನ್ನು ಅಳವಡಿಸಿಕೊಂಡಿರುವುದಾಗಿ ವರದಿ ಹೇಳಿದೆ. ಜೆಡಿ ವ್ಯಾನ್ಸ್ ಮತ್ತು ಉಷಾ 2014ರಲ್ಲಿ ಅಮೆರಿಕದ ಕೆಂಟುಕಿಯಲ್ಲಿ ಹಿಂದೂ ಪುರೋಹಿತರ ನೇತೃತ್ವದಲ್ಲಿ ವಿವಾಹವಾಗಿದ್ದರು.

ವರದಿಯ ಪ್ರಕಾರ, ಉಷಾ ವ್ಯಾನ್ಸ್ ಯಾಲೆ ಯೂನಿವರ್ಸಿಟಿಯಲ್ಲಿ ಇತಿಹಾಸದ ಪದವಿ ಪಡೆದಿದ್ದು, ನಂತರ ಕೇಂಬ್ರಿಡ್ಜ್ ವಿವಿಯಿಂದ ಮಾಸ್ಟರ್ ಆಫ್ ಫಿಲಾಸಫಿಯಲ್ಲಿ ಮಾಸ್ಟರ್ ಡಿಗ್ರಿ ಪಡೆದಿದ್ದರು. ಸ್ಯಾನ್ ಡಿಯಾಗೋ, ಕ್ಯಾಲಿಫೋರ್ನಿಯಾದಲ್ಲಿ ಬೆಳೆದ ಉಷಾ, ಯಾಲೆ ಜರ್ನಲ್ ಆಫ್ ಲಾ & ಟೆಕ್ನಾಲಜಿಯ ಕಾರ್ಯನಿರ್ವಾಹಕ ಸಂಪಾದಕರಾಗಿ ಹಾಗೂ ದ ಯಾಲೆ ಲಾ ಜರ್ನಲ್‌ನ ಎಕ್ಸಿಕ್ಯೂಟಿವ್ ಡೆವಲಪ್‌ಮೆಂಟ್ ಎಡಿಟರ್ ಆಗಿ ಕಾರ್ಯನಿರ್ವಹಿಸಿದ್ದರು.

ಅನಂತ್ ಅಂಬಾನಿ ಮದುವೆಗೆ ಬಾಂಬ್ ಬೆದರಿಕೆ: ಗುಜರಾತ್ ಮೂಲದ ಇಂಜಿನಿಯರ್ ಬಂಧನ

ನವದೆಹಲಿ: ಅನಂತ್ ಅಂಬಾನಿ ಮತ್ತು ರಾಧಿಕಾ ಮರ್ಚೆಂಟ್ ಮದುವೆಗೆ ಬಾಂಬ್ ಬೆದರಿಕೆ ಹಾಕಿ ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿದ್ದ 32 ವರ್ಷದ ಎಂಜಿನಿಯರ್ ಅನ್ನು ಬಂಧಿಸಿದ್ದಾರೆ. ವ್ಯಾಪಕ ಕಳವಳವನ್ನು ಉಂಟುಮಾಡಿದ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳ ಬಗ್ಗೆ ಸಂಪೂರ್ಣ ತನಿಖೆಯ ನಂತರ ಬಂಧಿಸಲಾಗಿದೆ ಎಂದು ಮುಂಬೈ ಪೊಲೀಸರು ತಿಳಿಸಿದ್ದಾರೆ.



ಬಂಧಿತ ಆರೋಪಿಯನ್ನು ವಡೋದರ ನಿವಾಸಿ ವಿರಾಲ್ ಶಾ ಎಂದು ಗುರುತಿಸಲಾಗಿದೆ. ಗುಜರಾತ್‌ನಲ್ಲಿರುವ ವಿರಾಲ್ ಶಾ ನಿವಾಸದಿಂದ ಮುಂಬೈ ಪೊಲೀಸರ ಅಪರಾಧ ವಿಭಾಗದ ಅಧಿಕಾರಿಗಳು ಇಂದು ಬೆಳಿಗ್ಗೆ ಅವರನ್ನು ಬಂಧಿಸಿದ್ದಾರೆ. ಪೋಸ್ಟ್ ನಂತರ ಪೊಲೀಸರು ಮದುವೆ ಕಾರ್ಯಕ್ರಮದ ಭದ್ರತೆಯನ್ನು ಹೆಚ್ಚಿಸಿದರು. ಸಂಭಾವ್ಯ ಬೆದರಿಕೆಯ ಕುರಿತು ಪೊಲೀಸರು ತನಿಖೆಯನ್ನು ಸಹ ಪ್ರಾರಂಭಿಸಲಾಗಿದೆ ಎಂದು ಅವರು ಹೇಳಿದರು.

ದೋಡಾದಲ್ಲಿ ಎನ್‌ಕೌಂಟರ್: ಅಧಿಕಾರಿ ಸೇರಿದಂತೆ ನಾಲ್ವರು ಯೋಧರು ಹುತಾತ್ಮ

ನವದೆಹಲಿ: ಜಮ್ಮು-ಕಾಶ್ಮೀರದ ದೋಡಾ ಜಿಲ್ಲೆಯಲ್ಲಿ ಉಗ್ರರ ಜೊತೆ ನಡೆಯುತ್ತಿರುವ ಎನ್‌ಕೌಂಟರ್‌ನಲ್ಲಿ ಓರ್ವ ಅಧಿಕಾರಿ ಸೇರಿದಂತೆ ನಾಲ್ವರು ಭಾರತೀಯ ಸೇನಾ ಯೋಧರು ಹುತಾತ್ಮರಾಗಿದ್ದಾರೆ.



ಭಯೋತ್ಪಾದಕರು ಅಡಗಿದ್ದಾರೆ ಎಂಬ ಖಚಿತ ಮಾಹಿತಿಯ ಮೇರೆಗೆ ಭಾರತೀಯ ಸೇನೆ ಮತ್ತು ಜಮ್ಮು ಮತ್ತು ಕಾಶ್ಮೀರ ಪೊಲೀಸರು ದೋಡಾದ ದೇಸಾದ ಅರಣ್ಯ ಪ್ರದೇಶದಲ್ಲಿ ಜಂಟಿ ಕಾರ್ಯಾಚರಣೆ ನಡೆಸುತ್ತಿದ್ದಾರೆ. ರಾತ್ರಿ 9 ಗಂಟೆಯಿಂದ ಉಗ್ರರ ಜೊತೆ ಗುಂಡಿನ ಕಾಳಗ ಆರಂಭವಾಗಿದೆ. ಉಗ್ರರು ಬೆಟ್ಟದ ತುದಿಯಲ್ಲಿ ಅವಿತುಕೊಂಡು ದಾಳಿ ಮಾಡುತ್ತಿರುವ ಕಾರಣ ಕಾರ್ಯಾಚರಣೆ ಕಷ್ಟವಾಗುತ್ತಿದೆ. ಕಳೆದ ವಾರ ಕಥುವಾದಲ್ಲಿ ಐವರು ಯೋಧರು ಹುತಾತ್ಮರಾದ ನಂತರ ಜಮ್ಮು ಪ್ರದೇಶದಲ್ಲಿ ನಡೆದ ಎರಡನೇ ಪ್ರಮುಖ ಎನ್‌ಕೌಂಟರ್ ಇದಾಗಿದೆ. ಈ ದಾಳಿಯಲ್ಲಿ ಐವರು ಸೈನಿಕರು ಗಾಯಗೊಂಡಿದ್ದರು, ಕನಿಷ್ಠ 12 ಸೈನಿಕರನ್ನು ಹೊತ್ತ ಎರಡು ಟ್ರಕ್‌ಗಳ ಮೇಲೆ ಉಗ್ರರು ದಾಳಿ ನಡೆಸಿದ್ದರು. ಭಯೋತ್ಪಾದಕರು 500 ಮೀಟರ್ ದೂರ ದಿಂದ ಟ್ರಕ್‌ಗಳನ್ನು ಗುರಿಯಾಗಿಸಿ ಗ್ರೆನೇಡ್ ಎಸೆದಿದ್ದರು. ಕಳೆದ 32 ತಿಂಗಳುಗಳಲ್ಲಿ ಜಮ್ಮು ಪ್ರದೇಶದಲ್ಲಿ ಉಗ್ರರ ಜೊತೆಗಿನ ಕಾಳಗದಲ್ಲಿ 48 ಯೋಧರು ಹುತಾತ್ಮರಾಗಿದ್ದಾರೆ.

ಸ್ವಾತಿ ಮಲಿವಾಲ್ ಪ್ರಕರಣ: ಬಿಭವ್ ಕುಮಾರ್ ವಿರುದ್ಧ ಆರೋಪಪಟ್ಟಿ ಸಲ್ಲಿಕೆ

ದೆಹಲಿ: ಆಮ್ ಆದ್ಮಿ ಪಕ್ಷದ ರಾಜ್ಯಸಭಾ ಸಂಸದೆ ಸ್ವಾತಿ ಮಲಿವಾಲ್ ಅವರ ಮೇಲಿನ ಹಲ್ಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರು ಮಂಗಳವಾರ ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಅವರ ಸಹಾಯಕ ಬಿಭವ್‌ಕುಮಾರ್ ವಿರುದ್ಧ ಆರೋಪಪಟ್ಟಿ ಸಲ್ಲಿಸಿದ್ದಾರೆ. ತೀಸ್ ಹಜಾರಿ ನ್ಯಾಯಾಲಯವು ಜುಲೈ 30ರವರೆಗೆ ಅವರ ನ್ಯಾಯಾಂಗ ಬಂಧನವನ್ನು ವಿಸ್ತರಿಸಿದ ದಿನದಂದು ಆರೋಪಪಟ್ಟಿಯನ್ನು ಸಲ್ಲಿಸಲಾಗಿದ್ದು ಮುಂದಿನ ವಿಚಾರಣೆಯ ದಿನಾಂಕದಂದು ಅವರನ್ನು ಖುದ್ದಾಗಿ ಹಾಜರುಪಡಿಸುವಂತೆ ಜೈಲು ಅಧೀಕ್ಷಕರಿಗೆ ಸೂಚಿಸಲಾಗಿದೆ.



ಕೇಜ್ರಿವಾಲ್ ಅವರ ನಿವಾಸದಲ್ಲಿ ಭದ್ರತಾ ಸಿಬ್ಬಂದಿ ಸಾಕ್ಷಿಗಳಾಗಿರುವ 1,000 ಪುಟಗಳ ಚಾರ್ಜ್‌ಶೀಟ್ ಸಿದ್ಧಪಡಿಸಲಾಗಿದೆ ಎಂದು ದೆಹಲಿ ಪೊಲೀಸ್ ಮೂಲಗಳು ಪಿಟಿಐಗೆ ತಿಳಿಸಿವೆ. ಪೊಲೀಸರು ಮುಖ್ಯಮಂತ್ರಿ ನಿವಾಸದಿಂದ ಡಿವಿಆರ್ ಅನ್ನು ಸಂಗ್ರಹಿಸಿದ್ದು, ಕುಮಾರ್ ಅವರ ಎರಡು ಮೊಬೈಲ್ ಫೋನ್‌ಗಳು ಸೇರಿದಂತೆ ಹಲವು ಗ್ಯಾಜೆಟ್‌ಗಳನ್ನು ವಶಪಡಿಸಿಕೊಂಡಿದ್ದಾರೆ. ತನ್ನ ಮೊಬೈಲ್ ಫೋನ್‌ಗಳಿಂದ ಅಳಿಸಲಾದ ಡೇಟಾವನ್ನು ಮರುಪಡೆಯಲು ಕುಮಾರ್ ಅವರನ್ನು ಪೊಲೀಸ್ ಕಸ್ಟಡಿಯಲ್ಲಿ ಎರಡು ಬಾರಿ ಮುಂಬೈಗೆ ಕರೆದೊಯ್ಯಲಾಯಿತು. ಮೇ 13ರಂದು ಕೇಜ್ರಿವಾಲ್ ಅವರ ನಿವಾಸಕ್ಕೆ ಹೋದಾಗ ಬಿಭವ್‌ಕುಮಾರ್ ತನ್ನ ಎದೆ, ಹೊಟ್ಟೆ ಮತ್ತು ಸೊಂಟಕ್ಕೆ 7-8 ಬಾರಿ ಹೊಡೆದಿದ್ದಾರೆ ಎಂದು ಮಲಿವಾಲ್ ಎಫ್‌ಐಆರ್‌ನಲ್ಲಿ ಆರೋಪಿಸಿದ್ದರು.

NEET-UG ಪ್ರಶ್ನೆ ಪತ್ರಿಕೆ ಸೋರಿಕೆ ಹಗರಣ: ಇಬ್ಬರ ಬಂಧನ!

ನವದೆಹಲಿ: ಎನ್‌ಇಇಟಿ-ಯುಜಿ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣದಲ್ಲಿ ಸಿಬಿಐ ಇಬ್ಬರು ವ್ಯಕ್ತಿಗಳನ್ನು ಬಂಧಿಸಿದೆ. ಬಂಧನಕ್ಕೆ ಒಳಗಾಗಿರುವ ವ್ಯಕ್ತಿಗಳ ಪೈಕಿ, ಜಾರ್ಖಂಡ್‌ನ ಹಜಾರಿಬಾಗ್‌ನಲ್ಲಿ ಎನ್‌ಟಿಎ ಟ್ರಂಕ್‌ನಿಂದ ಪ್ರಶ್ನೆ ಪತ್ರಿಕೆ ಕದ್ದಿದ್ದ ವ್ಯಕ್ತಿಯೂ ಇದ್ದಾನೆ. ಈ ಇಬ್ಬರ ಬಂಧನದ ಮೂಲಕ ಪ್ರಕರಣಕ್ಕೆ ಸಂಬಂಧಿಸಿದಂತೆ ಬಂಧನಕ್ಕೊಳಗಾದವರ ಸಂಖ್ಯೆ 14ಕ್ಕೆ ಏರಿಕೆಯಾಗಿದೆ.

ಹಜಾರಿಬಾಗ್‌ನ ಎನ್‌ಟಿಎ ಟ್ರಂಕ್‌ನಿಂದ ನೀಟ್-ಯುಜಿ ಪೇಪರ್ ಅನ್ನು ಕದ್ದ ಆರೋಪದ ಮೇಲೆ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ (ಎನ್‌ಐಟಿ) ಜಮ್‌ಶೆಡ್‌ಪುರದ 2017ರ ಬ್ಯಾಚ್ ಸಿವಿಲ್ ಎಂಜಿನಿಯರ್, ಬೊಕಾರೊ ನಿವಾಸಿ ಪಂಕಜ್‌ಕುಮಾರ್ ಅಲಿಯಾಸ್ ಆದಿತ್ಯ ಎಂಬಾತನನ್ನು ಪಾಟ್ನಾದಲ್ಲಿ ಬಂಧಿಸಲಾಗಿದೆ ಎಂದು ಏಜೆನ್ಸಿ ತಿಳಿಸಿದೆ. ಪತ್ರಿಕೆಯನ್ನು ಕದ್ದು ಇತರ ಗ್ಯಾಂಗ್ ಸದಸ್ಯರಿಗೆ ರವಾನಿಸಲು ಕುಮಾರ್‌ಗೆ ಸಹಾಯ ಮಾಡಿದ ಆರೋಪದ ಮೇಲೆ ರಾಜು ಸಿಂಗ್‌ನನ್ನು ಸಿಬಿಐ ಬಂಧಿಸಿದೆ, ಸಿಂಗ್ ಎಂಬಾತನನ್ನು ಹಜಾರಿಬಾಗ್‌ನಿಂದ ಬಂಧಿಸಲಾಗಿದೆ. ವೈದ್ಯಕೀಯ ಪ್ರವೇಶ ಪರೀಕ್ಷೆಯಲ್ಲಿನ ಅಕ್ರಮಗಳ ಬಗ್ಗೆ ತನಿಖೆ ನಡೆಸುತ್ತಿರುವ ಸಂಸ್ಥೆಯು 6 ಎಫ್‌ಐಆರ್‌ಗಳನ್ನು ದಾಖಲಿಸಿದೆ. ಬಿಹಾರದ ಎಫ್‌ಐಆರ್ ಪ್ರಶ್ನೆಪತ್ರಿಕೆ ಸೋರಿಕೆಗೆ ಸಂಬಂಧಿಸಿದೆ ಮತ್ತು ಗುಜರಾತ್, ರಾಜಸ್ಥಾನ ಮತ್ತು ಮಹಾರಾಷ್ಟ್ರದ ಉಳಿದವು ಅಭ್ಯರ್ಥಿಗಳ ಸೋಗು ಮತ್ತು ವಂಚನೆಗೆ ಸಂಬಂಧಿಸಿವೆ.

ಮೇಕೆದಾಟು ಯೋಜನೆಯಿಂದ ನಮಗಿಂತ ನಿಮಗೇ ಅನುಕೂಲ; ಯೋಜನೆ ಜಾರಿಗೆ ಸಹಕರಿಸಿ...

ಉಪ ಮುಖ್ಯಮಂತ್ರಿ, ಜಲ ಸಂಪನ್ಮೂಲ ಸಚಿವರೂ ಆದ ಡಿ.ಕೆ.ಶಿವಕುಮಾರ್ ತಮಿಳ್ನಾಡಿಗೆ ಮನವಿ

ಬೆಂಗಳೂರು, ಜು.16(ಕೆಎಂಶಿ)- ಮೇಕೆದಾಟು ಯೋಜನೆಯಿಂದ ಕರ್ನಾಟಕಕ್ಕಿಂತ ತಮಿಳುನಾಡಿಗೇ ಹೆಚ್ಚು ಅನುಕೂಲ ಆಗಲಿದ್ದು, ಯೋಜನೆ ಜಾರಿಗೆ ಸಹಕಾರ ನೀಡುವಂತೆ ನಮ್ರತೆಯಿಂದ ಕೇಳಿಕೊಳ್ಳುವುದಾಗಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇಂದಿಲ್ಲಿ ತಮಿಳುನಾಡು ಸರ್ಕಾರಕ್ಕೆ ಮನವಿ ಮಾಡಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕಾವೇರಿ ನೀರಿನ ವಿಚಾರದಲ್ಲಿ ನಾವು ಸರ್ವಪಕ್ಷ ಸಭೆ ಮಾಡಿದಂತೆ, ತಮಿಳುನಾಡು ಸರ್ಕಾರ ಸಹ ಸರ್ವಪಕ್ಷ ಸಭೆ ಮಾಡುತ್ತಿದ್ದಾರೆ. ಅದು ಅವರ ಹಕ್ಕು, ಅವರ ಸಭೆಗೆ ನಮ್ಮ ಆಕ್ಷೇಪವಿಲ್ಲ. ಆದರೆ ಅವರಿಗೂ ಹೆಚ್ಚು ಅನುಕೂಲವಾಗುವ ಮೇಕೆದಾಟು ಯೋಜನೆ ಜಾರಿಗೆ ಸಹಕಾರ ನೀಡಬೇಕು ಎಂದರು.

ರಾಜ್ಯದಲ್ಲಿ ನಿನ್ನೆಯಿಂದ ಹೆಚ್ಚು ಮಳೆ ಬೀಳುತ್ತಿದೆ. ಕಾವೇರಿ ಕೊಳ್ಳದ ಅಣೆಕಟ್ಟುಗಳ ಒಳಹರಿವು ಪ್ರಮಾಣ ಹೆಚ್ಚಿದೆ. ಹಾರಂಗಿ ಜಲಾಶಯದಿಂದ 20 ಸಾವಿರ ಕ್ಯೂಸೆಕ್ ನೀರು ಹೊರಬಿಡಲಾಗುತ್ತಿದೆ, ಮಳೆಯೇ ನಮಗೆ ಆಧಾರ. ತಮಿಳುನಾಡು ಸರ್ಕಾರಕ್ಕೆ ಮನವಿ ಮಾಡಿಕೊಳ್ಳುತ್ತೇನೆ, ನಿಮ್ಮ ಹಿತಾಸಕ್ತಿ ಕಾಪಾಡುವುದಕ್ಕಾಗಿ ಮೇಕೆದಾಟು ಯೋಜನೆಗೆ ಸಹಕಾರ ನೀಡಿ, ಈ ಅಣೆಕಟ್ಟೆಯಲ್ಲಿ ಸಂಗ್ರಹವಾದ ನೀರನ್ನು ನಿಮಗೇ ಬಿಡಲಾಗುವುದು. ಬೆಂಗಳೂರಿನಲ್ಲಿ ಕನ್ನಡಿಗರು, ತಮಿಳಿಗರು, ಆಂಧ್ರದವರು ಸೇರಿದಂತೆ ಉತ್ತರ ಭಾರತದ ರಾಜ್ಯಗಳ





ಜನರೂ ವಾಸಿಸುತ್ತಿದ್ದಾರೆ. ಎಲ್ಲರಿಗೂ ಕುಡಿಯುವ ನೀರು ಲಭಿಸಲಿದೆ. ಆದ್ದರಿಂದ ಮೇಕೆದಾಟು ಯೋಜನೆಗೆ ಸಹಕಾರ ನೀಡುವಂತೆ ಕರ್ನಾಟಕ ರಾಜ್ಯದ ಪರವಾಗಿ ವಿನಮ್ರವಾಗಿ ಮನವಿ ಮಾಡುತ್ತೇವೆ ಎಂದರು. ಮಳೆ ಇದೇ ರೀತಿ ಬಿದ್ದರೆ, ತಮಿಳು ನಾಡಿಗೆ ಖಂಡಿತವಾಗಿ ನೀರು ಬಿಡುಗಡೆ ಮಾಡುತ್ತೇವೆ, ಬಿಡಲೇಬೇಕು. ಒಳಹರಿವು ಹೆಚ್ಚಳವಾದರೆ ನೀರನ್ನು ಹರಿಸಲೇಬೇಕು, ಹಿಡಿದಿಟ್ಟುಕೊಳ್ಳಲು ಆಗುವುದಿಲ್ಲ.

ಹೆಚ್‌ಡಿಕೆ ಸಿನಿಮಾ ಶೈಲಿ!: ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಸಿನಿಮಾ ಶೈಲಿಯಲ್ಲಿ ಮಾತನಾಡುತ್ತಿದ್ದಾರೆ. ಸರ್ವಪಕ್ಷ ಸಭೆಗೆ ಗೋಡಂಬಿ, ದ್ರಾಕ್ಷಿ ತಿನ್ನಲು ಹೋಗಬೇಕಿತ್ತಾ ಎಂಬ ಹೇಳಿಕೆ ಕೊಟ್ಟಿದ್ದಾರೆ. ಅವರನ್ನು ಗೋಡಂಬಿ, ದ್ರಾಕ್ಷಿ ತಿನ್ನಲು ನಾವು ಕರೆದಿದ್ದೇವಾ? ಹಾಗಿದ್ದರೆ, ಅವರು ತಮ್ಮ ಪಕ್ಷದ ನಾಯಕರನ್ನು ಸರ್ವಪಕ್ಷ ಸಭೆಗೆ ಗೋಡಂಬಿ, ದ್ರಾಕ್ಷಿ ತಿನ್ನಲು ಕಳುಹಿಸಿದ್ದರೆ? ಅವರಿಗೆ ರಾಜಕಾರಣ, ಟೀಕೆ, ಆರೋಪ, ಹಿಟ್ ಅಂಡ್ ರನ್ ಮಾಡುವುದು ಬಿಟ್ಟರೆ, ಕಾವೇರಿ ನೀರು, ರೈತರ ಹಿತ, ರಾಜ್ಯದ ಹಿತದ ಬಗ್ಗೆ ಕಿಂಚಿತ್ತೂ ಕಾಳಜಿ ಇಲ್ಲ ಎಂದು ಟೀಕಿಸಿದರು.

ಕುಮಾರಸ್ವಾಮಿಗೆ ಅಸೂಯೆ: ಕುಮಾರಸ್ವಾಮಿ ಅವರಿಗೆ ಅಸೂಯೆ ಬಿಟ್ಟರೆ ಬೇರೇನೂ ಇಲ್ಲ, ಮೊದಲಿಂದಲೂ ವೈಯಕ್ತಿಕ ದಾಳಿ ಮಾಡಿಕೊಂಡು ಬಂದಿದ್ದಾರೆ. ಬಹಿರಂಗವಾಗಿ ಚರ್ಚೆ ಮಾಡೋಣ ಬಾ ಎಂದು ಕರೆಯುತ್ತಿದ್ದೇನೆ. ಕಳೆದ ಬಾರಿ ಸದನದಲ್ಲಿ ಚರ್ಚೆಗೆ ಕರೆದಾಗಲೂ ಬರಲಿಲ್ಲ. ತಮ್ಮ ವಿರುದ್ಧದ ಸಿಬಿಐ ಪ್ರಕರಣ ರದ್ದು ಅರ್ಜಿಯನ್ನು ಸುಪ್ರೀಂಕೋರ್ಟ್ ತಿರಸ್ಕರಿಸಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಈಗಾಗಲೇ ಈ ಪ್ರಕರಣದ ತನಿಖೆಯನ್ನು ಲೋಕಾಯುಕ್ತ ಸಂಸ್ಥೆ ತನಿಖೆ ನಡೆಸುತ್ತಿದೆ. ಸಿಬಿಐ ತನ್ನ ವ್ಯಾಪ್ತಿ ಮೀರಿ ಪ್ರಕರಣ ತನಿಖೆಗೆ ಮುಂದಾಗಿರುವುದು ಏಕೆ ಎಂಬುದು ಅರ್ಥವಾಗುತ್ತಿಲ್ಲ. ನಾನು ಯಾವುದೇ ತಪ್ಪು ಮಾಡಿಲ್ಲ. ಮುಂದಿನ ಒಂದೆರಡು ದಿನಗಳಲ್ಲಿ ಅವರ ಮುಂದೆ ಹೋಗಿ ನನ್ನ ವಾದ ಮಂಡಿಸುತ್ತೇನೆ. ತನಿಖೆ ಹೆಸರಲ್ಲಿ ನನ್ನ ಜತೆ ವ್ಯವಹಾರ ಮಾಡಿದವರಿಗೆ ಕಿರುಕುಳ ನೀಡಲಾಗಿದೆ ಎಂದರು.

ಅಮಿಗೋ ಸೂಪರ್ ಮಾರ್ಕೆಟ್‌ನಿಂದ ಬಟ್ಟೆ ಬ್ಯಾಗ್ ವಿತರಣೆ



ಮೈಸೂರಿನ ದಟ್ಟಗಳ್ಳಿಯ ಅಮಿಗೋ ಸೂಪರ್ ಮಾರ್ಕೆಟ್‌ನಿಂದ ಮೈಸೂರು ಮಹಾನಗರಪಾಲಿಕೆ ವಲಯ ಕಚೇರಿಯಲ್ಲಿ ಮಂಗಳವಾರ ಬಟ್ಟೆ ಬ್ಯಾಗ್‌ಗಳನ್ನು ವಿತರಿಸಲಾಯಿತು. ವಲಯಾಧಿಕಾರಿ ಸತ್ಯಮೂರ್ತಿ, ಕಂದಾಯಾಧಿಕಾರಿ ಬಸವಣ್ಣ, ಎಆರ್‌ಓ ಶಿವಕುಮಾರ್, ಸಂತೋಷ್, ಹೆಲ್ತ್ ಇನ್‌ಸ್ಪೆಕ್ಟರ್‌ಗಳಾದ ಸೋಮಶೇಖರ್, ಪ್ರಭಾಕರ, ಸಿಬ್ಬಂದಿಗಳಾದ ರಾಣಿ, ತೇಜು, ಸೂಪರ್ ಮಾರ್ಕೆಟ್‌ನ ರಿಯಾಜ್‌ರನ್ನು ಚಿತ್ರದಲ್ಲಿ ಕಾಣಬಹುದು.

ಮುಡಾ ಹಗರಣ: ಕಾಟಾಚಾರದ ತನಿಖೆ ಶಂಕೆ

ಮೈಸೂರು, ಜು.16(ಜಿಎ)-ಮುಡಾದಲ್ಲಿ ನಡೆದಿರುವ 50:50 ಅನುಪಾತದ ನಿವೇಶನ ಹಂಚಿಕೆ ಹಗರಣ ಕುರಿತಂತೆ ಸರ್ಕಾರ ತನಿಖೆ ನಡೆಸಲು ಆಯೋಗ ರಚಿಸಿರುವುದು ಸ್ವಾಗತಾರ್ಹ. ಆದರೆ, ಸ್ವತಃ ಸಿಎಂ ಕುಟುಂಬದ ಮೇಲೆ ಆರೋಪಗಳಿರುವ ಕಾರಣ ತನಿಖೆ ಕಾಟಾಚಾರಕ್ಕೆ ನಡೆಯುವ ಶಂಕೆಯಿದೆ ಎಂದು ಕರ್ನಾಟಕ ರಾಷ್ಟ್ರ ಸಮಿತಿ ಪಕ್ಷ ಆರೋಪಿಸಿದೆ.



ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ರಾಜ್ಯ ಸಂಘಟನಾ ಕಾರ್ಯದರ್ಶಿ ಎಂ.ರವಿಕುಮಾರ್ ಮಾತನಾಡಿ, ಸಿಎಂ ಸಲಹೆ ಮೇರೆಗೆ ನಗರಾಭಿವೃದ್ಧಿ ಯೋಜನೆಗಳ ನಿರ್ದೇಶನಾಲಯದ ಆಯುಕ್ತರಾದ ವೆಂಕಟಾಚಲಪತಿ ನೇತೃತ್ವದಲ್ಲಿ ತನಿಖೆಗೆ ವಿಶೇಷ ತಂಡ ನೇಮಕ ಮಾಡಲಾಗಿತ್ತು. ಆದರೆ ಫಲಿತಾಂಶವೇನು, ಮುಡಾದಿಂದ ತೆಗೆದುಕೊಂಡು ಹೋದ ಕಡತಗಳು ಏನಾದವು ಎಂದು ಪ್ರಶ್ನಿಸಿದರು. ಸಿಎಂ ಕುಟುಂಬ ಸ್ವತಃ ಆರೋಪ ಎದುರಿಸುತ್ತಿರುವ ಹಿನ್ನೆಲೆಯಲ್ಲಿ ತನಿಖಾ ವರದಿ ಅವರಿಗೇ ಸಲ್ಲಿಸಿದಲ್ಲಿ ತಿರುಚುವ, ಒತ್ತಡ ಹಾಕುವ ಅನುಮಾನವಿದೆ. ಹೀಗಾಗಿ ಸಿಎಂ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಅಲ್ಲದೆ, ಉಚ್ಚ ನ್ಯಾಯಾಲಯದ ಹಾಲಿ ನ್ಯಾಯಾಧೀಶರಿಂದ ತನಿಖೆ ನಡೆಸಬೇಕೆಂದು ಒತ್ತಾಯಿಸಿದರು. ಗೋಷ್ಠಿಯಲ್ಲಿ ಪ್ರೇಮ್‌ಕುಮಾರ್, ಎನ್.ನಾಗೇಂದ್ರ, ಆನಂದನ್ ಇದ್ದರು.

ರುಡ್‌ಸೆಟ್ ಸಂಸ್ಥೆಯಲ್ಲಿ ವಿಶ್ವ ಯುವ ಕೌಶಲ ದಿನಾಚರಣೆ



ಮೈಸೂರಿನ ರುಡ್‌ಸೆಟ್ ಸಂಸ್ಥೆಯಲ್ಲಿ ಸೋಮವಾರ ವಿಶ್ವ ಯುವ ಕೌಶಲ ದಿನಾಚರಣೆಯನ್ನು ಆಯೋಜಿಸಲಾಗಿತ್ತು.

ಮೈಸೂರು, ಜು.16-ಮೈಸೂರಿನ ರುಡ್‌ಸೆಟ್ ಸಂಸ್ಥೆಯಲ್ಲಿ ವಿಶ್ವ ಯುವ ಕೌಶಲ ದಿನಾಚರಣೆಯನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ರುಡ್‌ಸೆಟ್ ಸಂಸ್ಥೆಯಿಂದ ತರಬೇತಿ ಪಡೆದು ವಿವಿಧ ಕ್ಷೇತ್ರಗಳಲ್ಲಿ ಯಶಸ್ವಿಯಾದ ಇಬ್ಬರು ಯುವ ಉದ್ಯಮಶೀಲರನ್ನು ಅಭಿನಂದಿಸಲಾಯಿತು. ಮುಖ್ಯ ಅತಿಥಿಗಳಾಗಿ ಎಸ್.ಬಿ.ಐ. ಲೀಡ್ ಬ್ಯಾಂಕ್ ಲೀಡ್ ಡಿಸ್ಟ್ರಿಕ್ಟ್ ಮ್ಯಾನೇಜರ್ ವಿ.ಎನ್.ನಾಗೇಶ್ ಭಾಗವಹಿಸಿದ್ದರು.

ಬಳಿಕ ಮಾತನಾಡಿದ ಅವರು, ನಾವು ಯಾವಾಗಲೂ, ಯಾವ ಪರಿಸ್ಥಿತಿಗೂ ಪ್ರಸ್ತುತವಾಗಿ ಉಳಿಯಲು ಕೌಶಲವನ್ನು ಉನ್ನತೀಕರಿಸುವುದು ಯಶಸ್ಸಿನ ಗುಟ್ಟು ಎಂದು ಅಭಿಪ್ರಾಯಪಟ್ಟರು. ಹೊಸ ಕೌಶಲಗಳನ್ನು ಕಲಿಯುತ್ತಿರಬೇಕು. ಆ ಮೂಲಕ ನಮ್ಮ ಅಗತ್ಯತೆಯ ಮೌಲ್ಯಗಳನ್ನು ಬೆಳೆಸುತ್ತಾ ಹೋಗಬೇಕು, ನಮ್ಮ ದೈನಂದಿನ ಜೀವನದಲ್ಲಿ ಕೆಲಸ, ಕೌಶಲಗಳ ಜೊತೆ ಸೃಜನಾತ್ಮಕವಾಗಿ ಹೊಸದನ್ನು ಕಲಿಯುವುದರಿಂದ, ಕೌಶಲದ ಮಟ್ಟವನ್ನು ಬೆಳೆಸಿಕೊಳ್ಳುತ್ತಾ ಇದ್ದರೆ ಆಗ ನಾವು ಯಾವ ಕಾಲಕ್ಕೂ ಸಲ್ಲುವವರಾಗಿ, ಎಂದಿಗೂ ಪ್ರಸ್ತುತವಾಗಿ ಉಳಿಯುತ್ತೇವೆ ಎಂದು ಶಿಬಿರಾರ್ಥಿಗಳಿಗೆ ಸಲಹೆ ನೀಡಿದರು.

ರುಡ್‌ಸೆಟ್ ಸಂಸ್ಥೆಯ ನಿರ್ದೇಶಕಿ ಶ್ರೀಮತಿ ಸರಿತಾ ಕೆ.ಎಸ್.ಅಧ್ಯಕ್ಷತೆ ವಹಿಸಿ ಮಾತನಾಡಿ, ಜೀವನದಲ್ಲಿ ಏಳಿಗೆ ಸಾಧಿಸಲು ವೃತ್ತಿ ಕೌಶಲಗಳ ಅಭಿವೃದ್ಧಿ ಮಾಡಿಕೊಳ್ಳುವುದು ಮುಖ್ಯ. ಕೌಶಲಗಳಲ್ಲಿ ಮೂರು ವಿಧ-ಅರಿವಿನ ಕೌಶಲಗಳು, ತಾಂತ್ರಿಕ ಕೌಶಲಗಳು ಮತ್ತು ಪರಸ್ಪರ ಕೌಶಲಗಳನ್ನು ಅಭಿವೃದ್ಧಿಗೊಳಿಸಿಕೊಳ್ಳುವುದರಿಂದ ವೃತ್ತಿಯಲ್ಲಿ ದಕ್ಷತೆ ಮತ್ತು ನೈಪುಣ್ಯತೆಯನ್ನು ಸಾಧಿಸಬಹುದು ಎಂದು ಸಲಹೆ ನೀಡಿದರು. ಆರ್ಥಿಕ ಸಾಕ್ಷರ ಕೇಂದ್ರದ ಸಮಾಲೋಚಕ ಡಿ.ಟಿ.ವೆಂಕಟೇಶ್, ದೇಸಿರಿ ಉತ್ಪನ್ನದ ಮಾಲೀಕ ನವೀನ್, ಶ್ರೀಮತಿ ಶ್ವೇತಾ ಅವರ ಯಶಸ್ವಿ ಉದ್ಯಮಶೀಲ ಗೌರವ ಸನ್ಮಾನ ಸ್ವೀಕರಿಸಿದರು. ಸಂಸ್ಥೆಯ ಉಪನ್ಯಾಸಕ ಪಾಲ್‌ರಾಜ್ ಆರ್. ಸ್ವಾಗತಿಸಿದರು. ಉಪನ್ಯಾಸಕಿ ಲತಾ ಮಣಿ ನಿರೂಪಿಸಿದರು ಕಾರ್ಯಕ್ರಮದಲ್ಲಿ 55 ಜನ ಶಿಬಿರಾರ್ಥಿಗಳು ಸೇರಿದಂತೆ ಸಂಸ್ಥೆಯ ಸಿಬ್ಬಂದಿ ವರ್ಗದವರು ಹಾಜರಿದ್ದರು.

ಎನ್.ವಿ.ರಮೇಶ್ 'ಸಮಗ್ರ ಮಕ್ಕಳ ಸಾಹಿತ್ಯ' ಕೃತಿ ಬಿಡುಗಡೆ



ಎನ್.ವಿ.ರಮೇಶ್ ಅವರ 'ಸಮಗ್ರ ಮಕ್ಕಳ ಸಾಹಿತ್ಯ' ಪುಸ್ತಕ ಬಿಡುಗಡೆ ಮಾಡಲಾಯಿತು.

ಮೈಸೂರು,ಜು.16-ಮೈಸೂರಿನ ಅಭಿರುಚಿ ಬಳಗದ ವತಿಯಿಂದ ಇಂಧನ ಉಳಿತಾಯ, ಜನಸಂಖ್ಯಾ ಸಮಸ್ಯೆಯ ಜಾಗೃತಿ, ಯುವ ಕೌಶಲ ಹಾಗೂ ಸಾಮಾಜಿಕ ಮಾಧ್ಯಮಗಳ ಅರಿವು ಮುಂತಾದ ವಿಷಯಗಳ ಬಗ್ಗೆ ಕಾರ್ಯಕ್ರಮ ನಡೆಯಿತು.

ಬೆಂಗಳೂರು-ಧಾರವಾಡ ಹೈಕೋರ್ಟ್ ಹಿರಿಯ ನ್ಯಾಯವಾದಿ ಡಾ.ರೇವಣ್ಣ ಬಳ್ಳಾರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಸಾಹಿತಿಗಳು-ಓದುಗರು ಕನ್ನಡ ನಾಡಿನಲ್ಲಿ ಕನ್ನಡ ಪುಸ್ತಕಗಳ ಬರಹ, ಓದುವಿಕೆ, ಪುಸ್ತಕಗಳ ಕೊಳ್ಳುವಿಕೆಯ ಮೂಲಕ ಸರಸ್ವತಿಯ ಆರಾಧನೆ ಮಾಡಬೇಕು ಎಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಅಭಿನಯ ಭಾರ್ಗವ ಕೆಂಪರಾಜು ಅವರು ಕಲಾರಾಧನೆಯೇ ಜೀವನದ ಗುರಿ ಎಂದರು. ಈ ಸಂದರ್ಭದಲ್ಲಿ ಎನ್.ವಿ. ರಮೇಶ್ ಅವರ ಸಮಗ್ರ ಮಕ್ಕಳ ಸಾಹಿತ್ಯ ಪುಸ್ತಕವನ್ನು ಬಿಡುಗಡೆ ಮಾಡಲಾಯಿತು. ಲೇಖಕರೂ ಹಾಗೂ ಸಾರ್ವಜನಿಕ ಗ್ರಂಥಾಲಯ ಇಲಾಖೆಯ ಪುಸ್ತಕ ಆಯ್ಕೆ ಸಮಿತಿಯ ಸದಸ್ಯರಾದ ಭದ್ರಾವತಿ ರಾಮಾಚಾರಿ, ಸುಜಾತ ರವೀಶ್, ಲತಾ ಮೋಹನ್ ಹಾಗೂ ಸಿ.ಎನ್. ಭಾಗ್ಯಲಕ್ಷ್ಮಿ ನಾರಾಯಣ, ಕುಮಾರ್ ಆರ್.ಎ, ಪ್ರಭಾಶಾಸ್ತ್ರೀ, ಲತಾಮೋಹನ್, ಮೋಹನ್, ಮಮತ ಸುಧೀಂದ್ರ, ಉಮಾ ರಮೇಶ್ ಮತ್ತಿತರರು ಉಪಸ್ಥಿತರಿದ್ದರು.

ಲೋಕ ಅದಾಲತ್: ಸಂಧಾನದ ಮೂಲಕ 40 ಲಕ್ಷ ಪ್ರಕರಣ ಇತ್ಯರ್ಥ; 2,640 ಕೋಟಿ ಪರಿಹಾರ

ಬೆಂಗಳೂರು, ಜು.16- ಪ್ರಸಕ್ತ ಸಾಲಿನ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ರಾಜ್ಯದಲ್ಲಿ 40,03,411 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ಒಟ್ಟಾರೆ 2,640 ಕೋಟಿ ಮೊತ್ತವನ್ನು ಪರಿಹಾರದ ರೂಪದಲ್ಲಿ ಕೊಡಿಸುವ ಮೂಲಕ ಹೊಸ ದಾಖಲೆ ಸೃಷ್ಟಿಯಾಗಿದೆ.

ಈ ಕುರಿತಂತೆ ಹೈಕೋರ್ಟ್‌ನ ಕಾನೂನು ಸೇವಾ ಪ್ರಾಧಿಕಾರದ ಕಚೇರಿಯಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ರಾಜ್ಯ ಕಾನೂನು ಸೇವಾ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರಾಗಿರುವ ನ್ಯಾಯಮೂರ್ತಿ ವಿ.ಕಾಮೇಶ್ವರ್ ರಾವ್, ಹೈಕೋರ್ಟ್ ಮತ್ತು ವಿಚಾರಣಾಧೀನ ನ್ಯಾಯಾಲಯದಲ್ಲಿನ ಬಾಕಿ ಇರುವ 2,64,675 ಪ್ರಕರಣ ಮತ್ತು ವಿಚಾರಣಾಧೀನ ನ್ಯಾಯಾಲಯಗಳಲ್ಲಿನ 37,38,766 ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಹೈಕೋರ್ಟ್‌ನ ಬೆಂಗಳೂರು, ಧಾರವಾಡ ಮತ್ತು ಕಲಬುರ್ಗಿ ಪೀಠಗಳಲ್ಲಿ ಕ್ರಮವಾಗಿ ಬಾಕಿ ಇದ್ದ 701, 434 ಮತ್ತು 520 ಪ್ರಕರಣಗಳು ಸೇರಿ 1,655 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ಮಾಹಿತಿ ನೀಡಿದರು.

1,033 ಪೀಠಗಳ ರಚನೆ: ಹೈಕೋರ್ಟ್‌ನ ಬೆಂಗಳೂರು, ಧಾರವಾಡ ಮತ್ತು ಕಲಬುರ್ಗಿ ಪೀಠಗಳಲ್ಲಿ ಕ್ರಮವಾಗಿ 9, 5 ಮತ್ತು 3 ಪೀಠಗಳನ್ನು ಒಳಗೊಂಡು ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ 1,016 ಪೀಠ ಸೇರಿ ಒಟ್ಟಾರೆ 1,033 ಪೀಠಗಳನ್ನು ರಚಿಸಲಾಗಿತ್ತು.

ಆಸ್ತಿ ತೆರಿಗೆ 694 ಕೋಟಿ ಸಂಗ್ರಹ: ಕೆಎಸ್‌ಎಲ್‌ಎಸ್‌ಎ ಕೋರಿಕೆಯ ಮೇರೆಗೆ ರಾಜ್ಯ ಸರ್ಕಾರವು ಆಸ್ತಿ ತೆರಿಗೆ ಪಾವತಿಗೆ ವಿನಾಯಿತಿ ನೀಡಿ ಕಾಲಾವಧಿ ವಿಸ್ತರಣೆ ಮಾಡಿದ್ದರಿಂದ 9,00,935 ಪ್ರಕರಣಗಳು ಇತ್ಯರ್ಥವಾಗಿದ್ದು, ಸರ್ಕಾರದ ಬೊಕ್ಕಸಕ್ಕೆ 694 ಕೋಟಿ ಹರಿದು ಬಂದಿದೆ.

ಇತರೆ ಪ್ರಮುಖ ಅಂಶಗಳು

ಪ್ರಸಕ್ತ ಲೋಕ ಅದಾಲತ್‌ನಲ್ಲಿ 1,550 ವೈವಾಹಿಕ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದ್ದು, ಸುಮಾರು 259 ದಂಪತಿ ಮತ್ತೆ ಒಂದಾಗುವ ಮೂಲಕ ವ್ಯಾಜ್ಯಕ್ಕೆ ತೆರೆ ಎಳೆದಿದ್ದಾರೆ.

3,356 ಆಸ್ತಿ ವಿಭಾಗ ದಾವೆಗಳು; 5,220 ಮೋಟಾರು ವಾಹನ ಅಪರಾಧ ಪರಿಹಾರ ಪ್ರಕರಣ ಬಗೆಹರಿಸಲಾಗಿದ್ದು, 260 ಕೋಟಿ ಪರಿಹಾರ ಕೊಡಿಸಲಾಗಿದೆ. ಇನ್ನು 11,155 ಚೆಕ್ ಬೌನ್ಸ್ ಪ್ರಕರಣಗಳಿಗೆ ಪರಿಹಾರ ಸೂಚಿಸಲಾಗಿದೆ.

261 ಭೂಸ್ವಾಧೀನ ಆದೇಶಗಳ ಜಾರಿ ಪ್ರಕರಣಗಳಲ್ಲಿ 101 ಕೋಟಿ ಪರಿಹಾರ ಕೊಡಿಸುವುದರೊಂದಿಗೆ ಸುಖಾಂತ್ಯ ಕಂಡಿವೆ. 61 ಕೋಟಿ ಪರಿಹಾರ ಪಾವತಿ ಮಾಡುವಂತೆ ಮಾಡುವುದರೊಂದಿಗೆ 897 ಮೋಟಾರು ವಾಹನಗಳಿಗೆ ಸಂಬಂಧಿಸಿದ ಪರಿಹಾರ ಆದೇಶ ಜಾರಿ ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ. ಇತರೆ 3,769 ಆದೇಶ ಜಾರಿ ಪ್ರಕರಣಗಳು ಇತ್ಯರ್ಥಗೊಂಡಿದ್ದು, 118 ಕೋಟಿ ಪರಿಹಾರ ಕೊಡಿಸಲಾಗಿದೆ. ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿನ 15 ಪ್ರಕರಣಗಳು ಇತ್ಯರ್ಥಪಡಿಸಲಾಗಿದ್ದು, 122 ಕೋಟಿಯನ್ನು ಇತ್ಯರ್ಥದ ಭಾಗವಾಗಿ ಕೊಡಿಸಲಾಗಿದೆ.

ಜು.19ರಂದು ಗುರುವಂದನಾ ಸಮಾರಂಭ; ದಾಸವೈಭವ ಸಾಂಸ್ಕೃತಿಕ ಕಾರ್ಯಕ್ರಮ

ಮೈಸೂರು, ಜು. 16-ಶ್ರೀ ಕೃಷ್ಣ ಟ್ರಸ್ಟ್ ಮತ್ತು ಶ್ರೀ ಕೃಷ್ಣ ಮಿತ್ರ ಮಂಡಳಿ ವತಿಯಿಂದ ಜು.19ರಂದು ಸಂಜೆ 5 ಗಂಟೆಗೆ ಸರಸ್ವತಿಪುರಂನ ಶ್ರೀಕೃಷ್ಣಧಾಮದಲ್ಲಿ ಉಡುಪಿ ಶ್ರೀ ಪೇಜಾವರ ಅಧೋಕ್ಷಜ ಮಠದ ಸಂಸ್ಥಾನಾಧೀಶರಾದ ಶ್ರೀ ಶ್ರೀ ವಿಶ್ವಪ್ರಸನ್ನ ತೀರ್ಥ ಶ್ರೀಪಾದಂಗಳವರಿಗೆ ಮತ್ತು ಉಡುಪಿ ಶ್ರೀ ಪಲಿಮಾರು ಮಠದ ಸಂಸ್ಥಾನಾಧೀಶರಾದ ಶ್ರೀ ಶ್ರೀ ವಿದ್ಯಾಧೀಶ ತೀರ್ಥ ಶ್ರೀಪಾದಂಗಳವರಿಗೆ ಗುರುವಂದನಾ ಸಮಾರಂಭ ಏರ್ಪಡಿಸಲಾಗಿದೆ.

ಅದೇ ದಿನ ಸಂಜೆ ಶ್ರೀಮತಿ ದಿವ್ಯಾ ಗಿರಿಧರ್ ಮತ್ತು ಅನಂತರಾಜ್ ಮಿಸ್ತ್ರಿ ತಂಡದವರಿಂದ ದಾಸವೈಭವ ಸಾಂಸ್ಕೃತಿಕ ಕಾರ್ಯಕ್ರಮ ಏರ್ಪಡಿಸಲಾಗಿದೆ.


ಇಂದು ಭಾರತೀಯ ಭಾಷಾ ಸಂಸ್ಥಾಪನಾ ದಿನಾಚರಣೆ ಉದ್ಘಾಟನಾ ಸಮಾರಂಭ

ಮೈಸೂರು, ಜು.16-ಭಾರತೀಯ ಭಾಷಾ ಸಂಸ್ಥಾನ, ಉನ್ನತ ಶಿಕ್ಷಣ ಇಲಾಖೆ, ಶಿಕ್ಷಣ ಸಚಿವಾಲಯ, ಭಾರತ ಸರ್ಕಾರ, ಮಾನಸಗಂಗೋತ್ರಿ ಮೈಸೂರು ಇವರ ವತಿಯಿಂದ 56ನೇ ಸಂಸ್ಥಾಪನಾ ದಿನಾಚರಣೆಯ ಉದ್ಘಾಟನಾ ಸಮಾರಂಭವನ್ನು ಜುಲೈ 17ರಂದು ಬೆಳಗ್ಗೆ 10.30 ಗಂಟೆಗೆ ಸಂಸ್ಥೆಯ ಥಿಯೇಟರ್‌ನಲ್ಲಿ ಹಮ್ಮಿಕೊಳ್ಳಲಾಗಿದೆ. ಮುಖ್ಯ ಅತಿಥಿಗಳಾಗಿ ನವದೆಹಲಿಯ ಸಿಎಸ್‌ಟಿಟಿ ಮುಖ್ಯಸ್ಥರಾದ ಗಿರೀಶ್ ನಾಥ್ ಝಾ ಭಾಗವಹಿಸಲಿದ್ದು, ಗೌರವ ಅತಿಥಿಗಳಾಗಿ ನವದೆಹಲಿಯ ಎನ್‌ಬಿಟಿಯ ನಿರ್ದೇಶಕ ಕರ್ನಲ್ ಯುವರಾಜ್ ಮಲ್ಲಿಕ್ ಗೌರವ ಉಪಸ್ಥಿತಿ ಇರಲಿದ್ದಾರೆ. ನವದೆಹಲಿಯ ಶಿಕ್ಷಣ ಸಚಿವಾಲಯದ ಜಂಟಿ ಕಾರ್ಯದರ್ಶಿ ನಿತಾ ಪ್ರಸಾದ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.



ಪೊಲೀಸರ ವರ್ಗಾವಣೆಗೆ ಮಾರ್ಗಸೂಚಿ

ಬೆಂಗಳೂರು, ಜು.16- ಪೊಲೀಸ್ ಇಲಾಖೆ ಸಿಬ್ಬಂದಿಯನ್ನು (ಪೊಲೀಸ್ ಕಾನ್‌ಸ್ಟೆಬಲ್) ಒಂದು ಘಟಕದಿಂದ ಇನ್ನೊಂದು ಘಟಕಕ್ಕೆ ಕೋರಿಕೆ ಆಧಾರದ ಮೇಲೆ ವರ್ಗಾವಣೆಗೆ ರಾಜ್ಯ ಸರ್ಕಾರ ಮಾರ್ಗಸೂಚಿ ಪ್ರಕಟಿಸಿದೆ.



ಅಂತರ ಜಿಲ್ಲಾ, ಘಟಕಗಳ ವರ್ಗಾವಣೆಗೆ ಇಲಾಖೆಯಿಂದ ರೂಪಿಸಲಾಗಿರುವ ಅಧಿಕೃತ ಆನ್‌ಲೈನ್ ಪೋರ್ಟಲ್‌ನಲ್ಲಿ ಸಲ್ಲಿಕೆಯಾಗುವ ಅರ್ಜಿಗಳನ್ನು ಮಾತ್ರವೇ ಪರಿಗಣಿಸಬೇಕು. ಪ್ರತಿ ಘಟಕದಿಂದ ವರ್ಗಾವಣೆ ಆಗಿ ಹೋಗುವ ಸಿಬ್ಬಂದಿ ಸಂಖ್ಯೆ ಶೇ 15ಕ್ಕಿಂತ ಹೆಚ್ಚಿರಬಾರದು. ಸೇವಾ ಜ್ಯೇಷ್ಠತೆ ಆಧಾರದ ಮೇಲೆಯೇ ವರ್ಗಾವಣೆ ನಡೆಸಬೇಕು. ಎಲ್ಲ ವೃಂದದ ವರ್ಗಾವಣೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳ ನಿರಾಕ್ಷೇಪಣಾ ಪತ್ರ ಕಡ್ಡಾಯ ಆಗಿರುತ್ತದೆ ಎಂದು ಆದೇಶ ಹೇಳಿದೆ. ಇಲಾಖೆ ವಿಚಾರಣೆ ಅಥವಾ ಪ್ರಕರಣಗಳು ನ್ಯಾಯಾಲಯದಲ್ಲಿ ನಡೆಯುತ್ತಿದ್ದರೆ ಅಂತಹ ಸಿಬ್ಬಂದಿಯ ವರ್ಗಾವಣೆಗೆ ಅವಕಾಶ ಇರುವುದಿಲ್ಲ. ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಹುದ್ದೆ ಹಾಗೂ ಘಟಕದಲ್ಲಿ ಕನಿಷ್ಠ ಏಳು ವರ್ಷಗಳಿಂದ ಇದ್ದರೆ (ಮುಂಬಡ್ತಿ ಹುದ್ದೆಯಲ್ಲಿರುವ ಸಿಬ್ಬಂದಿ ಸೇರಿದಂತೆ) ಮಾತ್ರ ವರ್ಗಾವಣೆಗೆ ಅರ್ಹರಾಗಿರುತ್ತಾರೆ (ಮಾಜಿ ಸೈನಿಕ ಪ್ರಕರಣದಲ್ಲಿ ಕನಿಷ್ಠ ಮೂರು ವರ್ಷ).

ಅಂತರ ಜಿಲ್ಲೆ, ಘಟಕಗಳ ವರ್ಗಾವಣೆಯನ್ನು ಕೋರಿಕೆ ಮೇಲೆ ಮಾಡುವುದರಿಂದ ಜ್ಯೇಷ್ಠತೆಯನ್ನು ಬಿಟ್ಟುಕೊಡುವ ಷರತ್ತಿಗೆ ಒಳಪಟ್ಟು ಮಾಡಲಾಗುವುದು. ಅಂತಹ ನೌಕರರ ಜ್ಯೇಷ್ಠತೆಯನ್ನು ವರ್ಗಾವಣೆಗೊಂಡ ಘಟಕದಲ್ಲಿನ ಕೇಡರ್‌ನ ಕೊನೆಯವರಾಗಿ ಪರಿಗಣಿಸಲಾಗುವುದು. ಒಂದಕ್ಕಿಂತ ಹೆಚ್ಚಿನ ಅರ್ಜಿಯನ್ನು ಸಲ್ಲಿಸಿದ್ದರೆ ಮೊದಲ ಅಧಿಕೃತ ಅರ್ಜಿಯನ್ನು ಮಾತ್ರವೇ ಪರಿಗಣಿಸಲಾಗುವುದು ಎಂದು ತಿಳಿಸಲಾಗಿದೆ.

ಎಲ್ಲ ಘಟಕಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪೊಲೀಸ್ ಕಾನ್‌ಸ್ಟೇಬಲ್, ಹೆಡ್ ಕಾನ್‌ಸ್ಟೇಬಲ್ ಹಾಗೂ ಸಹಾಯಕ ಸಬ್‌ಇನ್‌ಸ್ಪೆಕ್ಟರ್ ಅವರ ಕನಿಷ್ಠ ಮತ್ತು ಗರಿಷ್ಠ ಅವಧಿ ನಿಗದಿಪಡಿಸಿ ವರ್ಗಾವಣೆ ಮಾಡಬೇಕು ಎಂದು ಸೂಚಿಸಲಾಗಿದೆ. ಆದರೂ ಹಲವು ಘಟಕಗಳಲ್ಲಿ ಸಿಬ್ಬಂದಿಯು ಒಂದೇ ಸ್ಥಳ, ಠಾಣೆಯಲ್ಲಿ 5 ವರ್ಷಗಳಿಗೂ ಮೇಲ್ಪಟ್ಟು ಕರ್ತವ್ಯ ನಿರ್ವಹಿಸುತ್ತಿರುವುದು ಮತ್ತು ವರ್ಗಾವಣೆ ನಂತರ ಅದೇ ಠಾಣೆಗಳಿಗೆ ಒಒಡಿ ಆಧಾರದ ಮೇಲೆ ಸ್ಥಳ ನಿಯುಕ್ತಿಗೊಳಿಸುತ್ತಿರುವುದು ಗೊತ್ತಾಗಿದ್ದು, ಯಾವುದೇ ಕಾರಣಕ್ಕೂ ಮತ್ತೆ ಅದೇ ಸ್ಥಳದಲ್ಲಿ ಮುಂದುವರಿಯಲು ಅವಕಾಶ ಇಲ್ಲ ಎಂದು ರಾಜ್ಯ ಪೊಲೀಸ್ ಮಹಾನಿರ್ದೇಶಕ ಅಲೋಕ್ ಮೋಹನ್ ತಿಳಿಸಿದ್ದಾರೆ. ಮುಖ್ಯಮಂತ್ರಿ ಹಾಗೂ ಗೃಹ ಸಚಿವರು ಜುಲೈ 7ರಂದು ನಡೆದ ಸಭೆಯಲ್ಲೂ ಸೂಚನೆ ನೀಡಿದ್ದಾರೆ. ಏಳು ದಿನಗಳ ಒಳಗೆ ಕೈಗೊಂಡ ಕ್ರಮದ ಮಾಹಿತಿಯನ್ನು ನೀಡುವಂತೆ ಎಲ್ಲ ಘಟಕದ ಅಧಿಕಾರಿಗಳಿಗೆ ಅವರು ಪತ್ರ ಬರೆದಿದ್ದಾರೆ.

ಸರ್ಪ ಸಂಸ್ಕಾರ, ಆಶ್ಲೇಷಾ ಬಲಿ

ಮೈಸೂರು, ಜು.16- ದೇವರಾಜ ಮೊಹಲ್ಲಾದಲ್ಲಿರುವ ಶ್ರೀ ಅಮೃತೇಶ್ವರ ದೇವಸ್ಥಾನದಲ್ಲಿ ಜು.18ರ ಗುರುವಾರ ಬೆಳಗ್ಗೆ 7.30ಕ್ಕೆ ಸರ್ಪಸಂಸ್ಕಾರ ಮತ್ತು ಜು.19ರ ಶುಕ್ರವಾರ ಬೆಳಗ್ಗೆ 7.30ಕ್ಕೆ ಸರ್ಪಸಂಸ್ಕಾರಾಂಗ ಹೋಮ ಮತ್ತು ಕುಜಶಾಂತಿ ಆಶ್ಲೇಷಾ ಬಲಿ ಪೂಜೆ ಏರ್ಪಡಿಸಲಾಗಿದೆ. ಹೆಚ್ಚಿನ ವಿವರಗಳಿಗೆ ವೈ.ಕುಮಾರ್, ಜಾತಕ ವಿಮರ್ಶಕರು ಇವರನ್ನು ಮೊ: 9845183392, 9845183399 ಮೂಲಕ ಸಂಪರ್ಕಿಸಬಹುದು.

ಮೈಸೂರು ಮಿತ್ರ ಬುಧವಾರ 17 ಜುಲೈ 2024

ಕಾವೇರಿ ನದಿ ಪಾತ್ರದ ಗ್ರಾಮಗಳಲ್ಲಿ ಭಾರೀ ಮಳೆ

● ಕೊಡಗಿನ ವಿವಿಧೆಡೆ ಹಾನಿ ● ಜಿಲ್ಲಾದ್ಯಂತ ರೆಡ್ ಅಲರ್ಟ್ ಘೋಷಣೆ

ಮಡಿಕೇರಿ, ಜು.16–ಜಿಲ್ಲೆಯಲ್ಲಿ ಪುನರ್ವಸು ಮುಂಗಾರು ಮಳೆಯ ಆರ್ಭಟ ಮುಂದುವರೆದಿದ್ದು, ಹವಾಮಾನ ಇಲಾಖೆ ಮುನ್ಸೂಚನೆಯಂತೆ ಜಿಲ್ಲಾದ್ಯಂತ ರೆಡ್ ಅಲರ್ಟ್ ಘೋಷಿಸಲಾಗಿದೆ.

ಈ ಅವಧಿಯಲ್ಲಿ 204 ಮಿ.ಮೀ. ಅಧಿಕ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದ್ದು, ರಣ ಮಳೆ ಮುಂದುವರೆದಿರುವ ನಡುವೆಯೇ ವಿವಿಧೆಡೆ ಹಾನಿ ಸಂಭವಿಸಿದೆ.

ಕಾವೇರಿ ನದಿ ಪಾತ್ರದ ಗ್ರಾಮಗಳಲ್ಲಿ ಭಾರೀ ಮಳೆಯಾಗುತ್ತಿದ್ದು, ನದಿ ಅಪಾಯ ಮಟ್ಟ ಮೀರಿ ಹರಿಯುತ್ತಿದೆ. ತಗ್ಗು ಪ್ರದೇಶಗಳಿಗೆ ನೀರು ನುಗ್ಗಿದ್ದು, ಮನೆ ಕುಸಿತ, ಮರ ಬಿದ್ದಿರುವುದು, ವಿದ್ಯುತ್ ಕಂಬ ಮತ್ತು ತಂತಿಗಳಿಗೆ ಹಾನಿಯಾದ ಘಟನೆಗಳು ನಡೆದಿವೆ. ಮಳೆಯ ನಡುವೆಯೇ ವಿದ್ಯುತ್ ಕಂಬಗಳ ಸ್ಥಳಾಂತರ ಮತ್ತು ಲೈನ್ ದುರಸ್ತಿ ಕಾರ್ಯಗಳು ಸಮಾರೋಪಾದಿಯಲ್ಲಿ ನಡೆಸಲಾಗುತ್ತಿದೆ.

ಮುಳುಗಿದ ತ್ರಿವೇಣಿ ಸಂಗಮ: ತಲಕಾವೇರಿ, ಕೋರಂಗಾಲ, ಚೇರಂಗಾಲ, ಭಾಗಮಂಡಲ ಸಹಿತ ಬ್ರಹ್ಮಗಿರಿ ಬೆಟ್ಟದ ಸಾಲಿನಲ್ಲಿ ಎಡೆಬಿಡದೆ ಮಳೆ ಸುರಿಯುತ್ತಿರುವ ಪರಿಣಾಮ ಕಾವೇರಿ ನದಿಯಲ್ಲಿ ನೀರಿನ ಪ್ರಮಾಣ ಗರಿಷ್ಠ ಏರಿಕೆಯಾಗಿದೆ. ಭಾಗಮಂಡಲದ ತ್ರಿವೇಣಿ ಸಂಗಮ ಸಂಪೂರ್ಣವಾಗಿ ಮುಳುಗಡೆಯಾಗಿದೆ. ಈ ಬಾರಿಯ ಮುಂಗಾರಿನಲ್ಲಿ ಎರಡನೇ ಬಾರಿಗೆ ತ್ರಿವೇಣಿ ಸಂಗಮ ಮುಳುಗಡೆಯಾಗುತ್ತಿದ್ದು, ಕಾವೇರಿ ನದಿಯ ತಗ್ಗು ಪ್ರದೇಶಗಳ ಗದ್ದೆಗಳಿಗೆ ನೀರು ನುಗ್ಗಿದೆ. ಇತ್ತ ಭಾಗಮಂಡಲ–ಅಯ್ಯಂಗೇರಿ ರಸ್ತೆ ಮೇಲೆ ನೀರು ಹರಿಯುತ್ತಿದ್ದು, ಮೇಲ್ಸೇತುವೆ ಮೂಲಕ ಜನ ಮತ್ತು ವಾಹನ ಸಂಚಾರ ಎಂದಿನಂತೆ ಮುಂದುವರೆದಿದೆ.

ಉಕ್ಕಿದ ಕಾವೇರಿ: ಕಾವೇರಿ ನದಿ ಪ್ರದೇಶಗಳಾದ ಭಾಗಮಂಡಲ, ಕಕ್ಕಬ್ಬೆ ಕುಂಜಿಲ, ನಾಪೋಕ್ಲು, ಕೊಂಡಂಗೇರಿ, ಕೊಟ್ಟಮುಡಿ, ವ್ಯಾಪ್ತಿಯಲ್ಲಿ ಭಾರೀ ಮಳೆಯಾದ ಹಿನ್ನೆಲೆಯಲ್ಲಿ ನದಿ ಪ್ರವಾಹ ಮಟ್ಟ ಮೀರಿದೆ. ನಾಪೋಕ್ಲು–ಮೂರ್ನಾಡು ಸಂಪರ್ಕ ಮುಖ್ಯ ರಸ್ತೆಯ ಬೊಳಿಬಾಣೆಯಲ್ಲಿ 2 ಅಡಿಯಷ್ಟು ನದಿ ಪ್ರವಾಹ ಉಂಟಾಗಿದ್ದು, ಸಂಚಾರ ಸ್ಥಗಿತಗೊಳ್ಳುವ ಸಾಧ್ಯತೆ ಇದೆ.

ನಾಪೋಕ್ಲುವಿನಿಂದ ಚೆರಿಯಪರಂಬು, ಕಲ್ಲುಮೊಟ್ಟೆ, ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಮುಖ್ಯ ರಸ್ತೆಯಲ್ಲಿ ಪ್ರವಾಹ ಉಕ್ಕಿ ಸಂಚಾರ ಸ್ಥಗಿತಗೊಂಡಿದೆ. ನಾಪೋಕ್ಲುವಿನಿಂದ ಬಲಮುರಿ, ಪಾರಾಣೆ ಗ್ರಾಮಕ್ಕೆ ಸಂಪರ್ಕ ಕಲ್ಪಿಸುವ ಮಕ್ಕಿಕಡವು ರಸ್ತೆ ಸಂಚಾರ ಸಂಪೂರ್ಣ ಕಡಿತವಾಗಿದೆ.

ನಾಪೋಕ್ಲುವಿನಿಂದ ಕೊಟ್ಟಮುಡಿ ಮಾರ್ಗವಾಗಿ ಮಡಿಕೇರಿಗೆ ತೆರಳುವ ಮುಖ್ಯ ರಸ್ತೆ, ಕಕ್ಕಬ್ಬೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಪೈನರಿ ದರ್ಗಾಕೆ ಹೋಗುವ ರಸ್ತೆ ಕೊಳಕೇರಿ ಮಾರ್ಗವಾಗಿ ಕೋಕೇರಿ ಗ್ರಾಮಕ್ಕೆ ತೆರಳುವ ಕುಪ್ಪೋಟು ಹೊಳೆ ಮೈದುಂಬಿ ಹರಿಯುತ್ತಿದೆ. ನಾಪೋಕ್ಲು–ವಿರಾಜಪೇಟೆ ರಸ್ತೆಯ ಕೈಕಾಡು ಎತ್ತುಕಡು ಹೊಳೆ ತುಂಬಿ ಹರಿಯುತ್ತಿದೆ. ಇದೇ ರೀತಿ ಮಳೆ ಮುಂದುವರಿದಲ್ಲಿ ಪ್ರವಾಹ ಏರ್ಪಟ್ಟು ಪ್ರಮುಖ ರಸ್ತೆಗಳ ಸಂಚಾರ ಬಂದ್ ಆಗಲಿವೆ.



ಭಾಗಮಂಡಲದ ತ್ರಿವೇಣಿ ಸಂಗಮ ಸಂಪೂರ್ಣವಾಗಿ ಮುಳುಗಡೆಯಾಗಿರುವುದು.

ಮುಂದುವರೆದ ಹಾನಿ: ಮಡಿಕೇರಿ ಸಮೀಪದ ಇಬ್ನಿವಳವಾಡಿ ಗ್ರಾಮ ನಿವಾಸಿ ಪಾಲೇರ ಚೀಯಣ್ಣ ಅವರ ವಾಸದ ಮನೆಯ ಗೋಡೆಗಳು ಕುಸಿದಿದೆ. ಗೃಹೋಪಯೋಗಿ ವಸ್ತುಗಳು ಮಣ್ಣಿನಡಿ ಸಿಲುಕಿ ಅಪಾರ ನಷ್ಟವಾಗಿದೆ. ಕಡಗದಾಳು ಗ್ರಾಮದ ಮುಕ್ಕಾಟಿರ ಬೊಳ್ಳಪ್ಪ ಅವರ ಮನೆಯ ಒಂದು ಪಾರ್ಶ್ವದ ಗೋಡೆ ಕುಸಿದು ಬಿದ್ದು, ಮನೆ ಅಪಾಯದ ಸ್ಥಿತಿಯಲ್ಲಿದೆ. ಈ ಹಿನ್ನೆಲೆಯಲ್ಲಿ ಕುಟುಂಬದವರಿಗೆ ಪರ್ಯಾಯ ಆಶ್ರಯ ಒದಗಿಸಲಾಗಿದೆ.

ನಾಪೋಕ್ಲು ಹೋಬಳಿ ವ್ಯಾಪ್ತಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದ ಪಾರಾಣೆ ಕೊಣಂಜಗೇರಿ ಗ್ರಾಮದ ನಿವಾಸಿ ಕುಶಾಲಪ್ಪ ಅವರ ಮನೆಯ ಗೋಡೆಗಳು ಬಿರುಕು ಬಿಟ್ಟಿದ್ದು, ಮನೆಯವರು ಸಂಕಷ್ಟ ಅನುಭವಿಸುವಂತಾಗಿದೆ. ಎಮ್ಮೆಮಾಡು ಗ್ರಾಮದ ಹಸೈನರ್ ಅವರ ಮನೆ ಮೇಲೆ ಮರ ಬಿದ್ದು ನಷ್ಟ ಸಂಭವಿಸಿದೆ. ಕಕ್ಕಬ್ಬೆ ಸಮೀಪದ ಕುಂಜಿಲ ಗ್ರಾಮಸ್ಥರಾದ ಮಾಯಮ್ಮ, ಮುದ್ದಪ್ಪ ಅವರ ಮನೆ ಮೇಲೆ ಮರ ಬಿದ್ದು ಹಾನಿ ಸಂಭವಿಸಿದೆ.

ಎಮ್ಮೆಮಾಡು ಗ್ರಾಮದ ಉಸ್ಮಾನ್ ಅವರ ಮನೆಯ ಕಾಂಪೌಂಡ್ ಕುಸಿದಿದೆ. ಇದೇ ಗ್ರಾಮದ ಉಮ್ಮರ್ ಅವರ ಮನೆ ಮೇಲೆ ಮರ ಬಿದ್ದು ಛಾವಣಿ ಹಾನಿಯಾಗಿದೆ. ಚೆಯ್ಯಂಡಾಣೆ ಸಮೀಪದ ಚೇಲಾವರ ಗ್ರಾಮದಮುತ್ತಪ್ಪ ಅವರ ಮನೆಯ 40ಕ್ಕೂ ಅಧಿಕ ಹೆಂಚುಗಳು ಗಾಳಿಗೆ ಹಾರಿ ಹೋಗಿದ್ದು, ಗೃಹ ಬಳಕೆ ವಸ್ತುಗಳಿಗೆ ಹಾನಿಯಾಗಿದೆ.

ಸುಂಟಿಕೊಪ್ಪ ಸಮೀಪದ ಉಲುಗುಲಿ ಗ್ರಾಮದ ಗಂಗಮ್ಮ, ಎಮ್ಮೆಗುಂಡಿ ನಿವಾಸಿ ದೇವರಾಜ್ ಅವರ ಮನೆಯ ಮೇಲೆ ಮರ ಮುರಿದು ಬಿದ್ದಿದ್ದು, ಮನೆಯವರು ಅಪಾಯದಿಂದ ಪಾರಾಗಿದ್ದಾರೆ. ಸೋಮವಾರಪೇಟೆ ತಾಲೂಕಿನ ಯಡೂರು ಗ್ರಾಮದ ಪೊನ್ನಮ್ಮ ಚೀಯಣ್ಣ ಅವರ ಮನೆಯ ಛಾವಣಿಗೆ ಹಾನಿಯಾಗಿದೆ. ಶ್ರೀಮಂಗಲ ಹೋಬಳಿ ಕೋತೂರು ಗ್ರಾಮದ ವಿ.ಎಸ್.ಪ್ರವೀಣ್, ವಿ.ಎಂ.ಮಣಿ, ಹೆಚ್.ಸಿ.ಜಾನಕಿ ಅವರ ಮನೆಗಳಿಗೆ ತೀವ್ರ ಹಾನಿಯಾಗಿದೆ. ಹಾನಿಗೊಳಗಾದ ಸ್ಥಳಗಳಿಗೆ ಸ್ಥಳೀಯ ಕಂದಾಯಾಧಿಕಾರಿಗಳು, ಗ್ರಾಪಂ ಜನಪ್ರತಿನಿಧಿಗಳು ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಸೆಸ್ಕ್‌ಗೆ 8.60 ಲಕ್ಷ ರೂ. ನಷ್ಟ

ಮುಂಗಾರು ಮಳೆ ಆರ್ಭಟದಿಂದ ಕಳೆದ 24 ಗಂಟೆ ಅವಧಿಯಲ್ಲಿ ಸೆಸ್ಕ್‌ಗೆ 8.60 ಲಕ್ಷ ರೂ. ನಷ್ಟ ಸಂಭವಿಸಿದೆ ಎಂದು ಜಿಲ್ಲಾ ಪ್ರಕೃತಿ ವಿಕೋಪ ನಿರ್ವಹಣಾ ಘಟಕ ಮಾಹಿತಿ ನೀಡಿದೆ.

ಗಾಳಿ ಮಳೆಯಿಂದ ಜಿಲ್ಲೆಯ ವಿವಿಧ ಭಾಗಗಳಲ್ಲಿ ಒಟ್ಟು 86 ವಿದ್ಯುತ್ ಕಂಬಗಳು ಮುರಿದು ಬಿದ್ದಿವೆ. 8 ಮನೆಗಳಿಗೆ ಅಲ್ಪ ಪ್ರಮಾಣದ ಹಾನಿಯಾಗಿದ್ದರೆ, 1 ಮನೆಗೆ ಭಾಗಶಃ ಹಾನಿ ಗೀಡಾಗಿದೆ ಎಂದು ವಿಪತ್ತು ಘಟಕ ತಿಳಿಸಿದೆ.

ಓಂಕಾರೇಶ್ವರ ದೇವಾಲಯ ಪುಷ್ಕರಣಿ ಭರ್ತಿ



ಧಾರಾಕಾರ ಮಳೆಗೆ ಮಡಿಕೇರಿ ನಗರದ ಇತಿಹಾಸ ಪ್ರಸಿದ್ಧ ಶ್ರೀ ಓಂಕಾರೇಶ್ವರ ದೇವಾಲಯ ಪುಷ್ಕರಣಿ ಸಂಪೂರ್ಣ ಭರ್ತಿಯಾಗಿದೆ. ಪುಷ್ಕರಣಿಯ ನೀರು ದೇವಾಲಯದ ಕೆಳಭಾಗದ ಪ್ರವೇಶ ದ್ವಾರದವರೆಗೆ ನಿಂತಿದ್ದು, ಮತ್ತಷ್ಟು ಮಳೆ ಮುಂದುವರೆದಲ್ಲಿ ನೀರು ರಸ್ತೆಯ ಭಾಗಕ್ಕೆ ಹರಿಯಲಿದೆ. ಆದರೆ, ದೇವಾಲಯಕ್ಕೆ ತೆರಳುವ ಭಕ್ತರಿಗೆ ಮತ್ತು ಪೂಜಾ ಕಾರ್ಯಗಳಿಗೆ ಯಾವುದೇ ತೊಡಕುಂಟಾಗಿಲ್ಲ. ಪ್ರಸ್ತುತ ಮುಂಗಾರಿನಲ್ಲಿ ಶ್ರೀ ಓಂಕಾರೇಶ್ವರ ದೇವಾಲಯದ ಕಲ್ಯಾಣಿ ತುಂಬಿರುವುದು ಶುಭ ಮುನ್ಸೂಚನೆ ಎಂಬುದು ಭಕ್ತರ ನಂಬಿಕೆಯಾಗಿದೆ.

ಮಾವಿನಹಳ್ಳದಲ್ಲಿ ಸೇತುವೆ ತಡೆಗೋಡೆ ಕುಸಿತ



ಕುಶಾಲನಗರ, ಜು.16–ತಾಲೂಕಿನ ರಂಗಸಮುದ್ರ ಗ್ರಾಮದ ಮುಖ್ಯ ರಸ್ತೆಯಿಂದ ಮಾವಿನಹಳ್ಳ ಹಾಡಿಗೆ ಹೋಗುವ ರಸ್ತೆ ಮತ್ತು ಸೇತುವೆ ತಡೆಗೋಡೆ ಮಂಗಳವಾರ ಕುಸಿದಿದೆ. ಸೇತುವೆ ಹಾಗೂ ತಡೆಗೋಡೆ ಕುಸಿದು ವಾಹನ ಸಂಚಾರಕ್ಕೆ ತೊಂದರೆ ಉಂಟಾಗಿದೆ. ಸೇತುವೆಯ ಒಂದು ಬದಿಯಲ್ಲಿ ತಡೆಗೋಡೆ ಮಣ್ಣು ಸಂಪೂರ್ಣ ಕುಸಿತವಾಗಿ ಹಾನಿ ಉಂಟಾಗಿದೆ ಎಂದು ಗ್ರಾಮ ಪಂಚಾಯಿತಿ ಸದಸ್ಯ ಆರ್.ಕೆ.ಚಂದ್ರು ತಿಳಿಸಿದ್ದಾರೆ. ಸ್ಥಳಕ್ಕೆ ಗ್ರಾಪಂ ಅಧ್ಯಕ್ಷ ಸಿ.ಎಲ್.ವಿಶ್ವ ಹಾಗೂ ತಾಪಂ ಇಂಜಿನಿಯರ್ ಫಯಾಜ್ ಭೇಟಿ ನೀಡಿ, ಪರಿಶೀಲನೆ ನಡೆಸಿದರು.

ಇದೇ ವೇಳೆ ಈ ಸೇತುವೆಯ ಎರಡು ಬದಿಯಲ್ಲಿ ಶೀಘ್ರವಾಗಿ ತಡೆಗೋಡೆ ನಿರ್ಮಿಸಲು ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದರು. ಗ್ರಾಪಂ ಸದಸ್ಯರಾದ ಮಾವಜಿ ರಕ್ಷಿತ್, ಪಿಡಿಓ ಕಲ್ಪನಾ, ಸ್ಥಳೀಯರು ಇದ್ದರು.

ಸ್ಕೂಟರ್‌ಗೆ ಲಾರಿ ಡಿಕ್ಕಿ: ಇಬ್ಬರು ಯುವಕರು ಸಾವು



ಮಂಜು



ರಕ್ಷಿತ್

ಸುಂಟಿಕೊಪ್ಪ, ಜು.16–ಸ್ಕೂಟರ್‌ಗೆ ಲಾರಿ ಡಿಕ್ಕಿ ಹೊಡೆದ ಪರಿಣಾಮ ಇಬ್ಬರು ಯುವಕರು ಸ್ಥಳದಲ್ಲೇ ಮೃತಪಟ್ಟ ಘಟನೆ ಕೊಡಗರಹಳ್ಳಿ ಹೊಸಕೋಟೆ ನಡುವಿನ ರಾಷ್ಟ್ರೀಯ ಹೆದ್ದಾರಿಯ ಮಾರುತಿ ನಗರದ ತಿರುವಿನಲ್ಲಿ ಮಂಗಳವಾರ ನಡೆದಿದೆ. ಗರಗಂದೂರಿನ ಮಂಜು (25) ಹಾಗೂ ಸುಂಟಿಕೊಪ್ಪ ಸಮೀಪದ ಬಾಳೆಕಾಡು ತೋಟದ ನಾರಾಯಣ ಅವರ ಪುತ್ರ ರಕ್ಷಿತ್ (22) ಮೃತಪಟ್ಟ ಯುವಕರು.

ಈ ಇಬ್ಬರು ಸ್ಕೂಟರ್‌ನಲ್ಲಿ ಮಧ್ಯಾಹ್ನ 2.30ರಲ್ಲಿ ಸುಂಟಿಕೊಪ್ಪದಿಂದ 7ನೇ ಹೊಸಕೋಟೆಗೆ ಹೋಗುತ್ತಿದ್ದರು. ಇದೇ ವೇಳೆ ಕುಶಾಲನಗರದಿಂದ ಬರುತ್ತಿದ್ದ ಲಾರಿ ಮಾರುತಿ ನಗರದ ತಿರುವಿನಲ್ಲಿ ಡಿಕ್ಕಿ ಹೊಡೆದಿದೆ. ಪರಿಣಾಮ ತಲೆಗೆ ತೀವ್ರ ಪೆಟ್ಟು ಬಿದ್ದು ಸ್ಥಳದಲ್ಲೇ ಇಬ್ಬರು ಮೃತಪಟ್ಟಿದ್ದಾರೆ. ಸುಂಟಿಕೊಪ್ಪ ಪೊಲೀಸ್ ಠಾಣಾಧಿಕಾರಿ ಎಂ.ಸಿ.ಶ್ರೀಧರ್, ಅಪರಾಧ ವಿಭಾಗದ ಸಬ್‌ಇನ್ಸ್‌ಪೆಕ್ಟರ್ ಸ್ವಾಮಿ ಹಾಗೂ ಸಿಬ್ಬಂದಿ ಸ್ಥಳ ಪರಿಶೀಲಿಸಿ, ಈ ಸಂಬಂಧ ಪ್ರಕರಣ ದಾಖಲಿಸಿಕೊಂಡಿದ್ದರೆ.

ಲೈನ್ ಮನೆಯಲ್ಲಿ ಮಹಿಳೆ ಸಂಶಯಾಸ್ಪದ ಸಾವು

ಗೋಣಿಕೊಪ್ಪ, ಜು.16–ಕಾಫಿ ತೋಟವೊಂದರ ಲೈನ್ ಮನೆಯಲ್ಲಿ ವಾಸವಿದ್ದ ಮಹಿಳೆ ಸಂಶಯಾಸ್ಪದವಾಗಿ ಮೃತಪಟ್ಟಿರುವ ಘಟನೆ ಪೊನ್ನಂಪೇಟೆ ತಾಲೂಕಿನ ಕಾನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಲ್ಲಂಗೆರೆಯಲ್ಲಿ ಮಂಗಳವಾರ ನಡೆದಿದೆ.

ಹುಣಸೂರು ಮೂಲದ ಜೇನು ಕುರುಬ ಜನಾಂಗದ ಶಿವಮ್ಮ ಅಲಿಯಾಸ್ ಗೀತಾ(45) ಮೃತ ಮಹಿಳೆ. ಈಕೆ ಶಿವಪ್ಪ ಎಂಬುವರ ಜೊತೆ 5 ದಿನಗಳ ಹಿಂದೆ ಬಂದು ಮಲ್ಲಂಗೆರೆಯ ಕುಪ್ಪಂಡ ಬೋಪಣ್ಣ ಅವರ ಲೈನ್ ಮನೆಯಲ್ಲಿ ವಾಸವಿದ್ದರು. ಆದರೆ, ಈಕೆಯ ಶವ ಬೆಳಗ್ಗೆ ಪತ್ತೆಯಾಗಿದೆ. ಈಕೆಯ ಜೊತೆ ಬಂದಿದ್ದ ಶಿವಪ್ಪ ತಲೆ ಮರೆಸಿಕೊಂಡಿದ್ದಾನೆ.

ಶಿವಪ್ಪನೇ ಶಿವಮ್ಮಳನ್ನು ಹತ್ಯೆಗೈದಿರುವ ಶಂಕೆ ವ್ಯಕ್ತವಾಗಿದ್ದು, ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಸುಂದರ್ ರಾಜ್, ವಿರಾಜಪೇಟೆ ಪ್ರಭಾರ ಡಿವೈಎಸ್‌ಪಿ ಗಂಗಾಧರಪ್ಪ, ಗೋಣಿಕೊಪ್ಪಲು ವೃತ್ತ ನಿರೀಕ್ಷಕ ಶಿವರಾಜ್ ಮುಂದೊಳ್, ಪೊನ್ನಂಪೇಟೆ ಠಾಣಾಧಿಕಾರಿ ನವೀನ್ ಮತ್ತು ಸಿಬ್ಬಂದಿ ಭೇಟಿ ನೀಡಿ, ಸ್ಥಳ ಪರಿಶೀಲಿಸಿದರು.



ಪೊಲೀಸರು ಪರಿಶೀಲನೆ ನಡೆಸುತ್ತಿರುವುದು.

ಈ ಸಂಬಂಧ ಪೊನ್ನಂಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಶಿವಪ್ಪನ ಪತ್ತೆಗೆ ಪೊಲೀಸರು ಮುಂದಾಗಿದ್ದಾರೆ.

5.66 ಕೋಟಿ ರೂ. ಯೋಜನೆಗೆ ಅನುಮೋದನೆ

ಜಿಲ್ಲಾಧಿಕಾರಿ ಶಿಲ್ಪನಾಗ್ ಅಧ್ಯಕ್ಷತೆಯಲ್ಲಿ ನಗರಸಭೆ ವಿಶೇಷ ಸಭೆ



ಚಾಮರಾಜನಗರ ನಗರಸಭೆ ವಿಶೇಷ ಸಭೆ ಜಿಲ್ಲಾಧಿಕಾರಿ ಶಿಲ್ಪನಾಗ್ ಅಧ್ಯಕ್ಷತೆಯಲ್ಲಿ ನಡೆಯಿತು.

ಚಾಮರಾಜನಗರ, ಜು.16–ನಗರಸಭೆ ವಿವಿಧ ಯೋಜನೆಯಡಿ ನಗರದ ಅಭಿವೃದ್ಧಿ ಹಾಗೂ ವಿವಿಧ ಯೋಜನೆಗೆ ರೂಪಿಸಿರುವ 5.66 ಕೋಟಿ ರೂ. ಅನುದಾನ ಬಳಕೆಗೆ ಬಿಜೆಪಿ ಸದಸ್ಯರ ಬಹಿಷ್ಕಾರ ನಡುವೆ ವಿಶೇಷ ಸಭೆಯಲ್ಲಿ ಅನುಮೋದನೆ ಪಡೆಯಲಾಯಿತು.

ಜಿಲ್ಲಾಧಿಕಾರಿ ಶಿಲ್ಪನಾಗ್ ಅಧ್ಯಕ್ಷತೆಯಲ್ಲಿ ಮಂಗಳವಾರ ನಡೆದ ನಗರಸಭೆ ವಿಶೇಷ ಸಭೆಯಲ್ಲಿ ಸದಸ್ಯರು ವಿವಿಧ ಯೋಜನೆಗಳಡಿ ಅಭಿವೃದ್ಧಿ ಹಾಗೂ ಸವಲತ್ತು ನೀಡುವ ಕುರಿತು ಮಂಡಿಸಿ, ಚರ್ಚಿಸಿದರು. ನಂತರ ಅನುಮೋದನೆ ಪಡೆದುಕೊಂಡರು. ನಗರಸಭೆ 15ನೇ ಹಣಕಾಸು ಯೋಜನೆಯಡಿ 31 ವಾರ್ಡ್‌ಗಳಿಗೆ ಬಿಡುಗಡೆಯಾಗಿರುವ 417 ಲಕ್ಷ ರೂ. ಅನುದಾನಕ್ಕೆ ಕ್ರಿಯಾ ಯೋಜನೆ ರೂಪಿಸಿ, ಚರ್ಚೆ ಬಳಿಕ ಜಿಲ್ಲಾಧಿಕಾರಿ ಅನುಮೋದನೆ ನೀಡಿದರು.

ರಾಜ್ಯ ಹಣಕಾಸು ಆಯೋಗದ ಬಂಡವಾಳ ಆಸ್ತಿ ಸಂಜೇತ ಕಾರ್ಯಕ್ರಮದಲ್ಲಿ 105 ಲಕ್ಷ ರೂ., ಎಸ್‌ಇಪಿ ಯೋಜನೆಯಡಿ 31 ಲಕ್ಷ ರೂ. ಹಾಗೂ ಟಿಎಸ್‌ಪಿ ಯೋಜನೆಯಡಿ 13 ಲಕ್ಷರೂ. ವೆಚ್ಚದಲ್ಲಿ ವಿವಿಧ ಕಾರ್ಯಕ್ರಮ ಕೈಗೊಳ್ಳಲು ಕೆಲ ಮಾರ್ಪಾಡುಗಳೊಂದಿಗೆ ಅನುಮೋದನೆ ಪಡೆಯಲಾಯಿತು.

ಬಳಿಕ ಡಿಸಿ ಶಿಲ್ಪನಾಗ್ ಮಾತನಾಡಿ, ನಗರದ ಅಭಿವೃದ್ಧಿ ಗುರಿಯಾಗಿಸಿಕೊಂಡು ಯೋಜನೆಗಳನ್ನು ರೂಪಿಸಬೇಕಾಗಿದೆ. ನಗರೋತ್ಥಾನ ಯೋಜನೆ ಪೂರ್ಣ ಅನುದಾನವನ್ನು ಸರ್ಕಾರದಿಂದ ಬಿಡುಗಡೆ ಮಾಡಿಸುವಲ್ಲಿ ಜಿಲ್ಲಾಡಳಿತ ಮುಂದಾಗಿದೆ. ಪೌರಾಯುಕ್ತರು ಹೆಚ್ಚಿನ ಕಾರ್ಯಪ್ರವೃತ್ತರಾಗಬೇಕು. ಸಿಬ್ಬಂದಿ ಕೊರತೆ ನಿಭಾಯಿಸಿಕೊಂಡು ಕಾರ್ಯಕ್ರಮ ರೂಪಿಸಲು ಮುಂದಾಗಬೇಕು. ಎಲ್ಲಾ ವಾರ್ಡ್‌ಗಳಿಗೆ ಮೂಲ ಸೌಲಭ್ಯ ಕಲ್ಪಿಸಲು ಅಧಿಕಾರಿಗಳು ಮುಂದಾಗಬೇಕು ಎಂದು ಸಲಹೆ ನೀಡಿದರು.

ಸಭೆಯಲ್ಲಿ ಪೌರಾಯುಕ್ತ ರಾಮದಾಸ್, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ನಟರಾಜು, ಕಂದಾಯ ನಿರೀಕ್ಷಕ ಶರವಣ, ಪರಿಸರ ಇಂಜಿನಿಯರ್ ಗಿರಿಜಾ, ಕಾರ್ಯಕ್ರಮ ಸಂಯೋಜಕ ವೆಂಕಟನಾಯಕ, ಸದಸ್ಯರಾದ ಆರ್.ಎಂ.ರಾಜಪ್ಪ ಆರ್.ಪಿ.ನಂಜುಂಡ ಸ್ವಾಮಿ, ಮಹೇಶ್, ಅಬ್ರಾರ್, ಅಹಮದ್, ಕಲೀಂ, ಮಹಮದ್ ಅಮೀಕ್, ಕಲಾವತಿ, ನೀಲಮ್ಮ, ಭಾಗ್ಯಮ್ಮ, ಚಂದ್ರಕಲಾ, ಶಾಂತಿ ಇದ್ದರು.

ಬಿಜೆಪಿ ಸದಸ್ಯರಿಂದ ಸಭೆ ಬಹಿಷ್ಕಾರ

ರಾಜ್ಯ ಸರ್ಕಾರ ನಗರಸಭೆಗೆ ನಗರೋತ್ಥಾನ ಯೋಜನೆಯಡಿ ಬಿಡುಗಡೆಯಾಗಿರುವ ಅನುದಾನವನ್ನು ನೀಡದೆ, ಈಗ ನಡೆದಿರುವ ಕಾಮಗಾರಿಗಳ ಬಿಲ್ ತಡೆ ಹಿಡಿದು ವಾರ್ಡ್‌ಗಳ ಅಭಿವೃದ್ಧಿಗೆ ನಿರ್ಲಕ್ಷ್ಯ ಮಾಡುತ್ತಿದೆ ಎಂದು ಆರೋಪಿಸಿ ಬಿಜೆಪಿ ಸದಸ್ಯರು ವಿಶೇಷ ಸಭೆ ಬಹಿಷ್ಕರಿಸಿ ನಗರಸಭೆ ಎದುರು ಪ್ರತಿಭಟನೆ ನಡೆಸಿದರು.

ನಗರಸಭೆ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಶಿಲ್ಪನಾಗ್ ಅಧ್ಯಕ್ಷತೆಯಲ್ಲಿ ನಡೆದ ವಿಶೇಷ ಸಭೆಗೆ ಆಗಮಿಸಿದ ಬಿಜೆಪಿಯ 15 ಸದಸ್ಯರು ಒಕ್ಕೊರಲಿನಿಂದ ರಾಜ್ಯ ಸರ್ಕಾರ ನಡೆ, ಜಿಲ್ಲಾಡಳಿತ ಮತ್ತು ಜಿಲ್ಲಾಧಿಕಾರಿ ಮನವಿಗೆ ಸ್ಪಂದಿಸುತ್ತಿಲ್ಲ. ನಗರಸಭೆಗೆ ನಗರೋತ್ಥಾನ ಯೋಜನೆಯಡಿ ಬಿಡುಗಡೆಯಾಗಿದ್ದ 40 ಕೋಟಿ ರೂ. ಅನುದಾನ ತರಲುವಲ್ಲಿ ವಿಫಲರಾಗಿದ್ದಾರೆ ಎಂದು ಆರೋಪಿಸಿ ಸಭೆ ಬಹಿಷ್ಕರಿಸಿದರು.



ಬಿಜೆಪಿ ಸದಸ್ಯರು ವಿಶೇಷ ಸಭೆ ಬಹಿಷ್ಕರಿಸಿ ನಗರಸಭೆ ಎದುರು ಪ್ರತಿಭಟನೆ ನಡೆಸಿದರು.

ಸದಸ್ಯ ಶಿವರಾಜ್ ನೇತೃತ್ವದಲ್ಲಿ ನಗರಸಭೆ ವಿಶೇಷ ಸಭೆ ಮುಗಿಯುವವರೆಗೆ ಪ್ರತಿಭಟನೆ ನಡೆಸಿದರು. ಸಭೆ ಮುಗಿಸಿ ಹೊರಬಂದ ಜಿಲ್ಲಾಧಿಕಾರಿ ಶಿಲ್ಪನಾಗ್ ಪ್ರತಿಭಟನಾ ನಿರತರನ್ನು ಸೌಜನ್ಯಕ್ಕೂ ಭೇಟಿ ಮಾಡಿ, ಸಮಸ್ಯೆ ಆಲಿಸದೆ ಕಾರು ಹತ್ತಿ ಹೊರಟರು.

ಇದಕ್ಕೂ ಮುನ್ನಾ ಮಾತನಾಡಿದ ನಗರಸಭಾ ಸದಸ್ಯ ಶಿವರಾಜ್, ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರ್ಕಾರ ಭ್ರಷ್ಟ ಸರ್ಕಾರವಾಗಿದೆ. ಕಳೆದ ಅವಧಿಯ ಬಿಜೆಪಿ ಸರ್ಕಾರ ನಗರೋತ್ಥಾನ ಯೋಜನೆಯಡಿ 40 ಕೋಟಿ ರೂ. ಮಂಜೂರು ಮಾಡಿತ್ತು ಆದರೆ, ಈಗಿನ ಕಾಂಗ್ರೆಸ್ ಸರ್ಕಾರ ಎಲ್ಲಾ ಅನುದಾನವನ್ನು ವಾಪಸ್ ಪಡೆದುಕೊಂಡಿದೆ. ಇದುವರಿಗೆ ನಡೆದಿರುವ ಕಾಮಗಾರಿಗಳ ಬಿಲ್‌ಗಳನ್ನು ತಡೆ ಹಿಡಿದು ವಾರ್ಡ್‌ಗಳ ಅಭಿವೃದ್ಧಿ ಕಡೆಗಣಿಸಿದೆ ಎಂದು ದೂರಿದರು.

ಪ್ರತಿಭಟನೆಯಲ್ಲಿ ನಗರಸಭೆ ಮಾಜಿ ಅಧ್ಯಕ್ಷೆ ಆಶಾ ನಟರಾಜು, ಸದಸ್ಯರಾದ ಮನೋಜ್ ಪಟೇಲ್, ಮಮತಾ ಬಾಲಸುಬ್ರಹ್ಮಣ್ಯ, ಕುಮುದಾ ಕೇಶವಮೂರ್ತಿ, ಮಹದೇವಯ್ಯ, ಚಂದ್ರಶೇಖರ್, ಮಂಜುನಾಥ್, ಗಾಯತ್ರಿ ಚಂದ್ರಶೇಖರ್, ಗೌರಿ ಸೆಂದಿಲ್, ಲೋಕೇಶ್ವರಿ ಚಿಕ್ಕರಾಜು, ಸುದರ್ಶನ್ ಗೌಡ, ರಾಘವೇಂದ್ರ ಭಾಗವಹಿಸಿದ್ದರು.

ಕೊಳ್ಳೇಗಾಲದಲ್ಲಿ ಬೈಕ್ ಕಳ್ಳರ ಬಂಧನ



ಕೊಳ್ಳೇಗಾಲ, ಜು.16–ಬೆಂಗಳೂರು, ಮೈಸೂರು ಸೇರಿದಂತೆ ವಿವಿಧೆಡೆ ಬೈಕ್‌ಗಳನ್ನು ಕಳವು ಮಾಡಿ ಮಾರುತ್ತಿದ್ದ ಜಾಲವನ್ನು ಬೇಧಿಸಿರುವ ಡಿವೈಎಸ್ಪಿ ವಿಚಕ್ಷಣಾ ದಳ ಹಾಗೂ ಅಪರಾಧ ವಿಭಾಗದ ಪೊಲೀಸರು ಏಳು ಆರೋಪಿಗಳನ್ನು ಬಂಧಿಸಿ, 12 ಬೈಕ್‌ಗಳನ್ನು ವಶಪಡಿಸಿಕೊಂಡಿದ್ದಾರೆ.

ಕೊಳ್ಳೇಗಾಲ ಮತದ ಬೀದಿಯ ಕಿಶಾನ್ (18), ಆಶ್ರಯ ಬಡಾವಣೆಯ ಮುಬಾರಕ್ ಪಾಷಾ (18), ತಾಲೂಕಿನ ನರೀಪುರ ಗ್ರಾಮದ ಕ್ಯಾಂಟೀನ್ ದರ್ಶನ್ (19), ಹೊಸ ಅಣಗಳ್ಳಿ ಗ್ರಾಮದ ಲಂಬೂ ದರ್ಶನ್ (18), ಪಟ್ಟಣದ ಕಾವೇರಿ ರಸ್ತೆಯ ಸಚಿನ್ (18), ಬಾಪುನಗರದ ಚೇತನ್ ಹಾಗೂ ಪಾಳ್ಯ ಗ್ರಾಮದ ಸೋಮಶೇಖರ್‌ನನ್ನು ಬಂಧಿಸಿದ್ದು, ಮತ್ತೋರ್ವ ನಾಪತ್ತೆಯಾಗಿದ್ದಾನೆ.

ಪಟ್ಟಣದಲ್ಲಿ ಆಗಿಂದಾಗ್ಗೆ ಬೈಕ್‌ಗಳು ಕಳವಾಗುತ್ತಿದ್ದವು. ಇದನ್ನು ಗಂಭೀರವಾಗಿ ಪರಿಗಣಿಸಿದ್ದ ಪೊಲೀಸರು, ಕಳ್ಳರ ಮೇಲೆ ನಿಗಾ ಇಟ್ಟಿದ್ದರು. ಆದರೆ, ಪಟ್ಟಣದಲ್ಲಿ ನಾಲ್ವರು ಯುವಕರು 2 ಬೈಕ್‌ಗಳೊಂದಿಗೆ ನಿಂತಿದ್ದರು. ಇದನ್ನು ಗಮನಿಸಿದ ಪೊಲೀಸರು, ಅವರನ್ನು ಬಂಧಿಸಿ ವಿಚಾರಿಸಿದಾಗ ಬೈಕ್ ಕಳ್ಳತನ ಮಾಡಿರುವುದು ಪತ್ತೆಯಾಗಿದೆ.

ಕಾರ್ಯಾಚರಣೆಯಲ್ಲಿ ಅಪರಾಧ ವಿಭಾಗದ ಉಮಾವತಿ, ಡಿವೈಎಸ್ಪಿ ಪತ್ತೆದಳದ ಎಎಸ್ಐ ತಖೀವುಲ್ಲಾ, ಸಿಬ್ಬಂದಿ ರವಿಕುಮಾರ್, ಕಿಶೋರ್, ಬಿಳಿಗೌಡ, ಅಮರೇಶ್, ಶಿವಕುಮಾರ್, ವೆಂಕಟೇಶ್, ಸವಿರಾಜು, ಬಸವರಾಜು ಪಾಲ್ಗೊಂಡಿದ್ದರು.

ನಾಳೆ ಮುಖ್ಯಮಂತ್ರಿ ವಿರುದ್ಧ ಬೆಂಗಳೂರು ಚಲೋ

● ಎಸ್ಸಿ, ಎಸ್ಟಿ ಶಾಸಕರು ಸಿದ್ದರಾಮಯ್ಯ ವಿರುದ್ಧ ಪ್ರತಿಭಟಿಸಲಿ ● ಮಾಜಿ ಸಂಸದ ಮುನಿಸ್ವಾಮಿ ಆಗ್ರಹ



ಚಾಮರಾಜನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾಜಿ ಸಂಸದ ಮುನಿಸ್ವಾಮಿ ಮಾತನಾಡಿದರು.

ಚಾಮರಾಜನಗರ, ಜು.16–ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಜು.18ರಂದು ಬೆಂಗಳೂರು ಚಲೋ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಸಂಸದ ಮುನಿಸ್ವಾಮಿ ತಿಳಿಸಿದರು.

ನಗರದ ಜಿಲ್ಲಾ ಬಿಜೆಪಿ ಕಚೇರಿಯಲ್ಲಿ ಮಂಗಳವಾರ ನಡೆದ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಪರಿಶಿಷ್ಟ ಜಾತಿ ಹಾಗೂ ಪಂಗಡದ ಕಲ್ಯಾಣ ಕ್ಕಾಗಿ ಮೀಸಲಿಟ್ಟಿದ್ದ ಅನುದಾನವನ್ನು ಅನ್ಯ ಕಾರ್ಯಕ್ರಮಗಳಿಗೆ ಬಳಸುವ ಮೂಲಕ ಮುಖ್ಯಮಂತ್ರಿ ಹಾಗೂ ಸಚಿವರು ದಲಿತ ವಿರೋಧಿ ನೀತಿ ಅನುಸುತ್ತಿದ್ದಾರೆ. ಇದರ ವಿರುದ್ಧ ಸಮುದಾಯದ ಕಾಂಗ್ರೆಸ್ ಶಾಸಕರು ಪ್ರತಿಭಟಿಸಬೇಕು ಎಂದು ಒತ್ತಾಯಿಸಿದರು.

ರಾಜ್ಯ ಸರ್ಕಾರ ವಾಲ್ಮೀಕಿ ಅಭಿವೃದ್ಧಿ ನಿಗಮ ಹಾಗೂ ಎಸ್‌ಇಪಿ, ಟಿಎಸ್‌ಪಿ ಅನುದಾನದ ಹಣವನ್ನು ದುರ್ಬಳಕೆ ಮಾಡಿಕೊಂಡು ಬ್ರಹ್ಮಾಂಡ ಭ್ರಷ್ಟಾಚಾರ ಎಸಗಿದೆ. ಸಿದ್ದರಾಮಯ್ಯ ರಾಜೀನಾಮೆ ನೀಡುವ ತನಕ ದಲಿತರಿಗೆ ಉಳಿಗಾಲವಿಲ್ಲ. ಕೇವಲ ದಲಿತರು, ಅಹಿಂದ ಪರ ಎಂದು ಹೇಳಿಕೊಳ್ಳುವ ಸಿದ್ದರಾಮಯ್ಯ ಆ ವರ್ಗಗಳಿಗೆ ಅನ್ಯಾಯ ಮಾಡುತ್ತಿದ್ದಾರೆ. ಇದನ್ನು ಪ್ರಶ್ನೆ ಮಾಡುವ ಬದಲು ದಲಿತರ ಪರ ಸಂಘಟನೆಗಳು ಅವರನ್ನೇ ಒಲೈಸುತ್ತಿವೆ. ಇದು ಬೇಸರದ ಸಂಗತಿ. ಇನ್ನು ಕಾಂಗ್ರೆಸ್‌ನಲ್ಲಿರುವ ಆ ಸಮುದಾಯಗಳ ಶಾಸಕರು ಮೌನವಾಗಿರುವುದು ದಲಿತ ಸಮುದಾಯಕ್ಕೆ ಮಾಡಿದ ಘೋರ ಅಪರಾಧವಾಗಿದೆ ಎಂದರು.

ಫ್ರೀಡಂ ಪಾರ್ಕ್‌ಗೆ ಬನ್ನಿ: ಭ್ರಷ್ಟ ಹಾಗೂ ದಲಿತ ವಿರೋಧಿ ಸಿಎಂ ರಾಜೀನಾಮೆ ನೀಡುವಂತೆ ಒತ್ತಾಯಿಸಿ ಜು.18ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ನಡೆಯುವ ಧರಣಿಯಲ್ಲಿ ಜಿಲ್ಲೆಯಿಂದ ಹೆಚ್ಚಿನ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಭಾಗವಹಿಸಬೇಕು ಎಂದು ಬಿಜೆಪಿ ರಾಜ್ಯ ಉಪಾಧ್ಯಕ್ಷೆ ಮಾಳವಿಕ ಮನವಿ ಮಾಡಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಸಿ.ಎಸ್.ನಿರಂಜನ್ ಕುಮಾರ್ ಮಾತನಾಡಿ, ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಸೂಚನೆಯಂತೆ ಬೆಂಗಳೂರಿನಲ್ಲಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದರು.

ಸಭೆಯಲ್ಲಿ ಮಾಜಿ ಶಾಸಕ ಎಸ್.ಬಾಲರಾಜು, ರಾಷ್ಟ್ರೀಯ ಹಿಂದುಳಿದ ಮೋರ್ಚಾ ಕಾರ್ಯಕಾರಿಣಿ ಸದಸ್ಯ ನೂರೊಂದುಶೆಟ್ಟಿ, ಎಸ್‌ಟಿ ಮೋರ್ಚಾ ರಾಜ್ಯ ಕಾರ್ಯದರ್ಶಿ ಜಯಸುಂದರ್, ಮಾಜಿ ಅಧ್ಯಕ್ಷ ನಾರಾಯಣ ಪ್ರಸಾದ್, ಕಾಡಾ ಮಾಜಿ ಅಧ್ಯಕ್ಷ ನಿಜಗುಣ ರಾಜು, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಮೂಡ್ನಾಕೂಡು ಪ್ರಕಾಶ್, ಹೊನ್ನೂರು ಮಹದೇವಸ್ವಾಮಿ, ಹಿಂದುಳಿದ ವರ್ಗಗಳ ಮೋರ್ಚಾ ಅಧ್ಯಕ್ಷ ನಿಜಧ್ವನಿ ವೆಂಕಟೇಶ, ಉಪಾಧ್ಯಕ್ಷ ಶಿವು ವಿರಾಟ್, ಮಹಿಳಾ ಮೋರ್ಚಾ ಅಧ್ಯಕ್ಷ ಮಲೆಯೂರು ಕಮಲಮ್ಮ, ಪ್ರಧಾನ ಕಾರ್ಯದರ್ಶಿ ಶೈಲಾ, ಎಸ್ಸಿ ಮೋರ್ಚಾ ಜಿಲ್ಲಾಧ್ಯಕ್ಷ ಮೂಡಹಳ್ಳಿ ಮೂರ್ತಿ, ಎಸ್ಟಿ ಮೋರ್ಚಾ ಅಧ್ಯಕ್ಷ ಚಂದ್ರಶೇಖರ್ ಇದ್ದರು.

ಸಿಎಂ ಸಿದ್ದರಾಮಯ್ಯ ವಿರುದ್ಧ ರೈತರ ಪ್ರತಿಭಟನೆ

ಕೊಳ್ಳೇಗಾಲ, ಜು.16–ರೈತರು ಸಲ್ಲಿಸಿದ್ದ ಮನವಿ ಪತ್ರವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಕಸದ ಬುಟ್ಟಿಗೆ ಎಸೆದಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿ ರೈತ ಸಂಘದ ಪದಾಧಿಕಾರಿಗಳು ಪಟ್ಟಣದ ಮುಡಿಗುಂಡ ಸೇತುವೆ ಬಳಿ ಹೆದ್ದಾರಿ ತಡೆದು ಮಂಗಳವಾರ ಪ್ರತಿಭಟನೆ ನಡೆಸಿದರು.

ಜು.10ರಂದು ಚಾಮರಾಜನಗರಕ್ಕೆ ಆಗಮಿಸಿದ್ದ ಸಿದ್ದರಾಮಯ್ಯ ಅವರಿಗೆ ರೈತರು ಸೇರಿದಂತೆ ವಿವಿಧ ಸಂಘ–ಸಂಸ್ಥೆಗಳು ಹಾಗೂ ನಾಗರಿಕರು ಸಲ್ಲಿಸಿದ್ದ ಮನವಿ ಪತ್ರಗಳನ್ನು ಕಸದ ಬುಟ್ಟಿಗೆ ಎಸೆಯಲಾಗಿದೆ. ಈ ಮೂಲಕ ಸಿದ್ದರಾಮಯ್ಯ ಜನ ಹಾಗೂ ರೈತ ವಿರೋಧಿ ನೀತಿ ಅನುಸರಿಸುತ್ತಿದ್ದಾರೆ. ಹಾಗಾಗಿ ಸಿಎಂ ಸ್ಥಾನಕ್ಕೆ ಕೂಡಲೇ ರಾಜೀನಾಮೆ ನೀಡಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಅವರ ಸರ್ವಾಧಿಕಾರಿ ಧೋರಣೆ, ದುರಾಡಳಿತ ಹಾಗೂ ದುರಾಹಂಕಾರದ ಪರಮಾವಧಿಗೆ ಇದು ಉದಾಹರಣೆಯಾಗಿದೆ. ಇಂತಹ ಉದ್ಧಾಟ ವರ್ತನೆ ತೋರಿರುವ ಸಿದ್ದರಾಮಯ್ಯ ರೈತರಲ್ಲಿ ಕ್ಷಮೆಯಾಚಿಸಬೇಕು. ಇಲ್ಲದಿದ್ದರೆ ಅವರು ಮತ್ತೊಮ್ಮೆ ಜಿಲ್ಲೆಗೆ ಬರಲು ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಸಿದರು. ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ನಾಯಕ ಹೊನ್ನೂರು ಪ್ರಕಾಶ್, ತಾಲೂಕು ಅಧ್ಯಕ್ಷ ವೀರಭದ್ರ ಸ್ವಾಮಿ, ಉಪಾಧ್ಯಕ್ಷ ಸಿದ್ದರಾಜ ನಾಯಕ, ದಿಲೀಪ್, ರಘು, ಬಿ.ವೈ.ಮಾದಪ್ಪ, ಲಿಂಗರಾಜು, ಕೊಂಗರಹಳ್ಳಿ ಸಿದ್ದಪ್ಪ, ಮುಳ್ಳೂರು ಪವನ್, ಕರಿಯ, ಮಂಜುನಾಥ್, ನವೀನ, ರೇಚ ಭಾಗವಹಿಸಿದ್ದರು.



ನೈಸ್ ರಸ್ತೆಯಲ್ಲಿ 2 ಭೀಕರ ಅಪಘಾತ: ನಾಲ್ವರು ಸಾವು, ಐವರಿಗೆ ಗಾಯ

ಬೆಂಗಳೂರು: ನೈಸ್ ರಸ್ತೆಯಲ್ಲಿ ಸೋಮವಾರ ಸಂಭವಿಸಿದ 2 ಪ್ರತ್ಯೇಕ ಅಪಘಾತದಲ್ಲಿ ನಾಲ್ವರು ಸಾವನ್ನಪ್ಪಿದ್ದಾರೆ. ಗೋವಾ ಪ್ರವಾಸಕ್ಕೆ ತೆರಳುತ್ತಿದ್ದಾಗ ಮಾರ್ಗ ಮಧ್ಯೆ ನೈಸ್ ರಸ್ತೆಯಲ್ಲಿ ಭೀಕರವಾಗಿ ಕಾರು ಅಪಘಾತಕ್ಕೀಡಾಗಿ ರಾಮನಗರ ಜಿಲ್ಲೆ ಕನಕಪುರ ತಾಲೂಕಿನ ಗ್ರಾಮಪಂಚಾಯಿತಿ ಸದಸ್ಯ ಸೇರಿ ಮೂವರು ಸಾವನ್ನಪ್ಪಿದ್ದಾರೆ.

ಮೃತರನ್ನು ಖಾಸಗಿ ಸಾರಿಗೆ ಉದ್ಯಮಿ ನಂಜೇಗೌಡ (45) ಕನಕಪುರದ ಗ್ರಾಮ ಪಂಚಾಯಿತಿ ಸದಸ್ಯ ಹಾಗೂ ಕಾರು ಚಾಲಕ ವಿನೋದ್ (36), ಹಾಲು ಉತ್ಪಾದಕರ ಸಹಕಾರ ಸಂಘದ ಸದಸ್ಯ ಎಚ್.ವಿ.ಕುಮಾರ್ (41) ಎಂದು ಗುರ್ತಿಸಲಾಗಿದೆ. ಈ ಘಟನೆಯಲ್ಲಿ ಮತ್ತೊಂದು ಕಾರಿನಲ್ಲಿದ್ದ ಶಿವರಾಮಕೃಷ್ಣ ಹಾಗೂ ಪ್ರಸನ್ನ ಗಾಯಗೊಂಡಿದ್ದು, ಪ್ರಾಣಪಾಯದಿಂದ ಪಾರಾಗಿದ್ದಾರೆ.

ದೇವನಹಳ್ಳಿ ವಿಮಾನ ನಿಲ್ದಾಣಕ್ಕೆ ಕಾರಿನಲ್ಲಿ ವಿನೋದ್, ಆತನ ಸ್ನೇಹಿತರು ತೆರಳುತ್ತಿದ್ದರು. ಈ ವೇಳೆ ನೈಸ್ ರಸ್ತೆಯ ಸೋಪುರ ಸರ್ಕಲ್ ಬಳಿ ಕಾರಿನ ಚಾಲನೆ ಮೇಲೆ ನಿಯಂತ್ರಣ ಕಳೆದುಕೊಂಡ ವಿನೋದ್, ರಸ್ತೆ ವಿಭಜಕಕ್ಕೆ ಗುದ್ದಿ ಅಲ್ಲಿಂದ ಹಾರಿ ಮತ್ತೊಂದು ಬದಿಗೆ ನುಗ್ಗಿದ್ದಾರೆ. ಆಗ ಎದುರಿಗೆ ಬಂದ ಕಾರಿಗೆ ತಮ್ಮ ಕಾರನ್ನು ಗುದ್ದಿಸಿದ್ದಾರೆ. ಈ ಘಟನೆಯಲ್ಲಿ ತೀವ್ರವಾಗಿ ಗಾಯಗೊಂಡು ಮೂವರೂ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಘಟನೆಗೆ ಅತಿವೇಗದ ಚಾಲನೆಯೇ ಕಾರಣ ಎಂದು ತಿಳಿದುಬಂದಿದೆ.

ಕಾರಿನಲ್ಲಿದ್ದವರು ಸೀಟ್ ಬೆಲ್ಟ್ ಧರಿಸಿರಲಿಲ್ಲ. ಹಾಗಾಗಿ ಅಪಘಾತ ಸಂಭವಿಸಿದಾಗ ಏರ್ ಬ್ಯಾಗ್ ತೆರೆದುಕೊಂಡಿಲ್ಲ. ಸ್ಪೀಡೋ ಮೀಟರ್ 14 ಕಿ.ಮೀಗೆ ಸ್ಥಗಿತವಾಗಿದೆ. ರಸ್ತೆಯಲ್ಲಿ ಬ್ರೇಕ್ ಹಾಕಿರುವುದಕ್ಕೆ ಯಾವುದೇ ಕುರುಹು ಇಲ್ಲ. ಆದ್ದರಿಂದ ಸ್ಕಾರ್ಪಿಯೋ ಚಾಲಕ ಅತಿವೇಗವಾಗಿ ಚಾಲನೆ ಮಾಡಿರುವುದು ಸ್ಪಷ್ಟವಾಗಿದೆ.

ಒಂದನೇ ಪುಟದಿಂದ

ಎನಿವೇರ್ ರಿಜಿಸ್ಟ್ರೇಷನ್

ಉಪಯೋಗ ಆಗಲಿದೆ ಎಂದು ಹೇಳಿದರು.

ಸಬ್ ರಿಜಿಸ್ಟ್ರಾರ್ ಕಚೇರಿ ಅಂದರೆ ಸದಾ ಜನ ದಟ್ಟಣೆ ಎಂಬ ಸಾಮಾನ್ಯ ಪರಿಸ್ಥಿತಿ ಇದೆ. ಆಸ್ತಿ ನೋಂದಣಿಗಾಗಿ ಜನರು ಗಂಟೆ ಗಟ್ಟಲೆ ಕಾಯಬೇಕಾದ ಪರಿಸ್ಥಿತಿ ಇದೆ. ಸರ್ಕಾರಿ ಕಚೇರಿಗಳಲ್ಲಿ ಜನ ಸಾಮಾನ್ಯರನ್ನು ಕಾಯಿಸುವುದು ಒಂದು ರೀತಿಯ ಶೋಷಣೆಯಾಗಿದೆ. ಈ ಕಾರಣಕ್ಕೆ ಜನ ಸ್ನೇಹಿಯಾದ ಎನಿವೇರ್ ರಿಜಿಸ್ಟ್ರೇಷನ್ ವ್ಯವಸ್ಥೆಯನ್ನು ಬೆಂಗಳೂರಿನಲ್ಲಿ ಪ್ರಾಯೋಗಿಕವಾಗಿ ಜಾರಿಗೊಳಿಸಲಾಗಿತ್ತು. ಈ ಯೋಜನೆ ಯಶಸ್ವಿ ಕೂಡ ಆಗಿದೆ. ಈ ಹಿನ್ನೆಲೆಯಲ್ಲಿ ಈಗ ರಾಜ್ಯದ ಎಲ್ಲರಿಗೂ ದೊರೆಯಬೇಕು ಎಂದು ಕೃಷ್ಣ ಭೈರೇಗೌಡ ಸೂಚಿಸಿದರು. ಬೆಳಗಾವಿ ಹಾಗೂ ತುಮಕೂರು ಜಿಲ್ಲೆಯಲ್ಲಿ ಕೂಡ ಇದೇ ಮಾರ್ಚ್ 14ರಿಂದ ಎನಿವೇರ್ ರಿಜಿಸ್ಟ್ರೇಷನ್ ವ್ಯವಸ್ಥೆ ಪರಿಚಯಿಸಲಾಗಿತ್ತು. ನೂತನ ವ್ಯವಸ್ಥೆಗೆ ಜನರಿಂದ ಉತ್ತಮ ಸ್ಪಂದನೆ ದೊರೆಯುತ್ತಿದೆ ಎಂದರು. ಈ ಹಿನ್ನೆಲೆಯಲ್ಲಿ ಆಗಸ್ಟ್ ಹಾಗೂ ಸೆಪ್ಟೆಂಬರ್‌ನಲ್ಲಿ ತಲಾ 4 ಜಿಲ್ಲೆಗಳಲ್ಲಿ ಈ ವ್ಯವಸ್ಥೆ ಪರಿಚಯಿಸಿ, ತರುವಾಯ 8 ಜಿಲ್ಲೆ, ಒಟ್ಟಾರೆ ಈ ವರ್ಷಾಂತ್ಯಕ್ಕೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ನೂತನ ನೋಂದಣಿ ಜಾರಿ ಮಾಡಿ ಎಂದು ಕೃಷ್ಣ ಭೈರೇಗೌಡ ಅಧಿಕಾರಿಗಳಿಗೆ ತಾಕೀತು ಮಾಡಿದರು. ನೂತನ ವ್ಯವಸ್ಥೆ ಜನರಿಗೆ ಉಪಯುಕ್ತವಾಗಿದೆ. ಜೊತೆಗೆ ಆಸ್ತಿ ನೋಂದಣಿಯಲ್ಲಿ ಪಾರದರ್ಶಕತೆ ಹೆಚ್ಚುತ್ತದೆ. ಎಲ್ಲದಕ್ಕಿಂತ ಹೆಚ್ಚಾಗಿ ಆಸ್ತಿ ನೋಂದಣಿ ಪ್ರಕ್ರಿಯೆಯಲ್ಲಿ ಸಮಯ ಉಳಿಸಬಹುದು. ಜೊತೆಗೆ ಸಬ್ ರಿಜಿಸ್ಟ್ರಾರ್ ಕಚೇರಿ ನೋಂದಣಿ ಕೆಲಸ ಜಿಲ್ಲೆಯ ಎಲ್ಲಾ ಕಚೇರಿಗಳಿಗೆ ಸಮಾನವಾಗಿ ಹಂಚಿಕೆಯಾಗಲಿದೆ ಎಂದರು. ಕಂದಾಯ ಇಲಾಖೆಯ (ವಿಪತ್ತು ನಿರ್ವಹಣೆ) ಪ್ರಧಾನ ಕಾರ್ಯದರ್ಶಿ ವಿ.ರಶ್ಮಿ ಮಹೇಶ್, ನೋಂದಣಿ ಮತ್ತು ಮುದ್ರಾಂಕ ಇಲಾಖೆಯ ಪ್ರಭಾರ ಮಹಾ ನಿರೀಕ್ಷಕ ಕೆ.ಎ.ದಯಾನಂದ ಸೇರಿದಂತೆ ಹಲವು ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಎನಿವೇರ್ ರಿಜಿಸ್ಟ್ರೇಷನ್ ಎಂದರೇನು?

ಶಿವಾಜಿನಗರ ಹಾಗೂ ರಾಜಾಜಿನಗರ ವ್ಯಾಪ್ತಿಯ ಯಾವುದೇ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ಆಸ್ತಿ ನೋಂದಣಿ ಮಾಡಿಸಲಾಗುತ್ತಿದೆ. ನೋಂದಣಿ ಕಾಯ್ದೆ 1908ರ ಕಲಂ(5) ಹಾಗೂ ಕಲಂ(6)ರ ಅಡಿ ಯಲ್ಲಿ ಈ ನೂತನ ವ್ಯವಸ್ಥೆಯನ್ನು ಜಾರಿಗೊಳಿಸಲಾಗಿದೆ. ದಸ್ತಾವೇಜು ನೋಂದಣಿ ಅಥವಾ ಆಸ್ತಿ ನೋಂದಣಿಯಿಂದ ನೋಂದಣಿಯ ವಿಳಂಬ ತಡೆಗಟ್ಟಬಹುದು. ಇದರಿಂದ ನೋಂದಣಿಗಾಗಿ ಜನರು ಸಬ್ ರಿಜಿಸ್ಟ್ರಾರ್ ಕಚೇರಿ ಮುಂದೆ ಕಾಯಬೇಕಾದ ಪರಿಸ್ಥಿತಿಗೆ ಮುಕ್ತಿ ದೊರೆಯಲಿದೆ. ಅಷ್ಟೇ ಅಲ್ಲದೆ ಸಬ್ ರಿಜಿಸ್ಟ್ರಾರ್ ಕಚೇರಿ ಸಿಬ್ಬಂದಿ ಮೇಲಿನ ಒತ್ತಡ ಕೂಡ ಕಡಿಮೆಯಾಗಲಿದೆ.

ಎನಿವೇರ್ ರಿಜಿಸ್ಟ್ರೇಷನ್‌ನಲ್ಲಿ ಆಸ್ತಿ ನೋಂದಣಿ ಮಾತ್ರವಲ್ಲದೆ, ವಿವಾಹ ನೋಂದಣಿಯೂ ಸೇರ್ಪಡೆಯಾಗುತ್ತವೆ. ಇದರಿಂದ ಜನರು ತಮಗೆ ಅನುಕೂಲವಾಗುವ ಯಾವುದೇ ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ನೋಂದಣಿ ಮಾಡಿಸಬಹುದು.

ವಿದೇಶಗಳಲ್ಲಿ ಆಸ್ತಿ ನೋಂದಣಿಯಲ್ಲಿ ಆಧುನಿಕ ತಂತ್ರಜ್ಞಾನ ಅಳವಡಿಕೆ ಹಲವು ವರ್ಷಗಳ ಹಿಂದೆಯೇ ಜಾರಿಯಲ್ಲಿದೆ. ಸದ್ಯ ಕರ್ನಾಟಕದಲ್ಲಿ ಇಂತಹ ಒಂದು ನೂತನ ವ್ಯವಸ್ಥೆ ಈಗಲಾದರೂ ಜಾರಿಯಾಯಿತಲ್ಲ ಎಂಬುದು ಸಮಾಧಾನಕರ ಸಂಗತಿ.

ಶೇ.27.5ರಷ್ಟು ಹೆಚ್ಚಳ

13,500 ರೂ.ಗೆ, ಗರಿಷ್ಠ 75,300 ರೂ.ನಿಂದ 1,20,600 ರೂ.ಗೆ ಪರಿಷ್ಕರಣೆ ಮಾಡಲಾಗಿದೆ. ಈ ಪರಿಷ್ಕರಣೆಯು ಅನುದಾನಿತ ಶಿಕ್ಷಣ ಸಂಸ್ಥೆಗಳ ನೌಕರರು, ವಿಶ್ವವಿದ್ಯಾಲಯಗಳ ಬೋಧಕೇತರ ಸಿಬ್ಬಂದಿಗೂ ಅನ್ವಯವಾಗುತ್ತದೆ.

ನೌಕರರ ವೇತನ ಪರಿಷ್ಕರಣೆಯಿಂದ ಸರ್ಕಾರದ ಬೊಕ್ಕಸಕ್ಕೆ ವಾರ್ಷಿಕ 20,208 ಕೋಟಿ ರೂ. ಹೊರೆ ಬೀಳಲಿದೆ. ಈ ಹೆಚ್ಚುವರಿ ವೆಚ್ಚಕ್ಕೆ 2024-25ರ ಆಯ-ವ್ಯಯದಲ್ಲಿ ಅಗತ್ಯ ಅನುದಾನವನ್ನು ಮೀಸಲಿಡಲಾಗಿದೆ ಎಂದು ವಿವರಿಸಿದರು.

ಹಾಸನಾಂಬೆ ದರ್ಶನ: ನ.3ರವರೆಗೆ ಉತ್ಸವ

ಪ್ರಸಾದ ಮತ್ತಿತರೆ ಅಗತ್ಯ ಸಿದ್ಧತೆಗಾಗಿ ಒಂದು ವಾರದೊಳಗೆ ಟೆಂಡರ್ ಕರೆಯುವಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ನಿರ್ದೇಶನ ನೀಡಿದರು. ಜಾತ್ರಾ ಸಂದರ್ಭದಲ್ಲಿ ಸ್ವಚ್ಛತೆಗೆ ಹೆಚ್ಚಿನ ಪ್ರಾಮುಖ್ಯತೆ ನೀಡಿ, ಹೆಚ್ಚು ಜನಸಂದಣಿ ಇರುವ ಕಾರಣ ಶೌಚಾಲಯ ನಿರ್ವಹಣೆ ಬಹಳ ಅಚ್ಚುಕಟ್ಟಾಗಿ ಆಗಬೇಕು.

ಈ ನಿಟ್ಟಿನಲ್ಲಿ ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು. ಯಾವುದೇ ಅವಘಡಗಳಿಗೆ ಆಸ್ಪದವಿಲ್ಲದಂತೆ ದೇವಸ್ಥಾನದ ಸುತ್ತ ಇರುವ ವಿದ್ಯುತ್ ಲೈನ್ ಮತ್ತು ಅಂಡರ್ ಗ್ರೌಂಡ್ ಕೇಬಲ್ ಅಳವಡಿಸಲು ಸೆಸ್ಕ್ ಅಧಿಕಾರಿಗಳು ಕ್ರಮ ಕೈಗೊಳ್ಳುವಂತೆ ತಿಳಿಸಿದರಲ್ಲದೆ, ಸುರಕ್ಷತಾ ಕ್ರಮಗಳನ್ನು ಕೈಗೊಂಡು ಜಾತ್ರಾ ಸಂದರ್ಭದಲ್ಲಿ ವಿದ್ಯುತ್ ನಿರ್ವಹಣೆಯ ಸಂಪೂರ್ಣ ಜವಾಬ್ದಾರಿಯನ್ನು ಇಲಾಖೆ ಅಧಿಕಾರಿಗಳು ನಿರ್ವಹಿಸಿ ಎಂದು ಸೂಚಿಸಿದರು.

ದೇವಿ ದರ್ಶನಕ್ಕೆ ಆಗಮಿಸುವ ಭಕ್ತಾದಿಗಳಿಗೆ ಅನುಕೂಲವಾಗುವಂತೆ ಈ ಬಾರಿ ಆನ್‌ಲೈನ್ ಬುಕಿಂಗ್ ವ್ಯವಸ್ಥೆ ಕಲ್ಪಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕೆಂದರು.

ಪ್ಯಾಕೇಜ್ ಟೂರ್ ವ್ಯವಸ್ಥೆ

ಪ್ರವಾಸಿಗರು ಹಾಸನ ಜಿಲ್ಲೆಯಲ್ಲಿರುವ ಪ್ರೇಕ್ಷಣೀಯ ಸ್ಥಳಗಳನ್ನು ನೋಡಲು ಅನುಕೂಲವಾಗುವಂತೆ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಪ್ಯಾಕೇಜ್ ಟೂರ್ ವ್ಯವಸ್ಥೆ ಮಾಡುವಂತೆ ಸೂಚಿಸಿದ ಜಿಲ್ಲಾಧಿಕಾರಿ, ಪ್ರವಾಸೋದ್ಯಮ ಇಲಾಖೆ ವತಿಯಿಂದ ಪ್ಯಾರಾ ಮೋಟರಿಂಗ್, ಪ್ಯಾರ ಗ್ಲೈಡಿಂಗ್ ಹಾಗೂ ಹಾಸನ ಬೈ ಸ್ಕೈ ಆಯೋಜನೆಗೆ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸತ್ಯಭಾಮ ತಿಳಿಸಿದರು.

ಸಾಂಸ್ಕೃತಿಕ ಕಾರ್ಯಕ್ರಮಗಳು ಹಾಗೂ ಕ್ರೀಡಾಕೂಟ ಆಯೋಜನೆಗೆ ಕ್ರಮವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರಲ್ಲದೆ, ನಗರದ ರಸ್ತೆಗಳ ಗುಂಡಿ ಮುಚ್ಚುವುದು ಹಾಗೂ ಸ್ವಚ್ಛತೆಗೆ ಗಮನಹರಿಸುವಂತೆ ನಗರಸಭೆ ಅಧಿಕಾರಿಗಳಿಗೆ ಸೂಚಿಸಿದರು. ಜಿಪಂ ಸಿಇಒ ಬಿಆರ್ ಪೂರ್ಣಿಮಾ, ಅಪರ ಡಿಸಿ ಕೆ.ಟಿ.ಶಾಂತಲಾ, ಸೆಸ್ಕ್ ಸೂಪರಿಂಟೆಂಡೆಂಟ್ ಎಂಜಿನಿಯರ್ ಎಂಕೆ ಸೋಮಶೇಖರ್, ಎಸಿ ಮಾರುತಿ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಿಎ ಜಗದೀಶ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದರು.

ಸಿಲುಕಿದ್ದ ಮೈಸೂರಿನ ನಾಲ್ವರ ರಕ್ಷಣೆ!



ಕೂಡಲೇ ಘಟನಾ ಸ್ಥಳಕ್ಕೆ ಆಗಮಿಸಿ ರಕ್ಷಣಾ ಕಾರ್ಯಗಳ ಉಸ್ತುವಾರಿ ವಹಿಸಿಕೊಂಡಿದ್ದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಅಗ್ನಿಶಾಮಕ ದಳದ ಸಿಬ್ಬಂದಿಯ ಈ ದಿಟ್ಟ ಕಾರ್ಯಾಚರಣೆಗೆ ಸಚಿವ ಕೃಷ್ಣನಕುಟ್ಟಿ ಅಭಿನಂದನೆ ಸಲ್ಲಿಸಿದ್ದಾರೆ. ಪಾಲಕ್ಕಾಡ್‌ನಲ್ಲಿ ಆರೆಂಜ್ ಅಲರ್ಟ್ ಘೋಷಿಸಲಾಗಿದ್ದು, 20 ಸೆಂಮೀವರೆಗೆ ಭಾರೀ ಮಳೆಯಾಗುವ ಎಚ್ಚರಿಕೆ ನೀಡಲಾಗಿದೆ. ಮಳೆಯಿಂದಾಗಿ ನೀರಿನ ಮಟ್ಟ ಹೆಚ್ಚಾಗುವ ಸಾಧ್ಯತೆಯ ಬಗ್ಗೆ ಅಗತ್ಯ ಮುನ್ನೆಚ್ಚರಿಕೆ ನೀಡಲಾಗಿದೆ. ಆದರೆ, ಕೆಲಸ ಅರಸಿ ಪಾಲಕ್ಕಾಡ್‌ಗೆ ಬಂದಿದ್ದ ಮೈಸೂರು ನಿವಾಸಿಗಳಾದ ನಾಲ್ವರು ಎಚ್ಚರಿಕೆ ಅರಿಯದೆ ನದಿಗೆ ಇಳಿದಿದ್ದು, ಏಕಾಏಕಿ ನೀರಿನ ಮಟ್ಟ ಹೆಚ್ಚಾದಾಗ ಸಂಕಷ್ಟಕ್ಕೆ ಸಿಲುಕಿದ್ದರು.

'ಮಹೇಂದ್ರ'ನ ಮೇಲೆ ಬಳ್ಳೆ ಶಿಬಿರದವರ ಕಣ್ಣು

●ಅರ್ಜುನ, ಕುಮಾರಸ್ವಾಮಿ, ದುರ್ಗಾಪರಮೇಶ್ವರಿ ಸಾವಿನಿಂದ ಭಣಗುಡುತ್ತಿರುವ ಬಳ್ಳೆ ಕ್ಯಾಂಪ್ ●ಭವಿಷ್ಯದಲ್ಲಿ ಅಂಬಾರಿ ಹೊರುವ ಸಾಮರ್ಥ್ಯವುಳ್ಳ ಆನೆಗಳನ್ನೇ ಕಳುಹಿಸುವಂತೆ ಹೆಚ್ಚಿದ ಒತ್ತಡ ●ಇಕ್ಕಟ್ಟಿನಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳು: ದಸರಾ ಆನೆ ಸ್ಥಳಾಂತರಕ್ಕೆ ತಜ್ಞರ ವಿರೋಧ


ಎಂ.ಟಿ.ಯೋಗೇಶ್ ಕುಮಾರ್

ಮೈಸೂರು, ಜು.16- ಕಾಡಾನೆ ಸೆರೆ ಕಾರ್ಯಾಚರಣೆ ವೇಳೆ ಅರ್ಜುನ, ಅನಾರೋಗ್ಯದಿಂದ ದುರ್ಗಾಪರಮೇಶ್ವರಿ ಹಾಗೂ ಕುಮಾರಸ್ವಾಮಿ ಆನೆ ಸಾವಿಗೀಡಾದ ಹಿನ್ನೆಲೆಯಲ್ಲಿ ಸ್ತಬ್ಧವಾಗಿರುವ ಹೆಚ್.ಡಿ.ಕೋಟೆ ತಾಲೂಕಿನ ಬಳ್ಳೆ ಸಾಕಾನೆ ಶಿಬಿರಕ್ಕೆ 'ಭವಿಷ್ಯದ ಅಂಬಾರಿ ಆನೆ'ಗಳ ಸ್ಥಳಾಂತರಕ್ಕೆ ರಾಜಕಾರಣಿಗಳಿಂದ ಒತ್ತಡವಿದ್ದು, ಮತ್ತಿಗೋಡು ಕ್ಯಾಂಪ್‌ನಿಂದ ಆನೆ ಪಡೆಯಲು ಲಾಬಿ ಶುರುವಾಗಿದೆ.

ಹೆಚ್.ಡಿ.ಕೋಟೆ ತಾಲೂಕು ವ್ಯಾಪ್ತಿಯ ನಾಗರಹೊಳೆ ಹುಲಿ ಸಂರಕ್ಷಿತ ಪ್ರದೇಶದ ಡಿ.ಬಿ.ಕುಪ್ಪೆ ವಲಯದಲ್ಲಿರುವ ಬಳ್ಳೆ ಶಿಬಿರ ಕೆಲವೇ ತಿಂಗಳಲ್ಲಿ ಎರಡು ದಸರಾ ಆನೆ, ಒಂದು ಸಾಕಾನೆ ಸೇರಿದಂತೆ ಮೂರು ಆನೆಗಳನ್ನು ಕಳೆದುಕೊಂಡಿದೆ. ಅದರಲ್ಲೂ ಸತತ 8 ಬಾರಿ ಅಂಬಾರಿ ಹೊತ್ತು, ವಯಸ್ಸಿನ ಕಾರಣ ನಿವೃತ್ತಿ ಹೊಂದಿ, ಕಳೆದ ವರ್ಷದ ದಸರಾ ಮಹೋತ್ಸವದಲ್ಲಿ ನಿಶಾನೆ ಆನೆಯಾಗಿ ಸಾಗಿ ಗಮನ ಸೆಳೆದಿದ್ದ ಅರ್ಜುನ, ಹಾಸನದ ಯಸಳೂರು ಅರಣ್ಯದಲ್ಲಿ ಕಾಡಾನೆ ಸೆರೆ ಕಾರ್ಯಾಚರಣೆಯಲ್ಲಿ ಒಂಟಿಸಲಗ ನಡೆಸಿದ ದಾಳಿಯಲ್ಲಿ ಮೃತಪಟ್ಟಿತ್ತು.

ಇದಕ್ಕೂ ಮುನ್ನ ದುರ್ಗಾಪರಮೇಶ್ವರಿ ಅನಾರೋಗ್ಯದಿಂದಲೂ, ನಾಲ್ಕು ತಿಂಗಳ ಹಿಂದೆ ಕಾಡಿಗೆ ಮೇಯಲು ಹೋಗಿದ್ದ ಕುಮಾರಸ್ವಾಮಿ ಮೃತಪಟ್ಟಿತ್ತು. ಈ ಹಿನ್ನೆಲೆಯಲ್ಲಿ ಕೆಲ ತಿಂಗಳಿಂದ ಸೂತಕದ ಮನೆಯಂತಿರುವ ಬಳ್ಳೆ ಶಿಬಿರಕ್ಕೆ ಕೆಲ ಆನೆಗಳನ್ನು ಸ್ಥಳಾಂತರಿಸಲು ಅರಣ್ಯ ಇಲಾಖೆ ಚಿಂತಿಸಿದೆ.

ಮಹೇಂದ್ರ, ಭೀಮನಿಗೆ ಬೇಡಿಕೆ: ಬಳ್ಳೆ ಶಿಬಿರಕ್ಕೆ ಕೆಲ ಆನೆ ಸ್ಥಳಾಂತರಿಸಲು ಅರಣ್ಯ ಇಲಾಖೆ ನಿರ್ಧರಿಸಿದ ಬೆನ್ನಲ್ಲೇ ಇದೀಗ ಲಾಬಿ ಆರಂಭವಾಗಿದೆ. ಭವಿಷ್ಯದ ಅಂಬಾರಿ ಆನೆ ಎಂದೇ ಬಿಂಬಿತವಾಗಿರುವ ಮತ್ತಿಗೋಡು ಶಿಬಿರದಲ್ಲಿರುವ ಸೌಮ್ಯ ಸ್ವಭಾವದ ಮಹೇಂದ್ರ ಹಾಗೂ ಭೀಮನನ್ನು ಬಳ್ಳೆಗೆ ಸ್ಥಳಾಂತರಿಸುವಂತೆ ಒತ್ತಡ ಹೇರಲಾಗುತ್ತಿದೆ. ಈಗಾಗಲೇ ಈ ಎರಡೂ ಆನೆಗಳು ಎರಡು ವರ್ಷ ದಸರಾದಲ್ಲಿ ಪಾಲ್ಗೊಂಡಿದ್ದು, ಭರವಸೆ ಮೂಡಿಸಿವೆ. ಭೀಮ ಪಟ್ಟದ ಆನೆಯಾಗಿ ರಾಜವಂಶಸ್ಥರ ಮನ ಗೆದ್ದಿದ್ದರೆ, ಮಹೇಂದ್ರ ಶ್ರೀರಂಗಪಟ್ಟಣ ದಸರಾದಲ್ಲಿ ಅಂಬಾರಿ ಹೊತ್ತು ಸೈ ಎನಿಸಿಕೊಂಡಿದೆ. ಚಿನ್ನದ ಅಂಬಾರಿ ಹೊರುವ ಪರ್ಯಾಯ ಆನೆಯಾಗಿಯೂ ತಾಲೀಮಿನಲ್ಲಿ ಮರದ ಅಂಬಾರಿ ಹೊತ್ತು ಯಶಸ್ವಿಯಾಗಿದ್ದಾನೆ. ಈ ಕಾರಣದಿಂದಲೇ ಮುಂದಿನ 6-7 ವರ್ಷದ ಬಳಿಕ ಮಹೇಂದ್ರ ಆನೆ ಚಿನ್ನದ ಅಂಬಾರಿ ಹೊರುವ ಜವಾಬ್ದಾರಿ ನಿಭಾಯಿಸುವುದರಿಂದ ಬಳ್ಳೆ ಶಿಬಿರದ ಕಣ್ಣು ಮಹೇಂದ್ರನ ಮೇಲೆ ಬಿದ್ದಿದೆ.



ಮತ್ತಿಗೋಡು ಕ್ಯಾಂಪ್‌ನಲ್ಲಿರುವ ಮಹೇಂದ್ರ ಆನೆ

ಸ್ಥಳಾಂತರಕ್ಕೆ ಉದ್ದೇಶಿಸಿದ್ದ ಆನೆಗಳೇ ಬೇರೆ: ಅರಣ್ಯ ಇಲಾಖೆ ಬಳ್ಳೆಗೆ ಮತ್ತಿಗೋಡು ಕ್ಯಾಂಪ್‌ನಲ್ಲಿರುವ ಶ್ರೀಕಂಠ, ರಾಮಯ್ಯ ಹಾಗೂ ಕಳೆದ ಬಾರಿ ದಸರಾ ಮಹೋತ್ಸವಕ್ಕೆ ಬಂದಿದ್ದ ಲಕ್ಷ್ಮೀ ನೀಡಲು ಉದ್ದೇಶಿಸಲಾಗಿತ್ತು ಆದರೆ ಭವಿಷ್ಯದಲ್ಲಿ ದಸರಾ ಮಹೋತ್ಸವದಲ್ಲಿ ಪ್ರಮುಖ ಪಾತ್ರ ವಹಿಸುವ ಆನೆಗಳನ್ನೇ ನೀಡುವಂತೆ ಲಾಬಿ ನಡೆಯುತ್ತಿದೆ.

ಹೊಸ ಆನೆ ನೀಡಲಿ: ಅರ್ಜುನ ಮಡಿದ ಸ್ಥಳದ ಸುತ್ತಮುತ್ತ ಉಪಟಳ ನೀಡುತ್ತಿದ್ದ ಸೀಗೆ, ಕರಡಿ ಆನೆಯನ್ನು ಈಗಾಗಲೇ ಅರಣ್ಯ ಇಲಾಖೆ ಸೆರೆ ಹಿಡಿದು ದುಬಾರೆ ಕ್ಯಾಂಪ್‌ನಲ್ಲಿ ಪಳಗಿಸಲಾಗುತ್ತಿದೆ. ಕ್ರಾಲ್‌ನಲ್ಲಿರುವ ಈ ಆನೆಗಳಿಗೆ ಈಗಾಗಲೇ ಬಬ್ರುವಾಹನ ಹಾಗೂ ರಾಜನ್ ಎಂದು ನಾಮಕರಣ ಮಾಡಲಾಗಿದೆ. ಮಾವುತ, ಕಾವಾಡಿಗಳ ನಿಯಂತ್ರಣಕ್ಕೆ ಈ ಆನೆಗಳು ಬಂದಿದ್ದು, ಕೆಲವೇ ದಿನಗಳಲ್ಲಿ ಕ್ರಾಲ್‌ನಿಂದ ಈ ಆನೆಗಳನ್ನು ಕ್ಯಾಂಪ್‌ಗೆ ಸ್ಥಳಾಂತರಿಸಲಾಗುತ್ತದೆ. ಬಬ್ರುವಾಹನ ಹಾಗೂ ರಾಜನ್ ಆನೆಗಳನ್ನು ಬಳ್ಳೆ ಕ್ಯಾಂಪ್‌ಗೆ ನೀಡಲಿ ಎಂದು ಕೆಲವರು ಸಲಹೆ ನೀಡಿದ್ದಾರೆ.

ದುಷ್ಪರಿಣಾಮ ಬೀರಲಿದೆ: ಮತ್ತಿಗೋಡು ಕ್ಯಾಂಪ್‌ನಲ್ಲಿರುವ ಮಹೇಂದ್ರ ಸೇರಿದಂತೆ ದಸರಾ ಆನೆಗಳನ್ನು ಬೇರೆ ಕ್ಯಾಂಪ್‌ಗೆ ಶಾಶ್ವತವಾಗಿ ಸ್ಥಳಾಂತರ ಮಾಡಿದರೆ, ಆನೆಯ ಮನಸ್ಥಿತಿ ಮೇಲೆ ದುಷ್ಪರಿಣಾಮ ಬೀರಲಿದೆ. ಇದರಿಂದ ಅರಣ್ಯ ಇಲಾಖೆ ಅಪಾಯವನ್ನು ಮೈಮೇಲೆ ಎಳೆದುಕೊಳ್ಳುವ ದುಸ್ಸಾಹಸ ಮಾಡಬಾರದು. ಒಂದು ವೇಳೆ ಸ್ಥಳಾಂತರ ಮಾಡಿದರೆ, ಅಂಬಾರಿ ಹೊರುವ ಪರ್ಯಾಯ ಆನೆ ತಯಾರಿಯಲ್ಲಿ ಭಾರಿ ಹಿನ್ನಡೆಯಾಗುವ ಸಾಧ್ಯತೆ ಇದೆ. ಮಾವುತರ ಮೂಲಕ ಮಹೇಂದ್ರನನ್ನು ಬಳ್ಳೆ ಕ್ಯಾಂಪ್‌ಗೆ ಸ್ಥಳಾಂತರಿಸುವಂತೆ ಪತ್ರ ಬರೆಯಲಾಗಿದ್ದು, ಅದನ್ನು ಪುರಸ್ಕರಿಸಬಾರದು. ಮುಂದಿನ ದಿನಗಳಲ್ಲಿ ಇತರೆ ಆನೆಗಳ ಮಾವುತರೂ ಈ ವಿಧಾನವನ್ನೇ ಅನುಸರಿಸಬಹುದು. ಈ ಹಿನ್ನೆಲೆಯಲ್ಲಿ ಎಚ್ಚರಿಕೆಯಿಂದ ಹೆಜ್ಜೆ ಇಡಬೇಕು ಎಂದು ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ಅಸಮಾಧಾನಕ್ಕೆ ನಾಂದಿ

ಮತ್ತಿಗೋಡು ಕ್ಯಾಂಪ್‌ನಿಂದ ಮಹೇಂದ್ರನನ್ನು ಒತ್ತಡಕ್ಕೆ ಮಣಿದು ನೀಡಿದರೆ, ಮುಂದಿನ ದಿನಗಳಲ್ಲಿ ಬೇರೆ ಬೇರೆ ಕಾರಣ ನೀಡಿ, ಇತರೆ ಆನೆಗಳನ್ನು ನೀಡುವಂತೆ ಒತ್ತಡ ಹೆಚ್ಚಾಗಬಹುದು. ಅಲ್ಲದೆ, ಪ್ರತಿಷ್ಠೆ ಕಾರಣದಿಂದ ಅಂಬಾರಿ ಆನೆಯನ್ನು ನೀಡುವಂತೆ ಒತ್ತಡ ಹೇರುವ ಸಾಧ್ಯತೆ ಇರುತ್ತದೆ. ಈ ಹಿನ್ನೆಲೆಯಲ್ಲಿ ಒತ್ತಡಕ್ಕೆ ಮಣಿಯಬಾರದು.

- ಪ್ರದೀಪ್ ಕುಮಾರ್, ಪ್ರಾಣಿ ಸಂರಕ್ಷಕ.

ಇನ್ನು ನಿರ್ಧರಿಸಿಲ್ಲ

ಬಳ್ಳೆ ಶಿಬಿರಕ್ಕೆ ಒಂದು ಗಂಡು, ಒಂದು ಹೆಣ್ಣಾನೆ ಕಳುಹಿಸಲು ನಿರ್ಧರಿಸಲಾಗಿದೆ. ಆದರೆ, ಯಾವ ಆನೆ ನೀಡಬೇಕು ಎಂದು ಇನ್ನು ನಿರ್ಧರಿಸಿಲ್ಲ. ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ಆನೆಗಳನ್ನು ಆಯ್ಕೆ ಮಾಡಲಾಗುತ್ತದೆ.

- ಹರ್ಷಕುಮಾರ್ ಚಿಕ್ಕನರಗುಂದ, ಡಿಸಿಎಫ್, ನಾಗರಹೊಳೆ

ಮಹೇಂದ್ರನ ಸ್ಥಳಾಂತರಕ್ಕೆ ಅಧಿಕಾರಿಗಳು ಒಪ್ಪಬಾರದು

ಬಳ್ಳೆ ಶಿಬಿರಕ್ಕೆ ಮತ್ತಿಗೋಡು ಆನೆ ಕ್ಯಾಂಪ್‌ನಿಂದ ಮಹೇಂದ್ರನನ್ನು ಸ್ಥಳಾಂತರ ಮಾಡುವುದಕ್ಕೆ ನಿರ್ಧರಿಸಿರುವುದು ಖಂಡನೀಯ. ಈಗಾಗಲೇ ಕ್ಯಾಂಪ್‌ನಲ್ಲಿದ್ದ ಕುಮಾರಸ್ವಾಮಿಯನ್ನು ಸರಿಯಾಗಿ ನೋಡಿಕೊಳ್ಳಲಾಗದೆ ಕಾಡಿಗೆ ಬಿಟ್ಟು, ಅದು ಅನಾರೋಗ್ಯದಿಂದ ಸಾಯುವಂತೆ ಮಾಡಿದರು. ಇದೀಗ ಭವಿಷ್ಯದ ಅಂಬಾರಿ ಆನೆ ಮಹೇಂದ್ರನ ಸ್ಥಳಾಂತರಿಸುವ ನಿರ್ಧಾರ ಸರಿಯಲ್ಲ. ಕಳೆದ ಕೆಲವು ವರ್ಷದಿಂದ ಈಗಿರುವಲ್ಲಿ ಮಾವುತ, ಕಾವಾಡಿಗಳೊಂದಿಗೆ ಉತ್ತಮವಾಗಿ ಹೊಂದಿಕೊಂಡಿದೆ. ಯಾವುದೋ ಒಂದು ಗುಂಪು ಹಾಗೂ ರಾಜಕಾರಣಿಗಳು ಒತ್ತಡ ಹೇರಿದರೆ, ಅರಣ್ಯ ಇಲಾಖೆ ಅದಕ್ಕೆಲ್ಲಾ ಆಸ್ಪದ ನೀಡಬಾರದು. ಆನೆಗಳ ವಿಚಾರದಲ್ಲಿ ಚೆಲ್ಲಾಟವಾಡಬಾರದು. ಇಂತಹ ಸೂಕ್ಷ್ಮ ವಿಚಾರದಲ್ಲಿ ರಾಜಕೀಯ ವ್ಯಕ್ತಿಗಳು ಶಿಫಾರಸ್ಸು ಮಾಡುವುದು, ಮಧ್ಯ ಪ್ರವೇಶ ಮಾಡಬಾರದು. ಮಹೇಂದ್ರನನ್ನು ಬಳ್ಳೆಗೆ ಕಳಿಸದೇ, ಬೇರೆ ಆನೆ ನೀಡಬೇಕು.

- ಜೋಸೆಫ್ ಹೂವರ್, ವನ್ಯಜೀವಿ ತಜ್ಞ

ಮೈಸೂರಲ್ಲಿ ದಿನೇ ದಿನೆ ಹೆಚ್ಚುತ್ತಿರುವ ಆನ್‌ಲೈನ್ ದೋಖಾ

ಲಾಭದ ಆಸೆಗೆ ಬಿದ್ದು 69 ಲಕ್ಷ ಕಳೆದುಕೊಂಡ ಮೈಸೂರು ರಿಯಲ್ ಎಸ್ಟೇಟ್ ಉದ್ಯಮಿ

ಮೈಸೂರು, ಜು.16(ಎಸ್‌ಬಿಡಿ)- ಹೂಡಿಕೆ ನೆಪದಲ್ಲಿ ರಿಯಲ್ ಎಸ್ಟೇಟ್ ಡೀಲರ್‌ನಿಂದ ಸುಮಾರು 69 ಲಕ್ಷ ರೂ. ವಂಚಿಸಿರುವ ಬಗ್ಗೆ ಮೈಸೂರಿನ ಸೆನ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ

ಮೈಸೂರಿನ ವಿಜಯನಗರದಲ್ಲಿ ವಾಸವಿರುವ ರಿಯಲ್ ಎಸ್ಟೇಟ್ ಡೀಲರ್, ಟಿಕೆಟ್ ಬುಕ್ಕಿಂಗ್ ರೇಟಿಂಗ್ ಮೂಲಕ ಹೆಚ್ಚು ಲಾಭ ಗಳಿಸಬಹುದೆಂದು ಹಂತ ಹಂತವಾಗಿ ಹಣ ಹೂಡಿಕೆ ಮಾಡಿ, ಮೋಸ ಹೋಗಿದ್ದಾರೆ.

ರಿಯಲ್ ಎಸ್ಟೇಟ್ ಡೀಲರ್‌ಗೆ, ಸ್ನೇಹಿತನೊಬ್ಬ ಸ್ಕೈ ಸ್ಕ್ಯಾನರ್(SKY SCANER) ಕಂಪನಿ ಬಗ್ಗೆ ತಿಳಿಸಿದ್ದಾರೆ. ಈ ಕಂಪನಿಯಲ್ಲಿ ಕೆಲ ಮಾನದಂಡಗಳಿದ್ದು, ಟಿಕೆಟ್ ಬುಕ್ಕಿಂಗ್ ವಿಷಯಕ್ಕೆ ರೇಟಿಂಗ್ ನೀಡಿದರೆ ಹೂಡಿಕೆ ಹಣದ ಶೇ.50ರಷ್ಟು ಲಾಭಾಂಶ ಸಿಗುತ್ತದೆ ಎಂದು ವಿವರಿಸಿದ್ದಾರೆ. ಸ್ನೇಹಿತನ ಮಾತು ನಂಬಿದ ರಿಯಲ್ ಎಸ್ಟೇಟ್ ಡೀಲರ್ ಮೊದಲು 10 ಸಾವಿರ ರೂ. ಹಣ ಹೂಡಿಕೆ ಮಾಡುತ್ತಾರೆ. ಆ ದಿನವೇ ಅವರಿಗೆ ಹೂಡಿಕೆ ಹಾಗೂ ಲಾಭಾಂಶ ಸೇರಿ ಒಟ್ಟು 15,400 ರೂ. ವಾಪಸ್ ಬರುತ್ತದೆ.

ಒಂದೇ ದಿನದಲ್ಲಿ ಇಷ್ಟೊಂದು ಲಾಭ ಬರುತ್ತದೆ ಎಂದು ಖುಷಿಯಾದ ರಿಯಲ್ ಎಸ್ಟೇಟ್ ಡೀಲರ್, ಸ್ನೇಹಿತನ ಸೂಚನೆಯಂತೆ ಮರುದಿನ 30 ಸಾವಿರ ರೂ. ಹೂಡಿಕೆ ಮಾಡುತ್ತಾರೆ. ಆಗಿನಿಂದ ವ್ಯವಹಾರದ ವರಸೆ ಬದಲಾಗುತ್ತದೆ. ಅಚ್ಚರಿಯ ಲಾಭಾಂಶ ಬಂದಿದ್ದರೂ ಅದನ್ನು ವಿತ್‌ಡ್ರಾ ಮಾಡುವ ಪ್ರಕ್ರಿಯೆ ವಿಫಲವಾಗುತ್ತಿರುತ್ತದೆ. ಆಗ ಕಂಪನಿ ನಿಯಮಾನುಸಾರ ಮತ್ತೆ 54,115 ರೂ. ಪಾವತಿ ಮಾಡಿದರೆ ಎಲ್ಲಾ ಹೂಡಿಕೆಗೂ ಒಟ್ಟಿಗೆ ಲಾಭಾಂಶ ನೀಡಲಾಗುವುದು ಎಂದು ವಂಚಕರು ನಂಬಿಸುತ್ತಾರೆ.

ಹೀಗೆ ಹೂಡಿಕೆ ಮಾಡಿದ್ದ ಸುಮಾರು 84 ಸಾವಿರ ಹಾಗೂ ಲಾಭಾಂಶವನ್ನು ಪಡೆಯಲು ರಿಯಲ್ ಎಸ್ಟೇಟ್ ಡೀಲರ್ ಕಸರತ್ತು ನಡೆಸುತ್ತಾರೆ. ಅಧಿಕ ಲಾಭದ ಆಸೆ ಹುಟ್ಟಿಸಿ, ವಿಐಪಿ ಚಾನೆಲ್, ವಿಐಪಿ ಸ್ಕೋರ್, ವಿಐಪಿ ಚಾನೆಲ್ ಇನ್ಸೂರೆನ್ಸ್, ಕ್ರೆಡಿಟ್ ಸ್ಕೋರ್, ಗ್ಯಾರಂಟಿ ಡಿಪಾಸಿಟ್, ಇನ್ಸೂರೆನ್ಸ್ ಟ್ಯಾಕ್ಸ್ ಇನ್ನಿತರ ಹೆಸರಿನಲ್ಲಿ ಮೂರು ತಿಂಗಳಲ್ಲಿ 68.96 ಲಕ್ಷ ರೂ. ಹಣ ಹೂಡಿಕೆ ಮಾಡಿಸಿಕೊಂಡು ರಿಯಲ್ ಎಸ್ಟೇಟ್ ಡೀಲರ್‌ಗೆ ವಂಚಿಸಿದ್ದಾರೆ.

ರಾತ್ರಿ ಕಂಡ ಬಾವಿಗೆ...!: ಆಕಸ್ಮಿಕವಾಗಿ ಆನ್‌ಲೈನ್‌ನಲ್ಲಿ ಹಣ ಕಳೆದುಕೊಳ್ಳುವ ಪ್ರಕರಣಗಳಿಗಿಂತ ರಾತ್ರಿ ಕಂಡ ಬಾವಿಗೆ ಹಗಲು ಬಿದ್ದಂತೆ ವಂಚನೆ ಬಗ್ಗೆ ತಿಳಿದಿದ್ದರೂ ಲಕ್ಷಾಂತರ ಹಣ ಹೂಡಿಕೆ ಮಾಡಿ ಮೋಸ ಹೋಗುವ ಪ್ರಕರಣಗಳು ಮೈಸೂರಿನಲ್ಲಿ ಹೆಚ್ಚುತ್ತಿವೆ. ಸೈಬರ್ ವಂಚಕರು ಒಂದಲ್ಲಾ ಒಂದು ರೀತಿಯಲ್ಲಿ ಜನರನ್ನು ದೋಚಲು ಹೊಂಚು ಹಾಕುತ್ತಿರುತ್ತಾರೆ. ಈ ಬಗ್ಗೆ ಪೊಲೀಸರು ಆಗಾಗ್ಗೆ ಎಚ್ಚರಿಕೆ ನೀಡುತ್ತಿರುತ್ತಾರೆ. ಬ್ಯಾಂಕ್ ಹಾಗೂ ಕೆಲ ಸರ್ಕಾರಿ ಕಚೇರಿಗಳಲ್ಲೂ ಈ ಸಂಬಂಧ ಪೋಸ್ಟರ್ ಅಳವಡಿಸಲಾಗಿದೆ. ಅಲ್ಲದೆ ಸೈಬರ್ ವಂಚನೆಗೊಳಗಾಗಿ ಹಣ ಕಳೆದುಕೊಂಡಿರುವ ಪ್ರಕರಣಗಳ ಬಗ್ಗೆ ಪತ್ರಿಕೆಗಳಲ್ಲಿ ವರದಿ ಪ್ರಕಟವಾಗುತ್ತಿದ್ದರೂ ಎಚ್ಚೆತ್ತುಕೊಂಡಿಲ್ಲ.

ಇದೇ ಸೈಬರ್ ವಂಚಕರಿಗೆ ದಾಳವಾಗಿದೆ. ಕಡಿಮೆ ಸಮಯದಲ್ಲಿ ಭಾರಿ ಲಾಭ ಗಳಿಸಿ, ಬೇಗ ಶ್ರೀಮಂತನಾಗಬೇಕೆಂಬ ಆಸೆಯಿಂದ ಬಡ ಹಾಗೂ ಮಧ್ಯಮ ವರ್ಗದ ಜನ ಸಾಲ ಮಾಡಿ, ಈ ರೀತಿಯಲ್ಲಿ ಹಣ ಕಳೆದುಕೊಳ್ಳುತ್ತಿದ್ದಾರೆ. ಇನ್ನು, ಹಣವಂತರು ಶ್ರೀಮಂತಿಕೆಯನ್ನು ಹೆಚ್ಚಿಸಿಕೊಳ್ಳುವ ಧಾವಂತದಲ್ಲಿ ಗಳಿಸಿದ್ದನ್ನೆಲ್ಲಾ ವಂಚಕರಿಗೆ ಎರೆಯುತ್ತಿದ್ದಾರೆ. ಒಟ್ಟಾರೆ ಗಾಳಕ್ಕೆ ಎರೆಹುಳು ಕಟ್ಟಿ ಮೀನು ಹಿಡಿದಂತೆ, ಆರಂಭದಲ್ಲಿ ಒಂದಿಷ್ಟು ಲಾಭ ನೀಡಿ, ಸೈಬರ್ ವಂಚಕರು ಕೋಟಿ ಕೋಟಿ ದೋಚುತ್ತಿದ್ದಾರೆ. ಸ್ವಯಂ ಜಾಗ್ರತೆಯಿಂದ ಮಾತ್ರ ಈ ರೀತಿಯ ವಂಚನೆಯಿಂದ ಪಾರಾಗಬಹುದಷ್ಟೇ.

ಕೊರಿಯರ್‌ನಲ್ಲಿ ಡ್ರಗ್ಸ್ ಸಾಗಿಸಿದ ಬೆದರಿಕೆ ಹಾಕಿ

ಮೈಸೂರು ಇಂಜಿನಿಯರ್‌ನಿಂದ 5 ಲಕ್ಷ ಸುಲಿಗೆ

ಮೈಸೂರು, ಜು.16(ಎಸ್‌ಬಿಡಿ)- ನಿಮ್ಮ ಹೆಸರಿನಲ್ಲಿ ಬಂದಿರುವ ಕೊರಿಯರ್‌ನಲ್ಲಿ ಡ್ರಗ್ಸ್ ಪತ್ತೆಯಾಗಿದೆ ಎಂದು ಇಂಜಿನಿಯರ್‌ವೊಬ್ಬರನ್ನು ಹೆದರಿಸಿ, ಪರಿಶೀಲನೆ ನೆಪದಲ್ಲಿ ಸುಮಾರು 5 ಲಕ್ಷ ರೂ. ವಂಚಿಸಿರುವ ಬಗ್ಗೆ ಮೈಸೂರಿನ ಇಲವಾಲ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಇಲವಾಲ ಹೋಬಳಿ, ಕುಮಾರಬೀಡು ಸಮೀಪದ ಬಡಾವಣೆಯೊಂದರ ನಿವಾಸಿ, 40 ವರ್ಷದ ಇಂಜಿನಿಯರ್‌ಗೆ ವಂಚನೆಗೊಳಗಾಗಿದ್ದಾರೆ.

ಇವರಿಗೆ ವಾರದ ಹಿಂದೆ ಸಂಜೆ ವೇಳೆ ಓರ್ವ ವ್ಯಕ್ತಿ ಕರೆ ಮಾಡುತ್ತಾನೆ. ಮುಂಬೈ ಪೊಲೀಸ್ ಎಂದು ಹೇಳಿಕೊಂಡು ಇಂಗ್ಲಿಷ್‌ನಲ್ಲಿ ಮಾತನಾಡಿದ ಆತ ನಿಮ್ಮ ಹೆಸರು ಹಾಗೂ ಆಧಾರ್ ಸಂಖ್ಯೆ ಮೂಲಕ ಮುಂಬೈನ ಟಿವಿ ಇರಾನಿಗೆ ಒಂದು ಕೊರಿಯರ್ ಹೋಗಿದ್ದು, ಅದರಲ್ಲಿ ಡ್ರಗ್ಸ್ ಇರುವುದು ಗೊತ್ತಾಗಿದೆ. ಈ ಬಗ್ಗೆ ಹೇಳಿಕೆ ನೀಡಲು ನಾವು ಕರೆದಾಗಲೆಲ್ಲಾ ಮುಂಬೈಗೆ ಬರಬೇಕು ಎಂದು ಹೆದರಿಸಿದ್ದಾನೆ.

ಈ ಇಂಜಿನಿಯರ್, ಚೆನ್ನೈನಲ್ಲಿ ಬ್ಯಾಂಕ್ ಖಾತೆ ತೆರೆಯುವ ವೇಳೆ ಆಧಾರ್ ಹಾಗೂ ಮೊಬೈಲ್ ನಂಬರ್ ಲಿಂಕ್ ಮಾಡಿಸಿದ್ದರು. ಆ ಸಂದರ್ಭದಲ್ಲಿ ಏನಾದರೂ ಮೊಬೈಲ್ ಹಾಗೂ ಆಧಾರ್ ನಂಬರ್ ದುರ್ಬಳಕೆ ಆಗಿದೆಯೇ ಎಂದು ಯೋಚಿಸಿ, ಕರೆ ಮಾಡಿದ್ದವರ ಜೊತೆ ಮಾತು ಮುಂದುವರೆಸುತ್ತಾರೆ. ಆಗ ಮುಂಬೈ ಪೊಲೀಸ್ ಎಂದಾತ 'ನೀವು ನಮಗೆ ಹಣ ಹಾಕಿದರೆ ನಿಮ್ಮ ಹಣಕಾಸಿನ ವ್ಯವಹಾರಗಳನ್ನು ಭಾರತದಲ್ಲೆಲ್ಲಾ ಪರಿಶೀಲಿಸಿ, ನಂತರ ಎಲ್ಲಾ ಹಣವನ್ನೂ ವಾಪಸ್ ಕಳುಹಿಸುತ್ತೇವೆ' ಎಂದು ನಂಬಿಸಿದ್ದಾನೆ. ಆತನ ಮಾತನ್ನು ನಂಬಿದ ಇಂಜಿನಿಯರ್ ಮೊದಲು 98,887 ರೂ. ಹಣವನ್ನು ವರ್ಗಾವಣೆ ಮಾಡಿ, 10 ನಿಮಿಷದ ನಂತರ ಮತ್ತೆ 3.99 ಲಕ್ಷ ರೂ. ಸೇರಿ ಒಟ್ಟು ಒಟ್ಟು 4,97,887 ರೂ. ಹಣವನ್ನು ಆತನ ಹೇಳಿದ್ದ ಖಾತೆಗಳಿಗೆ ವರ್ಗಾವಣೆ ಮಾಡುತ್ತಾರೆ.

ಹಣ ವರ್ಗಾವಣೆ ನಂತರ ಯಾವುದೇ ಪ್ರತಿಕ್ರಿಯೆಯೂ ಬರುವುದಿಲ್ಲ. ಕರೆ ಬಂದಿದ್ದ ಮೊಬೈಲ್ ನಂಬರ್ ಕೂಡ ಬಂದ್ ಆಗಿರುತ್ತದೆ. ತಾವು ಮೋಸ ಹೋಗಿರುವುದು ಗೊತ್ತಾಗಿ ಕೂಡಲೇ 1930 ಗೆ ಕರೆ ಮಾಡಿ, ಬ್ಯಾಂಕ್ ಖಾತೆಯನ್ನು ಹೋಲ್ಡ್ ಮಾಡಿಸಿದರಾದರೂ ಕಳೆದುಕೊಂಡ ಹಣ ಮತ್ತೆ ಸಿಗುವುದು ಸುಲಭವಲ್ಲ.

ಮೈಸೂರು ವಿವಿಯಲ್ಲಿ 'ಏಕ ಪ್ರಾಧ್ಯಾಪಕ' ಪರಿಸರ

●ಕುಲಸಚಿವೆ ವಿ.ಆರ್.ಶೈಲಜಾ ಬೇಸರ ●ಶೈಕ್ಷಣಿಕ ಗುಣಮಟ್ಟ ಕುಸಿಯುವ ಆತಂಕ

ಮೈಸೂರು, ಜು.16(ಎಸ್‌ಪಿಎನ್)- ಶಾಲಾ ಶಿಕ್ಷಣ ಇಲಾಖೆಯಡಿ ಬರುವ ಪ್ರಾಥಮಿಕ ಶಾಲೆಗಳಲ್ಲಿ ಶೂನ್ಯ ಮತ್ತು ಏಕೋಪಾಧ್ಯಾಯ ಶಾಲೆಗಳ ಪರಿಸರವನ್ನು ಕಂಡಿದ್ದೇವೆ. ಇದೀಗ ಮೈಸೂರು ವಿವಿಯಲ್ಲಿ ಅಂತಹುದೇ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕುಲಸಚಿವೆ ವಿ.ಆರ್.ಶೈಲಜಾ ಆತಂಕ ವ್ಯಕ್ತಪಡಿಸಿದರು.

ಮೈಸೂರು ವಿವಿ ಮಾನಸಗಂಗೋತ್ರಿ ಆವರಣದ ವಿಜ್ಞಾನ ಭವನದಲ್ಲಿ ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗದ ಎಫ್‌ಎಸ್‌ಎನ್ ಗೋಲ್ಡನ್ ಜುಬಿಲಿ ಗ್ರೂಪ್‌ನ ಹಳೆ ವಿದ್ಯಾರ್ಥಿ ಸಂಘ ಉದ್ಘಾಟನೆ ಮತ್ತು ಸುವರ್ಣ ಮಹೋತ್ಸವ ವಿಶೇಷ ಉಪನ್ಯಾಸ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಮೈಸೂರು ವಿಶ್ವವಿದ್ಯಾನಿಲಯದ ಕೆಲ ವಿಭಾಗಗಳಲ್ಲಿ ಏಕ ಪ್ರಾಧ್ಯಾಪಕ, ಇನ್ನು ಕೆಲವು ವಿಭಾಗದಲ್ಲಿ ಶೂನ್ಯ ಪ್ರಾಧ್ಯಾಪಕ(ಖಾಯಂ ಪ್ರಾಧ್ಯಾಪಕರು ಇಲ್ಲದಿರುವುದು) ವಿಭಾಗಗಳನ್ನು ನನ್ನ ಅವಧಿಯಲ್ಲಿ ನೋಡಿದ್ದೇನೆ, ಕಂಡಿದ್ದೇನೆ. ಇದರಿಂದ ಆ ವಿಭಾಗದ ಶೈಕ್ಷಣಿಕ ಗುಣಮಟ್ಟವೂ ಕಡಿಮೆಯಾಗುತ್ತಿದೆ ಎಂದು ಬೇಸರ ವ್ಯಕ್ತಪಡಿಸಿದರು.

ಏಕ ಪ್ರಾಧ್ಯಾಪಕರ ವಿಭಾಗ: ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗದ ಹಳೆ ವಿದ್ಯಾರ್ಥಿ ಸಂಘ ಉದ್ಘಾಟನೆಯಾಗುತ್ತಿರುವುದು ಒಳ್ಳೆಯ ಸಂಗತಿ. ಈ ಸಂಘದ ಅಧ್ಯಕ್ಷರಾದ ಡಾ.ಅಸ್ನಾ ಉರೂಜ್ ಅವರು, ಈ ತಿಂಗಳ ಅಂತ್ಯದಲ್ಲಿ ನಿವೃತ್ತಿಯಾಗುತ್ತಿದ್ದಾರೆ. ಇವರ ನಂತರ ಡಾ.ಕೋಮಲ ಏಕಾಂಗಿಯಾಗಿ ಅತಿಥಿ ಉಪನ್ಯಾಸಕರೊಂದಿಗೆ ಈ ವಿಭಾಗವನ್ನು ಮುನ್ನಡೆಸುವ ಅನಿವಾರ್ಯತೆ ಎದುರಾಗಿದೆ. ಪ್ರಾಥಮಿಕ ಶಾಲೆಗಳಲ್ಲಿ ಶಿಕ್ಷಕರಿಲ್ಲದ ಇಲ್ಲವೇ 'ಏಕೋಪಾಧ್ಯಾಯ ಪದ್ಧತಿ ಇರುವ ಶಾಲೆಗಳಲ್ಲಿ ಇಂತಹ ಪರಿಸರವನ್ನು ಕಂಡಿದ್ದೇವೆ. ಆ ಶಾಲೆಯ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಕಡಿಮೆಯಾಗಿರುವಂತೆ ವಿವಿಯ ಕೆಲ ವಿಭಾಗಗಳಲ್ಲಿ ಪ್ರಾಧ್ಯಾಪಕರಿಲ್ಲದ ಕಾರಣ ಶೈಕ್ಷಣಿಕ ಗುಣಮಟ್ಟ ಕಡಿಮೆಯಾಗುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು.



ಮೈಸೂರು ವಿವಿ ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗದ ಹಳೆ ವಿದ್ಯಾರ್ಥಿ ಸಂಘ ಉದ್ಘಾಟನೆ ಮತ್ತು ಸುವರ್ಣ ಮಹೋತ್ಸವ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಲಾಯಿತು.

ಬಿಪಿ, ಶುಗರ್‌ಗಳ ರಾಜಧಾನಿ: ಮೈಸೂರಲ್ಲಿ ಪ್ರಸಿದ್ಧ ಸಿಎಫ್‌ಟಿಆರ್‌ಐ-ಸಿಎಸ್‌ಐಆರ್ ಆಹಾರ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ಅದೇ ರೀತಿ ಮೈಸೂರು ವಿವಿಯಲ್ಲಿ ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗ ಸಾಮಾಜಿಕ ಆರೋಗ್ಯ ಸಮಸ್ಯೆಗೆ ಗುಣಮಟ್ಟದ ಆಹಾರ ಪದ್ಧತಿ ಕುರಿತು ಜನರಲ್ಲಿ ಜಾಗೃತಿ ಮೂಡಿಸಲಿ ಎಂದ ಕುಲಸಚಿವರು, ಪಾಶ್ಚಿಮಾತ್ಯ ಆಹಾರದಿಂದಾಗಿ ಭಾರತ ಮಧುಮೇಹಿ, ರಕ್ತದೊತ್ತಡಗಳ ರಾಜಧಾನಿಯಾಗುತ್ತಿದೆ. ನಮ್ಮ ಆರೋಗ್ಯ ನಿರ್ವಹಣೆ ಫಾರ್ಮಾ ಕಂಪನಿಗಳ ಕೈಯಲ್ಲಿದ್ದು, ಪೌಷ್ಟಿಕ ಆಹಾರ ಸೇವನೆ ಮೂಲಕ ಉತ್ತಮ ಆರೋಗ್ಯ ಕಾಪಾಡಿಕೊಳ್ಳುವ ಬಗ್ಗೆ ಜನ ಸಾಮಾನ್ಯರಲ್ಲಿ ಜಾಗೃತಿ ಮೂಡಿಸುವ ಅಗತ್ಯತೆ ಇದೆ ಎಂದು ಒತ್ತಿ ಹೇಳಿದರು.

ಪೌಷ್ಟಿಕ ಆಹಾರ ಸೇವನೆ ಬದಲು ಪಾಶ್ಚಿಮಾತ್ಯ ಶೈಲಿ ಆಹಾರ ಪದ್ಧತಿಯಿಂದ ಚಿಕ್ಕ ವಯಸ್ಸಿನಿಂದಲೇ ಅಧಿಕ ರಕ್ತದೊತ್ತಡ, ಮಧುಮೇಹ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಇದನ್ನು ತಡೆಗಟ್ಟುವ ನಿಟ್ಟಿನಲ್ಲಿ ಆಹಾರ ತಜ್ಞರು ಕೆಲಸ ಮಾಡಬೇಕಿದೆ ಎಂದು ಸಲಹೆ ನೀಡಿದರು.

ಅಡುಗೆ ತಯಾರಿಸುವಷ್ಟು ಸಮಯ ಇದೆಯೇ: ನಾನು ಕುಲಸಚಿವೆಯಾಗಿ ಹೇಳುವುದಕ್ಕಿಂತ ಓರ್ವ ಗೃಹಿಣಿಯಾಗಿ ಆಹಾರ ಪದ್ಧತಿ ಬಗ್ಗೆ ಹೇಳುವುದಾದರೆ, ನಮ್ಮ ಹಿರಿಯರು ಹಿಂದಿನ ಕಾಲದಲ್ಲಿ ಅಡುಗೆ ಮನೆಯಲ್ಲಿ ಗುಣಮಟ್ಟದ ತಿನಿಸುಗಳನ್ನು ತಯಾರಿಸುತ್ತಿದ್ದರು. ಗಂಡ, ಮಕ್ಕಳು, ಹಿರಿಯರಿಗೆ (ಅವಿಭಕ್ತ ಕುಟುಂಬಕ್ಕೆ ಬೇಕಾದ ಆಹಾರ) ಬೇಕಾದ ತಿಂಡಿ-ತಿನಿಸು ಹಾಗೂ ಬಗೆಬಗೆಯ ಆಹಾರಗಳನ್ನು ರೆಡಿ ಮಾಡುತ್ತಿದ್ದರು. ಇದರಿಂದ ಯಾವುದೇ ಆರೋಗ್ಯ ಸಮಸ್ಯೆ ಕಾಡುತ್ತಿರಲಿಲ್ಲ. ಈಗ ಆ ಪದ್ಧತಿ ಇದೆಯೇ? ಈಗಿನ ಹೆಣ್ಣು ಮಕ್ಕಳು ಅಡುಗೆ ಮನೆಯಲ್ಲಿ ಬಗೆಬಗೆಯ ತಿನಿಸುಗಳನ್ನು ರೆಡಿ ಮಾಡುವ ಸಮಯ ಮಾಡಿಕೊಳ್ಳುತ್ತಿದ್ದೇವೆಯೇ ಎಂಬುದನ್ನು ನಮ್ಮನ್ನು ನಾವು ಪ್ರಶ್ನಿಸಿಕೊಳ್ಳಬೇಕಿದೆ. ಅಲ್ಲದೆ, ಈ ವಿಭಾಗದ ಹಿರಿಯ ವಿದ್ಯಾರ್ಥಿಗಳೆಲ್ಲಾ ಸೇರಿ ಹಳೆ ವಿದ್ಯಾರ್ಥಿಗಳ ಸಂಘ ಉದ್ಘಾಟಿಸಿದ್ದಾರೆ. ಈ ಸಂಘ ವಿವಿ ಶೈಕ್ಷಣಿಕ ಉನ್ನತಿಗೆ ಕೈಜೋಡಿಸಲಿ ಎಂದು ಆಶಿಸಿದರು.

ಇದೇ ವೇಳೆ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷೆ ಡಾ.ಅಸ್ನಾ ಉರೂಜ್, ಡಾ.ಶಶಿಕಲಾ ಪುಟ್ಟರಾಜು, ಡಾ.ಜಮುನಾ ಪ್ರಕಾಶ್ ಅವರನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ನ್ಯೂಟ್ರಿಷನ್‌ನ ಮಾಜಿ ನಿರ್ದೇಶಕ ಡಾ.ಬಿ.ಸೆಸಿಕರನ್, ಡಾ.ಎಂ.ಎಸ್.ಹೇಮಲತಾ, ಡಾ.ಅನೀಸ್ ಫಾತಿಮಾ ಸೇರಿದಂತೆ ಇತರೆ ಉಪನ್ಯಾಸಕರಿದ್ದರು.

> ಜಗತ್ತಿನ ಪ್ರಖ್ಯಾತ ವಿವಿಗಳಾದ ಆಕ್ಸ್‌ಫರ್ಡ್, ಹಾರ್ವರ್ಡ್ ಸೇರಿದಂತೆ ಇತರೆ ವಿವಿಗಳಲ್ಲಿ ಹಳೇ ವಿದ್ಯಾರ್ಥಿಗಳ ಸಂಘಗಳು ಬಲಿಷ್ಠವಾಗಿ ಬೆಳೆದಿವೆ. ಈ ಸಂಘಗಳಿಂದ ಆ ವಿವಿಗಳ ಬೆಳವಣಿಗೆಗೆ ಸಹಕಾರಿಯಾಗುತ್ತಿದೆ. ಈ ನಿಟ್ಟಿನಲ್ಲಿ ಆಹಾರ ವಿಜ್ಞಾನ ಮತ್ತು ಪೋಷಣೆ ಅಧ್ಯಯನ ವಿಭಾಗದ ಸಂಘವು ಉನ್ನತ ಸ್ಥಾನಕ್ಕೆ ಬೆಳೆಯಲಿ.
>
> - ಡಾ.ಬಿ.ಸೆಸಿಕರನ್, ಮಾಜಿ ನಿರ್ದೇಶಕ, ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ನ್ಯೂಟ್ರಿಷನ್

ಲೋಕ ಅದಾಲತ್‌ನಲ್ಲಿ 10 ವರ್ಷದ ನಂತರ ಒಂದಾದ ದಂಪತಿ

ತಂದೆ-ತಾಯಿಯನ್ನು ಒಂದುಗೂಡಿಸಿದ ನ್ಯಾಯಾಧೀಶರಿಗೆ ಕೈಮುಗಿದ ಪುತ್ರಿ



ಲೋಕ್ ಅದಾಲತ್‌ನಲ್ಲಿ ಒಂದಾದ ದಿವ್ಯಾ ಮತ್ತು ಮುರಳಿ ದಂಪತಿ.

ಹುಣಸೂರು, ಜು.16– ಹುಣಸೂರು ನ್ಯಾಯಾಲಯಗಳ ಆವರಣದಲ್ಲಿ ನಡೆದ ರಾಷ್ಟ್ರೀಯ ಲೋಕ್ ಅದಾಲತ್ ಕಾರ್ಯಕ್ರಮದಲ್ಲಿ ಕಳೆದ ಹತ್ತು ವರ್ಷಗಳಿಂದ ದೂರವಿದ್ದ ದಂಪತಿಗಳು ನ್ಯಾಯಾಧೀಶರುಗಳ ಸಮ್ಮುಖದಲ್ಲಿ ಒಂದಾಗಿದ್ದಾರೆ.

ಹುಣಸೂರು ನಗರದ ವಾಸಿ ಬಿ.ಕಾಂ ಪದವೀಧರೆ ದಿವ್ಯಾ ಮತ್ತು ಬೆಂಗಳೂರಿನ ಮುರಳಿ ದಂಪತಿಗಳೇ ರಾಷ್ಟ್ರೀಯ ಲೋಕ್ ಅದಾಲತ್‌ನಲ್ಲಿ ಒಂದಾದ ದಂಪತಿ. ದಿವ್ಯಾ ಮತ್ತು ಮುರಳಿ ಹತ್ತು ವರ್ಷಗಳ ಹಿಂದೆ ಮದುವೆಯಾಗಿ ಒಂದು ಹೆಣ್ಣು ಮಗು ಸಹ ಇದ್ದು, ನಂತರದ ದಿನಗಳಲ್ಲಿ ಮನಸ್ತಾಪಗೊಂಡು ದೂರವಾಗಿದ್ದರು. ನಂತರ ದಿವ್ಯಾ ತನ್ನ ಪತಿ ಮುರಳಿ ವಿರುದ್ಧ ಜೀವನಾಂಶಕ್ಕಾಗಿ ಆರು ವರ್ಷಗಳ ಹಿಂದೆ ಹುಣಸೂರು ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದ್ದರು. ಅಂದಿನಿಂದ ನಡೆಯುತ್ತಿದ್ದ ಪ್ರಕರಣ ಶನಿವಾರ ನಡೆದ ರಾಷ್ಟ್ರೀಯ ಲೋಕ್ ಅದಾಲತ್ ಕಾರ್ಯಕ್ರಮದಲ್ಲಿ ಸತಿ–ಪತಿಗಳು ಎಲ್ಲಾ ಮನಸ್ತಾಪ ಮರೆತು ಒಂದಾದರು. ಈ ಸಂದರ್ಭದಲ್ಲಿ ಇವರ 9 ವರ್ಷದ ಮಗಳು ತಂದೆ–ತಾಯಿ ಒಂದಾಗಿರುವುದನ್ನು ಕಂಡು ಸಂತಸದಿಂದ ನ್ಯಾಯಾಧೀಶರುಗಳಿಗೆ ಕೈಮುಗಿದು ಕೃತಜ್ಞತೆ ಸಲ್ಲಿಸಿದ್ದು ಮನಕರಗುವಂತಿತ್ತು. ದಿವ್ಯಾಳ ಪರವಾಗಿ ವಕೀಲ ಪೂರ್ಣಚಂದ್ರ ಮತ್ತು ಮುರಳಿ ಪರವಾಗಿ ವಕೀಲ ಕೆ.ಆರ್. ಮಂಜುನಾಥ್ ವಕಾಲತ್ತು ವಹಿಸಿದ್ದರು. ಎಲ್ಲಾ ನ್ಯಾಯಾಧೀಶರು ದಂಪತಿಗಳಿಗೆ ಹಾರ ಹಾಕಿಸಿ, ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ 8ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಟಿ.ಗೋವಿಂದಯ್ಯ, ಪ್ರಧಾನ ಹಿರಿಯ ಶ್ರೇಣಿ ಸಿವಿಲ್ ನ್ಯಾಯಾಧೀಶರು ಮತ್ತು ತಾಲೂಕು ಕಾನೂನು ಸೇವಾ ಸಮಿತಿಯ ಅಧ್ಯಕ್ಷೆ ಶ್ರೀಮತಿ ಜೈಭುನ್ನಿಸಾ, ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ತಾಲೂಕು ಕಾನೂನು ಸೇವಾ ಸಮಿತಿಯ ಸದಸ್ಯ ಕಾರ್ಯದರ್ಶಿ ಬಿ.ವೈ.ಮನು ಪಟೇಲ್, ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ಅನಿತಾ, ಹೆಚ್ಚುವರಿ ಸಿವಿಲ್ ನ್ಯಾಯಾಧೀಶರಾದ ಶ್ರೀಮತಿ ಪೂಜಾ ಬೆಳಕೆರೆ, ವಕೀಲರ ಸಂಘದ ಅಧ್ಯಕ್ಷ ಎಸ್. ಶಿವಣ್ಣೇಗೌಡ, ಉಪಾಧ್ಯಕ್ಷ ಸಿ.ಹರೀಶ್ ಕುಮಾರ್, ಸಂಘದ ಮಹಿಳಾ ನಿರ್ದೇಶಕಿ ನೇತ್ರಾವತಿ, ವಕೀಲರುಗಳಾದ ಕೆ.ರಾಜ, ರವಿ, ಮಹೇಶ್, ಲಕ್ಕೇಗೌಡ ಇನ್ನೂ ಅನೇಕ ವಕೀಲರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.

ತಿ.ನರಸೀಪುರ ಅಭಿವೃದ್ಧಿಗೆ ಶೀಘ್ರ ಅನುದಾನ ಬಿಡುಗಡೆ

ತಿ.ನರಸೀಪುರ ಪುರಸಭಾ ಸದಸ್ಯರ ನಿಯೋಗಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ

ತಿ.ನರಸೀಪುರ, ಜು.16–ತಿ.ನರಸೀಪುರ ಪಟ್ಟಣ ಸೇರಿದಂತೆ ತಾಲೂಕಿನ ಅಭಿವೃದ್ಧಿಗೆ ಶೀಘ್ರ ವಿಶೇಷ ಅನುದಾನ ನೀಡುವುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ.

ತಿ.ನರಸೀಪುರ ಪುರಸಭಾ ಸದಸ್ಯರ ನಿಯೋಗವೊಂದು ಇತ್ತೀಚೆಗೆ ಬೆಂಗಳೂರಿನಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ವೇಳೆ ಈ ಭರವಸೆ ನೀಡಿದ್ದಾರೆ.

ಪಟ್ಟಣದಲ್ಲಿ ಪುರಸಭೆ ಇದ್ದೂ ಇಲ್ಲದಂತಾಗಿದೆ. ಅಧ್ಯಕ್ಷ, ಉಪಾಧ್ಯಕ್ಷರುಗಳು ಇಲ್ಲ. ಯಾವುದೇ ಅಭಿವೃದ್ಧಿ ಕೆಲಸಗಳು ನಡೆಯುತ್ತಿಲ್ಲ. ಇದರಿಂದ ಪಟ್ಟಣ ಅಭಿವೃದ್ಧಿ ಕುಂಠಿತವಾಗಿದ್ದು, ಜನರಿಗೆ ಮೂಲ ಸೌಕರ್ಯ ಒದಗಿಸಲಾಗುತ್ತಿಲ್ಲ ಎಂದು ಪುರಸಭಾ ನಿಯೋಗದ ಸದಸ್ಯರು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.



ತಿ.ನರಸೀಪುರ ಪುರಸಭಾ ಸದಸ್ಯರ ನಿಯೋಗವೊಂದು ಇತ್ತೀಚೆಗೆ ಬೆಂಗಳೂರಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ, ಮನವಿ ಸಲ್ಲಿಸಿತು.

ಪಟ್ಟಣದಲ್ಲಿ ಪುರಸಭಾ ಕಾರ್ಯಾಲಯ ಹಳೇ ಕಟ್ಟಡದಲ್ಲಿ ಕಾರ್ಯ ನಿರ್ವಹಿಸುತ್ತಿದೆ. ನೂತನ ಪುರಸಭಾ ಕಾರ್ಯಾಲಯದ ಕಟ್ಟಡ ಪೂರ್ಣಗೊಂಡಿದ್ದು, ಧೂಳು ಹಿಡಿಯುವ ಮೂಲಕ ನನೆಗುದಿಗೆ ಬಿದ್ದಿದೆ. ಇದನ್ನು ಉದ್ಘಾಟಿಸಿ, ಹೊಸ ಕಾರ್ಯಾಲಯ ಕಾರ್ಯ ನಿರ್ವಹಿಸುವಂತಾಗಬೇಕು ಎಂದು ಅವರುಗಳು ನೂತನ ಪುರಸಭಾ ಕಟ್ಟಡದ ಪ್ರಸ್ತುತ ಸ್ಥಿತಿಯನ್ನು ವಿವರಿಸಿದರು.

ಈಗಾಗಲೇ ಸಂಪೂರ್ಣಗೊಂಡಿರುವ ಬಹುಕೋಟಿಯ 24X7 ಕುಡಿಯುವ ನೀರು ಯೋಜನೆ ಕೂಡ ಉದ್ಘಾಟನೆಯಾಗದೆ ಹಾಗೇ ನಿಂತಿದೆ. ಇದರಿಂದ ಪಟ್ಟಣಕ್ಕೆ ಸೂಕ್ತ ಪ್ರಮಾಣದಲ್ಲಿ ನೀರು ಸರಬರಾಜು ಮಾಡಲಾಗುತ್ತಿಲ್ಲ. ಅದನ್ನು ಉದ್ಘಾಟಿಸುವ ಕೆಲಸವಾಗಬೇಕು. ಇದೇ ರೀತಿ ಒಳಚರಂಡಿ ವ್ಯವಸ್ಥೆ ಕೂಡ ಸಿದ್ಧವಾಗಿದ್ದರೂ, ಅದನ್ನು ಕೂಡ ಸಾರ್ವಜನಿಕರ ಬಳಕೆಗಾಗಿ ಉದ್ಘಾಟಿಸಿಲ್ಲ. ಇದರೊಂದಿಗೆ ಅಗ್ನಿಶಾಮಕದಳ ಕಟ್ಟಡವನ್ನು ಉದ್ಘಾಟಿಸಬೇಕಾಗಿದೆ ಎಂದು ಪುರಸಭಾ ಸದಸ್ಯರು ತಿಳಿಸಿದರು. ಪುರಸಭಾ ಸದಸ್ಯರ ಅಹವಾಲು ಆಲಿಸಿದ ಮುಖ್ಯಮಂತ್ರಿಗಳು, ನನೆಗುದಿಗೆ ಬಿದ್ದಿರುವ ಎಲ್ಲಾ ಕೆಲಸಗಳನ್ನು ಆರಂಭಿಸುವ ಭರವಸೆ ನೀಡಿದರಲ್ಲದೆ, ಕ್ಷೇತ್ರದ ಅಭಿವೃದ್ಧಿಗೆ ಅಗತ್ಯವಿರುವ ಅನುದಾನವನ್ನು ನೀಡುವುದಾಗಿ ತಿಳಿಸಿದರು. ಈ ವೇಳೆ ಮೈಸೂರು ಉಸ್ತುವಾರಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ ಉಪಸ್ಥಿತರಿದ್ದರು. ಪುರಸಭಾ ಮಾಜಿ ಅಧ್ಯಕ್ಷ ಎನ್. ಸೋಮು, ಸದಸ್ಯರಾದ ಬಾದಾಮಿ ಮಂಜು, ಸೈಯ್ಯದ್ ಅಹ್ಮದ್, ಮೋಹನ್, ಎಲ್.ಮಂಜುನಾಥ್, ಸಿಸ್ಟಮ್ ಸಿದ್ದು, ಬೇಬಿ ಹೇಮಂತ್, ರೂಪಾ ಕರಿಯಪ್ಪ, ವಸಂತ ಶ್ರೀಕಂಠ ನಿಯೋಗದಲ್ಲಿದ್ದರು.

ಮೀಸಲಾತಿ ನಿಗದಿಪಡಿಸಿ, ಅಧಿಕಾರಿಗಳ ದರ್ಬಾರ್ ತಪ್ಪಿಸಿ

ಮೀಸಲಾತಿ ನಿಗದಿಯಾಗದೇ ತಿ.ನರಸೀಪುರ ಪುರಸಭೆಗೆ ಅಧ್ಯಕ್ಷರು, ಉಪಾಧ್ಯಕ್ಷರು ಯಾರೂ ಇಲ್ಲದಂತಾಗಿದ್ದು, ಅಧಿಕಾರಿಗಳ ದರ್ಬಾರ್ ಜೋರಾಗಿದೆ ಎಂದು ಪುರಸಭಾ ಸದಸ್ಯ ತುಂಬಲಾ ಪ್ರಕಾಶ್ ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

ಕಳೆದ ಕೆಲ ವರ್ಷಗಳಿಂದಲೂ ಅಧ್ಯಕ್ಷರು, ಉಪಾಧ್ಯಕ್ಷರಿಗೆ ಯಾವುದೇ ಮೀಸಲಾತಿ ನಿಗದಿ ಮಾಡದೆ ಇರುವುದರಿಂದ ಪುರಸಭೆಗೆ ಯಾವುದೇ ಹಣ ಬಂದಿದ್ದರೂ ಗೊತ್ತಾಗುತ್ತಿಲ್ಲ. ಅಧಿಕಾರಿಗಳು ದರ್ಬಾರ್ ಮಾಡುತ್ತಿದ್ದಾರೆ. ಆದಷ್ಟು ಬೇಗ ಮೀಸಲಾತಿ ನಿಗದಿಪಡಿಸಿ ಅಧ್ಯಕ್ಷ–ಉಪಾಧ್ಯಕ್ಷರನ್ನು ಆಯ್ಕೆ ಮಾಡಿಕೊಡಿ ಎಂದು ಮನವಿ ಮಾಡಿದರು. ನಮಗೆ ವಾರ್ಡ್‌ಗಳಲ್ಲಿ ಸಮಸ್ಯೆ ಹೇಳುವವರು ಜಾಸ್ತಿಯಾಗಿದ್ದು, ಚರ್ಚಿಸಲು ಸಭೆಯನ್ನು ಕರೆಯಲಾಗುತ್ತಿಲ್ಲ. ಅಧಿಕಾರಿಗಳು ತಮಗೆ ಇಷ್ಟ ಬಂದಂತೆ ಕೆಲಸ ಮಾಡುತ್ತಿದ್ದಾರೆ. ನಾವು ಕೇಳಿದರೆ ನಿಮಗೆ ಅಧಿಕಾರವಿಲ್ಲ ಎಂದು ಹೇಳುತ್ತಾರೆ. ಶೀಘ್ರದಲ್ಲಿ ಅಧ್ಯಕ್ಷ–ಉಪಾಧ್ಯಕ್ಷರ ಆಯ್ಕೆಗೆ ಮೀಸಲಾತಿ ನಿಗದಿಪಡಿಸಿ ಎಂದು ಅವರು ಕೋರಿದರು.

ಡೆಂಗ್ಯೂ ತಡೆಗಟ್ಟುವ ಕುರಿತು ತರಬೇತಿ



ಬಿಳಿಗೆರೆ ಗ್ರಾಪಂ ಕಚೇರಿಯಲ್ಲಿ ಡೆಂಗ್ಯೂ ಜ್ವರ ತಡೆಗಟ್ಟುವ ಬಗ್ಗೆ ಕಾರ್ಯಕ್ರಮ ನಡೆಯಿತು.

ಹಿರೀಕ್ಯಾತನಹಳ್ಳಿ, ಜು.16– ರಾಜ್ಯದಲ್ಲಿ ಹೆಚ್ಚುತ್ತಿರುವ ಡೆಂಗ್ಯೂ ಪ್ರಕರಣಗಳನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ತರಬೇತಿ ನಡೆಸಲಾಯಿತು.

ಹುಣಸೂರು ತಾಲೂಕಿನ ಗಾವಡಗೆರೆ ಪ್ರಾಥಮಿಕ ಆರೋಗ್ಯ ಕೇಂದ್ರದ ಹೋಬಳಿ ವ್ಯಾಪ್ತಿಯ ಬಿಳಿಗೆರೆ ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಹನುಮಂತು ಮಾತನಾಡಿ, ನಿಮ್ಮ ವ್ಯಾಪ್ತಿಯ ಕಚೇರಿಯ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳುವುದು. ಸ್ವಚ್ಛತೆ ಕಾಪಾಡುವುದು. ವಾರಕ್ಕೆ ಒಂದು ದಿನ ಒಣ ದಿನ ಆಚರಿಸುವಂತೆ ತಿಳಿಸಿ ಪ್ರಕರಣಗಳನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ತರಬೇತಿ ನಡೆಯಿತು.

ತರಬೇತಿ ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಭಾರತಿ ಪ್ರಸನ್ನ, ಪಿಡಿಓ ಶೀಲಾ, ಕಾರ್ಯದರ್ಶಿ ಈರಣ್ಣಯ್ಯ, ಆಶಾ ಕಾರ್ಯಕರ್ತರು, ಅಂಗನವಾಡಿ ಕಾರ್ಯಕರ್ತರು, ಆರೋಗ್ಯದ ಇಲಾಖೆ ಸಿಬ್ಬಂದಿ ವರ್ಗ, ನೀರುಗಂಟಿಗಳು ಹಾಜರಿದ್ದರು.

ಮೈದುಂಬಿ ಹರಿಯುತ್ತಿರುವ ಸಕ್ಕರೆ ಗ್ರಾಮದ ಕಟ್ಟೆ



ಕೊಡಗು ಜಿಲ್ಲೆಯಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದ ಕೆ.ಆರ್.ನಗರ ತಾಲೂಕು ಪಿರಿಯಾಪಟ್ಟಣದ ಗಡಿ ಗ್ರಾಮವಾದ ಸಕ್ಕರೆ ಗ್ರಾಮದ ಕಟ್ಟೆ ಉಕ್ಕಿ ಹರಿಯುತ್ತಿದ್ದು, ಸುತ್ತ–ಮುತ್ತಲಿನ ಗ್ರಾಮಸ್ಥರು ಮತ್ತು ಪ್ರವಾಸಿಗರನ್ನು ತನ್ನತ್ತ ಸೆಳೆಯುತ್ತಿದೆ. ಈ ಕಟ್ಟೆಯನ್ನು ಜಯಚಾಮರಾಜೇಂದ್ರ ಒಡೆಯರ್ ಅವರು ನಿರ್ಮಿಸಿದ್ದು, ಈ ಕಟ್ಟೆಯಿಂದ ಸುತ್ತಮುತ್ತಲಿನ ಗ್ರಾಮಗಳಿಗೆ ಕುಡಿಯುವ ನೀರು ಮತ್ತು ಬೆಳೆ ಬೆಳೆಯಲು ಅನುಕೂಲವಾಗಿದೆ.

ರೋಸ್ಟರ್ ಪದ್ಧತಿ ಬಿಟ್ಟು ಪೌರಕಾರ್ಮಿಕರ ನೇರ ನೇಮಕಾತಿಗೆ ಆಗ್ರಹ



ತಿ.ನರಸೀಪುರ ಪಟ್ಟಣ ಪುರಸಭೆಯಲ್ಲಿ ಪೌರಕಾರ್ಮಿಕರಾಗಿ ಆಯೋಜಿಸಲಾಗಿದ್ದ ಸಮಾಲೋಚನಾ ಕಾರ್ಯಕ್ರಮದಲ್ಲಿ ಸಫಾಯಿ ಕರ್ಮಚಾರಿ ಕಾವಲು ಸಮಿತಿಯ ವಿಭಾಗೀಯ ಸಂಚಾಲಕ ಕೆ.ನಂಜಪ್ಪ ಬಸವನಗುಡಿ ಮಾತನಾಡಿದರು.

ತಿ.ನರಸೀಪುರ, ಜು.16– ರಾಜ್ಯದಲ್ಲಿ ನೇರ ಪಾವತಿ ಕಾರ್ಮಿಕರಾಗಿ ಸೇವೆ ಸಲ್ಲಿಸುತ್ತಿರುವ ಪೌರ ಕಾರ್ಮಿಕರನ್ನು ರೋಸ್ಟರ್ ಪದ್ಧತಿ ಅಳವಡಿಸದೇ ನೇರ ನೇಮಕಾತಿ ಮಾಡಿಕೊಳ್ಳುವಂತೆ ಸಫಾಯಿ ಕರ್ಮಚಾರಿ ಕಾವಲು ಸಮಿತಿಯ ವಿಭಾಗೀಯ ಸಂಚಾಲಕ ಕೆ.ನಂಜಪ್ಪ ಬಸವನಗುಡಿ ಒತ್ತಾಯಿಸಿದರು.

ಪಟ್ಟಣದ ಪುರಸಭೆಯಲ್ಲಿ ಪೌರಕಾರ್ಮಿಕರೊಂದಿಗೆ ಸಮಾಲೋಚನೆ ನಡೆಸಿ ಮಾತನಾಡಿದ ಅವರು, ಮುಖ್ಯಮಂತ್ರಿ ಸಿದ್ದರಾಮಯ್ಯನವರು ರಾಜ್ಯದಲ್ಲಿ 250 ಪೌರ ಕಾರ್ಮಿಕರನ್ನು ನಗರಪಾಲಿಕೆ ವ್ಯಾಪ್ತಿಯ ನೇಮಕಾತಿಗೆ ಸೂಚನೆ ನೀಡಿದ್ದಾರೆ. ಯಾವುದೇ ಮಾನದಂಡಗಳಿಲ್ಲದೇ ರೋಸ್ಟರ್ ಪದ್ಧತಿಯಿಲ್ಲದೇ ನೇರ ಪಾವತಿ ಮಾಡಲಾಗಿದೆ. ಕಾರ್ಮಿಕರನ್ನು ನೇರ ಪಾವತಿಯಿಂದ ನೇರ ನೇಮಕಾತಿ ಮಾಡಿಕೊಳ್ಳಲು ಕ್ರಮ ಜರುಗಿಸಬೇಕು ಎಂದು ಅವರು ಆಗ್ರಹಿಸಿದರು.

ರೋಸ್ಟರ್ ಪದ್ಧತಿ ಅನುಸರಣೆಯಾದರೇ ಕುರುಬ, ಒಕ್ಕಲಿಗ, ಬ್ರಾಹ್ಮಣರೆಲ್ಲರೂ ವ್ಯಾಪ್ತಿಗೊಳಪಡುತ್ತಾರೆ. ಇವರು ಪೌರಕಾರ್ಮಿಕರಾಗಿ ಕೆಲಸ ಮಾಡಲು ಸಾಧ್ಯವೇ? ಪೌರ ಕಾರ್ಮಿಕರು ದಿನಗೂಲಿಗೆ ಬಂದು ಗುತ್ತಿಗೆ ಆಧಾರದಲ್ಲಿ ನೇಮಕವಾದರೋ, ನೇರವಾಗಿ ನೇರ ಪಾವತಿಗೆ ನೇಮಕವಾದರೋ, ಅದೇ ರೀತಿ ನೇರ ನೇಮಕಾತಿಗೂ ಆಯ್ಕೆಯಾಗಬೇಕು. ಈ ಬಗ್ಗೆ ಅರಿವು ಮೂಡಿಸಲು ನಾವು ಗ್ರಾಪಂ, ಪಪಂ, ಪುರಸಭೆ, ನಗರಪಾಲಿಕೆಗೆ ತಂಡ ರಚನೆ ಮಾಡಿ ಪ್ರವಾಸ ಕೈಗೊಂಡಿದ್ದೇವೆ ಎಂದು ತಿಳಿಸಿದರು. ಇಡೀ ರಾಜ್ಯದಲ್ಲಿ ಪೌರಕಾರ್ಮಿಕರನ್ನು ಯಾವುದೇ ಮಾನದಂಡಗಳಿಲ್ಲದೇ ರೋಸ್ಟರ್ ಪದ್ಧತಿ ಅಳವಡಿಸದೇ ನೇರವಾಗಿ ನೇಮಕ ಮಾಡಿಕೊಳ್ಳಬೇಕೆಂಬುದು ನಮ್ಮ ಆಗ್ರಹವಾಗಿದೆ ಎಂದರು.

ಮುಂದುವರೆದು ಮಾತನಾಡಿದ ಅವರು, ಪೌರ ಕಾರ್ಮಿಕರ ಸಮಸ್ಯೆ ದಿನದಿಂದ ದಿನಕ್ಕೆ ಅತಿರೇಕ ತಲುಪುತ್ತಿದೆ. ರಾಜ್ಯ ಸರ್ಕಾರ ಜಿಲ್ಲಾ ಸಮಿತಿ, ರಾಜ್ಯ ಸಮಿತಿ, ವಿಭಾಗ ಸಮಿತಿ ಮಾಡಿ ಕೆಲಸ ಕಾರ್ಯಗಳನ್ನು ಮಾಡುತ್ತಿದ್ದರೂ ಯಾವುದೇ ಪ್ರಯೋಜನವಾಗುತ್ತಿಲ್ಲ. ಹಾಗಾಗಿ ರಾಜ್ಯದಲ್ಲಿ ಸಫಾಯಿ ಕರ್ಮಚಾರಿ ಕಾವಲು ಸಮಿತಿಯನ್ನು ಡಾ.ಓಬಳೇಶ್ ಸಾರಥ್ಯದಲ್ಲಿ ರಚನೆ ಮಾಡಿಕೊಂಡು ಮೈಸೂರು, ಮಂಡ್ಯ, ಹಾಸನ, ಕೊಡಗು, ಚಾಮರಾಜನಗರ ಜಿಲ್ಲೆಗಳಲ್ಲಿ ಪೌರ ಕಾರ್ಮಿಕರಿಗಿರುವ ಸಮಸ್ಯೆಗಳನ್ನು ಕಲೆಹಾಕಿ ಸರ್ಕಾರಕ್ಕೆ ತಲುಪಿಸುವ ಕೆಲಸ ಮಾಡಲಾಗುತ್ತಿದೆ ಎಂದರು.

ಈ ವೇಳೆ ಕಾವಲು ಸಮಿತಿಯ ಜಿಲ್ಲಾ ಸಂಚಾಲಕ ರಾಮಸ್ವಾಮಿ, ಪುರಸಭೆ ಆರೋಗ್ಯಾಧಿಕಾರಿ ಮಧು, ಪೌರಕಾರ್ಮಿಕರಾದ ಶಿವಣ್ಣ ಸೋಮು(ಪ್ರಸನ್ನ), ಸರೋಜ, ವಿಜಯಲಕ್ಷ್ಮಿ, ಪುಟ್ಟರಾಜು, ಕುಮಾರದಾಸ್, ಸಂಜೀವ, ನಂಜಯ್ಯ, ಕೃಷ್ಣ, ಪಳನಿಸ್ವಾಮಿ, ಪ್ರಶಾಂತ್, ರಾಜೇಶ್, ನಂಜುಂಡ, ಸಿದ್ದಪ್ಪ, ಪನ್ನಮ್ಮ, ಶಾಂತಮ್ಮ, ಪಾಪಮ್ಮ, ಸರೋಜಮ್ಮ, ಹೇಮಲತಾ, ಚೆಲುವಮ್ಮ, ನಾಗಮ್ಮ, ನಾಗಲಮ್ಮ ಹಾಜರಿದ್ದರು.

ಇಂಜಿನಿಯರಿಂಗ್‌ನಲ್ಲಿ ಮಹಾರಾಜ ತಾಂತ್ರಿಕ ಕಾಲೇಜಿನ ವಿದ್ಯಾರ್ಥಿನಿ ಸಾಧನೆ



ಸುದ್ದಿಗೋಷ್ಠಿಯಲ್ಲಿ ಬಿ.ಸಿ.ನಾಗೇಂದ್ರ ಪ್ರಸಾದ್ ಮಾತನಾಡಿದರು.

ನಂಜನಗೂಡು, ಜು.16– ತಾಲೂಕಿನ ತಾಂಡವಪುರದ ಮಹಾರಾಜ ತಾಂತ್ರಿಕ ಮಹಾವಿದ್ಯಾಲಯದ ಅಂತಿಮ ವರ್ಷದ ಸಿವಿಲ್ ಇಂಜಿನಿಯರಿಂಗ್ ವಿದ್ಯಾರ್ಥಿನಿ ಎಸ್. ರೇಖಾ ಅವರು ಕರ್ನಾಟಕ ರಾಜ್ಯ ಸಿವಿಲ್ ಇಂಜಿನಿಯರಿಂಗ್ ವಿಭಾಗದಲ್ಲಿ ಎರಡನೇ ಬ್ಯಾಂಕ್ ಪಡೆಯುವ ಮೂಲಕ ಐತಿಹಾಸಿಕ ಸಾಧನೆ ಮಾಡಿದ್ದಾರೆ ಎಂದು ಎಂಐಟಿ ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಬಿ.ಸಿ.ನಾಗೇಂದ್ರ ಪ್ರಸಾದ್ ಹೇಳಿದರು.

ನಗರದ ಪತ್ರಕರ್ತರ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಳಗಾವಿ ಕರ್ನಾಟಕ ರಾಜ್ಯದಲ್ಲಿ ವಿಶ್ವೇಶ್ವರಯ್ಯ ತಾಂತ್ರಿಕ ಮಹಾವಿದ್ಯಾಲಯ ವ್ಯಾಪ್ತಿಗೆ ಸುಮಾರು 250 ಇಂಜಿನಿಯರಿಂಗ್ ಕಾಲೇಜಿನ ಸುಮಾರು 3 ಲಕ್ಷ ವಿದ್ಯಾರ್ಥಿಗಳು ಪರೀಕ್ಷೆ ಎದುರಿಸಿದ್ದು, ಅವರ ಪೈಕಿ ಮೈಸೂರಿನ ಶ್ರೀನಿವಾಸ್ ಮೂರ್ತಿ ಮತ್ತು ಸಾಕಮ್ಮ ದಂಪತಿಗಳ ಪುತ್ರಿ ನಮ್ಮ ಕಾಲೇಜಿನ ವಿದ್ಯಾರ್ಥಿನಿ ಎಸ್.ರೇಖಾ ಅವರು 9.39 ಸಿಜಿಪಿಎ ಅಂಕ ಗಳಿಸುವ ಮೂಲಕ ಕರ್ನಾಟಕ ರಾಜ್ಯಕ್ಕೆ ಎರಡನೇ ಸ್ಥಾನ ಗಳಿಸಿರುವುದು ಕಾಲೇಜಿಗೆ ಹೆಮ್ಮೆಯ ಸಂಗತಿಯಾಗಿದೆ. ವಿದ್ಯಾರ್ಥಿನಿಯ ಈ ಸಾಧನೆಗೆ ಎಂಐಟಿ ಕಾಲೇಜಿನ ಪ್ರಾಧ್ಯಾಪಕ ವೃಂದದವರು ಅಭಿನಂದನೆ ಸಲ್ಲಿಸಿದ್ದಾರೆ ಎಂದರು.

ಪ್ರೊ.ಮೊಹಮ್ಮದ್ ಸಲಾಮತ್ ಮಾತನಾಡಿ, ಕಾಲೇಜಿನ ಕೊಡುಗೆ ಮತ್ತು ವಿದ್ಯಾರ್ಥಿಗಳ ಭವಿಷ್ಯ ಕುರಿತು ತಿಳಿಸಿದರು. ವಿದ್ಯಾರ್ಥಿನಿ ಎಸ್.ರೇಖಾ ಮಾತನಾಡಿ, ಕಾಲೇಜಿನಲ್ಲಿ ಜ್ಞಾನ ಕಾರಿಡಾರ್ ಎಂಬ ವೇದಿಕೆಯನ್ನು ಸೃಷ್ಟಿಸಿ. ಆ ಮೂಲಕ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸಂಶೋಧನೆ ಮೂಲಕ ವಿದ್ಯೆ ಕಲಿಯುವುದಕ್ಕೆ ಅವಕಾಶ ಮಾಡಿಕೊಟ್ಟಿದ್ದಾರೆ. ಮತ್ತು ಎಲ್ಲಾ ಪ್ರಾಧ್ಯಾಪಕರು ಸಹ ನನಗೆ ಸಲಹೆ, ಮಾರ್ಗದರ್ಶನ ನೀಡಿದ್ದರಿಂದಾಗಿ ಈ ಸಾಧನೆ ಮಾಡಲು ಸಾಧ್ಯವಾಗಿದೆ. ನಮ್ಮ ಕಾಲೇಜು ವಿದ್ಯಾಭ್ಯಾಸದಲ್ಲಿ ಪ್ರೋತ್ಸಾಹ ಮಾಡುವ ಜೊತೆಗೆ ಪಠ್ಯೇತರ ಚಟುವಟಿಕೆಗಳಿಗೂ ಪ್ರೋತ್ಸಾಹ ನೀಡಿ ಬೆಳೆಸಿದೆ ಎಂದು ತಮ್ಮ ಅನುಭವ ಹಂಚಿಕೊಂಡರು.

ಸುದ್ದಿಗೋಷ್ಠಿಯಲ್ಲಿ ಕಾಲೇಜಿನ ಪ್ರಾಧ್ಯಾಪಕರಾದ ಗಣೇಶ್, ಮನು ಎಸ್.ಗೌಡ, ಎಂ .ಹರ್ಷಿತ್, ವಿದ್ಯಾರ್ಥಿನಿಯ ತಂದೆ ಶ್ರೀನಿವಾಸ್ ಮೂರ್ತಿ, ತಾಯಿ ಸಾಕಮ್ಮ ಇದ್ದರು.

ಹುಟ್ಟುಹಬ್ಬ ಆಚರಿಸಿಕೊಂಡ ಉದ್ಯಮಿ



ಕುಟುಂಬ ಮತ್ತು ಸ್ನೇಹಿತರೊಂದಿಗೆ ಹುಟ್ಟುಹಬ್ಬ ಆಚರಿಸಿಕೊಂಡ ಉದ್ಯಮಿ ಕಾಯಿ ಶೇಖರ್.

ಹುಣಸೂರು, ಜು.16– ಉದ್ಯಮಿ ಕಾಯಿ ಶೇಖರ್ ತಮ್ಮ 49ನೇ ಹುಟ್ಟುಹಬ್ಬವನ್ನು ಹಲವು ಸೇವಾ ಕಾರ್ಯಗಳ ಮೂಲಕ ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಚರಿಸಿಕೊಂಡರು.

ನಂತರ ಮಾತನಾಡಿದ ಶೇಖರ್, ಹುಟ್ಟುಹಬ್ಬವನ್ನು ಅದ್ದೂರಿಯಾಗಿ ಆಚರಿಸಿಕೊಳ್ಳುವ ಬದಲು ನಮ್ಮ ನಡುವೆ ಹಸಿವಿನಿಂದ ಜೀವಿಸುವ ಬಡಜನರಿಗೆ ಹಸಿವು ನೀಗಿಸುವುದರ ಜೊತೆಗೆ ಆರ್ಥಿಕ ನೆರವು ನೀಡುವ ಕೆಲಸವಾಗಬೇಕೆಂದರು.

ಮರದ ವ್ಯಾಪಾರಿ ಗುಂಡುಮಣಿ, ಉದ್ಯಮಿ ಹೆಚ್.ಎನ್. ಪ್ರಜ್ವಲ್, ಕಾಯಿ ವ್ಯಾಪಾರಿ ಚಲುವರಾಜ್, ಚಿಕ್ಕಹುಣಸೂರು ಶಿವಲಿಂಗೇಗೌಡ, ಜೆಡಿಎಸ್ ಯುವ ಮುಖಂಡ ಮಧು ಆಚಾರ್, ಬಿಳಿಗೆರೆ ಚೇತನ್ ಕುಮಾರ್, ರವಿಕುಮಾರ್, ಶ್ರೀಕಂಠ (ಕಂಠಿ), ರವೀಶ್, ಶ್ರೀಮತಿ ಅರುಂಧತಿ ಶೇಖರ್ ಹಾಗೂ ಪುತ್ರ ಪ್ರಜ್ವಲ್ ಅವರುಗಳು ಈ ವೇಳೆ ಉಪಸ್ಥಿತರಿದ್ದರು.

ಸಾರ್ವಜನಿಕ ಪ್ರತಿನಿಧಿಯಾಗಿ ಆಯ್ಕೆ



ಬನ್ನೂರಿನ ಖಾಸಗಿ ಸಮುದಾಯ ಭವನದಲ್ಲಿ ನಡೆದ ರೋಟರಿ ಪದವಿ ಪ್ರದಾನ ಸಮಾರಂಭದಲ್ಲಿ ಸಾರ್ವಜನಿಕ ಪ್ರತಿನಿಧಿಯಾಗಿ ಆಯ್ಕೆಯಾದ ಕೆ. ಮಹೇಂದ್ರಸಿಂಗ್ ಕಾಳಪ್ಪನವರನ್ನು ಅಭಿನಂದಿಸಲಾಯಿತು. ರೋಟರಿ ಅಧ್ಯಕ್ಷ ವೆಂಕಟೇಶ್, ಗವರ್ನರ್ ರೋ.ರವಿಶಂಕರ್ ದಕೋಜು, ವಿವೇಕಾನಂದ, ಮಾಣಿಕ್‌ಚಂದ್‌ಚೌಧರಿ ಸೇರಿದಂತೆ ಪ್ರಮುಖರು ಇದ್ದರು.

ಕೋಟೆಯಲ್ಲಿ ನಿಲ್ಲದ ಮಳೆ

ಮರಗಳು ಬಿದ್ದು ಮನೆಗಳು ಕುಸಿತ

ಕೆರೆಯಂತಾದ ರಸ್ತೆಗಳು, ವಾಹನಗಳ ಸಂಚಾರಕ್ಕೆ ಪರದಾಟ



ಹೆಚ್.ಡಿ.ಕೋಟೆ, ಜು.16– ತಾಲೂಕಿನಲ್ಲಿ ಸುರಿಯುತ್ತಿರುವ ಧಾರಾಕಾರ ಮಳೆಯಿಂದ ಅನೇಕ ಕಡೆ ಮರಗಳು ಬಿದ್ದು ಮನೆಗಳು ಕುಸಿದು ಅನಾಹುತ ಸಂಭವಿಸಿದ್ದರೆ, ತಾಲೂಕಿನ ಕೆಲರಸ್ತೆಗಳು ಕೆರೆಯಂತಾಗಿವೆ.

ಈ ಮಧ್ಯೆ ಕಬಿನಿ ಜಲಾಶಯದ ನಾಲ್ಕು ಕ್ರಸ್ಟ್ ಗೇಟ್‌ಗಳಿಂದ 36,000 ಕ್ಯುಸೆಕ್ ನೀರನ್ನು ನದಿಗೆ ಬಿಡಲಾಗಿದ್ದು, ಸುತ್ತಮುತ್ತಲಿನ ಕೆರೆಕಟ್ಟೆಗಳು, ಹಳ್ಳಕೊಳ್ಳಗಳು ತುಂಬಿನಿಂತಿವೆ.

ತಾಲೂಕಿನಾದ್ಯಂತ ಕಳೆದ ಮೂರು ದಿನಗಳಿಂದ ಬಿಡುವಿಲ್ಲದೆ ಸುರಿಯುತ್ತಿರುವ ಮಳೆಯಿಂದ ಮನೆಗಳು ಕುಸಿದಿದ್ದು, ಮನೆಗಳ ಮೇಲೆ ಭಾರಿ ಗಾತ್ರದ ಮರಗಳು ಬಿದ್ದಿದೆ. ಆದರೆ ಯಾರಿಗೂ ಅಪಾಯ ಸಂಭವಿಸಿಲ್ಲ.

ತಾಲೂಕಿನ ಮಚ್ಚೂರು ಗ್ರಾಮದ ನಿವಾಸಿ ರೈತ ಗೋವಿಂದ ಅವರ ಮನೆಯ ಮೇಲೆ ನಿನ್ನೆ ಮಧ್ಯರಾತ್ರಿ ಭಾರಿ ಗಾತ್ರದ ಮರ ಬಿದ್ದು, ಮನೆಯ ಅರ್ಧಭಾಗ ಸಂಪೂರ್ಣ ನಾಶವಾಗಿದೆ. ಅದೃಷ್ಟವಶಾತ್ ಮನೆಯಲ್ಲಿದ್ದವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ತಾಲೂಕಿನ ತುಂಬಸೋಗೆ ಗ್ರಾಮದ ನಿವಾಸಿ ಅಂಗವಿಕಲ ಸುರೇಶ್ ಅವರ ಮನೆ, ಚಾವಣಿ ಕುಸಿದಿದೆ ಹಾಗೂ ಎನ್.ಬೇಗೂರು ಗ್ರಾಮ ಪಂಚಾಯತಿ ವ್ಯಾಪ್ತಿಯ ಕನಕನಹಳ್ಳಿ ತಿಟ್ಟು ಗ್ರಾಮದ ನಿವಾಸಿ ನಾಗರತ್ನ ಅವರ ಮನೆಯು ಕುಸಿದಿದೆ. ಮನೆಯಲ್ಲಿರುವ ದಿನಸಿ ಪದಾರ್ಥಗಳು ಹಾಗೂ ಇತರೆ ಪದಾರ್ಥಗಳು ಸಂಪೂರ್ಣ ನಾಶಗೊಂಡಿವೆ. ಇನ್ನೂ ಕೆಲವೆಡೆ ನೀರಿನಿಂದ ಶೀತಗೊಂಡಿರುವ ಮಣ್ಣಿನ ಮನೆಗಳು, ಮನೆ ಗೋಡೆಗಳು ಕೂಡ ಕುಸಿದು ಬಿದ್ದಿವೆ.

ತಾಲೂಕಿನಲ್ಲಿ ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಕಬಿನಿ ಜಲಾಶಯದ ಪಕ್ಕದಲ್ಲಿರುವ ಹ್ಯಾಂಡ್‌ಪೋಸ್ಟ್, ಎನ್.ಬೇಗೂರು ಮುಖ್ಯರಸ್ತೆ, ಬಿದರಹಳ್ಳಿ ಸರ್ಕಲ್‌ನಿಂದ ಹೊಸ ಬೀದರಹಳ್ಳಿ, ಭೀಮನಕೊಲ್ಲಿ, ಬೀರಂಬಳ್ಳಿ, ಗೆಂಡತ್ತೂರು, ಗ್ರಾಮಗಳಿಗೆ ಸಂಪರ್ಕ ಕಲ್ಪಿಸುವ ಮುಖ್ಯರಸ್ತೆಯಲ್ಲಿ ನೀರು ನಿಂತಿದ್ದು, ಕೆರೆಯಂತಾಗಿದೆ.



ಮಚ್ಚೂರು ಗ್ರಾಮದ ರೈತನ ಮನೆಯ ಮೇಲೆ ಭಾರಿ ಗಾತ್ರದ ಮರ ಬಿದ್ದಿರುವುದು.

ಹಲವಾರು ವರ್ಷಗಳಿಂದಲೂ ಈ ರಸ್ತೆಗಳು ಗುಂಡಿ ಬಿದ್ದಿದ್ದು, ರಸ್ತೆ ಸರಿಪಡಿಸುವಂತೆ ಗ್ರಾಮಸ್ಥರೆಲ್ಲರೂ ಅಧಿಕಾರಿಗಳು, ಜನಪ್ರತಿನಿಧಿಗಳಿಗೆ ಎಷ್ಟೇ ಮನವಿ ಮಾಡಿದರೂ ಸಮಸ್ಯೆ ಬಗೆಹರಿಸದಿರುವುದೇ ಈ ಪರಿಸ್ಥಿತಿಗೆ ಕಾರಣವಾಗಿದೆ ಎಂದು ಗ್ರಾಮಸ್ಥರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಗುಂಡಿ ಬಿದ್ದ ರಸ್ತೆಗಳಲ್ಲಿ ನೀರು ತುಂಬಿಕೊಂಡಿದ್ದು, ವಾಹನ ಸವಾರರಿಗೆ, ಆಸ್ಪತ್ರೆಗೆ ಹೋಗುವವರಿಗೆ, ಶಾಲಾ–ಕಾಲೇಜು ವಿದ್ಯಾರ್ಥಿಗಳಿಗೆ ತೀವ್ರ ತೊಂದರೆಯಾಗುತ್ತಿದ್ದು, ಇದನ್ನು ಮನಗಂಡ ಗ್ರಾಮದ ಯುವಕರು ಸೇರಿ ಗುಂಡಿಯ ನೀರನ್ನು ಹೊರಹಾಕಿದ್ದಾರೆ.



ಗುಂಡಿ ಬಿದ್ದಿರುವ ಬಿದರಹಳ್ಳಿ ಗ್ರಾಮದ ರಸ್ತೆಯು ನೀರಿನಿಂದ ತುಂಬಿರುವುದು.

ಜು.20, ಹಾಲು ಉತ್ಪಾದಕರ ಸಹಕಾರ ಸಂಘದ ಚುನಾವಣೆ

ಮಲ್ಲುಂಡಿ, ಜು.16– ನಂಜನಗೂಡು ತಾಲೂಕಿನ ಬಿದರಗೂಡು ಗ್ರಾಮದಲ್ಲಿ ಜು.20 ರಂದು ಹಾಲು ಉತ್ಪಾದಕರ ಸಹಕಾರ ಸಂಘದ ಚುನಾವಣೆಯು ಸಹಕಾರ ಸಂಘದ ಆವರಣದಲ್ಲಿ ನಡೆಯಲಿದೆ ಎಂದು ಸಿಇಓ ಶಿವಪ್ರಸಾದ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಕಮಲಮ್ಮ ನಿಧನ



ಹೆಚ್.ಡಿ.ಕೋಟೆ, ಜು.16– ತಾಲೂಕು ಕಟ್ಟೆಮನುಗನಹಳ್ಳಿ ಗ್ರಾಮದ ವೀರಶೈವ ಮುಖಂಡ ಸುರೇಶ್ ಅವರ ತಾಯಿ ಕಮಲಮ್ಮ (88) ಮಂಗಳವಾರ ನಿಧನರಾಗಿದ್ದಾರೆ.

ಮೃತರು ಆರು ಮಂದಿ ಪುತ್ರರು, ಮೂವರು ಪುತ್ರಿಯರು ಸೇರಿದಂತೆ ಅಪಾರ ಬಂಧು– ಬಳಗವನ್ನು ಅಗಲಿದ್ದಾರೆ. ಅಂತ್ಯಕ್ರಿಯೆಯನ್ನು ಬುಧವಾರ ಅವರ ತೋಟದಲ್ಲಿ ನೆರವೇರಿಸಲಾಗುವುದು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಹನಿಯಂಬಳ್ಳಿ ಮಹಾದೇವಯ್ಯ



ಸುತ್ತೂರು, ಜು.16– ನಂಜನಗೂಡು ತಾಲೂಕು ಹನಿಯಂಬಳ್ಳಿ ಗ್ರಾಮದ ಕಾಂಗ್ರೆಸ್ ಮುಖಂಡ ಮಾದೇವಯ್ಯ (70) ನವರು ಇಂದು ನಿಧನರಾದರು. ಮೃತರು ಪತ್ನಿ ನಗರ್ಲೆ ಗ್ರಾಪಂ ಅಧ್ಯಕ್ಷೆ ಮಾದೇವಮ್ಮ, ಇಬ್ಬರು ಪುತ್ರರು ಹಾಗೂ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಅಂತ್ಯ ಕ್ರಿಯೆ ಇಂದು ಸ್ವಗ್ರಾಮದಲ್ಲಿ ನೆರವೇರಿತು.

ಮೈಸೂರು ಡಿಸಿ ಕಚೇರಿ ಮುಂದೆ ರೈತರ ಅಹೋರಾತ್ರಿ ಧರಣಿ



ಸಾಲ ಪಡೆದ ರೈತರ ಮೇಲೆ ಬ್ಯಾಂಕ್‌ಗಳು ನಡೆಸುತ್ತಿರುವ ದೌರ್ಜನ್ಯಕ್ಕೆ ಕಡಿವಾಣ ಹಾಕುವುದು ಸೇರಿದಂತೆ ಹಲವು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರು ಮೈಸೂರಿನಲ್ಲಿ ಮಂಗಳವಾರ ಪ್ರತಿಭಟನಾ ಮೆರವಣಿಗೆ ನಡೆಸಿದರು.

ರೈತರ ಬೇಡಿಕೆಗಳು...

- ಹೊಸ ಕೃಷಿ ಪಂಪ್‌ಸೆಟ್ ಅಕ್ರಮ-ಸಕ್ರಮ ಯೋಜನೆಯಡಿ ಸೇರಿಸಿ
- ಸಾಲ ಪಡೆದ ರೈತರ ಮೇಲಿನ ಬ್ಯಾಂಕ್‌ಗಳ ದೌರ್ಜನ್ಯ ತಪ್ಪಿಸಿ
- ಶ್ರೀರಾಮ ಸಕ್ಕರೆ ಕಾರ್ಖಾನೆ ಪುನಾರಂಭಿಸಿ; ಕಬ್ಬು ಬೆಳೆಗಾರರಿಗೆ ನೆರವಾಗಿ

ಮೈಸೂರು, ಜು.16(ಬಿಎಲ್‌ಯು)- ಹೊಸ ಕೃಷಿ ಪಂಪ್‌ಸೆಟ್‌ಗಳಿಗೆ ಅಕ್ರಮ-ಸಕ್ರಮ ಯೋಜನೆ ಮರು ಜಾರಿ, ಕೆ.ಆರ್. ನಗರದ ಶ್ರೀರಾಮ ಸಕ್ಕರೆ ಕಾರ್ಖಾನೆ ಪುನಾರಂಭ ಸೇರಿದಂತೆ ಹಲವು ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘ ಮೈಸೂರು ಜಿಲ್ಲಾಧಿಕಾರಿ ಕಚೇರಿ ಮುಂದೆ ಇಂದು ಅಹೋರಾತ್ರಿ ಪ್ರತಿಭಟನೆ ಆರಂಭಿಸಿದೆ.

ತಾವು ಬೆಳೆದ ಹೀರೆಕಾಯಿ, ತೆಂಗಿನ ಕಾಯಿ ಸೇರಿದಂತೆ ಹಲವು ತರಕಾರಿ ಕೈಯ್ಯಲಿಡಿದು ರೈತರು ಇದೇ ವೇಳೆ ಪ್ರತಿಭಟನಾ ಮೆರವಣಿಗೆ ನಡೆಸಿದರು.

ನಗರದ ನಜರ್‌ಬಾದ್‌ನ ಮಹದೇಶ್ವರ ದೇವಸ್ಥಾನದ ಬಳಿಯಿಂದ ಪ್ರತಿಭಟನಾ ಮೆರವಣಿಗೆ ಹೊರಟು ಸಿದ್ಧಾರ್ಥನಗರದಲ್ಲಿನ ನೂತನ ಜಿಲ್ಲಾಧಿಕಾರಿ ಕಚೇರಿ ಮುಂದೆ ಧರಣಿ ಕುಳಿತರು.

ಜಿಲ್ಲಾಧಿಕಾರಿ ಕಚೇರಿ ಮುಂದಿನ ರಸ್ತೆಯಲ್ಲೇ ಮಧ್ಯಾಹ್ನದವರೆಗೂ ಧರಣಿ ನಡೆಸಿದರು. ಈ ವೇಳೆ ರಸ್ತೆ ಎಡ ಪಥದಲ್ಲಿ ವಾಹನ ಸಂಚಾರಕ್ಕೆ ಅಡಚಣೆ ಉಂಟಾಯಿತು. ಮಧ್ಯಾಹ್ನದ ನಂತರ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಪೊಲೀಸರು ಸೂಚಿಸಿದ ಜಾಗದಲ್ಲಿ ಪೆಂಡಾಲ್ ಹಾಕಿ ಧರಣಿ ಆರಂಭಿಸಿದರು. ಈ ಸಂದರ್ಭದಲ್ಲಿ ರೈತ ವಿರೋಧಿ ನಿಲುವು ತಳೆದಿರುವ ರಾಜ್ಯ ಸರ್ಕಾರದ ವಿರುದ್ಧ ರೈತರು ಧಿಕ್ಕಾರದ ಘೋಷಣೆಗಳನ್ನು ಕೂಗಿದರು.

ಹೊಸದಾಗಿ ಕೃಷಿ ಪಂಪ್‌ಸೆಟ್ ಅಳವಡಿಸಲು ಈಗ ಮೂರು ಲಕ್ಷದ ತನಕ ವೆಚ್ಚವಾಗುತ್ತದೆ. ಈಗಾಗಲೇ ಅಳವಡಿಸಿರುವ ಹೊಸ ಕೃಷಿ ಪಂಪ್‌ಸೆಟ್‌ಗಳಿಗೆ ಅಕ್ರಮ-ಸಕ್ರಮ ಯೋಜನೆ ಮರು ಜಾರಿ ಮಾಡಬೇಕು. ಕಳೆದ ಸಾಲಿನ ಬರಗಾಲದ ಸಂದರ್ಭದಲ್ಲಿ ಸಾಲ ಪಾವತಿ ಮಾಡದ ರೈತರ ಮೇಲೆ ಬ್ಯಾಂಕ್‌ಗಳು ದೌರ್ಜನ್ಯ ಎಸಗುತ್ತಿದ್ದು, ಇದಕ್ಕೆ ಕಡಿವಾಣ ಹಾಕಬೇಕು, ಟ್ರ್ಯಾಕ್ಟರ್ ಜಪ್ತಿ ಮಾಡುವುದನ್ನು ನಿಲ್ಲಿಸಬೇಕು ಎಂದು ಪ್ರತಿಭಟನಾನಿರತ ರೈತರು ಆಗ್ರಹಿಸಿದರು.

ಶ್ರೀರಾಮ ಕಾರ್ಖಾನೆ ಪುನಾರಂಭಿಸಿ: ಕೆ.ಆರ್.ನಗರದ ಶ್ರೀರಾಮ ಸಕ್ಕರೆ ಕಾರ್ಖಾನೆ ಪುನಾರಂಭಿಸಿ, ಆ ಭಾಗದ ಕಬ್ಬು ಬೆಳೆಗಾರರಿಗೆ ಅನುಕೂಲ ಮಾಡಿಕೊಡಬೇಕು, ಮೈಸೂರು ಜಿಲ್ಲೆಯ ಹಲವು ಏತ ನೀರಾವರಿ ಯೋಜನೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಒತ್ತಾಯಿಸಿದರು.

ತಮ್ಮ ಬೇಡಿಕೆ ಈಡೇರುವ ತನಕ ಈ ಜಾಗ ಬಿಟ್ಟು ಕದಲುವುದಿಲ್ಲ ಎಂದು ಪಟ್ಟು ಹಿಡಿದ ರೈತರು, ಜಿಲ್ಲಾಧಿಕಾರಿ ಕಚೇರಿ ಮುಂದೆ ಅಹೋರಾತ್ರಿ ಧರಣಿ ಆರಂಭಿಸಿದರು. ಈ ಸಂದರ್ಭದಲ್ಲಿ ಅಧಿಕಾರಿಗಳು ಮನವೊಲಿಸಿದರೂ ರೈತರು ಪ್ರತಿಭಟನೆ ವಾಪಸು ಪಡೆಯಲು ಒಪ್ಪಲಿಲ್ಲ. ಕರ್ನಾಟಕ ರಾಜ್ಯ ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್, ಉಪಾಧ್ಯಕ್ಷ ಕೆರೆಹುಂಡಿ ರಾಜಣ್ಣ, ಅಂಕನಹಳ್ಳಿ ತಿಮ್ಮಪ್ಪ, ಹತ್ತಹಳ್ಳಿ ಸೌಮ್ಯರಾಜ್, ಬನ್ನೂರು ಕೃಷ್ಣಪ್ಪ, ರವಿ ಹಾಡ್ಯ, ಮುದ್ದಳ್ಳಿ ಚಿಕ್ಕಸ್ವಾಮಿ ಸೇರಿದಂತೆ ನೂರಾರು ರೈತರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಮುಡಾ ನಿವೇಶನ ಹಂಚಿಕೆ ಹಗರಣ
ಸಭಾಂಗಣಕ್ಕೆ ಸೀಲ್ ಮಾಡಿ ಮತ್ತೆ ಸುಳಿಯದ ತನಿಖಾಧಿಕಾರಿಗಳು!



ಮೈಸೂರು, ಜು. 16(ಆರ್‌ಕೆ)- ಸ್ವಾಧೀನಪಡಿಸದೇ ಬಳಸಿಕೊಂಡ ಭೂಮಿಗೆ ಪರಿಹಾರವಾಗಿ ಅಭಿವೃದ್ಧಿಗೊಳಿಸಿದ ಪ್ರತಿಷ್ಠಿತ ಬಡಾವಣೆಯಲ್ಲಿ ಬೆಲೆ ಬಾಳುವ ನಿವೇಶನಗಳನ್ನು ಶೇ. 50:50 ಅನುಪಾತದಲ್ಲಿ ನಿಯಮ ಬಾಹಿರವಾಗಿ ಹಂಚಿಕೆ ಮಾಡಿದ ಪ್ರಕರಣದ ತನಿಖೆಯ ದಿಕ್ಕು ದೆಸೆ ಬಗ್ಗೆ ಅನುಮಾನಗಳು ಶುರುವಾಗಿವೆ.

4,500ರಿಂದ 5000 ನಿವೇಶನಗಳನ್ನು ಮನಸ್ಸೋ ಇಚ್ಛೆ ಪರಭಾರೆ ಮಾಡಿ ಮುಡಾ ಮತ್ತು ಸರ್ಕಾರಕ್ಕೆ ಸಾವಿರಾರು ಕೋಟಿ ರೂ. ನಷ್ಟ ಉಂಟು ಮಾಡಿರುವ ಹಾಗೂ ಭಾರಿ ಅವ್ಯವಹಾರದ ಭೂ ಹಗರಣದ ತನಿಖಾ ಗತಿ ಗಮನಿಸಿದರೆ, ಮುಂದೇನು ಎಂಬ ಪ್ರಶ್ನೆ ಉದ್ಭವಿಸಿದೆ.

ಜುಲೈ 15ರಿಂದ ವಿಧಾನಸಭಾ ಅಧಿವೇಶನ ಆರಂಭವಾಗಿದ್ದು, ಪ್ರತಿಪಕ್ಷಗಳ ಸದಸ್ಯರು ಮುಡಾ, ವಾಲ್ಮೀಕಿ ಹಗರಣ ಪ್ರಸ್ತಾಪಿಸಿ, ಸರ್ಕಾರದ ವಿರುದ್ಧ ವಾಗ್ಬಾಣ ಬಿಡುತ್ತಿದ್ದಾರೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದಿರುವ ಬ್ರಹ್ಮಾಂಡ ಭ್ರಷ್ಟಾಚಾರವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲವೇ ಎಂಬ ಅನುಮಾನ ಸ್ಥಳೀಯ ತನಿಖಾ ವೈಖರಿಯಿಂದ ಮೂಡುತ್ತಿದೆ.

ಸರ್ಕಾರದ ತೀರ್ಮಾನದಂತೆ ರಚನೆಯಾಗಿರುವ ಹಿರಿಯ ಐಎಎಸ್ ಅಧಿಕಾರಿ ವೆಂಕಟಾಚಲಪತಿ ನೇತೃತ್ವದ ತನಿಖಾ ಸಮಿತಿಯ ನಾಲ್ವರು ಅಧಿಕಾರಿಗಳು ಕಳೆದ 10 ದಿನಗಳಿಂದ ಮುಡಾ ಕಚೇರಿಯಲ್ಲಿ ತನಿಖೆ ನಡೆಸುತ್ತಿದ್ದರು.

ಎಲ್ಲಾ ವಿಭಾಗಗಳಿಂದ ಕಡತ, ಲಾಗ್ ಬುಕ್, ಮೂವ್‌ಮೆಂಟ್ ರಿಜಿಸ್ಟರ್‌ಗಳು, ಟಿಪ್ಪಣಿಗಳು, ಅಭಿಪ್ರಾಯ ನಮೂದಿಸಿರುವ ಫೈಲ್‌ಗಳು ಹಾಗೂ ಇನ್ನಿತರ ದಾಖಲೆಗಳನ್ನು ತರಿಸಿಕೊಂಡು ಜಾಲಾಡುತ್ತಿದ್ದ ಅಧಿಕಾರಿಗಳು, ಸಂಶಯ ಬಂದರೆ ಸಂಬಂಧಪಟ್ಟ ಅಧಿಕಾರಿಗಳು, ಸಿಬ್ಬಂದಿಗಳನ್ನು ಕರೆಸಿ ಮಾಹಿತಿ ಪಡೆಯುತ್ತಿದ್ದರು.

ಮೈಸೂರಲ್ಲೇ ವಾಸ್ತವ್ಯ ಹೂಡಿ ಬೆಳಗ್ಗೆಯಿಂದ ಸಂಜೆವರೆಗೂ ಕಡತಗಳ ಪರಿಶೀಲನೆ ಮಾಡುತ್ತಿದ್ದ ತನಿಖಾಧಿಕಾರಿಗಳು, ಎರಡನೇ ಶನಿವಾರ ರಜೆ ಇದ್ದ ಕಾರಣ, ಮತ್ತೆ ಸೋಮವಾರ ಬರುತ್ತೇವೆ ಎಂದು ಹೇಳಿ ಮುಡಾ ಕಚೇರಿ ಸಭಾಂಗಣದ ಬಾಗಿಲು ಬಂದ್ ಮಾಡಿ ಸೀಲ್ ಹಾಕಿ ಹೋದ ಅಧಿಕಾರಿಗಳು ಮತ್ತೆ ಇತ್ತ ಸುಳಿದಿಲ್ಲ.

ಮತ್ತೆ ಅವರು ಬರುವ ಬಗ್ಗೆ ಸರ್ಕಾರದಿಂದಾಗಲೀ, ಸ್ವತಃ ತನಿಖಾಧಿಕಾರಿಗಳಾಗಲೀ ಮಾಹಿತಿ ನೀಡಿಲ್ಲ. ಮತ್ತೆ ಬರುತ್ತಾರೋ-ಇಲ್ಲವೋ ಎಂಬುದನ್ನೂ ಆಯುಕ್ತರ ಕಚೇರಿಗೂ ತಿಳಿದಿಲ್ಲ. ಈ ನಡುವೆ ತನಿಖೆ ಮುಕ್ತಾಯಗೊಳ್ಳುವವರೆಗೆ ಮುಡಾ ಕಚೇರಿಯಲ್ಲಿ ಯಾವುದೇ ಕೆಲಸವನ್ನೂ ಮಾಡಬಾರದೆಂದು ಸರ್ಕಾರ ಆದೇಶ ನೀಡಿರುವುದರಿಂದ ಅಧಿಕಾರಿಗಳು, ಸಿಬ್ಬಂದಿ ಎಂದಿನಂತೆ ಕಚೇರಿಗೆ ಬರುತ್ತಾರೆ, ಸುಮ್ಮನೇ ಕುಳಿತು ಸಂಜೆ ಹೋಗುತ್ತಿದ್ದಾರೆ.

ಇತ್ತ ತನಿಖೆಯೂ ಇಲ್ಲ, ಅತ್ತ ಸಾರ್ವಜನಿಕರ ಸೇವಾ ಪ್ರಕ್ರಿಯೆಯೂ ಇಲ್ಲದೆ, ಮುಡಾದಲ್ಲಿ ಎಲ್ಲಾ ಕೆಲಸಗಳೂ ಸಂಪೂರ್ಣ ಸ್ಥಗಿತಗೊಂಡಿವೆ. ಎರಡು-ಮೂರು ತಿಂಗಳಿಂದ ನಾನಾ ಸೇವೆಗಾಗಿ ಅರ್ಜಿ ಸಲ್ಲಿಸಿ ಕಾಯುತ್ತಿರುವ ಸಾರ್ವಜನಿಕರು ಕಂಗಾಲಾಗಿದ್ದಾರೆ.

ಒಂದು ತಂಡ ತನಿಖೆ ನಡೆಸುತ್ತಿರುವಾಗಲೇ ಅದೇ ಹಗರಣದ ತನಿಖೆಗೆ ನಿವೃತ್ತ ನ್ಯಾಯಮೂರ್ತಿ ನೇತೃತ್ವದಲ್ಲಿ ತನಿಖಾ ಆಯೋಗವನ್ನು ಸರ್ಕಾರ ರಚಿಸಿದೆ. ಅವರೂ ಬಂದಿಲ್ಲ. ಪರಿಸ್ಥಿತಿಯನ್ನು ಅವಲೋಕಿಸಿದರೆ, ಎರಡೆರಡು ತನಿಖಾ ತಂಡ ಏಕಕಾಲದಲ್ಲಿ ಒಂದೇ ಪ್ರಕರಣದ ದಾಖಲಾತಿಗಳನ್ನು ಪರಿಶೀಲಿಸಲು ಸಾಧ್ಯವೇ ಎಂಬ ಪ್ರಶ್ನೆ ಉದ್ಭವಿಸಿದೆ.

ಈ ಹಗರಣದಲ್ಲಿ ಭಾಗಿಯಾದ ಅಧಿಕಾರಿಗಳನ್ನು ವರ್ಗಾವಣೆ ಮಾಡಿ, ಅದೇ ಇಲಾಖೆಯ ಅಧಿಕಾರಿಗಳನ್ನು ತನಿಖಾ ತಂಡಕ್ಕೆ ನೇಮಿಸಿರುವುದನ್ನು ನೋಡಿದರೆ, ನಿವೇಶನ ಹಂಚಿಕೆ ಹಗರಣದ ತನಿಖೆ ದಿಕ್ಕು ದೆಸೆ ಏನು ಎಂಬ ಅನುಮಾನ ಮೂಡಿದೆ.

ಇತ್ತ ತನಿಖೆ ಪೂರ್ಣಗೊಳ್ಳುವವರೆಗೆ ಶೇ. 50:50 ಅನುಪಾತದಡಿ 2020ರಿಂದೀಚೆಗೆ ಹಂಚಿಕೆಯಾಗಿರುವ ನಿವೇಶನಗಳನ್ನು ರದ್ದುಗೊಳಿಸಿ ಸರ್ಕಾರ ಆದೇಶ ಹೊರಡಿಸಿಲ್ಲ. ಸಬ್ ರಿಜಿಸ್ಟ್ರಾರ್ ಕಚೇರಿಗಳಿಗೆ ಈ ನಿವೇಶನಗಳನ್ನು ನೋಂದಣಿ ಮಾಡಬಾರದು ಎಂದು ಸರ್ಕಾರದಿಂದ ಲಿಖಿತ ಸೂಚನೆಯನ್ನು ನೀಡಿಲ್ಲದಿರುವುದು ಎಲ್ಲೋ ಒಂದು ಕಡೆ ಸರ್ಕಾರವೇ ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡಿಲ್ಲ ಎಂಬ ಸಂಶಯ ಮೂಡುತ್ತಿದೆ.

ಮೈಸೂರಲ್ಲಿ ವಾಲ್ಮೀಕಿ ಸಮುದಾಯದ ಪ್ರತಿಭಟನೆ



ಕರ್ನಾಟಕ ವೀರ ಕೇಸರಿ ಪಡೆಯವರು ಮೈಸೂರಿನ ಹಳೇ ಜಿಲ್ಲಾಧಿಕಾರಿ ಕಚೇರಿ ಮುಂದೆ ಮಂಗಳವಾರ ಪ್ರತಿಭಟನೆ ನಡೆಸಿದರು.

ಮೈಸೂರು, ಜು.16(ಬಿಎಲ್‌ಯು)- ವಾಲ್ಮೀಕಿ ಸಮುದಾಯಕ್ಕೆ ಮಂಜೂರಾಗಬೇಕಿರುವ ಜಾಗವನ್ನು ಖಾಸಗಿ ಸಂಸ್ಥೆಗೆ ಮಂಜೂರು ಮಾಡಲು ಮುಂದಾಗಿರುವುದನ್ನು ವಿರೋಧಿಸಿ ಕರ್ನಾಟಕ ವೀರ ಕೇಸರಿ ಪಡೆಯವರು ಮೈಸೂರಿನ ಹಳೇ ಜಿಲ್ಲಾಧಿಕಾರಿ ಕಚೇರಿ ಮುಂದೆ ಇಂದು ಪ್ರತಿಭಟನೆ ನಡೆಸಿದರು.

ಮೈಸೂರು ತಾಲೂಕು ಕಸಬಾ ಹೋಬಳಿ ಸರ್ವೆ ನಂಬರ್ 92ರಲ್ಲಿ ವಾಲ್ಮೀಕಿ ಭವನ ನಿರ್ಮಾಣ ಮಾಡಲು ಜಾಗ ಮಂಜೂರಾತಿಗೆ ಸರ್ಕಾರದ ಹಂತದಲ್ಲಿ ಪ್ರಕ್ರಿಯೆಗಳು ನಡೆಯುತ್ತಿವೆ. ವಾಲ್ಮೀಕಿ ಸಮುದಾಯಕ್ಕೆ ಇನ್ನೇನು ಆ ಜಾಗ ದೊರೆಯಿತು ಎನ್ನುವಾಗ ಖಾಸಗಿ ಸಂಸ್ಥೆಯೊಂದು ಅದರ ಮೇಲೆ ಕಣ್ಣಿಟ್ಟು, ಅದನ್ನು ವಶಕ್ಕೆ ತೆಗೆದುಕೊಳ್ಳಲು ಪ್ರಯತ್ನಿಸಿದೆ ಎಂದು ಪ್ರತಿಭಟನಾಕಾರರು ದೂರಿದರು.

ವಾಲ್ಮೀಕಿ ಸಮುದಾಯಕ್ಕೆ ಮಂಜೂರಾಗಬೇಕಿದ್ದ ಜಾಗವನ್ನು ಖಾಸಗಿ ಸಂಸ್ಥೆಗೆ ನೀಡುವ ಪ್ರಯತ್ನವೂ ನಡೆಯುತ್ತಿದೆ ಎಂದು ಆಪಾದಿಸಿದರು.

ರಾಜ್ಯ ಕಾಂಗ್ರೆಸ್ ಸರ್ಕಾರ, ವಾಲ್ಮೀಕಿ ನಿಗಮದ ನೂರಾರು ಕೋಟಿ ನುಂಗಿ ನೀರು ಕುಡಿದಿರುವ ಈ ಸಂದರ್ಭದಲ್ಲೇ, ವಾಲ್ಮೀಕಿ ಸಮುದಾಯಕ್ಕೆ ನೀಡಬೇಕಾಗಿರುವ ಜಾಗವನ್ನು ಸಹ ಖಾಸಗಿ ಸಂಸ್ಥೆಗೆ, ಸಮುದಾಯಕ್ಕೆ ಸಲ್ಲಬೇಕಾದ ಜಾಗ ಕಬಳಿಸಲು ಅವಕಾಶ ಮಾಡಿಕೊಡುತ್ತಿದೆ ಎಂದು ದೂರಿದರು.

ಕರ್ನಾಟಕ ವೀರ ಕೇಸರಿ ಪಡೆಯ ಪ್ರಭಾಕರ್, ದ್ಯಾವಪ್ಪ, ಸುರೇಶ್ ಎಸ್.ಕೆ.ಲಿಂಗಸ್ವಾಮಿ, ರಘು ನಾಯಕ ಸೇರಿದಂತೆ ಹಲವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

ಪರಿಸರ ಸಮತೋಲನಕ್ಕೆ ಉರಗ ಸಂರಕ್ಷಣೆ ಅನಿವಾರ್ಯ: ಸ್ನೇಕ್ ಶ್ಯಾಮ್



ಕೆಎಂಪಿಕೆ ಚಾರಿಟೆಬಲ್ ಟ್ರಸ್ಟ್ ಹಾಗೂ ಜೀವಧಾರ ರಕ್ತ ನಿಧಿ ಕೇಂದ್ರದ ವತಿಯಿಂದ ಉರಗ ತಜ್ಞ ಸ್ನೇಕ್ ಶ್ಯಾಮ್ ಅವರನ್ನು ಸನ್ಮಾನಿಸಲಾಯಿತು.

ಮೈಸೂರು,ಜು.16(ಎಂಟಿವೈ)- ಪರಿಸರ ಸಮತೋಲನ ಕಾಯ್ದುಕೊಳ್ಳಲು ಉರಗ ಸಂತತಿ ಸಂರಕ್ಷಣೆ ಅನಿವಾರ್ಯ ಎಂದು ಉರಗ ತಜ್ಞ ಸ್ನೇಕ್ ಶ್ಯಾಮ್ ಅಭಿಪ್ರಾಯಪಟ್ಟಿದ್ದಾರೆ.

ವಿಶ್ವ ಉರಗ ದಿನಾಚರಣೆ ಹಿನ್ನೆಲೆಯಲ್ಲಿ ಕೆಎಂಪಿಕೆ ಚಾರಿಟೆಬಲ್ ಟ್ರಸ್ಟ್ ಹಾಗೂ ಜೀವಧಾರ ರಕ್ತ ನಿಧಿ ಕೇಂದ್ರದ ವತಿಯಿಂದ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಉರಗ ಸಂತತಿಯ ಸಂರಕ್ಷಣೆ ಅವಶ್ಯ. ಪರಿಸರ ಸಮತೋಲನ ಕಾಯ್ದುಕೊಳ್ಳಬೇಕಾದರೆ ಪ್ರಾಣಿ, ಪಕ್ಷಿ, ಕೀಟಗಳ ಸಂತತಿ ಸಂರಕ್ಷಣೆ ಅನಿವಾರ್ಯ. ಇವು ಅಳಿದರೆ, ಪರಿಸರ ಸಮತೋಲನ ಕಳೆದುಕೊಳ್ಳುತ್ತದೆ. ಅದಾಗ್ಯೂ ಭೂಮಿ ಮೇಲೆ ಎಲ್ಲಾ ಪ್ರಾಣಿ-ಪಕ್ಷಿಗಳು ಬದುಕುವ ಹಕ್ಕನ್ನು ಹೊಂದಿವೆ. ಮಾನವನ ದುರಾಸೆ ಫಲವಾಗಿ ಈಗಾಗಲೇ ಹಲವು ಪ್ರಭೇದಗಳು ಅಳಿವಿನಂಚಿಗೆ ದೂಡಲ್ಪಟ್ಟಿವೆ. ಉರಗ ಕಂಡರೆ ಹೊಡೆದು ಸಾಯಿಸುವ ಹಂತಕ್ಕೆ ಮನುಷ್ಯ ಹೋಗಿದ್ದಾನೆ. ಇದರಿಂದ ರೈತರು ಹಾಗೂ ಜನಸಾಮಾನ್ಯರು ಇಲಿ ಕಾಟದಿಂದ ತತ್ತರಿಸುವ ಕಾಲ ಸನ್ನಿಹಿತವಾಗುವ ಆತಂಕವಿದೆ. ಈ ಹಿನ್ನೆಲೆಯಲ್ಲಿ ಉರಗ ಸಂರಕ್ಷಣೆಗೆ ಆದ್ಯತೆ ನೀಡಬೇಕು ಎಂದು ಸಲಹೆ ನೀಡಿದರು.

ಪ್ರತಿಯೊಬ್ಬರೂ ತಮ್ಮ ಮನೆಯ ಸುತ್ತಮುತ್ತ ಖಾಲಿ ಸ್ಥಳದಲ್ಲಿ ಗಿಡಗಳನ್ನು ನೆಟ್ಟು ಬೆಳೆಸಬೇಕು. ಪರಿಸರವನ್ನು ಶುದ್ಧವಾಗಿಸುವ ಜವಾಬ್ದಾರಿ ಎಲ್ಲರದ್ದಾಗಿದೆ ಎಂದು ಸಲಹೆ ನೀಡಿದರಲ್ಲದೆ, ಹಾವು ಕಡಿದರೆ ಏನು ಮಾಡಬೇಕು ಎಂದು ಪ್ರಾಥಮಿಕ ಮಾಹಿತಿ ನೀಡಿದರು.

ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ ಮಾತನಾಡಿ, ಕೋವಿಡ್‌ನಂತಹ ಕಷ್ಟ ಕಾಲದಲ್ಲೂ ಮನೆಗಳಿಗೆ ಹಾವು ಬಂದಾಗ ಸ್ನೇಕ್ ಶ್ಯಾಮ್ ಅವುಗಳ ಸಂರಕ್ಷಿಸಿದ್ದಾರೆ. ಅಂತರರಾಷ್ಟ್ರೀಯ ಮಟ್ಟದಲ್ಲಿ ಹೆಸರು ಮಾಡಿರುವ ಉರಗತಜ್ಞ ಸ್ನೇಕ್ ಶ್ಯಾಮ್ ಈಗಾಗಲೇ 85 ಸಾವಿರಕ್ಕೂ ಹೆಚ್ಚು ಸಂರಕ್ಷಣೆ ಮಾಡಿದ್ದಾರೆ. ಪರಿಸರ ಸಂರಕ್ಷಣೆ ಕುರಿತಂತೆ ಪಠ್ಯಪುಸ್ತಕಗಳಲ್ಲಿ ಸ್ನೇಕ್ ಶ್ಯಾಮ್ ಅವರ ಉರಗ ಸಂರಕ್ಷಣೆ ಕುರಿತು ಮಕ್ಕಳಲ್ಲಿ ಜಾಗೃತಿ ಮೂಡಿಸಲು ಕ್ರಮ ಕೈಗೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕಾಂಗ್ರೆಸ್ ಮುಖಂಡ ನಜರ್‌ಬಾದ್ ನಟರಾಜ್, ಕೆ.ಆರ್.ಬ್ಯಾಂಕ್ ಉಪಾಧ್ಯಕ್ಷ ಬಸವರಾಜ್ ಬಸಪ್ಪ ಜೀವಧಾರ ರಕ್ತ ನಿಧಿ ಕೇಂದ್ರದ ನಿರ್ದೇಶಕ ಗಿರೀಶ್, ಕೆಎಂಪಿಕೆ ಟ್ರಸ್ಟ್ ಅಧ್ಯಕ್ಷ ವಿಕ್ರಮ ಅಯ್ಯಂಗಾರ್, ಮುಖಂಡರಾದ ಜಿ.ರಾಘವೇಂದ್ರ ಪ್ರಕಾಶ್ ಪ್ರಿಯದರ್ಶನ್, ಪರಮೇಶ್ ಗೌಡ, ಅಜಯ್ ಶಾಸ್ತ್ರಿ, ಕೆ.ಎಂ.ನಿಶಾಂತ್, ಅಪೂರ್ವ ಸುರೇಶ್, ಬೈರತಿ ಲಿಂಗರಾಜು, ಸುಚೆಂದ್ರ ಚಕ್ರಪಾಣಿ, ಎಸ್.ಎನ್.ರಾಜೇಶ್, ಸದಾಶಿವ್, ಸಚಿನ್ ನಾಯಕ್, ಸಿಷಿ ರಾಕೇಶ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಮಹಾರಾಜ ಪದವಿಪೂರ್ವ ಕಾಲೇಜಲ್ಲಿ 'ಮುಮ್ಮಡಿ' ಜಯಂತಿ ಆಚರಣೆ



ಮೈಸೂರಿನ ಮಹಾರಾಜ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಕರ್ನಾಟಕ ಸೇನಾಪಡೆ ವತಿಯಿಂದ ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರ 225ನೇ ಜಯಂತಿ ಆಚರಿಸಲಾಯಿತು.

ಮೈಸೂರು,ಜು.16(ಎಂಟಿವೈ)- ಮೈಸೂರಿನ ಜೆಎಲ್‌ಬಿ ರಸ್ತೆಯಲ್ಲಿರುವ ಮಹಾರಾಜ ಪದವಿ ಪೂರ್ವ ಕಾಲೇಜಿನ ಆವರಣದಲ್ಲಿ ಕರ್ನಾಟಕ ಸೇನಾ ಪಡೆ ವತಿಯಿಂದ ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರ 225ನೇ ಜಯಂತಿ ಆಚರಿಸಲಾಯಿತು.

ಕಾಲೇಜು ಆವರಣದಲ್ಲಿರುವ ಮುಮ್ಮಡಿ ಅವರ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ಪುಷ್ಪ ನಮನ ಸಲ್ಲಿಸಲಾಯಿತು. ಈ ವೇಳೆ ಕಾಲೇಜಿನ ಕೆಲ ವಿದ್ಯಾರ್ಥಿಗಳು ಗೌರವ ನಮನ ಸಲ್ಲಿಸಿದರು.

ಕಾರ್ಯಕ್ರಮದಲ್ಲಿ ಸಾಹಿತಿ ಬನ್ನೂರು ಕೆ.ರಾಜು ಮಾತನಾಡಿ, ಮೈಸೂರು ಸಾಮ್ರಾಜ್ಯದ 22ನೇ ಅರಸರಾಗಿದ್ದ ಮುಮ್ಮಡಿ ಕೃಷ್ಣರಾಜ ಒಡೆಯರ್ ಉತ್ತಮ ಆಡಳಿತ ನಡೆಸಿ ಗಮನ ಸೆಳೆದರು. ಇವರ ಆಳ್ವಿಕೆಯಲ್ಲಿ ಪ್ರಜಾಪ್ರಭುತ್ವ ಜಾರಿಗೆ ತಂದಿದ್ದರು. ಆದರೆ ಇಂದಿನ ಕಾಲಘಟ್ಟದಲ್ಲಿ ರಾಷ್ಟ್ರ ಮತ್ತು ರಾಜ್ಯವನ್ನು ಸ್ವಾರ್ಥಕ್ಕಾಗಿ ಅಂಧಕಾರಕ್ಕೆ ತಳ್ಳುವಂತಹ ಪರಿಸ್ಥಿತಿ ಎದ್ದು ಕಾಣುತ್ತಿದೆ. ರಾಜ್ಯಕ್ಕೆ ಬೆಳಕನ್ನು ನೀಡಿದಂತಹ ನಮ್ಮ ರಾಜರುಗಳು ಅವಿಸ್ಮರಣೀಯರು. ಮೈಸೂರಿನ ಅಭಿವೃದ್ಧಿಗೆ ನಾಲ್ವಡಿ ಕೃಷ್ಣರಾಜ ಒಡೆಯರ್ ಮುನ್ನುಡಿ ಬರೆದರು. ಅಲ್ಲದೆ, ಧಾರ್ಮಿಕ, ಸಾಹಿತ್ಯ, ವೈಜ್ಞಾನಿಕ ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲೂ ದೂರದೃಷ್ಟಿ ಇಟ್ಟುಕೊಂಡು ಕೆಲಸ ಮಾಡಿದರು ಎಂದರು.

ಕಾವೇರಿ ಕ್ರಿಯಾ ಸಮಿತಿ ಅಧ್ಯಕ್ಷ ಎಸ್. ಜಯಪ್ರಕಾಶ್ ಮಾತನಾಡಿ, ರಾಜರ ಆಳ್ವಿಕೆಯಲ್ಲಿದ್ದಂತಹ ವ್ಯವಸ್ಥೆ ಈಗ ಇದ್ದರೆ ಜನ ಸಂಭ್ರಮಿಸುತ್ತಿದ್ದರು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ರಾಜಕಾರಣಿಗಳು ಸ್ವಾರ್ಥಕ್ಕಾಗಿ ಅಧಿಕಾರವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದಾರೆ ಎಂದು ವಿಷಾದಿಸಿದರು.

ಕರ್ನಾಟಕ ಸೇನಾಪಡೆಯ ಅಧ್ಯಕ್ಷ ತೇಜೇಶ್ ಲೋಕೇಶ್ ಗೌಡ ಮಾತನಾಡಿ, ಮೈಸೂರು ಸಂಸ್ಥಾನಕ್ಕೆ ಮುಮ್ಮಡಿ ಕೃಷ್ಣರಾಜ ಒಡೆಯರ್ ಅವರ ಕೊಡುಗೆ ಅಪಾರ. ಮೈಸೂರು ನಾಡನ್ನು ಸಮಗ್ರವಾಗಿ ಅಭಿವೃದ್ಧಿಗೊಳಿಸಿದ ಕೀರ್ತಿ ಇವರಿಗೆ ಸಲ್ಲುತ್ತದೆ. ಮೈಸೂರಿನ ಮಹಾರಾಜ ಕಾಲೇಜು, ಮಹಾರಾಣಿ ಕಾಲೇಜು ಸೇರಿದಂತೆ ಹಲವಾರು ಸಂಸ್ಥೆಗಳು ಸ್ಥಾಪನೆ ಮಾಡಿದವರು. ಇಂತಹ ಮಹನೀಯರ ಜಯಂತಿಯನ್ನು ಸರ್ಕಾರ-ಜಿಲ್ಲಾಡಳಿತದ ವತಿಯಿಂದ ಪ್ರತಿ ವರ್ಷ ಆಚರಣೆ ಮಾಡಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಅಖಿಲ ಕರ್ನಾಟಕ ಒಕ್ಕಲಿಗರ ಸಂಘದ ನಿರ್ದೇಶಕ ಸಿ.ಜಿ. ಗಂಗಾಧರ್, ಜೆಡಿಎಸ್ ರಾಜ್ಯ ಪ್ರಧಾನ ಕಾರ್ಯದರ್ಶಿ ಹೆಚ್.ಕೆ.ರಾಮು, ಹೋಟೆಲ್ ಮಾಲೀಕರ ಸಂಘದ ಅಧ್ಯಕ್ಷ ನಾರಾಯಣಗೌಡ, ಮಹಾರಾಜ ಕಾಲೇಜು ಪ್ರಾಂಶುಪಾಲ ಉದಯಶಂಕರ್, ಮುಖಂಡರಾದ ಗೋಲ್ಡ್ ಸುರೇಶ್, ಕೃಷ್ಣಪ್ಪ, ಕುಮಾರ್ ಬಸಪ್ಪಗೌಡ, ಪ್ರಭುಶಂಕರ್, ಪ್ರಜೀಶ್, ವರಕೋಡು ಕೃಷ್ಣೇಗೌಡ, ಸಿಂಧುವಳ್ಳಿ ಶಿವಕುಮಾರ್, ವಿಜಯೇಂದ್ರ ನಂದಕುಮಾರ್, ನೇಹಾ, ಭಾಗ್ಯಮ್ಮ, ಮಂಜುಳಾ, ಪ್ರಭಾಕರ್, ಹನುಮಂತಯ್ಯ, ರಾಧಾಕೃಷ್ಣ, ರಘು ಅರಸ್, ಸುಬ್ಬೇಗೌಡ, ರಮೇಶ್, ಸಂಜಯ್, ನಾಗರಾಜು, ವಿಷ್ಣು ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಇಂಡಿಯನ್ 2 (ತೆ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಮಹಾರಾಜ (ತ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಹಿಂದೂಸ್ತಾನಿ 2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಇಂಡಿಯನ್ 2 (ತೆ)	4 ಪ್ರದರ್ಶನಗಳು
ಗಾಯಿತ್ರಿ	
ಇಂಡಿಯನ್ 2 (ತ)	4 ಪ್ರದರ್ಶನಗಳು
ರಾಜಕಮಲ್	
ಸರ್ಫಿರಾ (ಹಿಂ)	4 ಪ್ರದರ್ಶನಗಳು
ಸಂಗಂ	
ಇಂಡಿಯನ್ 2 (ತ)	4 ಪ್ರದರ್ಶನಗಳು
ಲಿಡೋ	
ಶಾಸ್ತ್ರಿ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಇಂಡಿಯನ್ 2 (ತ)	4 ಪ್ರದರ್ಶನಗಳು
ಪ್ರಭಾ	
ಜಾಕಿ (ಕ)	4 ಪ್ರದರ್ಶನಗಳು

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ಬೇಸಿಗೆ ರೇಸ್

1ನೇ ದಿನ, ಬುಧವಾರ, 17-7-2024

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ

I. ರೆಡ್ ಸ್ಯಾಟಿನ್ ಪ್ಲೇಟ್-1200 ಮೀ. ರೇಟೆಡ್ 00 ರಿಂದ 25. **ಮಧ್ಯಾಹ್ನ 2.00ಕ್ಕೆ**
1. ಅಸ್ಟ್ರಾಲಝರ್ 2. ಡಿ ಫೈಟರ್ 3. ಮಿಸ್ಟಿಕಲ್ ಮರ್ಲಿನ್

II. ದುಬಾರೆ ಫಾರೆಸ್ಟ್ ಪ್ಲೇಟ್-1400 ಮೀ. ರೇಟೆಡ್ 00 ರಿಂದ 25. **ಮ.2.30ಕ್ಕೆ**
1. ನ್ಯಾಚುರಲ್ ಫ್ಲೈ 2. ವೈಟ್‌ಲೈಸ್

III. ವರಾಹಿ ಟ್ರೋಫಿ ಡಿ2 -1200 ಮೀ. ರೇಟೆಡ್ 40 ರಿಂದ 65. **ಮ.3.00ಕ್ಕೆ**
1. ದಿ ಫ್ಲೈಯಿಂಗ್ ಫ್ಲೀಟ್ 2. ಆಸ್ಪಿಂಗ್ ಸನ್‌ರೈಸ್ 3. ಮೂನ್‌ಲೈಟ್ ಕ್ವೀನ್

IV. ಮೇಲುಕೋಟೆ ಪ್ಲೇಟ್-1200 ಮೀ. ರೇಟೆಡ್ 20 ರಿಂದ 45. **ಮ.3.30ಕ್ಕೆ**
1. ಸ್ಯಾಟಿನ್ ಎಮಿಲಿಯನ್ 2. ಔರ್ಲಿ 3. ರೈಸಿಂಗ್ ಸನ್

V. ವರಾಹಿ ಟ್ರೋಫಿ ಡಿ1 -1200 ಮೀ. ರೇಟೆಡ್ 40 ರಿಂದ 65. **ಸಂಜೆ 4.00ಕ್ಕೆ**
1. ಶೀಬಾ 2. ಮಿಸ್ಟಿಕ್ ಬಾಂಡ್ 3. ಕಾಂಟ್ರಿಬ್ಯೂಟರ್

VI. ಬಿಲೌಡ್ ಪ್ರಿನ್ಸ್ ಪ್ಲೇಟ್-1400 ಮೀ. ರೇಟೆಡ್ 60 ಮತ್ತು ಮೇಲ್ಪಟ್ಟ. **ಸಂ.4.30ಕ್ಕೆ**
1. ಕುಶಾಕ್ 2. ಪ್ರಿನ್ಸ್ ಕಾರ್ಪೊರೇಟ್ 3. ಹಿಸ್ ಎಮಿಲಿನ್ಸ್

VII. ಕುಶಾಲನಗರ ಪ್ಲೇಟ್-1400 ಮೀ. ರೇಟೆಡ್ 20 ರಿಂದ 45. **ಸಂ.5.00ಕ್ಕೆ**
1. ಸಿಯೋಲ್ 2. ಬ್ರೈಟೆಸ್ಟ್ ಸ್ಟಾರ್ 3. ನಿವೇದಾ ಗೋಲ್ಡ್

ದಿನದ ಅತ್ಯುತ್ತಮ	ದಿ ಫ್ಲೈಯಿಂಗ್ ಫ್ಲೀಟ್
ಡಬ್ಬಲ್	ಶೀಬಾ, ಕುಶಾಕ್
ಜಾಕ್‌ಪಾಟ್	3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್	4, 5, 6 ಮತ್ತು 7
I ಟ್ರಿಬಲ್	2, 3 ಮತ್ತು 4
II ಟ್ರಿಬಲ್	5, 6 ಮತ್ತು 7
ಎಕ್ಸ್‌ಆಕ್ಟ್	1 ರಿಂದ 7

ಟಿಪ್‌ಸ್ಟರ್ ಪಿಜಿಸಿ

ಸಾಲ ಸೌಲಭ್ಯ ಒದಗಿಸಲು ಅರ್ಜಿಗಳ ಆಹ್ವಾನ

ಮೈಸೂರು, ಜು.16- ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ 2024-25ನೇ ಸಾಲಿಗೆ ಸಾಲ ಸೌಲಭ್ಯವನ್ನು ಪಡೆಯಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿಯನ್ನು ಕಡ್ಡಾಯವಾಗಿ ಆನ್‌ಲೈನ್‌ನಲ್ಲಿ www.kacdckarnataka.gov.in ಮೂಲಕ ಆಗಸ್ಟ್ 31ರೊಳಗೆ ಸಲ್ಲಿಸಬಹುದಾಗಿದೆ. ಸಲ್ಲಿಸಬೇಕಾದ ದಾಖಲೆ ಹಾಗೂ ಜಿಲ್ಲಾ ವ್ಯವಸ್ಥಾಪಕರ ಕಚೇರಿ ವಿಳಾಸವನ್ನು www.kacdc.karnataka.gov.in ವೆಬ್‌ಸೈಟ್‌ನಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ: 9448451111 ಅನ್ನು ಸಂಪರ್ಕಿಸಬಹುದಾಗಿದೆ .

ಪ್ರಜ್ವಲ್ ತಪ್ಪು ಮಾಡಿದ್ದರೆ ಗಲ್ಲಿಗೇರಿಸಿ

● ವಿಧಾನಸಭೆಯಲ್ಲಿ ಹೆಚ್.ಡಿ.ರೇವಣ್ಣ ಗುಡುಗು ● ಮಹಿಳೆ ಕಚೇರಿಗೆ ಕರೆಸಿ ಡಿಜಿಪಿ ದೂರು ಬರೆಸಿದ್ದಾರೆ ● ನೀತಿಗೆಟ್ಟ ಸರ್ಕಾರಕ್ಕೆ ನಾಚಿಕೆಯಾಗಬೇಕು

ಬೆಂಗಳೂರು, ಜು. 16(ಕೆಎಂಶಿ)– ಮಾಜಿ ಸಂಸದ ಪ್ರಜ್ವಲ್ ತಪ್ಪು ಮಾಡಿದ್ದರೆ ಗಲ್ಲಿಗೇರಿಸಿ ಎಂದು ಅವರ ತಂದೆ ಶಾಸಕ ಎಚ್.ಡಿ. ರೇವಣ್ಣ ವಿಧಾನಸಭೆಯಲ್ಲಿ ಸ್ಪಷ್ಟಪಡಿಸಿದರು. ಮಹರ್ಷಿ ವಾಲ್ಮೀಕಿ ನಿಗಮದಲ್ಲಿ ನಡೆದಿರುವ ಹಗರಣಕ್ಕೆ ಸಂಬಂಧಿಸಿದಂತೆ ಪ್ರತಿಪಕ್ಷದ ನಾಯಕ ಆರ್.ಅಶೋಕ್ ಮಾತನಾಡುವಾಗ, ಪ್ರಜ್ವಲ್ ರೇವಣ್ಣ ಪ್ರಕರಣವನ್ನೂ ಪ್ರಸ್ತಾಪಿಸಿದರು. ಈ ಅವಕಾಶವನ್ನು ಬಳಕೆ ಮಾಡಿಕೊಂಡ ರೇವಣ್ಣ, ಸಭಾಧ್ಯಕ್ಷರ ಅನುಮತಿ ಪಡೆದು, ನನಗೆ ಕಾಂಗ್ರೆಸ್ ಶಾಸಕರಂತೆ ವಾದ ಮಾಡುವ ಶಕ್ತಿ ಇಲ್ಲ. ನನ್ನ ಮಗ ತಪ್ಪು ಮಾಡಿದ್ದರೆ ಗಲ್ಲಿಗೆ ಹಾಕಿ, ನಾನು ಯಾರ ಪರವಾಗಿಯೂ ಮಾತನಾಡುತ್ತಿಲ್ಲ ಎಂದರು.

ಕಳೆದ ನಾಲ್ಕು ದಶಕಗಳಿಂದ ಸಾರ್ವಜನಿಕ ಜೀವನದಲ್ಲಿದ್ದೇನೆ. 25 ವರ್ಷಗಳಿಂದ ಶಾಸಕನಾಗಿ ಕೆಲಸ ಮಾಡಿದ್ದೇನೆ. ಹೆಣ್ಣು ಮಗಳೊಬ್ಬಳನ್ನು ಪೊಲೀಸ್ ಮಹಾ ನಿರ್ದೇಶಕರು ಕಚೇರಿಗೆ ಕರೆಸಿಕೊಂಡು ನನ್ನ ವಿರುದ್ಧ ದೂರು ಬರೆಸಿಕೊಂಡಿದ್ದಾರೆ. ಇಂತಹ ವ್ಯಕ್ತಿ ಪೊಲೀಸ್ ಮಹಾ ನಿರ್ದೇಶಕನಾಗಲು ಅನರ್ಹ. ಮೂರೂ ಬಿಟ್ಟ ಈ ನೀತಿಗೆಟ್ಟ ಸರ್ಕಾರಕ್ಕೆ ನಾಚಿಕೆಯಾಗಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು. ಈ ಸಂಬಂಧ ನಾನು ಪ್ರತ್ಯೇಕ ನೋಟಿಸ್ ಕೊಡುತ್ತೇನೆ. ಸವಿಸ್ತಾರ ಚರ್ಚೆಯಾಗಲಿ, ಎಲ್ಲವನ್ನೂ ಬಯಲು ಮಾಡುತ್ತೇನೆ ಎಂದು ಗುಡುಗಿದರು.

ಇದಕ್ಕೂ ಮುನ್ನ ಅಶೋಕ್ ಮಾತನಾಡಿ, ಎಸ್‌ಐಟಿ ತನಿಖಾ ಸಂಸ್ಥೆಗಳು ಯಾವ ರೀತಿ ತಾರತಮ್ಯ ಮಾಡುತ್ತಿವೆ ಎಂದು ವಿವರಿಸುವ ವೇಗದಲ್ಲಿ, ಪ್ರಜ್ವಲ್ ರೇವಣ್ಣ ಆರೋಪಿ ಎಂದು ಹೇಳಿದ ಮಾತು ಚರ್ಚೆಗೆ ಗ್ರಾಸವಾಯಿತು.

ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ತನಿಖೆ ನಡೆಸುತ್ತಿರುವ ಎಸ್‌ಐಟಿ ತಂಡ



ಎಚ್.ಡಿ.ರೇವಣ್ಣ

ಎಫ್‌ಐಆರ್ ದಾಖಲಾಗಿ 40 ದಿನಗಳಾದರೂ ಮಾಜಿ ಸಚಿವ ನಾಗೇಂದ್ರ ಹಾಗೂ ನಿಗಮದ ಅಧ್ಯಕ್ಷ ಬಸನಗೌಡ ದದ್ದಲ್ ಅವರನ್ನು ವಿಚಾರಣೆಗೆ ಕರೆಯುವುದಿಲ್ಲ. ಆದರೆ, ರೇವಣ್ಣನ ಮಗ ಮಾಡಿದ ತಪ್ಪಿಗೆ ರೇವಣ್ಣ ಅವರನ್ನು ಕರೆಸಿ ಜೈಲಿಗೆ ಹಾಕಲಾಯಿತು. ಬೆಂಗಳೂರು, ಹಾಸನ, ಹೊಳೆನರಸೀಪುರದಲ್ಲಿರುವ ರೇವಣ್ಣ ಅವರ ಮನೆಗೆ ತಲಾ 20 ಪೊಲೀಸರ ತಂಡಗಳನ್ನು ನಿಯೋಜಿಸಲಾಗಿತ್ತು. ರೇವಣ್ಣ ಅವರ ಪತ್ನಿ ಭವಾನಿ ಅವರ ಬಂಧನಕ್ಕೂ ಪ್ರಯತ್ನಿಸಲಾಯಿತು. ಅವರು ನ್ಯಾಯಾಲಯದಲ್ಲಿ ನಿರೀಕ್ಷಣಾ ಜಾಮೀನು ಪಡೆದುಕೊಂಡರು. ನಮ್ಮ ಪಕ್ಷದ ಮಾಜಿ ಶಾಸಕ ಪ್ರೀತಂಗೌಡ ಅವರನ್ನು ಬಂಧಿಸಲು ಯತ್ನಿಸಲಾಯಿತು. ಎಸ್‌ಐಟಿ ಅಧಿಕಾರಿಗಳ ಈ ತಾರತಮ್ಯ ಏಕೆ ಎಂದರು. ಕೂಡಲೇ ಮಧ್ಯಪ್ರವೇಶಿಸಿ ಮಾತನಾಡಿದ ಎಚ್.ಡಿ. ರೇವಣ್ಣ, ವಿರೋಧ ಪಕ್ಷದ ನಾಯಕರು ನನ್ನ ಹೆಸರನ್ನು ಪ್ರಸ್ತಾಪಿಸಿದ್ದಾರೆ. ಸ್ಪಷ್ಟನೆ ನೀಡಲು ನನಗೆ ಅವಕಾಶ ಕೊಡಬೇಕು ಎಂದು ಮನವಿ ಮಾಡಿದರು.

ಜೆಡಿಎಸ್ ಶಾಸಕ ಕೃಷ್ಣಪ್ಪ ಅವರು, ರೇವಣ್ಣ ಅವರ ಪುತ್ರ ತಪ್ಪು ಮಾಡಿದ್ದಾರೆ ಎಂದು ಹೇಳುವುದು ಸರಿಯಲ್ಲ. ಅದನ್ನು ನ್ಯಾಯಾಲಯ ತೀರ್ಮಾನ ಮಾಡುತ್ತದೆ ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಆರ್.ಅಶೋಕ್ ತಮ್ಮ ಹೇಳಿಕೆ ಸರಿಪಡಿಸಿಕೊಳ್ಳುವುದಾಗಿ ಸದನಕ್ಕೆ ತಿಳಿಸಿದರು.

ಈ ಚರ್ಚೆ ನಡುವೆಯೇ ಪದೇ ಪದೇ ವಿಷಯ ಪ್ರಸ್ತಾಪವಾದಾಗ ಕಾಂಗ್ರೆಸ್‌ನ ರಿಜ್ವಾನ್ ಅರ್ಷದ್, ಎರಡು ಎಸ್‌ಐಟಿ ತಂಡಗಳ ನಡುವೆ ಪದೇ ಪದೇ ಹೋಲಿಕೆ ಮಾಡಿ ಮಾತನಾಡುತ್ತಿರುವುದು ಏಕೆ, ನೂರಾರು ಮಹಿಳೆಯರ ಮಾನಹರಣವಾಗಿರುವ ಪ್ರಕರಣ ವಾಲ್ಮೀಕಿ ಹಗರಣಕ್ಕಿಂತಲೂ ಕಡಿಮೆ ಎಂಬ ಧೋರಣೆಯೇ, ಮಹಿಳೆಯರ ಮಾನಕ್ಕೆ ಬೆಲೆ ಇಲ್ಲವೇ? ಎಂದು ಆಕ್ಷೇಪ ವ್ಯಕ್ತಪಡಿಸಿದರು.

ಕಾಂಗ್ರೆಸ್‌ನ ನಾರಾಯಣಸ್ವಾಮಿ ಮಧ್ಯಪ್ರವೇಶಿಸಿ, ಹಣ ಹೋದರೆ ಬರುತ್ತದೆ, ಮಾನ ಹೋದರೆ ಬರುತ್ತದೆಯೇ ಎಂದರು. ಈ ಹಂತದಲ್ಲಿ ಸಿಟ್ಟಾದ ರೇವಣ್ಣ ನಿಮ್ಮ ಬಂಡವಾಳ ಗೊತ್ತಿದೆ, ಕುಳಿತುಕೊಳ್ಳಿ ಎಂದು ಆಕ್ರೋಶ ವ್ಯಕ್ತಪಡಿಸಿದರು. ಕೃಷ್ಣಪ್ಪ, ನೀವೆಲ್ಲಾ ಶ್ರೀರಾಮಚಂದ್ರರು ಎಂದು ಕಾಂಗ್ರೆಸ್ಸಿಗರನ್ನು ಮೂದಲಿಸಿದರು.

ಈ ಸಂದರ್ಭದಲ್ಲಿ ಮಾತು ಮುಂದುವರೆಸಿದ ರೇವಣ್ಣ, ತಪ್ಪು ಮಾಡಿದ್ದರೆ ನನ್ನ ಮಗನನ್ನು ಗಲ್ಲಿಗೆ ಹಾಕಿ, ರಾಜಕೀಯ ದುರುದ್ದೇಶಕ್ಕಾಗಿ, ತಪ್ಪು ಮಾಡದವರ ವಿರುದ್ಧ ಪ್ರಕರಣ ದಾಖಲಿಸಿ, ಜೈಲಿಗೆ ಕಳುಹಿಸಿ ನಿಮ್ಮ ರಾಜಕೀಯ ಸೇಡುಗಳನ್ನು ತೀರಿಸಿಕೊಳ್ಳುವುದನ್ನು ಬಿಡಿ, ಮುಂದೆ ಇದೇ ವೇದಿಕೆಯಲ್ಲಿ ಎಲ್ಲವನ್ನೂ ಚರ್ಚಿಸೋಣ ಎಂದರು.

ನಾಲೆಯಿಂದ ಪಂಪ್‌ಸೆಟ್ ಮೂಲಕ ನೀರೆತ್ತುವುದನ್ನು ತಡೆಯಲು ವಾರದಲ್ಲಿ ವಿಧೇಯಕ ಮಂಡನೆ

● ಜಲ ಸಂಪನ್ಮೂಲ ಸಚಿವರೂ ಆದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಭರವಸೆ
● ನಾಲೆಗಳಲ್ಲಿ ಕೊನೆ ಹಂತದವರೆಗೆ ನೀರು ತಲುಪದೇ ಇರುವುದಕ್ಕೆ ಪರಿಹಾರೋಪಾಯ





ಬೆಂಗಳೂರು, ಜು.16(ಕೆಎಂಶಿ)– ಜಲಾಶಯಗಳಿಂದ ರೈತರ ಜಮೀನಿಗೆ ನೀರು ಪೂರೈಸುವ ನಾಲೆಗಳಲ್ಲಿ ಕೊನೆ ಹಂತದವರೆಗೂ ನೀರು ತಲುಪದೇ, ನಾಲೆಯ ಮಧ್ಯದಲ್ಲಿ ರೈತರು ಪಂಪ್‌ಸೆಟ್ ಅಳವಡಿಸಿ ನೀರೆತ್ತುವುದನ್ನು ತಪ್ಪಿಸಲು ಇನ್ನೊಂದು ವಾರದಲ್ಲಿ ವಿಧೇಯಕವನ್ನು ಸದನದಲ್ಲಿ ಮಂಡಿಸಲಾಗುವುದು ಎಂದು ಜಲಸಂಪನ್ಮೂಲ ಖಾತೆಯನ್ನೂ ಹೊಂದಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ವಿಧಾನಸಭೆಯಲ್ಲಿಂದು ತಿಳಿಸಿದ್ದಾರೆ.

ಜಗದೀಶ ಶಿವಯ್ಯ ಗುಡಗುಂಟಿ ಅವರ ಪ್ರಶ್ನಾವಳಿಗೆ ಉತ್ತರಿಸಿದ ಉಪಮುಖ್ಯಮಂತ್ರಿ, ಮಂಡ್ಯ, ಹಾಸನ, ಬಿಜಾಪುರ, ಬಾಗಲಕೋಟೆ ಸೇರಿದಂತೆ ನೀರಾವರಿ ಪ್ರದೇಶಗಳಲ್ಲಿ ನಾಲೆ ಕೊನೆಯವರೆಗೂ ನೀರು ತಲುಪುವುದಿಲ್ಲ, ಮಧ್ಯದಲ್ಲೇ ಪಂಪ್‌ಸೆಟ್‌ಗಳ ಮೂಲಕ ನೀರು ಎತ್ತಲಾಗುತ್ತಿದೆ. ಇದನ್ನು ತಪ್ಪಿಸಲು ವಿಧೇಯಕವನ್ನು ತರಲಾಗುವುದು. ಇದರ ಬಗ್ಗೆ ವ್ಯಾಪಕ ಚರ್ಚೆಗೆ ಅನುಮತಿ ಕೊಡಿ ಎಂದರು. ಎತ್ತಿನಹೊಳೆ ಯೋಜನೆಗೆ 25 ಸಾವಿರ ಕೋಟಿ ರೂ. ವೆಚ್ಚವಾಗಿದೆ. ಆದರೂ, ನೀರು ತುಮಕೂರಿಗೂ ತಲುಪದಂಥ ಸ್ಥಿತಿ ಇದೆ. ತುಂಗ–ಸಾವಳಗಿ ಏತನೀರಾವರಿ ಯೋಜನೆಗೆ ಹಲ್ಯಾಳ ಏತನೀರಾವರಿ ಯೋಜನೆಯ 150 ಕ್ಯೂಸೆಕ್ ನೀರನ್ನು ಪಂಪ್ ಮಾಡುವ ಮೂಲಕ 9,045 ಹೆಕ್ಟೇರ್‌ಗೆ ಒದಗಿಸಲಾಗುವುದು.

ಇದೇ ಸಂದರ್ಭದಲ್ಲಿ ಮಧ್ಯ ಪ್ರವೇಶಿಸಿದ ಸಿ.ಸಿ.ಪಾಟೀಲ್, ನಾಲೆಯ ಕೊನೆಯ ಹಂತದವರೆಗೂ ನೀರು ಹರಿದುಹೋಗಲು ವಿಧೇಯಕ ತಂದರೆ ಸಂಪೂರ್ಣ ಬೆಂಬಲವಿದೆ ಎಂದರು.

ಸುರೇಶ ಬಾಬು ಮಾತನಾಡಿ, ನಾಲೆಗಳ ಮಧ್ಯದಲ್ಲಿ ನೀರೆತ್ತುವುದನ್ನು ತಡೆಯಲು ವಿಧೇಯಕ ತರಲಾಗುವುದು ಎನ್ನುತ್ತೀರಿ. ಆದರೆ ಗುಬ್ಬಿಯಿಂದ ಕುಣಿಗಲ್‌ಗೆ ನಾಲಾ ಮಧ್ಯದಿಂದಲೇ ನೀರು ತೆಗೆದುಕೊಂಡು ಹೋಗಿದ್ದೀರಿ ಎಂದಾಗ, ಉಪಮುಖ್ಯಮಂತ್ರಿ ಹಾಗೂ ಎಚ್.ಸಿ.ಬಾಲಕೃಷ್ಣ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಎಚ್.ಡಿ.ತಮ್ಮಯ್ಯ ಪ್ರಶ್ನೆಗೆ ಉತ್ತರಿಸಿದ ಉಪಮುಖ್ಯಮಂತ್ರಿ, ಭದ್ರ ಉಪಜಲಾನಯನ ಪ್ರದೇಶದಿಂದ ಏತ ವ್ಯವಸ್ಥೆ ಮೂಲಕ 197 ಕೆರೆಗಳಿಗೆ ನೀರು ತುಂಬಿಸುವ ಕಾಮಗಾರಿಗೆ 2020ರಲ್ಲೇ 1281.80 ಕೋಟಿ ರೂ. ವೆಚ್ಚದ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಹಾಸನ ಜಿಲ್ಲೆ ಬೇಲೂರು ತಾಲೂಕಿನ ದ್ವಾರಸಮುದ್ರ ಮತ್ತು ಇತರ ಆರು ಕೆರೆಗಳನ್ನು, ಚಿಕ್ಕಮಗಳೂರು ತಾಲೂಕಿನ ಬೆಳವಾಡಿ ಕೆರೆಯನ್ನು ರಣಘಟ್ಟ ತಿರುವಿನಿಂದ ಕೆರೆ ತುಂಬಿಸುವ ಕಾಮಗಾರಿಯನ್ನು 1125.46 ಕೋಟಿ ರೂ. ಮೊತ್ತದಲ್ಲಿ ಕೈಗೊಳ್ಳಲು ಆಡಳಿತಾತ್ಮಕ ಅನುಮೋದನೆ ದೊರೆತಿದೆ, 2ನೇ ಹಂತದ ಕಾಮಗಾರಿಯನ್ನು ಹೊಸ ಅಂದಾಜು ಪಟ್ಟಿಯಲ್ಲಿ ಕೈಗೊಳ್ಳುವುದಾಗಿ ಭರವಸೆ ನೀಡಿದರು.

ಕಾವೇರಿ ನದಿ ವಿವಾದ: 'ಸುಪ್ರೀಂ' ಮೆಟ್ಟಿಲೇರಲು ತಮಿಳುನಾಡು ನಿರ್ಧಾರ

ಚೆನ್ನೈ, ಜು.16– ರಾಜ್ಯದ ಪಾಲಿನ ಕಾವೇರಿ ನೀರು ಹರಿಸಲು ಕರ್ನಾಟಕ ಹಿಂದೇಟು ಹಾಕುತ್ತಿದ್ದು, ಈ ವಿಚಾರದಲ್ಲಿ ಅಗತ್ಯ ಬಿದ್ದರೆ ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಲು ಮಂಗಳವಾರ ಇಲ್ಲಿ ನಡೆದ ತಮಿಳುನಾಡು ಸರ್ವಪಕ್ಷದ ಶಾಸಕಾಂಗ ಪಕ್ಷದ ಮುಖಂಡರ ಸಭೆಯಲ್ಲಿ ತೀರ್ಮಾನ ತೆಗೆದುಕೊಳ್ಳಲಾಗಿದೆ.

ಕಾವೇರಿ ನೀರು ನಿಯಂತ್ರಣ ಸಮಿತಿ (ಸಿಡಬ್ಲ್ಯುಆರ್‌ಸಿ) ನಿರ್ದೇಶನದ ಪ್ರಕಾರ, ತಮಿಳುನಾಡಿಗೆ ನಿತ್ಯ 1 ಟಿಎಂಸಿ ಅಡಿ ನೀರು ಬಿಡಲು ನಿರಾಕರಿಸಿರುವ ಕರ್ನಾಟಕ ಸರ್ಕಾರದ ವಿರುದ್ಧ ಸಭೆಯು ಖಂಡನಾ ನಿರ್ಣಯ ಅಂಗೀಕರಿಸಿತು. ಕಾವೇರಿ ನ್ಯಾಯ ಮಂಡಳಿ ಹಾಗೂ ಸುಪ್ರೀಂಕೋರ್ಟ್ ಆದೇಶದಂತೆ ರಾಜ್ಯಕ್ಕೆ ನೀರು ಹರಿಸಲು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರವು (ಸಿಡಬ್ಲ್ಯುಎಂಎ) ಕರ್ನಾಟಕಕ್ಕೆ ಸೂಚನೆ ನೀಡಬೇಕು ಎಂದು ಸಭೆಯು ಮತ್ತೊಂದು ನಿರ್ಣಯ ಅಂಗೀಕರಿಸಿದೆ.

ರೈತರ ಪ್ರತಿಭಟನೆ: ತಮಿಳುನಾಡು ರಾಜ್ಯದಲ್ಲಿ ಕೃಷಿ ಚಟುವಟಿಕೆ ನಡೆಸಲು ಕಾವೇರಿ ನದಿಯಿಂದ ಕೂಡಲೇ ನೀರು ಹರಿಸಬೇಕು ಎಂದು ಒತ್ತಾಯಿಸಿ ರೈತರು ಹಾಗೂ ಎಡ ಪಕ್ಷಗಳ ಕಾರ್ಯಕರ್ತರು ತಿರುವಾರೂರ್ ಜಿಲ್ಲೆಯ ತಿರುತ್ತುರೈಪೂಂಡಿಯಲ್ಲಿ ರೈಲು ತಡೆದು ಪ್ರತಿಭಟನೆ ನಡೆಸಿದರು. ಕೇಂದ್ರ ಸರ್ಕಾರ ಕೂಡಲೇ ಮಧ್ಯಪ್ರವೇಶಿಸಿ ತಮಿಳುನಾಡಿಗೆ ಪಾಲಿನ ಕಾವೇರಿ ನೀರು ಹರಿಸಲು ಕ್ರಮ ಕೈಗೊಳ್ಳಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು. ನಂತರ ಇಲ್ಲಿನ ಕರ್ನಾಟಕ ಬ್ಯಾಂಕ್ ಕಚೇರಿಯ ಮುಂದೆಯೂ ಪ್ರತಿಭಟಿಸಿದರು. ಸ್ಥಳಕ್ಕೆ ಬಂದ ಪೊಲೀಸರು ಪ್ರತಿಭಟನಾಕಾರರನ್ನು ಅಲ್ಲಿಂದ ಕರೆದೊಯ್ದರು.

ಅಂಕೋಲಾ ಬಳಿ ಗುಡ್ಡ ಕುಸಿತ: ಮಣ್ಣಿನಡಿ ಸಿಲುಕಿ ಕನಿಷ್ಠ 10 ಮಂದಿ ದುರ್ಮರಣ



ಶಿರೂರು (ಉತ್ತರ ಕನ್ನಡ): ಕಾರವಾರ–ಕುಮಟಾ ರಸ್ತೆಯ ಅಂಕೋಲಾ ಸಮೀಪದ ಶಿರೂರು ಗ್ರಾಮದಲ್ಲಿ ಮಂಗಳವಾರ ಬೆಳಗ್ಗೆ ಸಂಭವಿಸಿದ ಭೂಕುಸಿತದಲ್ಲಿ ಕನಿಷ್ಠ 10 ಜನರು ಸಾವನ್ನಪ್ಪಿದ್ದಾರೆ.

10 ಮಂದಿಯ ಪೈಕಿ ಐವರು ಒಂದೇ ಕುಟುಂಬದ ಸದಸ್ಯರಿದ್ದಾರೆಂದು ಹೇಳಲಾಗಿದ್ದು, ಇವರು ರಾಷ್ಟ್ರೀಯ ಹೆದ್ದಾರಿ 66ರಲ್ಲಿ ಹೋಟೆಲ್ ನಡೆಸುತ್ತಿದ್ದರು ಎಂದು ತಿಳಿದುಬಂದಿದೆ. ಮಂಗಳವಾರ ಬೆಳಗ್ಗೆ ಈ ಘಟನೆ ಸಂಭವಿಸಿದೆ. ಸಂಪೂರ್ಣ ಗುಡ್ಡ ಅಂಗಡಿಯ ಮೇಲೆ ಕುಸಿದು ಬಿದ್ದಿದ್ದು, ಪರಿಣಾಮ ಸ್ಥಳದಲ್ಲಿದ್ದ 15ಕ್ಕೂ ಹೆಚ್ಚು ಮಂದಿ ಹಾಗೂ ಹಲವು ವಾಹನಗಳು ಕೂಡ ಮಣ್ಣಿನಡಿ ಸಿಲುಕಿಕೊಂಡಿದೆ. ಗುಡ್ಡ ಕುಸಿತದ ಪರಿಣಾಮ ರಸ್ತೆಯಲ್ಲಿ ವಾಹನ ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ. ಈ ನಡುವೆ ಐಆರ್‌ಬಿ ರಸ್ತೆ ನಿರ್ಮಾಣ ಸಂಸ್ಥೆಯ ಅವೈಜ್ಞಾನಿಕ ಕಾಮಗಾರಿಯೇ ಅನಾಹುತಕ್ಕೆ ಕಾರಣ ಎಂದು ಸ್ಥಳೀಯರು ಆರೋಪಿಸಿದ್ದಾರೆ. ನೋಡ ನೋಡುತ್ತಿದ್ದಂತೆಯೇ ಕ್ಷಣಾರ್ಧದಲ್ಲಿ ಗುಡ್ಡ ಕುಸಿದು ಬಿದ್ದಿತು. ಇಡೀ ನಾಲ್ಕು ಪಥದ ರಸ್ತೆಯೂ ಮಣ್ಣಿನಿಂದ ಮುಚ್ಚಿ ಹೋಗಿದೆ. ಗುಡ್ಡ ಕುಸಿತದ ವೇಳೆ ಕಾರೊಂದು ಹಾದುಹೋಗುತ್ತಿದ್ದು, ಈ ಕಾರಿನಲ್ಲಿ 5 ಮಂದಿ ಇದ್ದರು. ಎಲ್ಲರೂ ಮಣ್ಣಿನಡಿ ಸಿಲುಕಿ ಸಾವನ್ನಪ್ಪಿರಬಹುದು ಎಂದು ಪ್ರತ್ಯಕ್ಷದರ್ಶಿಗಳು ಹೇಳಿದ್ದಾರೆ.

ಈ ನಡುವೆ ಗಂಗಾವಳ್ಳಿ ನದಿಯಲ್ಲಿ ಬೃಹತ್ ಟ್ಯಾಂಕರ್ ತೇಲುತ್ತಿರುವುದು ಕಂಡು ಬಂದಿದೆ. ಕ್ಯಾಂಟೀನ್ ಪಕ್ಕದಲ್ಲಿ ನಿಲ್ಲಿಸಿದ್ದ ಟ್ಯಾಂಕರ್‌ವೊಂದು ಗುಡ್ಡ ಕುಸಿತದ ರಭಸಕ್ಕೆ ಗಂಗಾವಳ್ಳಿ ನದಿಗೆ ಕೊಚ್ಚಿಹೋಗಿದೆ. ಇದರಿಂದ ಟ್ಯಾಂಕರ್‌ನಲ್ಲಿದ್ದ ಚಾಲಕ ಹಾಗೂ ಕ್ಲೀನರ್ ಕೂಡ ಸಾವನ್ನಪ್ಪಿರುವ ಶಂಕೆಗಳು ವ್ಯಕ್ತವಾಗಿವೆ. ಘಟನೆ ಬೆನ್ನಲ್ಲೇ ಹಿರಿಯ ಪೊಲೀಸ್ ಅಧಿಕಾರಿಗಳು ಮತ್ತು ಉತ್ತರ ಕನ್ನಡ ಜಿಲ್ಲೆಯ ಜಿಲ್ಲಾಧಿಕಾರಿ ಲಕ್ಷ್ಮಿ ಪ್ರಿಯಾ ಸ್ಥಳಕ್ಕೆ ಭೇಟಿ ನೀಡಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ.

ನೌಕಾಪಡೆ ಮತ್ತು ಇತರ ರಕ್ಷಣಾ ಪಡೆಗಳು ಈಗಾಗಲೇ ಸ್ಥಳದಲ್ಲಿ ಬೀಡು ಬಿಟ್ಟಿದ್ದು, ರಕ್ಷಣಾ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಈ ನಡುವೆ ಘಟನೆ ಕುರಿತು ಪ್ರತಿಕ್ರಿಯೆ ನೀಡಿರುವ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿಯವರು, ಭೀಕರ ಮಳೆಯಿಂದ ಹೆದ್ದಾರಿಯಲ್ಲಿ ಗುಡ್ಡ ಕುಸಿತ ಉಂಟಾಗಿದ್ದು, ಮಣ್ಣಿನಡಿಯಲ್ಲಿ ಒಂದೇ ಕುಟುಂಬದ ಐವರು ಸೇರಿದಂತೆ 15ಕ್ಕೂ ಹೆಚ್ಚು ಮಂದಿ ಸಿಲುಕಿಕೊಂಡಿದ್ದಾರೆ ಎನ್ನುವ ಮಾಹಿತಿ ಇದೆ. ರಕ್ಷಣಾ ತಂಡ ಶಾಂತಿ ನಾಯ್ಕ(37) ಎನ್ನುವವರ ಮೃತದೇಹವನ್ನು ಮಣ್ಣಿನಿಂದ ಹೊರಕ್ಕೆ ತೆಗೆದಿದ್ದಾರೆ, ಕಾರ್ಯಾಚರಣೆ ಮುಂದುವರೆದಿದೆ ಎಂದು ತಿಳಿಸಿದರು.